ಸಂಪುಟ: 04 ಸಂಚಿಕೆ: 272 ಪುಟಗಳು: 08 ಭಾನುವಾರ 15 ಡಿಸೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

**ಮುಂಜಾನೆ ಮಾತು**

ಸಾಧ್ಯವೇ ಇಲ್ಲ ಎಂದರೆ
ಏನನ್ನೂ ಸಾಧಿಸಲಾಗದು.
ಪ್ರಯತ್ನದಿಂದ ನಷ್ಟವೇನಿದೆ?
ಗೆದ್ದರೆ ಸಂತೋಷ ಸಿಗುವುದು,
ಸೋತರೆ ಅನುಭವ ಖಚಿತ

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ



## ಅಕ್ರಮ ಹಣ ಸಂಪಾದನೆಗೆ ಖಜಾನೆಯಂತಾದ ಮುಡಾ

• **ಉದಯವಾಹಿನಿ, ಮೈಸೂರು**

ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ 50:50ರ ಅನುಪಾತದಲ್ಲಿ ಅಕ್ರಮವಾಗಿ ನಿವೇಶನ ಪಡೆದ ಎಲ್ಲಾರಿಗೂ ತಕ್ಕ ಶಿಕ್ಷೆಯಾಗಬೇಕು. ಪ್ರಾಧಿಕಾರ ತನ್ನ ಮೂಲ ಉದ್ದೇಶಕ್ಕನುಗುಣವಾಗಿ ಕೆಲಸ ಮಾಡಬೇಕು ಎಂದು ದೂರುದಾರರಾದ ಸ್ನೇಹಮಯಿ ಕೃಷ್ಣ ಒತ್ತಾಯಿಸಿದ್ದಾರೆ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾವು ಕಾಂಗ್ರೆಸ್ ಹಾಗೂ ಸಿಎಂ ಸಿದ್ದರಾಮಯ್ಯನವರ ವಿರುದ್ಧ ಮಾತ್ರ ಹೋರಾಟ ನಡೆಸುತ್ತಿಲ್ಲ. ಮುಡಾ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವಾಗಿ ಉಳಿದಿಲ್ಲ, ಪ್ರಭಾವಿಗಳ ಅಭಿವೃದ್ಧಿ ಪ್ರಾಧಿಕಾರವಾಗಿದೆ. ಎಲ್ಲಾ ಪ್ರಭಾವಿಗಳು ಅಕ್ರಮ ಹಣ ಸಂಪಾದನೆಗೆ ಮುಡಾವನ್ನು ಖಜಾನೆಯಂತೆ ಬಳಸಿಕೊಂಡಿದ್ದಾರೆ ಎಂದು ದೂರಿದರು. ಮೈಸೂರು ಮಹಾನಗರ ಪಾಲಿಕೆಯ ಸದಸ್ಯ ಹಾಗೂ ಬಿಜೆಪಿ ಮುಖಂಡ ಎಂ.ಸಿ.ರಮೇಶ್ ಅವರು ಸುಳ್ಳು ದಾಖಲೆ ಸೃಷ್ಟಿಸಿ 50:50 ರ ಅನುಪಾತದಲ್ಲಿ ನಿವೇಶನ ಪಡೆದುಕೊಂಡಿದ್ದಾರೆ.

ಬಸವನಹಳ್ಳಿಯ ಸರ್ವೆ ನಂ. 126/1 ರ ಜಮೀನಿಗೆ ತಮ್ಮ ಬಳಿ ಜಿಪಿಎ ಇದೆ ಎಂದು ಹೇಳಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಅಕ್ರಮವಾಗಿ ನಿವೇಶನಗಳನ್ನು ಪಡೆದುಕೊಂಡಿದ್ದಾರೆ. ವಾಸ್ತವವಾಗಿ ಈ ಜಮೀನಿನ ವ್ಯಾಜ್ಯ ನ್ಯಾಯಾಲಯದಲ್ಲಿದ್ದು ಬಗೆಹರಿದಿಲ್ಲ

ಮೇಲಾಗಿ ಭೂಸ್ವಾಧೀನಗೊಂಡಿದೆ ಎಂದು ಹೇಳಲಾದ ಜಮೀನು ಸರ್ವೆ ನಂ 126/1 ಅಥವಾ 126/4 ಕ್ಕೆ ಸೇರಿದೆಯೇ ಎಂಬುದು ಗೊಂದಲಕಾರಿಯಾಗಿದೆ. ಆದರೂ ನಿವೇಶನ ಪಡೆದುಕೊಂಡಿದ್ದಾರೆ ಎಂದು ದೂರಿದ್ದಾರೆ.

ಈ ಕುರಿತು ಆದಾಯ ತೆರಿಗೆ ಇಲಾಖೆಗೆ ದೂರು ಸಲ್ಲಿಕೆಯಾಗಿದೆ. ಇದರ ಸಂಪೂರ್ಣ ತನಿಖೆಯಾಗಬೇಕು. ಜೆಡಿಎಸ್-ಬಿಜೆಪಿ, ಕಾಂಗ್ರೆಸ್ ಸೇರಿದಂತೆ ಯಾವುದೇ ಪಕ್ಷದವರು ತಪ್ಪು ಮಾಡಿದ್ದರೂ ಎಲ್ಲಾರಿಗೂ ಶಿಕ್ಷೆಯಾಗಬೇಕು.ಆಗ ಮಾತ್ರ ನಗರಾಭಿವೃದ್ಧಿ ಪ್ರಾಧಿಕಾರ ಜನರಿಗೆ ಸೇವೆ ಮಾಡಲು ಸೂಕ್ತವಾಗುತ್ತದೆ ಎಂದರು. ತಾವು ದೂರು ದಾಖಲಿಸಿ ಕಾನೂನಿನ ಹೋರಾಟ ಆರಂಭಿಸಿದ ಬಳಿಕ ಸಾಕಷ್ಟು ಪ್ರಕರಣಗಳು ಹೊರಬಂದಿವೆ. ಆಘಾತಕಾರಿ ದಾಖಲೆಗಳು ಲಭ್ಯವಾಗುತ್ತಿವೆ ಎಂದು ಹೇಳಿದರು.

## ಮುಡಾ ಹಗರಣ ಮುಚ್ಚಿಕೊಳ್ಳಲು ಕೋವಿಡ್ ಅಸ್ತ್ರ ಪ್ರಯೋಗ

• **ಉದಯವಾಹಿನಿ, ನವದೆಹಲಿ**

ಮುಡಾ ಹಾಗೂ ಮಹರ್ಷಿ ವಾಲೀಕಿ ಹಗರಣಗಳನ್ನು ಮುಚ್ಚಿಹಾಕಲು ಕೋವಿಡ್ ಕಾಲದ ಹಗರಣಗಳನ್ನು ಮುನ್ನೆಲೆಗೆ ತರುವ ಮೂಲಕ ರಾಜ್ಯ ಸರ್ಕಾರ ಬಿಜೆಪಿ ವಿರುದ್ಧ ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಸಂಸದ ಜಗದೀಶ್ ಶೆಟ್ಟರ್ ಆರೋಪ ಮಾಡಿದ್ದಾರೆ. ಜಸ್ಟೀಸ್ ಮೈಕಲ್ ಕುನ್ಹರವರು ಇನ್ನೂ ಸಂಪೂರ್ಣ ಪ್ರಮಾಣದ ವರದಿ ನೀಡಿಲ್ಲ. ಕೇವಲ ಮಧ್ಯಂತರ ವರದಿಯನ್ನು ಆಧಾರವಾಗಿಟ್ಟುಕೊಂಡು ಎಫ್‌ಐಆರ್ ದಾಖಲಿಸಿರುವುದು ಹಾಸ್ಯಾಸ್ಪದ ಎಂದರು. ಇಷ್ಟು ದಿನ ಸುಮನಿದ್ದರು. ಈ ಹಿಂದೆ ವಿರೋಧಪಕ್ಷದ ನಾಯಕರಾಗಿದ್ದಾಗ ಸಾಕಷ್ಟು ಬಾರಿ ಆರೋಪ ಮಾಡಿದ್ದರು. ಸರ್ಕಾರ ಬಂದ ಮೇಲೂ ಕೂಡ ಇಷ್ಟು ದಿನ ಸುಮ್ಮನೆ ಕುಳಿತಿದ್ದರು.ಮುಡಾ ಹಾಗೂ ವಾಲ್ಮೀಕಿ ನಿಗಮದ ಹಗರಣಗಳು ಬೆಳಕಿಗೆ ಬಂದು ಅಧಿಕಾರಕ್ಕೆ ಕುತ್ತು ಬಂದ ಸಂದರ್ಭದಲ್ಲಿ ಕೋವಿಡ್ ಹಗರಣ ತನಿಖೆ ಮಾಡುತ್ತೇವೆ ಎಂದು ಹೊರಟಿದ್ದಾರೆ. ಇದು ಸಂಪೂರ್ಣ ರಾಜಕೀಯ ಪ್ರೇರಿತ ಎಂದು ಹೇಳಿದರು. ಕೋವಿಡ್ ಹಗರಣದಲ್ಲಿ ಯಾವುದೇ ತನಿಖೆಗಳು ಪೂರ್ಣಗೊಂಡಿಲ್ಲ. ಆರೋಪ ಸಾಬೀತಾಗಿಲ್ಲ. ಕೇವಲ ವಿಚಾರಣಾ ಆಯೋಗದ ಮಧ್ಯಂತರ ಅವಧಿಯ ವರದಿಯನ್ನು ಆಧಾರವಾಗಿಸಿಕೊಂಡು ಎಫ್‌ಐಆರ್ ದಾಖಲಿಸಲಾಗಿದೆ. ಇದಕ್ಕೆ ಕಾನೂನಿನ ಮಾನ್ಯತೆ ಇಲ್ಲ. ಊರ್ಜಿತವೂ ಆಗುವುದಿಲ್ಲ ಎಂದು ತಿಳಿಸಿದರು.

## ಲಾಠಿ ಪ್ರಹಾರ ಮನುಕುಲಕ್ಕೆ ಮಾಡಿದ ಅಪಮಾನ

• **ಉದಯವಾಹಿನಿ, ದಾವಣಗೆರೆ**

'ಬೆಳಗಾವಿಯಲ್ಲಿ ನಡೆದ ಪಂಚಮಸಾಲಿ ಸಮಾಜದ ಹೋರಾಟದ ವೇಳೆ ಇಬ್ಬರು ಪೊಲೀಸರು ಗೋಲಿಬಾರ್ ಮಾಡುವ ಸಂಚು ರೂಪಿಸಿದ್ದರು. ಅವರು ಯಾರೆಂಬ ಮಾಹಿತಿ ಗೃಹ ಸಚಿವರಿಗೂ ಗೊತ್ತಿದೆ. ಕೂಡಲೇ ಆ ಇಬ್ಬರು ಪೊಲೀಸರನ್ನು ಅಮಾನತು ಮಾಡಬೇಕು ಎಂದು ಮಾಜಿ ಸಚಿವ, ಬಿಜೆಪಿ ನಾಯಕ ಎಂ.ಪಿ.ರೇಣುಕಾಚಾರ್ಯ ಶನಿವಾರ ಕಿಡಿ ಕಾರಿದ್ದಾರೆ. ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ರೇಣುಕಾಚಾರ್ಯ 'ಹೋರಾಟನಿರತ ಪಂಚಮಸಾಲಿ ಸಮುದಾಯದ ಮೇಲೆ ಲಾಠಿ ಪ್ರಹಾರ ನಡೆಸಲು ಗೃಹ ಸಚಿವರ ಕುಮ್ಮಕ್ಕು ಸಹ ಇರುವ ಶಂಕೆ ವ್ಯಕ್ತವಾಗುತ್ತಿದೆ. ಆದ್ದರಿಂದಲೇ ಅವರು ಸಾವಿರಾರು ಜನರು ನುಗ್ಗಿದರೆ ಮುತ್ತಿಡಬೇಕಿತ್ತಾ? ಎಂದು ಕೇಳಿದ್ದಾರೆ. ಘಟನೆಯನ್ನು ಸಮರ್ಥವಾಗಿ ನಿಭಾಯಿಸಲಾಗದ ಗೃಹ ಸಚಿವರು ನೈತಿಕ ಹೊಣೆಹೊತ್ತು ರಾಜೀನಾಮೆ ನೀಡಬೇಕು. ಇಲ್ಲವೇ ಮುಖ್ಯಮಂತ್ರಿಯವರು ಪರಮೇಶ್ವರ ಅವರನ್ನು ಮಂತ್ರಿ ಸ್ಥಾನದಿಂದ ವಜಾಗೊಳಿಸಬೇಕು' ಎಂದು ಒತ್ತಾಯಿಸಿದರು.

## ತೆಂಗು-ಮಾವು ಬೆಳೆಗಾರರ ಸಂಕಷ್ಟಕ್ಕೆ ಸ್ಪಂದಿಸುವಂತೆ ಮನವಿ


• **ಉದಯವಾಹಿನಿ, ನವದೆಹಲಿ**

ಬೆಂಗಳೂರು ಗ್ರಾಮಾಂತರ ಲೋಕಸಭಾ ಸದಸ್ಯ ಡಾ. ಸಿ.ಎನ್. ಮಂಜುನಾಥ್ ಅವರು ತೆಂಗು-ಮಾವು ಬೆಳಗೆಗಾರರ ಸಂಕಷ್ಟಕ್ಕೆ ನೆರವು ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸಬೇಕೆಂದು ಮನವಿ ಮಾಡಿದರು. ಬೆಂಗಳೂರಿನ ಹೆಸರಘಟ್ಟದಲ್ಲಿರುವ ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ ಐಸಿಎಆರ್-ಐಐಎಚ್ ಆರ್ ಸಂಸ್ಥೆಯು ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ತೋಟಕಾರಿಕಾ ವಲಯದಲ್ಲಿ ಅಧಿಕ ಇಳುವರಿ ನೀಡುವ ಬೆಳೆಗಳು, ಹೆಚ್ಚು ರೋಗ ನಿರೋಧಕ ಶಕ್ತಿ ಇರುವ ಬೆಳೆಗಳ ಸಂಶೋಧನೆ, ಹೊಸ ತಂತ್ರಜ್ಞಾನಗಳ ಆವಿಷ್ಕಾರ ಮೂಲಕ ರೈತರ ಆರ್ಥಿಕ ಪ್ರಗತಿಗೆ ಸಹಕರಿಸುತ್ತಿದೆ. ದೇಶದಲ್ಲಿ 2025ರ ವೇಳೆಗೆ ಸುಮಾರು 1.5 ಲಕ್ಷ ತೋಟಗಾರಿಕಾ ಪದವೀಧರರ ಅವಶ್ಯಕತೆಯಿದ್ದು, ಪ್ರಸ್ತುತ 57 ತೋಟಗಾರಿಕಾ ಕಾಲೇಜುಗಳಲ್ಲಿ 10 ಸಾವಿರಕ್ಕೂ ಕಡಿಮೆ ಪದವೀಧರರು ಹೊರಬರುತ್ತಿದ್ದಾರೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ, ರೈತರಿಗೆ, ಮಾರಾಟಗಾರರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಐಸಿಎಆರ್- ಐಐಎಚ್‌ಆರ್ ಅನ್ನು ಡೀಮ್ಡ್ ವಿಶ್ವವಿದ್ಯಾಲಯವನ್ನಾಗಿ ಮೇಲ್ದರ್ಜೆಗೇರಿಸಬೇಕೆಂದು ಕೋರಿದರು. ಅಲ್ಲದೆ ಈಗಾಗಲೇ ಸಂಸದರು ಪತ್ರದ ಮುಖೇನ ಮನವಿ ಸಲ್ಲಿಸಿದ್ದ ರಾಮನಗರ ಜಿಲ್ಲೆಯಾದ್ಯಂತ ಮಾವು ಹಾಗೂ ತೆಂಗು ಬೆಳೆ ಶೇಕಡಾ 90ರಷ್ಟು ಹಾನಿಯಾಗಿದ್ದು 50,000ಕ್ಕೂ ಅಧಿಕ ರೈತರು ನಷ್ಟ ಅನುಭವಿಸಿದ್ದಾರೆ. ಮಾವು ಬೆಳೆಗೆ 57.67 ಕೋಟಿ ಹಾಗೂ ತೆಂಗು ಬೆಳೆಗೆ 30.65 ಕೋಟಿ ನೆರವನ್ನು ಎನ್‌ಆರ್‌ಎಫ್ ಅಡಿಯಲ್ಲಿ ಕಲ್ಪಿಸುವ ಮೂಲಕ ನಮ ರೈತರ ಸಂಕಷ್ಟಕ್ಕೆ ಸ್ಪಂದಿಸುವಂತೆ ಕೇಂದ್ರ ಸಚಿವರಿಗೆ ಮಂಜುನಾಥ್ ಮನವಿ ಸಲ್ಲಿಸಿದರು.



# ಅನ್ನದಾತರ ಮೇಲೆ ಅಶ್ರುವಾಯು

■ ಆಶ್ರುವಾಯು, ಜಲಫಿರಂಗಿ ದಾಳಿ; ಪ್ರತಿಭಟನೆ ವೇಳೆ ಹಲವು ರೈತರಿಗೆ ಗಾಯ ■ ಶಂಭು ಗಡಿ ಬಳಿ ಪ್ರತಿಭಟನಾನಿರತ ರೈತರ ಮೇಲೆ ಆಶ್ರುವಾಯು ಬಳಕೆ ■ ದಿಲ್ಲಿ ಚಲೋ ನಡೆಸುತ್ತಿದ್ದ ರೈತರ ಮೇಲೆ ಆಶ್ರುವಾಯು ಪ್ರಯೋಗಿಸಿದ ಪೊಲೀಸರು



1. ರೈತರಿಂದ ಮತ್ತೆ 'ದೆಹಲಿ ಚಲೋ'; ಪೊಲೀಸರಿಂದ ಅಶ್ರುವಾಯು ಪ್ರಯೋಗ, ಇಂಟರ್ನೆಟ್ ಸೇವೆ ಸ್ಥಗಿತ!
2. ಶಂಭು ಗಡಿ ಬಳಿಯೇ ಪೊಲೀಸರು ರೈತರಿಗೆ ತಡೆ
3. ಕನಿಷ್ಠ ಬೆಂಬಲ ಬೆಲೆ ಸೇರಿ ಅನೇಕ ಬೇಡಿಕೆಗಳನ್ನು ಈಡೇರಿಸುವಂತೆ ಕೇಂದ್ರಕ್ಕೆ ಆಗ್ರಹಿಸಿ ಪ್ರತಿಭಟನೆ

**163 ಅಡಿ ನಿಷೇಧಾಜ್ಞೆ ಜಾರಿ**

• **ಉದಯವಾಹಿನಿ, ನವದೆಹಲಿ**

ಕನಿಷ್ಠ ಬೆಂಬಲ ಬೆಲೆಗೆ ಕಾನೂನಿನ ಮಾನ್ಯತೆ ಸೇರಿ ಇತರೆ ಬೇಡಿಕೆಗೆ ಒತ್ತಾಯಿಸಿ ಹರಿಯಾಣದ ಸಾವಿರಾರು ರೈತರು ದೆಹಲಿಗೆ ಮೆರವಣಿಗೆ ನಡೆಸಿದ್ದು ಶಂಭು ಗಡಿಯಲ್ಲಿ ತಡೆದ ಹಿನ್ನೆಲೆ ಮಾತಿನ ಚಕಮಕಿ ತಳ್ಳಾಟ ನಡೆದಿದೆ. ಪರಿಸ್ಥಿತಿ ನಿಯಂತ್ರಿಸಲು ಅನ್ನದಾತರ ಮೇಲೆ ಪೊಲೀಸರು ಅಶ್ರುವಾಯು, ಜಲ ಫಿರಂಗಿ ಸಿಡಿಸಿ ಹೋರಾಟ ಹತ್ತಿಕ್ಕುವ ಕೆಲಸ ಮಾಡಿದ್ದಾರೆ. ಪೊಲೀಸರ ಈ ಕ್ರಮಕ್ಕೆ ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದೆಹಲಿಯತ್ತ ಕಾಲ್ನಡಿಗೆಗೆ ಮುಂದಾಗಿದ್ದ ರೈತರ ಮೆರವಣಿಗೆ ಶಂಭು ಗಡಿ ದಾಟಲು ಯತ್ನಿಸಿದಾಗ ಅವರ ಮೇಲೆ ಹರಿಯಾಣ ಪೊಲೀಸರು ಆಶ್ರವಾಯು ಪ್ರಯೋಗಿಸಿದ್ದಾರೆ. 101 ರೈತರ ಗುಂಪು ಕಾಲ್ನಡಿಗೆ ಜಾಥವು ದೆಹಲಿಯತ್ತ ಸಾಗಿತು. ಶಂಭು ಗಡಿ ಬಳಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ಪಂಜಾಬ್ ಹರಿಯಾಣ ಗಡಿ ಶಂಭು ಬಳಿ ಪ್ರತಿಭಟನಾಕಾರರು ಮುನ್ನುಗ್ಗಲು ಪ್ರಯತ್ನಿಸಿದರು.

ಅವರನ್ನು ನಿಯಂತ್ರಿಸಲು ಹಾಕಿದ್ದ ಬ್ಯಾರಿಕೇಡ್ ಸಮೀಪಿಸುತ್ತಿದ್ದಂತೆ ಪೊಲೀಸರು ರೈತರನ್ನು ತಡೆಯಲು ಮುಂದಾದರು. ಅಶ್ರುವಾಯು ಪ್ರಯೋಗದಿಂದ ಗಾಯಗೊಂಡ ರೈತರನ್ನು ಪ್ರತಿಭಟನಾ ಸ್ಥಳದಲ್ಲಿದ್ದ ಅಂಬ್ಯುಲೆನ್ಸ್ ಮೂಲಕ ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಯಿತು.

ಇದಕ್ಕೂ ಮೊದಲು, ಅಂಬಾಲಾ ಡೆಪ್ಯುಟಿ ಕಮಿಷನರ್ ಪಾರ್ಥ್ ಗುಪ್ತಾ ಮತ್ತು ಅಂಬಾಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್ ಎಸ್ ಭೋರಿಯಾ ಅವರು ಪ್ರತಿಭಟನಾನಿರತ ರೈತರೊಂದಿಗೆ ಅರ್ಧ ಗಂಟೆಗೂ ಹೆಚ್ಚು ಕಾಲ ಮಾತುಕತೆ ನಡೆಸಿದರು. ರಾಷ್ಟ್ರ ರಾಜಧಾನಿ ಕಡೆಗೆ ಹೋಗಲು ದೆಹಲಿಯಿಂದ ಅನುಮತಿ ಪಡೆಯಲು ಮನವೊಲಿಸಲು ಪ್ರಯತ್ನಿಸಿದರು. ಆದಾಗ್ಯೂ, ರೈತರು ಇದನ್ನು ನಿರಾಕರಿಸಿ, ದೆಹಲಿಯತ್ತ ತಮ್ಮನ್ನು ಹೋಗಲು ಬಿಡುವಂತೆ ಭದ್ರತಾ ಸಿಬ್ಬಂದಿಗಳಿಗೆ ಒತ್ತಾಯಿಸಿದರು.

ಸ್ವಲ್ಪ ದೂರ ಕ್ರಮಿಸುತ್ತಿದ್ದಂತೆ, ರೈತರ ಗುಂಪನ್ನು ಹರಿಯಾಣ ಪೊಲೀಸರು ಬ್ಯಾರಿಕೇಡ್ ಬಳಿ ತಡೆದು ಮುಂದೆ ಪ್ರಯಾಣಿಸಲು ಅವಕಾಶವಿಲ್ಲ ಎಂದು ತಿಳಿಸಿದರು.

ರೈತರು ಈ ಹಿಂದೆ ಎರಡು ಬಾರಿ ಡಿಸೆಂಬರ್ 6 ಮತ್ತು ಡಿಸೆಂಬರ್ 8ರಂದು ದೆಹಲಿಯತ್ತ ಮೆರವಣಿಗೆ ಕೈಗೊಂಡರೂ ಇವು ಯಶಸ್ವಿಯಾಗಿರಲಿಲ್ಲ. ಶಂಭು ಗಡಿ ಬಳಿಯೇ ಪೊಲೀಸರು ರೈತರನ್ನು ತಡೆದು ನಿಲ್ಲಿಸಿದರು.

ಸಂಯುಕ್ತ ಕಿಸಾನ್ ಮೋರ್ಚಾ ಮತ್ತು ಕಿಸಾನ್ ಮಜ್ದೂರ್ ಮೋರ್ಚಾ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ(ಎಂಎಸ್‌ಪಿ) ಸೇರಿದಂತೆ ಅನೇಕ ಬೇಡಿಕೆಗಳನ್ನು ಈಡೇರಿಸುವಂತೆ ಕೇಂದ್ರ ಸರ್ಕಾರಕ್ಕೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದು, ತಮ್ಮೊಂದಿಗೆ ಮಾತುಕತೆ ನಡೆಸುವಂತೆ ಒತ್ತಾಯಿಸುತ್ತಿದ್ದಾರೆ.ರೈತ ಪ್ರತಿಭಟನೆ ಹಿನ್ನೆಲೆ ಅಂಬಲಾದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಸೆಕ್ಷನ್ 163 ಅಡಿ ನಿಷೇಧಾಜ್ಞೆ ಜಾರಿ ಮಾಡಲಾಗಿದೆ.

### ಜೀವ ಕೊಡಲು ಸಿದ್ಧರಿದ್ದೇವೆ

'ಪ್ರತಿ ಗಂಟೆಗೆ 2-3 ರೈತರು ಅಥವಾ ಕಾರ್ಮಿಕರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಅವರನ್ನು ಈ ಸ್ಥಿತಿಯಲ್ಲಿ ಬಿಡಲು ಸಾಧ್ಯವಿಲ್ಲ. ಮೋದಿ ಸರ್ಕಾರಕ್ಕೆ ನಮ್ಮ ಜೀವ ಬೇಕಾದರೆ ಕೊಡಲು ನಾವು ಸಿದ್ಧರಿದ್ದೇವೆ, ಆದರೆ ರೈತರ ಸಮಸ್ಯೆಗಳ ಪರಿಹಾರಕ್ಕೆ ನಾವು ಒತ್ತಾಯಿಸುತ್ತೇವೆ. ನಮ್ಮ ಹೋರಾಟ ನ್ಯಾಯಕ್ಕಾಗಿ, ಮತ್ತು ತ್ಯಾಗ ಅಗತ್ಯವಿದ್ದರೆ, ನಾವು ಸಿದ್ಧರಿದ್ದೇವೆ', ಎಂದು ಸರ್ವನ್ ಸಿಂಗ್ ಹೇಳಿದ್ದಾರೆಂದು ವರದಿ ತಿಳಿಸಿದೆ.





### ಬಾರಿ ಬಿಗಿ ಭದ್ರತೆ

ಸಾವಿರಾರು ರೈತರು ಹೋರಾಟ ನಡೆಸಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಬಾರಿ ಬಿಗಿ ಪೊಲೀಸ್ ಬಂದೋ ಬಸ್ತ್ ಮಾಡಲಾಗಿದ್ದು ಎಲ್ಲೆಲ್ಲೂ ಕಟ್ಟೆಚ್ಚರ ವಹಿಸಲಾಗಿದೆ. ಐದು ಮತ್ತು ಅದಕ್ಕಿಂತ ಹೆಚ್ಚಿನ ಜನರು ಗುಂಪುಗೂಡುವಂತಿಲ್ಲ ಎಂದು ತಿಳಿಸಿದೆ.

### ಹೈ ಅಲರ್ಟ್, ಇಂಟರ್ನೆಟ್ ಸೇವೆ ಸ್ಥಗಿತ

ರೈತರ ಮೇಲೆ ಆಶ್ರುವಾಯು, ಜಲಫಿರಂಗಿ ಪ್ರಯೋಗ ಮಾಡಿದ್ದರಿಂದ ಉಳಿದ ರೈತ ಸಮುದಾಯ ಸಿಟ್ಟಿಗೇಳುವ ಸಾಧ್ಯತೆ ಇದ್ದು ಮುಂಜಾಗ್ರತಾ ಕ್ರಮವಾಗಿ ಅಂಬಾಲದಲ್ಲಿ ಇಂಟರ್ನೆಟ್ ಸೇವೆ ಸ್ಥಗಿತಗೊಳಿಸಲಾಗಿದೆ. ಅಂಬಾಲಾ ಜಿಲ್ಲಾಡಳಿತವು ಈಗಾಗಲೇ ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ (ಬಿಎನ್ ಎಸ್‌ಎಸ್) ಸೆಕ್ಷನ್ 163 ರ ಅಡಿಯಲ್ಲಿ ಜಿಲ್ಲೆಯಲ್ಲಿ 5 ಅಥವಾ ಅದಕ್ಕಿಂತ ಹೆಚ್ಚಿನ ಜನ ಒಂದೆಡೆ ಸೇರುವಂತಿಲ್ಲ ಎಂದು ಆದೇಶ ಹೊರಡಿಸಿದೆ. ರೈತರು ತಮ್ಮ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಕಾನೂನು ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ ಮಾಡುತ್ತಲೇ ಇದ್ದಾರೆ. ರೈತರ ಬೇಡಿಕೆಗೆ ಕೇಂದ್ರ ಸರ್ಕಾರ ಸ್ಪಂದಿಸದ ಹಿನ್ನಲೆ ಮತ್ತೆ ದೆಹಲಿಗೆ ಪಾದಯಾತ್ರೆ ನಡೆಸಲು ರೈತರು ತೀರ್ಮಾನಿಸಿದ್ದಾರೆ.



## ಹೋರಾಟ ಅಸಂವಿಧಾನಿಕ ಎಂದು ಸಮಾಜಕ್ಕೆ ಅವಮಾನ

• **ಉದಯವಾಹಿನಿ, ಬೆಳಗಾವಿ**

**ಸಿಎಂ ಕ್ಷಮೆ ಯಾಚಿಸಬೇಕು**

ಚಳಿಗಾಲದ ಅಧಿವೇಶನದಲ್ಲಿ ಮುಖ್ಯಮಂತ್ರಿಗಳು ಲಿಂಗಾಯತ ಪಂಚಮಸಾಲಿ ಸಮಾಜದ ಹೋರಾಟ ಸಂವಿಧಾನ ವಿರೋಧಿ ಎಂದು ಹೇಳುವ ಮೂಲಕ ಇಡೀ ಸಮಾಜಕ್ಕೆ ಅವಮಾನ ಮಾಡಿದ್ದಾರೆ ಎಂದು ಬೆಳಗಾವಿಯಲ್ಲಿ ಕೂಡಲಸಂಗಮ ಪಂಚಮಸಾಲಿ ಪೀಠದ ಬಸವ ಜಯ ಮೃತ್ಯುಂಜಯ ಸ್ವಾಮೀಜಿ ಗಂಭೀರ ಆರೋಪ ಮಾಡಿದರು. ಅಧಿವೇಶನದಲ್ಲಿ ಮಾತನಾಡುವಾಗ ಮುಖ್ಯಮಂತ್ರಿಗಳು ಲಿಂಗಾಯತ ಪಂಚಮಸಾಲಿ ಸಮಾಜಕ್ಕೆ ಮೀಸಲಾತಿ ಕೊಡುವದು ಅಸಂವಿಧಾನಿಕ ಅವರ ಹೋರಾಟ ಸಂವಿಧಾನ ವಿರೋಧಿ ಎಂದು ಹೇಳಿ ಅವಮಾನ ಮಾಡಿದ್ದಾರೆ. ನಮ್ಮ ಹೋರಾಟ ಅಸಂವಿಧಾನಿಕವಾಗಿದ್ದರೆ ನಿಮ್ಮ ಸರ್ಕಾರದ ಮಂತ್ರಿಗಳು ಹಾಗೂ ಶಾಸಕರು ಮೀಸಲಾತಿ ಹೋರಾಟದಲ್ಲಿ ಭಾಗಿಯಾಗಿದ್ದರು. ನಿಮಗೆ ಧೈರ್ಯವಿದ್ದರೆ ಈ ಸಚಿವರು ಮತ್ತು ಶಾಸಕರನ್ನು ವಜಾ ಮಾಡಿ ಎಂದು ಶ್ರೀಗಳು ಸವಾಲು ಹಾಕಿದರು. ನಮ್ಮ ಹೋರಾಟ ಸಂವಿಧಾನ ವಿರೋಧಿಯಾಗಿದ್ದರೆ ನಮ್ಮನ್ನು ಮಾತುಕತೆಗೆ ಕರೆದಿದ್ದು ಯಾಕೆ? ನಮ್ಮ ಜೊತೆಗೆ ಸಭೆ ಮಾಡಿರುವದು ಯಾಕೆ ಎಂದು ಪ್ರಶ್ನೆ ಮಾಡಿದರು. ಮುಖ್ಯಮಂತ್ರಿಗಳಿಗೆ ನಮ್ಮ ಸಮಾಜದ ಬಗ್ಗೆ ಕಳಕಳಿಯಿಲ್ಲ ಬದಲಾಗಿ ನಮ್ಮ ಹೋರಾಟವನ್ನು ಹತ್ತಿಕ್ಕುವ ಪ್ರಯತ್ನ ಮಾಡಿದ್ದಾರೆ. ಉದ್ದೇಶಪೂರ್ವಕವಾಗಿ ನಮ್ಮನ್ನು ಹೊಡೆದರು. ನಮಗೆ ಅವಮಾನ ಮಾಡಿದರು. ಆದರೆ ಇದರಿಂದ ನಾವು ಬೆದರುವದಿಲ್ಲ. ಕಳೆದ ನಾಲ್ಕು ವರ್ಷಗಳಿಂದ ಶಾಂತಿಯುತ ಹೋರಾಟ ಮಾಡಿಕೊಂಡು ಬಂದಿದ್ದೆವು.ಈಗ ಚನ್ನಮ್ಮನ ಕ್ರಾಂತಿಯ ನೆಲ ಬೆಳಗಾವಿಯಲ್ಲಿ ನಮ್ಮ ಹೋರಾಟ ಕ್ರಾಂತಿಯುತವಾಗಿ ಆರಂಭವಾಗಲಿದೆ ಎಂದರು. ಲಿಂಗಾಯತ ಪಂಚಮಸಾಲಿ ಮೀಸಲಾತಿ ಕ್ರಾಂತಿ ಹೋರಾಟವಾಗಿ ಬದಲಾವಣೆಯಾಗಿದೆ.

ನಮ್ಮನ್ನು ಕ್ರಾಂತಿ ಮಾಡಲು ಸರಕಾರವೇ ಬಡಿದೆಬ್ಬಿಸಿದೆ. ನಮ್ಮ ಸಮಾಜವನ್ನು ಅವಮಾನಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಹೇಳಿಕೆಯನ್ನು ಹಿಂಪಡೆದುಕೊಂಡು ಕ್ಷಮೆಯಾಚಿಸಬೇಕು ಎಂದು ಕೂಡಲಸಂಗಮ ಗುರು ಪೀಠದ ಬಸವ ಜಯ ಮೃತ್ಯುಂಜಯ ಸ್ವಾಮೀಜಿ ಒತ್ತಾಯಿಸಿದರು.

# ಮುಸ್ಲಿಮರಿಗಾದರೆ ಮುತ್ತು ಕೊಡ್ತಾರೆ, ನಮಗಾದರೆ ಲಾಠಿ ಏಟು ಕೊಡ್ತಾರೆ!

## ಕುಕ್ಕರ್ ಬಾಂಬ್ ಇಟ್ಟವರಿಗೂ ಇವ್ರು ಮುತ್ತು ಕೊಡ್ತಾರೆ, ಶಾಂತ ರೀತಿಯಿಂದ ಹೋರಾಟ ಮಾಡಿದ ನಮ್ಮ ಮೇಲೆ ಲಾಠಿ ಚಾರ್ಜ್ ಮಾಡುತ್ತಾರೆ

• **ಉದಯವಾಹಿನಿ, ಹುಬ್ಬಳ್ಳಿ**

**ಸಿದ್ದು ಸರ್ಕಾರದ ವಿರುದ್ಧ ಬೆಲ್ಲದ್ ಆಕ್ರೋಶ**

ಇತ್ತೀಚೆಗೆ ಬೆಳಗಾವಿಯಲ್ಲಿ ಪಂಚಮಸಾಲಿ ಹೋರಾಟಗಾರರ ಮೇಲೆ ಪೊಲೀಸರು ನಡೆಸಿದ ಲಾಠಿ ಚಾರ್ಜ್ ವಿರುದ್ಧ ಬಿಜೆಪಿ ನಾಯಕರು ಆಕ್ರೋಶ ಹೊರಹಾಕುತ್ತಿದ್ದಾರೆ. ಈ ಕುರಿತು ಹುಬ್ಬಳ್ಳಿಯಲ್ಲಿ ಪ್ರತಿಕ್ರಿಯೆ ನೀಡಿರುವ ಅರವಿಂದ್ ಬೆಲ್ಲದ್, ಸಿಎಂ ಮುಸ್ಲಿಮರಿಗೆ ಮುತ್ತು ಕೊಡ್ತಾರೆ, ನಮಗೆ ಲಾಠಿ ಏಟು ಕೊಡ್ತಾರೆ. ಡೀಜೆ ಹಳ್ಳಿ ಕೆಜಿ ಹಳ್ಳಿ ಗಲಭಕೋರರಿಗೆ ಮುತ್ತು ಕೊಡ್ತಾರೆ. ಕುಕ್ಕರ್ ಬಾಂಬ್ ಇಟ್ಟವರಿಗೂ ಇವು ಮುತ್ತು ಕೊಡ್ತಾರೆ. ಶಾಂತ ರೀತಿಯಿಂದ ಹೋರಾಟ ಮಾಡಿದ ನಮ್ಮ ಮೇಲೆ ಲಾಠಿ ಚಾರ್ಜ್ ಮಾಡುತ್ತಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರ ಹೇಳಿಕೆ ವಿರುದ್ಧ ಬೆಲ್ಲದ್ ಕಿಡಿಕಾರಿದರು. ಅದರ ಬಗ್ಗೆ ಇವರು ಮಾತನಾಡೋದೇ ಇಲ್ಲ. ಸಿಎಂ ಅವರ ಪ್ರಕಾರ ಮುಸ್ಲಿಮರು ಬಿಟ್ಟು ಬೇರೆ ಯಾರು ಏನು ಕೇಳಬಾರದು. ಏನೇ ಕೇಳಿದರೂ ಮುಸ್ಲಿಮರಷ್ಟೇ ಕೇಳಬೇಕು ಕಾಂಗ್ರೆಸ್ ಸರ್ಕಾರ ನಮಗೆ ಮೀಸಲಾತಿ ಕೊಡುತ್ತೆ ಅಂತ ಗ್ಯಾರಂಟಿ ಇಲ್ಲ ಎಂದು ಪಂಚಮಸಾಲಿಗಳಿಗೆ 2ಎ ಮೀಸಲಾತಿ ಸಂವಿಧಾನ ವಿರೋಧಿ ಎಂಬ ಸಿಎಂ ಹೇಳಿಕೆಗೆ ಅವರು ಆಕ್ರೋಶ ಹೊರಹಾಕಿದರು. ಕಾಂಗ್ರೆಸ್ ಸರಕಾರ ಮುಸ್ಲಿಂ ಅವರನ್ನು ಓಲೈಸುತ್ತಿದೆ ಲಾಠಿ ಚಾರ್ಜ್ ಸಂಪೂರ್ಣ ಜವಾಬ್ದಾರಿ ಸಿಎಂ ಸಿದ್ದರಾಮಯ್ಯನವರದ್ದು. ನಮ್ಮ ಸರ್ಕಾರ ಇದ್ದಾಗ ಇದಕ್ಕಿಂತ ಬಹಳ ಜನ ಕೂಡಿದ್ದರು. ಬೆಂಗಳೂರಲ್ಲಿ 10 ಲಕ್ಷಕ್ಕಿಂತ ಹೆಚ್ಚು ಜನ ಕೂಡಿದ್ದರು. ಬೆಳಗಾವಿಯಲ್ಲಿ ಇದಕ್ಕಿಂತ ನಾಲ್ಕು ಪಟ್ಟು ಜನ ಕೂಡಿದ್ದರು. ಅವಾಗ ನಮ್ಮ ಸಿಎಂ ಮತ್ತು ಸಚಿವರು ಸೇರಿ ಒಂದು ಪರಿಹಾರ ಕಂಡುಹಿಡಿಯಲು ಮುಂದಾಗಿ. ಆದರೆ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಸರ್ಕಾರಕ್ಕೆ ಮುಸ್ಲಿಮರನ್ನು ಓಲೈಸುವುದನ್ನು ಬಿಟ್ಟರೆ ಏನು ಇಲ್ಲ. ಹಿಂದೂ ಸಮಾಜ ಅವರಿಗೆ ಮತ ಹಾಕಿದೆ ಅನ್ನೋ ಕಲ್ಪನೆ ಕೂಡ ಅವರಿಗಿಲ್ಲ. ಕೇವಲ ಮುಸ್ಲಿಂ ಸಮಾಜದ ಬಗ್ಗೆ ಕಾಳಜಿ ಇದೆ. ಮುಸ್ಲಿಂ ಸಮಾಜಕ್ಕೂ ಮಾಡ್ಲಿ ನಾವ್ ಬೇಡ ಅನ್ನಲ್ಲ. ಆದರೆ ಬೇರೆಯವರೂ ಇದಾರಲ್ಲ. ಎಲ್ಲಾ ದುಡ್ಡು ಮೀಸಲಾತಿ ಮುಸ್ಲಿಂ ಸಮಾಜಕ್ಕೆ ಕೊಡುವುದಾದರೆ ಹೇಗೆ ಎಂದು ಅರವಿಂದ್ ಬೆಲ್ಲದ್ ಸಿಎಂ ಅವರನ್ನು ಪ್ರಶ್ನಿಸಿದ್ದಾರೆ. ಧರ್ಮ ಆಧಾರಿತ ಮೀಸಲಾತಿ ಇಲ್ಲ ಶೇ. 36 ಒಬಿಸಿ ರಿಸರ್ವೇಶನ್ ಇದೆ. ಅದರಲ್ಲಿ 23 ಶೇಕಡ ಮುಸ್ಲಿಂ ಸಮಾಜಕ್ಕಿದೆ.

ಧರ್ಮ ಆಧಾರಿತ ಮೀಸಲಾತಿ ಇಲ್ಲ ಅಂತ ಅಂಬೇಡ್ಕರ್ ಸಂವಿಧಾನ ಹೇಳಿದೆ. ಶೈಕ್ಷಣಿಕ ಮತ್ತು ಸಾಮಾಜಿಕ ಆಧಾರದ ಮೇಲೆ ಮೀಸಲಾತಿ ಇದೆ. ಸಂಪೂರ್ಣ ಮುಸ್ಲಿಂ ಅಂತ ನಾಲ್ಕು ಪರ್ಸೆಂಟ್ ಕೆಟೆಗರಿ ಮಾಡಿದ್ದಾರೆ. ಕೆಟಗರಿ 2ಎ ದಲ್ಲಿ ಶೇ 18 ರಷ್ಟು ಮುಸ್ಲಿಂಗೆ ನೀಡಿದ್ದಾರೆ. ಕೆಟೆಗರಿ 1ರಲ್ಲಿ ಮುಸ್ಲಿಂ ಸಮಾಜಕ್ಕೆ ನೀಡಿದ್ದಾರೆ. ಮುಸ್ಲಿಂಮರಿಗೇ ಶೇ 23 ಅವರಿಗೆ ಕೊಟ್ಟರೆ ಬೇರೆಯವರು ಏನು ಮಾಡಬೇಕು ಶೇ.4 ರಷ್ಟು ಮೀಸಲಾತಿ ಸಂವಿಧಾನ ವಿರೋಧವಾಗಿ ಅದನ್ನ ತೆಗೆದು ಮರಾಠ, ಒಕ್ಕಲಿಗರು, ಲಿಂಗಾಯಿತರು, ರೆಡ್ಡಿ ಗೆ ಕೊಡಬೇಕು ಎಂದು ಹುಬ್ಬಳ್ಳಿಯಲ್ಲಿ ಅರವಿಂದ ಬೆಲ್ಲದ ಹೇಳಿಕೆ ನೀಡಿದ್ದಾರೆ.



### ಸರ್ವೆಗೆ ಬರುವ ಅಧಿಕಾರಿಗಳನ್ನು ಗ್ರಾಮಕ್ಕೆ ಬಿಡುವುದಿಲ್ಲ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮುಸ್ಲಿಮರೆಂದರೆ ಪ್ರೀತಿ. ಎಲ್ಲಾರ ಮೀಸಲಾತಿ ತೆಗೆದು ಅವರಿಗೆ ಕೊಡಲು ಹೊರಟಿದ್ದಾರೆ ಎಂದು ವಿಧಾನಸಭೆ ವಿರೋಧ ಪಕ್ಷದ ಉಪನಾಯಕ ಅರವಿಂದ್ ಬೆಲ್ಲದ್ ಗುಡುಗಿದ್ದಾರೆ. ನಮ್ಮ ಮೇಲೆ ಲಾಠಿ ಚಾರ್ಜ್ ಮಾಡುತ್ತಾರೆ! ಹುಬ್ಬಳ್ಳಿಯಲ್ಲಿ ಪೊಲೀಸ್ ಠಾಣೆಗೆ ಬೆಂಕಿ ಹಚ್ಚಿದಲ್ಲಿಗೆ ಇವರು ಮುತ್ತು ಕೊಡ್ತಾರೆ. ಮುಸ್ಲಿಂ ಅವರು ಬಿಟ್ಟು ಬೇರೆ ಯಾರೂ ಏನೂ ಕೇಳಬಾರದು ಸುಳ್ಳು ಹೇಳುವುದರಲ್ಲಿ ಸಿದ್ದರಾಮಯ್ಯ ನಿಸ್ಸಿಮರು. ಮೀಸಲಾತಿ ಕೊಡೋದು ಹೇಗೆ ಸಂವಿಧಾನ ವಿರೋಧಿಯಾಗುತ್ತೆ ಈ ಬಗ್ಗೆ ಸಿಎಂ ಶ್ವೇತಪತ್ರ ಹೊರಡಿಸಲಿ. ಲಿಂಗಾಯತರಿಗೆ, ಒಕ್ಕಲಿಗರಿಗೆ, ಮರಾಠರಿಗೆ ಮೀಸಲಾತಿ ಕೊಡಲ್ಲ ಅಂತ ಘೋಷಣೆ ಮಾಡಲಿ. ಸಂವಿಧಾನದ ವಿರುದ್ಧವಾಗಿ ಮುಸ್ಲಿಮರಿಗೆ ಮೀಸಲಾತಿ ಕೊಡಲಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹7,789/Gram24ct ₹7,230/Gram22ct ಬೆಳ್ಳಿ: ₹93.50/Gram



**ಸಿದ್ಧಸೂಕ್ತಿ**

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ವಿವಾದಿತ ಮಂದಿರ ಮಸೀದಿಗಳು

ಹದಿನಾರನೆಯದಾಗಿ ಉತ್ತರ ಪ್ರದೇಶದ ಜೌನ್ಪುರದ ಅಟಾಲಾ ಮಸೀದಿ. ಇದು ಮೂಲತಃ ಹಿಂದುಗಳ ಅಟಾಲಾ ದೇವೀ ಮಂದಿರವಾಗಿದ್ದು 13 ನೇ ಶತಮಾನದಲ್ಲಿ ಹಿಂದೂ ರಾಜ ವಿಜಯಚಂದ್ರ ನಿರ್ಮಿಸಿದ್ದು 14 ನೇ ಶತಮಾನದಲ್ಲಿ (1351-1388) ಫಿರೋಜ್ ಶಾ ತುಘಲಕ್ ನ ಅವಧಿಯಲ್ಲಿ ದೇವಾಲಯವನ್ನು ಕೆಡವಿ ಮಸೀದಿ ನಿರ್ಮಿಸಲಾಯಿತೆನ್ನಲಾಗಿದ್ದು ವ್ಯಾಜ್ಯ ಈಗ ನ್ಯಾಯಾಲಯದಲ್ಲಿದೆ. ಮಂದಿರಗಳು ಮಸೀದಿಯಾಗಿ ಪರಿವರ್ತನೆಯಾದ ವಿಷಯದಲ್ಲಿ ಪುರಾತತ್ತ್ವ ಶಾಸ್ತ್ರಜ್ಞ ಪದ್ಮಶ್ರೀ ಕೆ. ಕೆ. ಮಹಮ್ಮದ್ ಅವರ ವಿಚಾರ ಹೀಗಿದೆ : ಮಥುರಾ ಮತ್ತು ಕಾಶಿ ಹಿಂದೂಗಳಿಗೆ ಎಷ್ಟು ಮುಖ್ಯವೋ ಹಾಗೆಯೇ ಮುಸ್ಲಿಮರಿಗೆ ಮೆಕ್ಕಾ ಮತ್ತು ಮದೀನವೂ ಅಷ್ಟೇ ಮುಖ್ಯ. ಮುಸ್ಲಿಮರು ಹಿಂದೂಗಳ ಭಾವನೆಗಳನ್ನು ಅರ್ಥಮಾಡಿಕೊಳ್ಳಬೇಕು. ಕಾಶಿಯು ಭಗವಾನ್ ಶಿವನೊಂದಿಗೆ ಸಂಬಂಧ ಹೊಂದಿದೆ ಮತ್ತು ಮಥುರಾ ಭಗವಾನ್ ಕೃಷ್ಣನ ಜನ್ಮಸ್ಥಳವಾಗಿದೆ. ಹಿಂದೂಗಳು ಅವರನ್ನು ಬೇರೆಡೆಗೆ ಸ್ಥಳಾಂತರಿಸಲು ಸಾಧ್ಯವಿಲ್ಲ. ಆದರೆ ಇದು ಮುಸ್ಲಿಮರಿಗೆ ಮಸೀದಿಗಳು ಮಾತ್ರ, ಅವು ಪ್ರವಾದಿ ಮೊಹಮ್ಮದ್ ಅವರೊಂದಿಗೆ ನೇರವಾಗಿ ಸಂಬಂಧ ಹೊಂದಿಲ್ಲ. ಅವರು ಮಸೀದಿಗಳನ್ನು ಬೇರೆಡೆಗೆ ಸ್ಥಳಾಂತರಿಸಬಹುದು.

## ಮೆಟ್ರೋ ರೈಲಿನ ಒಳಗಡೆ ಭಿಕ್ಷಾಟನೆ, ದಂಗಾದ ಪ್ರಯಾಣಿಕರು

• ಉದಯವಾಹಿನಿ, ಬೆಂಗಳೂರು

ಟ್ರಾಫಿಕ್ ಸಿಗ್ನಲ್, ಬಸ್ ನಿಲ್ದಾಣ, ದೇವಸ್ಥಾನಗಳಲ್ಲಿ ಭಿಕ್ಷುಕರು ಇರುವುದು ಸಾಮಾನ್ಯ. ಆದರೆ ಈಗ ಭಿಕ್ಷುಕರು ನಮ್ಮ ಮೆಟ್ರೋಗೂ ಲಗ್ಗೆ ಇಟ್ಟಿದ್ದಾರೆ.ಹೌದು. ನಮ್ಮ ಮೆಟ್ರೋ ರೈಲು ಒಳಗಡೆ ವಿಶೇಷ ಚೇತನ ವ್ಯಕ್ತಿಯೊಬ್ಬ ಭಿಕ್ಷಾಟನೆ ಮಾಡಿದ್ದಾನೆ. ಚಲ್ಲಘಟ್ಟದಿಂದ ವೈಟ್ ಫೀಲ್ಡ್ ಮಾರ್ಗದ ಮೆಟ್ರೋದಲ್ಲಿ ಪ್ರಯಾಣಿಕರಂತೆ ಬಂದ ವ್ಯಕ್ತಿ ಭಿಕ್ಷೆ ಬೇಡಿದ್ದಾನೆ. ತನ್ನ ದೈಹಿಕ ಊನವನ್ನು ತೋರಿಸಿ ಭಿಕ್ಷಾಟನೆ ಮಾಡಿದ್ದನ್ನು ಕಂಡು ಪ್ರಯಾಣಿಕರು ದಂಗಾಗಿದ್ದಾರೆ. ಕ್ಯೂ ಆರ್ ಕೋಡ್ ಸ್ಕ್ಯಾನ್ ಮಾಡಿ ಟಿಕೆಟ್ ಪಡೆದು ಭಿಕ್ಷೆ ಬೇಡಿದ್ದು ಹಲವರ ಅಚ್ಚರಿಗೆ ಕಾರಣವಾಗಿದೆ.ಮೆಟ್ರೋ ರೈಲಿನಲ್ಲಿ ಭಿಕ್ಷೆ ಬೇಡುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ನಮ್ಮ ಮೆಟ್ರೋದಲ್ಲೂ ಭಿಕ್ಷುಕರು ಭಿಕ್ಷೆ ಬೇಡುವುದಕ್ಕೂ ಶುರು ಮಾಡಿದ್ರಾ ಎಂಬ ಪ್ರಶ್ನೆಗಳನ್ನು ನೆಟ್ಟಿಗರು ಕೇಳುತ್ತಿದ್ದಾರೆ.

## ಬಾಣಂತಿಯರ ಸರಣಿ ಸಾವು ಕೇಸ್ ಆಹಾರ ಸುರಕ್ಷತಾ , ಔಷಧ ನಿಯಂತ್ರಣ ಇಲಾಖೆ ವಿಲೀನ

• ಉದಯವಾಹಿನಿ, ಬೆಂಗಳೂರು

ಬಾಣಂತಿಯರ ಸರಣಿ ಸಾವು ಬಳಿಕ ಆಹಾರ ಸುರಕ್ಷತಾ ಇಲಾಖೆ, ಔಷಧ ನಿಯಂತ್ರಣ ಇಲಾಖೆಯನ್ನು ಸರ್ಕಾರ ವಿಲೀನಗೊಳಿಸಿದೆ.ಈಗ 2 ಇಲಾಖೆಯನ್ನು ವಿಲೀನಗೊಳಿಸಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಅಂತಾ ಹೊಸ ಮರುನಾಮಕರಣ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ರಾಜ್ಯದಲ್ಲಿ ಪರಿಶಿಷ್ಟ ಜಾತಿ-ಪಂಗಡಗಳ ಸಮುದಾಯದ ಜನರಿಗೆ ಆರೋಗ್ಯ ಸೇವೆಗಾಗಿ, ಹೆಚ್ಚು ಚಿಕಿತ್ಸಾ ವೆಚ್ಚ ಇರುವ ಕಾಯಿಲೆಗಳಿಗೆ ಹಾಗೂ ವಿರಳ ಆರೋಗ್ಯ ಸೇವೆ ಒದಗಿಸಲು ಕಾರ್ಪಸ್ ಫಂಡ್. ಒಟ್ಟು 45 ಕೋಟಿಯನ್ನು ಸರ್ಕಾರ ಮೀಸಲಿಟ್ಟಿದೆ. ಬಳ್ಳಾರಿ ಹಾಗೂ ಬೆಳಗಾವಿಯಲ್ಲಿ ಬಾಣಂತಿಯರ ಸಾವು ಪ್ರಕರಣ ಇಡೀ ರಾಜ್ಯವನ್ನೇ ಬೆಚ್ಚಿಬೀಳಿಸಿದೆ. ಬೆಳಗಾವಿಯ ಕುಂದಾನಗರಿಯ ಸರ್ಕಾರಿ ಆಸ್ಪತ್ರೆಗಳಲ್ಲಿ ಕೇವಲ ಆರು ತಿಂಗಳಲ್ಲಿ 322 ಶಿಶುಗಳು ಮತ್ತು 29 ಬಾಣಂತಿಯರು ಮೃತಪಟ್ಟಿದ್ದಾರೆ. ಅಲ್ಲದೇ, ರಾಯಚೂರಿನಲ್ಲಿ ಅಕ್ಟೋಬರ್ ತಿಂಗಳಲ್ಲಿ ನಾಲ್ವರು ಬಾಣಂತಿಯರು ಸಾವನ್ನಪ್ಪಿದ್ದಾರೆ.

## ಡೆತ್ ನೋಟ್‌ನಲ್ಲಿ ಹೆಂಡತಿ, ಮಾವನ ಹೆಸರು ಬರೆದಿಟ್ಟು ಪೊಲೀಸ್ ಪೇದೆ ಆತ್ಮಹತ್ಯೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಟೆಕ್ಕಿ ಅತುಲ್ ಸುಭಾಷ್ ಅವರ ಆತ್ಮಹತ್ಯೆಯ ಬಗ್ಗೆ ರಾಷ್ಟ್ರವ್ಯಾಪಿ ಆಕ್ರೋಶದ ಮಧ್ಯೆ, ನಗರದಲ್ಲಿ ಮತ್ತೊಂದು ಆತ್ಮಹತ್ಯೆ ಘಟನೆ ಬೆಳಕಿಗೆ ಬಂದಿದ್ದು, ಪತ್ನಿ ಮತ್ತು ಮಾವನ ಕಾಟದಿಂದಾಗಿ ಪೊಲೀಸ್ ಕಾನ್ಸಬಲ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಎಚ್.ಸಿ.ತಿಪ್ಪಣ್ಣ (34) ಅವರು ರಾತ್ರಿ ಬೆಂಗಳೂರಿನ ಹೀಲಳಿಗೆ ರೈಲ್ವೆ ನಿಲ್ದಾಣ ಮತ್ತು ಕಾರ್ಮೆಲಾರಾಮ್ ಹುಸಗೂರು ರೈಲ್ವೆ ಗೇಟ್ ನಡುವಿನ ರೈಲ್ವೆ ಹಳಿಗಳಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆತ್ಮಹತ್ಯೆ ಪತ್ರದಲ್ಲಿ, ತನ್ನ ಸಾವಿಗೆ ಪತ್ನಿ ಮತ್ತು ಮಾವನನ್ನ ದೂಷಿಸಿ, ಚಿತ್ರಹಿಂಸೆ ನೀಡಿದ್ದಾರೆ ಎಂದು ಆರೋಪಿಸಿದ್ದಾರೆ. ಇನ್ನು ಈ ಘಟನೆಗೆ ಸಂಬಂಧಿಸಿದಂತೆ ಪ್ರಕರಣ ದಾಖಲಾಗಿದೆ. ಹಿಂದೆ ಡಿಸೆಂಬರ್ 9ರಂದು ಬೆಂಗಳೂರಿನಲ್ಲಿ 34 ವರ್ಷದ ಎಂಜಿನಿಯರ್ ಸುಭಾಷ್ ಈ ಆತ್ಮಹತ್ಯೆ ಮಾಡಿಕೊಂಡಿದ್ದರು.

## ಉದ್ಯಮಿಯ ಕಾರು ಚಾಲಕನಿಂದಲೇ 50 ಲಕ್ಷ ಹಣ ಕಳವು

• ಉದಯವಾಹಿನಿ, ಬೆಂಗಳೂರು

ರಿಯಲ್ ಎಸ್ಟೇಟ್ ಉದ್ಯಮಿಯೊಬ್ಬರಿಗೆ ಸೇರಿದ 50 ಲಕ್ಷ ಹಣವನ್ನು ಅವರ ಕಾರು ಚಾಲಕನೇ ಕಳವು ಮಾಡಿಕೊಂಡು ಪರಾರಿಯಾಗಿರುವ ಘಟನೆ ಕೋರಮಂಗಲ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಕೋರಮಂಗಲದ ನಿವಾಸಿ, ರಿಯಲ್ ಎಸ್ಟೇಟ್ ಉದ್ಯಮಿ ಸುಬ್ಬಾರೆಡ್ಡಿ ಎಂಬುವರ ಬಳಿ ಕಳೆದ 8 ತಿಂಗಳಿನಿಂದ ಕಾರು ಚಾಲಕನಾಗಿ ಕೆಲಸ ಮಾಡಿಕೊಂಡಿದ್ದ ರಕ್ಷಿತ್‌ಕುಮಾರ್ ಎಂಬಾತ 50 ಲಕ್ಷ ಹಣದೊಂದಿಗೆ ನಾಪತ್ತೆಯಾಗಿದ್ದಾನೆ. ಸುಬ್ಬಾರೆಡ್ಡಿ ಅವರು ವ್ಯವಹಾರದ ನಿಮಿತ್ತ ತಮ ಸ್ನೇಹಿತರಿಂದ 50 ಲಕ್ಷ ಹಣವನ್ನು ಸಂಗ್ರಹಿಸಿ ಕಾರಿನಲ್ಲಿಟ್ಟು ನಿನ್ನೆ ಮಧ್ಯಾಹ್ನ ಮನೆಗೆ ಊಟಕ್ಕೆ ಹೋಗಿದ್ದಾರೆ. ಇದೇ ಸಮಯಕ್ಕಾಗಿ ಕಾಯುತ್ತಿದ್ದ ಅವರ ಕಾರು ಚಾಲಕ ರಕ್ಷಿತ್ ಕುಮಾರ್ 50 ಲಕ್ಷ ಹಣವಿದ್ದ ಬ್ಯಾಗು ತೆಗೆದುಕೊಂಡು ಕಾರಿನ ಕೀಯನ್ನು ಉದ್ಯಮಿ ಮನೆಯ ಸೆಕ್ಯೂರಿಟಿ ಗಾರ್ಡ್ ಕೈಗೆ ಕೊಟ್ಟು ಪರಾರಿಯಾಗಿದ್ದಾನೆ. ಕೆಲ ಸಮಯದ ಬಳಿಕ ಊಟ ಮಾಡಿಕೊಂಡು ಸುಬ್ಬಾರೆಡ್ಡಿ ಅವರು ಕಾರಿನ ಬಳಿ ಬಂದಾಗ ಚಾಲಕ ಇಲ್ಲದಿರುವ ಬಗ್ಗೆ ಸೆಕ್ಯೂರಿಟಿ ಗಾರ್ಡ್ ತಿಳಿಸಿದ್ದಾರೆ. ತಕ್ಷಣ ಕಾರಿನಲ್ಲಿ ನೋಡಿದಾಗ 50 ಲಕ್ಷ ಹಣ ಇದ್ದ ಬ್ಯಾಗ್. ಇಲ್ಲದಿರುವುದು ಗೊತ್ತಾಗಿದೆ. ಕೂಡಲೇ ಸುಬ್ಬಾರೆಡ್ಡಿ ಅವರ ಕೋರಮಂಗಲ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

## ಕೋವಿಡ್ ಹಗರಣ ತನಿಖೆ ಆರಂಭ

• ಉದಯವಾಹಿನಿ, ಬೆಂಗಳೂರು

ಕೋವಿಡ್ ಕಾಲದಲ್ಲಿ ನಡೆದಿರುವ ಅವ್ಯವಹಾರಗಳಿಗೆ ಸಂಬಂಧಪಟ್ಟಂತೆ ದೂರು ಆಧರಿಸಿ ಕಾನೂನು ರೀತಿಯ ಕ್ರಮ ಜರುಗಿಸಲಾಗುತ್ತದೆ ಎಂದು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಸ್ಪಷ್ಟಪಡಿಸಿದ್ದಾರೆ.ಈ ಸಂಜೆಯೊಂದಿಗೆ ಮಾತನಾಡಿದ ಅವರು, ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆಸಲಾಗುತ್ತಿದೆ.ಮುಂದಿನ ದಿನಗಳಲ್ಲಿ ಯಾವ ರೀತಿ ತನಿಖೆ ಎಂಬುದನ್ನು ಸರ್ಕಾರ ನಿರ್ಧರಿಸಲಿದೆ. ಈವರೆಗೂ ಎಸ್‌ಐಟಿ ರಚನೆಯಾಗಿಲ್ಲ. ಹೀಗಾಗಿ ವಿಧಾನಸೌಧ ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ತನಿಖೆ ಮಾಡುತ್ತಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ. ಸರ್ಕಾರದ ಮಟ್ಟದಲ್ಲಿ ಉಪಮುಖ್ಯಮಂತ್ರಿ, ಗೃಹಸಚಿವರು, ವೈದ್ಯಕೀಯ ಶಿಕ್ಷಣ, ಆರೋಗ್ಯ, ಕುಟುಂಬ ಕಲ್ಯಾಣ ಇಲಾಖೆಯ ಸಚಿವರನ್ನೊಳಗೊಂಡ ಉಪಸಮಿತಿ ನ್ಯಾಯಮೂರ್ತಿ ಮೈಕಲ್ ಕುನ್ನ ಅವರ ನೇತೃತ್ವದ ವಿಚಾರಣಾ ಆಯೋಗದ ವರದಿಯನ್ನು ಪರಿಶೀಲಿಸುತ್ತಿದೆ. ವರದಿಯಲ್ಲಿನ ಅಂಶಗಳನ್ನು ಆಧರಿಸಿ ದೂರು ನೀಡಲಾಗಿದ್ದು, ಪೊಲೀಸರು ಸೂಕ್ತ ಕ್ರಮ ಕೈಗೊಳ್ಳಲಿದ್ದಾರೆ ಎಂದು ಹೇಳಿದರು.

# ಮಳೆಹಾನಿ: ಈ ವರ್ಷ 297 ಕೋಟಿ ರೂ. ಹಣ ರೈತರಿಗೆ ಪರಿಹಾರ

### ರಾಜ್ಯದಲ್ಲಿ ಉಂಟಾದ ಮಳೆಹಾನಿ ಹಾಗೂ ಸರ್ಕಾರ ತೆಗೆದುಕೊಂಡ ಕ್ರಮಗಳ ಬಗ್ಗೆ ಸದನಕ್ಕೆ ಸಚಿವ ಉತ್ತರ

• ಉದಯವಾಹಿನಿ, ಬೆಂಗಳೂರು

ಕಳೆದ ವರ್ಷ ರಾಜ್ಯ ಬರಕ್ಕೆ ತುತ್ತಾಗಿದ್ದರೆ, ಈ ವರ್ಷ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದು, ಹಲವು ಜಿಲ್ಲೆಗಳಲ್ಲಿ ಬೆಳಹಾನಿಯಾಗಿದೆ. ಬರ ಪರಿಹಾರವಾಗಿ ರಾಜ್ಯ ಸರ್ಕಾರ ಕಳೆದ ವರ್ಷ ರೂ.4200 ಕೋಟಿ ಹಣವನ್ನು ರೈತರಿಗೆ ಪರಿಹಾರದ ರೂಪದಲ್ಲಿ ನೀಡಿದರೆ, ಮಳೆಹಾನಿಗೆ ಈ ವರ್ಷ ರೂ.297 ಕೋಟಿ ಹಣವನ್ನು ಪರಿಹಾರವಾಗಿ ರೈತರಿಗೆ ನೀಡಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಸದನಕ್ಕೆ ಮಾಹಿತಿ ನೀಡಿದರು.

**ರೈತರಿಗೆ ಪರಿಹಾರ ಹಣ ಖಾತೆಗೆ ಜಮಾ ಆಗಿದೆ**


ಶೂನ್ಯವೇಳೆ ಚರ್ಚೆಯ ಸಂದರ್ಭದಲ್ಲಿ ರಾಜ್ಯದಲ್ಲಿ ಉಂಟಾದ ಮಳೆಹಾನಿ ಹಾಗೂ ಸರ್ಕಾರ ತೆಗೆದುಕೊಂಡ ಕ್ರಮಗಳ ಬಗ್ಗೆ ಸದನಕ್ಕೆ ಉತ್ತರ ನೀಡಿದ ಅವರು, ಕಳೆದ ವರ್ಷದ ಬರ ಗಾಲದಲ್ಲಿ ರಾಜ್ಯ ಸರ್ಕಾರ 45 ಲಕ್ಷ ರೈತರಿಗೆ ರೂ.4200 ಕೋಟಿ ಹಣ ಪರಿಹಾರ ನೀಡಿದೆ.

ಈ ವರ್ಷ ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ. ಈ ವರ್ಷ ಪೂರ್ವ ಮುಂಗಾರಿನಲ್ಲಿ ವಾಡಿಕೆ ಮಳೆ 115 ಮಿ.ಮೀ. ಆದರೆ, ವಾಸ್ತವದಲ್ಲಿ 151 ಮಿ.ಮೀ ಮಳೆಯಾಗಿದೆ. ಮುಂಗಾರಿನಲ್ಲಿ ವಾಡಿಕೆ 852 ಮಿ.ಮೀ. ಆದರೆ, 928 ಮಿ.ಮೀ ಮಳೆಯಾಗಿದೆ. ಹಿಂಗಾರಿನಲ್ಲಿ ವಾಡಿಕೆ ಮಳೆ 173 ಮಿ.ಮೀ. ವಾಸ್ತವವಾಗಿ 213 ಮಿ.ಮೀ ಮಳೆಯಾಗಿದೆ. ಎಲ್ಲಾ ಸೇರಿ ಒಟ್ಟಾರೆ ವಾಡಿಕೆಗಿಂತ ಶೇ.20 ರಷ್ಟು ಹೆಚ್ಚು ಮಳೆಯಾಗಿದೆ. ಎಲ್ಲಾ ಕಡೆ ಒಂದೇ ರೀತಿ ಮಳೆಯಾಗಿಲ್ಲ. ಕೆಲ ಜಿಲ್ಲೆಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯೂ ಆಗಿದೆ ಎಂದು ತಿಳಿಸಿದರು.

ಪ್ರಸ್ತುತ ಮುಂಗಾರು ಅವಧಿಯಲ್ಲಿ 1,59,718 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಹಾನಿಯಾಗಿತ್ತು. ಆಯಾ ಬೆಳೆಗೆ ಅನುಗುಣವಾಗಿ ಒಟ್ಟು ರೂ.94.94 ಕೋಟಿ ಪರಿಹಾರ ವಿತರಿಸಲಾಗಿದೆ.

ಹಿಂಗಾರು ಹಂಗಾಮಿನಲ್ಲಿ 1,45,254 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಹಾನಿಯಾಗಿದೆ.

ಇದಕ್ಕೆ ಸಂಬಂಧಿಸಿದಂತೆ ರೂ.112.17 ಕೋಟಿ ಹಣವನ್ನು ರೈತರಿಗೆ ಪರಿಹಾರವಾಗಿ ಮಂಜೂರು ಮಾಡಲಾಗಿದೆ. ಕೆಲವು ಭಾಗದಲ್ಲಿ ರೈತರಿಗೆ ಪರಿಹಾರ ಹಣ ಖಾತೆಗೆ ಜಮಾ ಆಗಿದೆ.



> ಸಿಡಿಲು ಬಡಿತದಿಂದ ಮೃತಪಟ್ಟವರೂ ಸೇರಿ ಈ ವರ್ಷ ಒಟ್ಟಾರೆ 133 ಜನ ಪ್ರಾಣ ಕಳೆದುಕೊಂಡಿದ್ದಾರೆ. ಸರ್ಕಾರದ ಕಡೆಯಿಂದ ಇಂತಹ ಘಟನೆಗಳಿಗೆ ನಾನು ವಿಷಾದ ವ್ಯಕ್ತಪಡಿಸುತ್ತೇನೆ. ಅಲ್ಲದೆ, ಈ ಎಲ್ಲಾ ಮೃತರ ಕುಟುಂಬಗಳಿಗೆ ಈಗಾಗಲೇ ತಲಾ ರೂ.5 ಲಕ್ಷ ಪರಿಹಾರ ನೀಡಲಾಗಿದೆ. ಇದಕ್ಕೆಂದು ರೂ. 6.64 ಕೋಟಿ ವ್ಯಯಿಸಲಾಗಿದೆ. ಎಂದರು. ಹಿಂದಿನ ವರ್ಷಕ್ಕೆ ಹೋಲಿಸಿದರೆ ಜಾನುವಾರು ಪ್ರಾಣಹಾನಿ ಕಡಿಮೆಯಾಗಿದೆ.

> 714 ಸಣ್ಣ-ದೊಡ್ಡ ಜಾನುವಾರುಗಳು ಪ್ರಾಣ ಕಳೆದುಕೊಂಡಿವೆ. ಇದಕ್ಕೆಂದು ರೂ. 1.20 ಕೋಟಿ ಪರಿಹಾರ ನೀಡಲಾಗಿದೆ. ಇದಲ್ಲದೆ, 20,893 ಮನೆಗಳು ಸಣ್ಣಪುಟ್ಟ ಅಥವಾ ಭಾಗಶಃ ಹಾನಿಯಾಗಿವೆ. 3,200 ಮನೆಗಳು ಪೂರ್ತಿ ಹಾನಿಯಾಗಿವೆ. ಮನೆಗಳ ಪರಿಹಾರಕ್ಕಾಗಿ ರೂ. 82.20 ಕೋಟಿ ಹಣ ಪಾವತಿ ಮಾಡಿದ್ದೇವೆ. ಇವೆಲ್ಲವೂ ಸೇರಿ ಈ ವರ್ಷ ಮಳೆಹಾನಿಗೆ ಸಂಬಂಧಿಸಿದಂತೆ ಒಟ್ಟಾರೆ ರೂ.297 ಕೋಟಿ ಪರಿಹಾರವನ್ನು ತೊಂದರೆಗೆ ಒಳಪಟ್ಟವರಿಗೆ ಹಾಗೂ ರೈತರಿಗೆ ಪಾವತಿಸಲಾಗಿದೆ ಎಂದರು.

ಕೆಲವು ಭಾಗಗಳಲ್ಲಿ ಆಗುತ್ತಿದೆ. ಮುಂದಿನ ಒಂದೆರಡು ವಾರದಲ್ಲಿ ಎಲ್ಲಾ ರೈತರ ಖಾತೆಗಳಿಗೂ ಪರಿಹಾರ ಹಣ ಸಂದಾಯವಾಗಲಿದೆ. ಆದರೆ, ಕಳೆದ ವರ್ಷ ದೇಶದ ಇತಿಹಾಸದಲ್ಲೇ ಮೊದಲ ಬಾರಿಗೆ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ಮೆಟ್ಟಿಲೇರಿ ಕೇಂದ್ರದಿಂದ ಬರ ಪರಿಹಾರ ಹಣ ಪಡೆದಿತ್ತು. ಆದರೆ, ಈ ವರ್ಷದ ಎನ್ ಡಿಆರ್‌ಎಫ್ ಹರಿಹಾರದ ಹಣ ಇನ್ನೂ ಸಂದಾಯವಾಗಿಲ್ಲ ಎಂದು ಕೇಂದ್ರ ಸರ್ಕಾರದ ವಿರುದ್ಧ ಹರಿಹಾಯ್ದರು. ನಮ್ಮ ರಾಜ್ಯದಲ್ಲಿ 10 ಹವಾಮಾನ ವಲಯಗಳಿವೆ ಮಳೆಯಾಗುವ ವೈವಿಧ್ಯತೆಯ ಪ್ರದೇಶಗಳು ಕರ್ನಾಟಕದಲ್ಲಿದೆ. ದೇಶದ ಯಾವ ರಾಜ್ಯದಲ್ಲೂ ಈ ವೈವಿಧ್ಯತೆ ಇಲ್ಲ. ಇದರಿಂದ ರಾಜ್ಯದಲ್ಲಿ ಕೆಲ ಪ್ರಾಣಹಾನಿಯೂ ಸಂಬಂವಿಸಿದೆ.

ಕೆಲವರು ಹೊಳೆ ಉಕ್ಕಿಹರಿಯುವ ಸಂದರ್ಭದಲ್ಲಿ ನೀರಿನಲ್ಲಿ ಇಳಿದು ಕೊಚ್ಚಿಹೋಗಿದ್ದಾರೆ. ಕೆರೆ ತುಂಬಿದೆ ಎಂದು ಗೊತ್ತಿದ್ದರೂ ಈಜಲು ಹೋಗಿ ಕೆಲವರು ಪ್ರಾಣ ಕಳೆದುಕೊಂಡಿದ್ದಾರೆ.

## ಔಷಧ ನಿಯಂತ್ರಣ ಇಲಾಖೆ ವಿರುದ್ಧ ಹಲವು ಆರೋಪ

• ಉದಯವಾಹಿನಿ, ಬೆಂಗಳೂರು



**ಕರ್ನಾಟಕ ಸರ್ಕಾರ ಆದೇಶ**

ಬಳ್ಳಾರಿ ಜಿಲ್ಲಾಸ್ಪತ್ರೆಯ ಬಾಣಂತಿಯರ ಖಗಿ ರಿಂಗರ್ ಲ್ಯಾಕ್ಟೇಟ್ ದ್ರಾವಣ ಕಾರಣ ಎಂಬ ವಿಚಾರ ಬಹಿರಂಗಗೊಳ್ಳುತ್ತಿದ್ದಂತೆ ಔಷಧ ನಿಯಂತ್ರಣ ಇಲಾಖೆ ವಿರುದ್ಧ ಹಲವು ಆರೋಪ ಕೇಳಿಬಂದಿದ್ದು ರಾಜ್ಯ ಸರ್ಕಾರ ಮಹತ್ವದ ಆದೇಶವನ್ನ ಹೊರಡಿಸಿದೆ. ಆಹಾರ ಸುರಕ್ಷತೆ ಗುಣಮಟ್ಟ ಇಲಾಖೆ ಮತ್ತು ಔಷಧ ನಿಯಂತ್ರಣ ಇಲಾಖೆಗಳನ್ನು ವಿಲೀನಗೊಳಿಸಿ ಕರ್ನಾಟಕ ಸರ್ಕಾರ ಆದೇಶ ಹೊರಡಿಸಿದೆ.

ಎರಡು ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿ ಕಾರ್ಯನಿರ್ವಹಣೆಗೆ ಸೂಚನೆ ನೀಡಲಾಗಿದೆ. ಬಳ್ಳಾರಿ ಘಟನೆಯ ನಂತರ ರಾಜ್ಯ ಸರ್ಕಾರ ಮಹತ್ವದ ನಿರ್ಧಾರವನ್ನ ಕೈಗೊಂಡಿದ್ದು, ಕರ್ನಾಟಕ ಸರ್ಕಾರವು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಹಾಗೂ ಔಷಧ ನಿಯಂತ್ರಣ ಇಲಾಖೆಗಳನ್ನು ವಿಲೀನಗೊಳಿಸಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಎಂದು ಹೊಸದಾಗಿ ನಾಮಕಾರಣ ಮಾಡಿದೆ. ಎರಡೂ ಇಲಾಖೆಗಳ ಕಾರ್ಯಗಳು ಹೋಲುವುದರಿಂದ ಈ ವಿಲೀನ ಸೂಕ್ತ ಎಂದು ಸರ್ಕಾರ ಅಭಿಪ್ರಾಯಪಟ್ಟಿದೆ.

ಆಹಾರ ಸುರಕ್ಷತೆ ಗುಣಮಟ್ಟ, ಔಷಧ ನಿಯಂತ್ರಣ ಈ ಎರಡು ಇಲಾಖೆಗಳನ್ನು ವಿಲೀನಗೊಳಿಸಿ ಹೊಸ ಬದಲಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಎಂದು ಹೊಸದಾಗಿ ನಾಮಕರಣ ಮಾಡಿದೆ. ಬಾಣಂತಿಯರ ಸಾವಿಗೆ ಮತ್ತೊಂದು ಶಾಕಿಂಗ್ ಕಾರಣ ಪತ್ತೆ ಹಚ್ಚಿದ ಮಹಿಳಾ ಆಯೋಗ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಆಯುಕ್ತರ ನಿಯಂತ್ರಣದಲ್ಲಿಯೇ ಕೆಲಸ ನಿರ್ವಹಿಸಲಿದ್ದು ಎರಡು ಇಲಾಖೆಗಳ ಅಧಿಕಾರಿ, ಸಿಬ್ಬಂದಿ ಕಾರ್ಯನಿರ್ವಹಣೆಗೆ ರಾಜ್ಯ ಸರ್ಕಾರ ಸೂಚಿಸಿದೆ.

ಈ ಮೂಲಕ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಆಯುಕ್ತರು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇವರ ಆಡಳಿತಾತ್ಮಕ ನಿಯಂತ್ರಣದಡಿಯಲ್ಲಿ ಎರಡು ಇಲಾಖೆಗಳ ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಾರ್ಯನಿರ್ವಹಿಸುತ್ತಾರೆ. ಈ ಪ್ರಕರಣದಿಂದ ರಾಜ್ಯ ಸರ್ಕಾರ ತೀವ್ರ ಮುಜುಗರಗೊಳ್ಳುವಂತೆ ಮಾಡಿತ್ತು. ಹೀಗಾಗಿ, ಡಿಸೆಂಬರ್ 6 ರಂದು ನಡೆದ ಸಂಪುಟ ಸಭೆಯಲ್ಲಿ ಎರಡೂ ಇಲಾಖೆ ವಿಲೀನಕ್ಕೆ ಸಚಿವರು ಒಪ್ಪಿಗೆ ಸೂಚಿಸಿದ್ದರು. ಸಚಿವ ಸಂಪುಟದಲ್ಲಿ ಅನುಮೋದನೆ ದೊರೆತ ಬಳಿಕ ರಾಜ್ಯ ಸರ್ಕಾರವೂ ಎರಡೂ ಇಲಾಖೆಗಳನ್ನು ವಿಲೀನಗೊಳಿಸಿ ಆದೇಶ ಹೊರಡಿಸಿದೆ.

## ಬೆಂಗಳೂರಲ್ಲಿ ಮತ್ತೆ ಟೋಯಿಂಗ್ ಜಾರಿಗೆ ಚಿಂತನೆ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಮತ್ತೆ ಟೋಯಿಂಗ್ ವ್ಯವಸ್ಥೆ ಜಾರಿಗೆ ತರಲು ಚಿಂತಿಸಲಾಗುತ್ತಿದೆ ಎಂದು ನಗರ ಪೊಲೀಸ್ ಆಯುಕ್ತ ದಯಾನಂದ ಅವರು ಹೇಳಿದರು. ಕೆಂಗೇರಿ ಉಪನಗರದ ಸುರಾನ ಕಾಲೇಜಿನಲ್ಲಿ ಹಮಿಕೊಂಡಿದ್ದ ಸಂಚಾರ ಸಂಪರ್ಕ ದಿವಸ್ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಅಹವಾಲು ಆಲಿಸಿ ಅವರು ಮಾತನಾಡಿದರು. ನಗರದ ಹಲವು ಕಡೆಗಳಲ್ಲಿ ಎಲ್ಲೆಂದರಲ್ಲಿ ವಾಹನಗಳನ್ನು ಪಾರ್ಕಿಂಗ್ ಮಾಡುವುದರಿಂದ ಸಂಚಾರ ದಟ್ಟಣೆ ಉಂಟಾಗುತ್ತಿದೆ. ಹಾಗಾಗಿ ಸುಗಮ ಸಂಚಾರಕ್ಕಾಗಿ ಮತ್ತೆ ಟೋಯಿಂಗ್ ವ್ಯವಸ್ಥೆ ಜಾರಿಗೆ ತರಲು ಚರ್ಚಿಸಲಾಗುತ್ತಿದೆ ಎಂದರು. ಹಿಂದೆ ಇದ್ದ ಟೋಯಿಂಗ್ ಸಮಸ್ಯೆಯನ್ನು ಸರಿಪಡಿಸಿ ಮತ್ತೆ ಜಾರಿಗೆ ತಂದರೆ ಸುಗಮ ಸಂಚಾರಕ್ಕೆ ಅನುವಾಗುತ್ತದೆ. ಅಲ್ಲದೆ ಎಲ್ಲೆಂದರಲ್ಲಿ ವಾಹನಗಳನ್ನು ಪಾರ್ಕಿಂಗ್ ಮಾಡುವುದನ್ನು ತಡೆಗಟ್ಟಬಹುದಾಗಿದೆ ಎಂದು ಅವರು ಹೇಳಿದರು. ವೀಕೆಂಡ್‌ನಲ್ಲಿ ಗೂಡ್ಸ್ ವಾಹನಗಳು ಸಂಚರಿಸದಂತೆ ನಿರ್ಬಂಧ ವಿಧಿಸಿರುವ ಬಗ್ಗೆ, ಸಾರ್ವಜನಿಕರೊಬ್ಬರು ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಆಯುಕ್ತರು, ಹಗಲು ವೇಳೆ ಲೋಡಿಂಗ್ ಅನ್ಲೋಡಿಂಗ್ ಮಾಡುವುದು ಬೇಡ ರಾತ್ರಿ ವೇಳೆ ಅನ್ಲೋಡ್ ಮತ್ತು ಲೋಡ್ ಮಾಡಿಕೊಂಡರೆ ಬೆಳಗ್ಗೆ ವಾಹನಗಳ ದಟ್ಟಣೆ ಕಡಿಮೆ ಮಾಡಲು ಸಹಕಾರಿಯಾಗುತ್ತದೆ ಎಂದು ಆಯುಕ್ತರು ಸೂಚಿಸಿದರು. ರಾತ್ರಿ ವೇಳೆ ಅನುಲೋಡ್ ಮಾಡುವಾಗ ಕೆಲವು ದುಷ್ಟ ಶಕ್ತಿಗಳು ಬಂದು ತೊಂದರೆ ಕೊಡುತ್ತಾರೆ. ಬೆಳಗಿನ ಜಾವ 4 ಗಂಟೆ ಸುಮಾರಿಗೆ ಬ್ಯಾಟರಾಯನಪುರ ಟಿಂಬರ್ ಯಾರ್ಡ್ ಸ್ಥಳಕ್ಕೆ ಬಂದು ಅಡ್ಡಿಪಡಿಸುತ್ತಾರೆ. ಹಾಗಾಗಿ ಭಾಗದಲ್ಲಿ ಪೊಲೀಸ್ ಹೆಚ್ಚಿಸಬೇಕೆಂದು ವ್ಯಕ್ತಿ ಯೊಬ್ಬರು ಮಾಡಿದ ಮನವಿಗೆ ಆಯುಕ್ತರು ಸ್ಪಂದಿಸಿ, ಹಾಗೇನಾದರೂ ತೊಂದರೆ ಕೊಟ್ಟರೆ ತಕ್ಷಣ 112ಗೆ ತಿಳಿಸಿ. ನಾವು ಅವರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು



> ನಾಗರಬಾವಿಯ ವ್ಯಕ್ತಿಯೊಬ್ಬರು ಸಂಚಾರ ದಟ್ಟಣೆ, ರಸ್ತೆಗಳಲ್ಲಿ ಗುಂಡಿಗಳು ಇರುವ ಬಗ್ಗೆ ಗಮನಸೆಳೆದಾಗ ಸಂಚಾರ ದಟ್ಟಣೆಯನ್ನು ನಿಯಂತ್ರಿಸುತ್ತೇವೆ. ಗುಂಡಿಗಳಿದ್ದರೆ ಬಿಬಿಎಂಪಿ ಆಯಪ್ನಲ್ಲಿ ದೂರು ನೀಡಿದರೆ ಅವರು ಗಮನಿಸಿ ಸರಿಪಡಿಸಲು ಅನುಕೂಲ ವಾಗುತ್ತದೆ. ಮೇಲಾಧಿಕಾರಿಗಳು ಸಹ ಅದನ್ನು ಗಮನಿ ಕ್ರಮ ಕೈಗೊಳ್ಳುತ್ತಾರೆ. ಸಾರ್ವಜನಿಕರು ಸಹ ದೂರು ನೀಡಲು ಅವಕಾಶವಿದೆ. ಅದನ್ನು ಸದ್ಬಳಕೆ ಮಾಡಿಕೊಂಡು ನಿಮ್ಮ ದೂರು ದುಮಾನಗಳನ್ನು ನಮೂದಿಸಬಹುದಾಗಿದೆ ಎಂದರು.

## ಭಾರತೀಯ ಮಿಲಿಟರಿಯಲ್ಲಿ ನೇರ ನೇಮಕಾತಿಗೆ ಅರ್ಜಿ ಆಹ್ವಾನ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಭಾರತೀಯ ಮಿಲಿಟರಿಯು ಅವಿವಾಹಿತ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಕ್ರೀಡಾ ಕೋಟಾದಡಿ ನೇರ ನೇಮಕಾತಿ ಮೂಲಕ ಹವಿಲ್ದಾರ್ ಮತ್ತು ನಾಯಿಬ್ ಸುಬೇದಾರ್ ಹುದ್ದೆಗಳ ಭರ್ತಿಗೆ ಅಧಿಸೂಚನೆ ಬಿಡುಗಡೆ ಮಾಡಿದೆ.

ಈ ಹುದ್ದೆಗಳಲ್ಲಿ ಆಸಕ್ತಿ ಇರುವವರು ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಕರೆಯಲಾದ ಹುದ್ದೆಗಳ ಅಭ್ಯರ್ಥಿಗಳ ಅರ್ಹತೆಯ ವಿವರ ಇಲ್ಲಿದೆ. ಅಥ್ಲೆಟಿಕ್ಸ್, ಆರ್ಚರಿ, ಬಾಸ್ಕೆಟ್ ಬಾಲ್, ಬಾಕ್ಸಿಂಗ್, ಡೈವಿಂಗ್, ಫೂಟ್‌ಬಾಲ್, ಫೆನ್ಸಿಂಗ್, ಜಿಮ್ನಾಸ್ಟಿಕ್, ಹಾಕಿ, ಹ್ಯಾಂಡ್‌ಬಾಲ್, ಜುಡೊ, ಕಬಡ್ಡಿ, ಕಾಯಕಿಂಗ್ ಮತ್ತು, ಸ್ವಿಮ್ಮಿಂಗ್, ಸೇಲಿಂಗ್, ಶೂಟಿಂಗ್, ಟ್ರಯಾಥಾನ್, ವಾಲಿಬಾಲ್, ವೈಟ್ ಲಿಫ್ಟಿಂಗ್, ಕುಸ್ತಿ, ವಿಂಟರ್ ಗೇಮ್ಸ್, ರೋವಿಂಗ್ ಕ್ರೀಡೆಗಳಲ್ಲಿ ಜೂನಿಯರ್ ಮೆಡಲಿಸ್ಟ್, ಸೀನಿಯರ್ ಮೆಡಲಿಸ್ಟ್ ಸಾಧನೆ ಮಾಡಿದವರು ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹುದ್ದೆಗಳಿಗೆ ಅಭ್ಯರ್ಥಿಯ ಅರ್ಹತೆಗಳು ಕನಿಷ್ಠ 10ನೇ ತರಗತಿ ಪಾಸಾಗಿರಬೇಕು. ಅರ್ಜಿ ಸಲ್ಲಿಸುವ ಕೊನೆ ದಿನಾಂಕಕ್ಕೆ ಕನಿಷ್ಠ 17 ವರ್ಷ 06 ತಿಂಗಳು ಆಗಿರಬೇಕು. ಗರಿಷ್ಠ 25 ವರ್ಷ ವಯಸ್ಸು ಮೀರಿರಬಾರದು. ಅಭ್ಯರ್ಥಿಗಳು 2000 ಮಾರ್ಚ್ 31 ಮತ್ತು 2007ರ ಏಪ್ರಿಲ್ 01 ರ ನಡುವೆ ಜನಿಸಿರಬೇಕು. ಅಭ್ಯರ್ಥಿಗಳು ರಾಜ್ಯ । ರಾಷ್ಟ್ರ / ಅಂತರರಾಷ್ಟ್ರೀಯ ಮಟ್ಟದಲ್ಲಿ ಯಾವುದೇ ಕ್ರೀಡೆಯಲ್ಲಿ ಜೂನಿಯರ್ ಲೆವೆಲ್ ಅಥವಾ ಸೀನಿಯರ್ ಲೆವೆಲ್ ಮೆಡಲಿಸ್ಟ್ ಆಗಿರಬೇಕು. ಇತರೆ ಫಿಸಿಕಲ್ ಸ್ಟ್ಯಾಂಡರ್ಡ್ ಅನ್ನು ಅಧಿಸೂಚನೆಯಲ್ಲಿ ಸೂಚಿಸಿದಂತೆ ಮಹಿಳಾ / ಪುರುಷ ಅಭ್ಯರ್ಥಿಗಳು ಹೊಂದಿರಬೇಕು. ಅರ್ಜಿ ಸಲ್ಲಿಸಿ ಶಾರ್ಟ್ ಲಿಸ್ಟ್ ಆದವರನ್ನು ಮಿಲಿಟರಿ ಕೇಂದ್ರಗಳಿಗೆ ಟ್ರಯಲ್ ಪರೀಕ್ಷೆಗಳಿಗೆ ಆಹ್ವಾನಿಸಲಾಗುತ್ತದೆ. ಇಲ್ಲಿ ತರಬೇತಿ ನೀಡಲಾಗುತ್ತದೆ. ನಂತರ ಅನರ್ಹರನ್ನು ಮನೆಗೆ ಕಳುಹಿಸಲಾಗುತ್ತದೆ. ಅರ್ಹತೆ ಪಡೆದವರನ್ನು ಮೂರು ವರ್ಷದ ಪ್ರೊಬೇಷನರಿ ಅವಧಿಯಲ್ಲಿ ನಿಯೋಜಿಸಲಾಗುತ್ತದೆ. ಅರ್ಜಿ ಸಲ್ಲಿಸುವುದು ಹೇಗೆ ಅಧಿಸೂಚನೆಯ ಪಿಡಿಎಫ್ ಫೈಲ್‌ನಲ್ಲಿ ಕೊನೆಯಲ್ಲಿ ನೀಡಲಾದ ಅರ್ಜಿ ನಮೂನೆಯನ್ನು ಡೌನ್‌ಲೋಡ್ ಮಾಡಿ ಪ್ರಿಂಟ್ ತೆಗೆದುಕೊಳ್ಳಿ.

ನಂತರ ಭರ್ತಿ ಮಾಡಿದ ಅರ್ಜಿಯನ್ನು ಕೆಳಗಿನ ವಿಳಾಸಕ್ಕೆ ಸಲ್ಲಿಸಿ. ಅರ್ಜಿಯೊಂದಿಗೆ ಶೈಕ್ಷಣಿಕ ಅರ್ಹತೆಗಳು, ಕ್ರೀಡಾ ಸಾಧನೆಯ ಸರ್ಟಿಫಿಕೇಟ್‌ಗಳನ್ನು ಸಹ ಲಗತ್ತಿಸಿ ಕಳುಹಿಸಬೇಕು. ಅರ್ಜಿ ನಮೂನೆಗಾಗಿ, ಅಧಿಸೂಚನೆಗಾಗಿ ಭೇಟಿ ನೀಡಬೇಕಾದ ವೆಬ್ : www.joinindianarmy.nic.in ಅರ್ಜಿ ಸಲ್ಲಿಸಲು ಕೊನೆ ದಿನಾಂಕ: 2025ರ ಫೆಬ್ರುವರಿ 28 ಅರ್ಜಿ ಸಲ್ಲಿಸಬೇಕಾದ ವಿಳಾಸ ಆರ್ಮಿ ಸ್ಪೋರ್ಟ್ಸ್ ಕಂಟ್ರೋಲ್ ಬೋರ್ಡ್, ನಿರ್ದೇಶಕರು ಪಿಟಿ ಮತ್ತು ಸ್ಪೋರ್ಟ್ಸ್, ಜೆನೆರಲ್ ಸ್ಟಾಫ್ ಬ್ರಾಂಚ್, IHQ of MoD (ಆರ್ಮಿ), ರೂಮ್ ನಂಬರ್ 747 'ಎ' ವಿಂಗ್, ಸೇನಾ ಭವನ್, ಪಿಒ ನವದೆಹಲಿ. ಆಫ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ಮಾದರಿಯಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ. ಅರ್ಜಿ ನಮೂನೆಯಲ್ಲಿ ಕೇಳಲಾದ ಮಾಹಿತಿಗಳನ್ನು ಸರಿಯಾಗಿ ಓದಿಕೊಂಡು ನೀಡಬೇಕು. ನಂತರ ಸದರಿ ಮಾಹಿತಿಗಳಿಗೆ ಅನುಗುಣವಾಗಿ ದಾಖಲೆಗಳನ್ನು ಲಗತ್ತಿಸಬೇಕು.

## ಕೋವಿಡ್ ಹಗರಣ ತನಿಖೆಗೆ ಎಸ್‌ಐಟಿ ರಚನೆ ಅಗತ್ಯ : ಗುಂಡೂರಾವ್

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಕೋವಿಡ್ ಕಾಲದ ಹಗರಣದಲ್ಲಿನ ತನಿಖೆಗೆ ಎಸ್‌ಐಟಿ ರಚಿಸುವ ಅಗತ್ಯವಿದೆ. ಈಗಾಗಲೇ ಈ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶುಂಡೂರಾವ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು. ಜಸ್ಟೀಸ್ ಮೈಕಲ್ ಕುನ್ನ ಅವರ ವರದಿಯ ಆಧಾರದ ಮೇಲೆ ಬಹಳಷ್ಟು ಕ್ರಮಗಳನ್ನು ತೆಗೆದುಕೊಳ್ಳುವುದು ಅನಿವಾರ್ಯವಾಗಿದೆ. ಅನಾವಶ್ಯಕವಾಗಿ ಹೆಚ್ಚಿನ ಬೆಲೆ ಕೊಟ್ಟು ಖರೀದಿಗಳಾಗಿವೆ. ಇನ್ನೂ ಕೆಲವು ಕಡೆ ಬೋಗಸ್ ಕಂಪನಿಗಳಿಗೆ ಖರೀದಿ ಆದೇಶಗಳನ್ನು ನೀಡಿರುವುದು ಸೇರಿದಂತೆ ಹಲವಾರು ರೀತಿಯ ಪ್ರಕ್ರಿಯೆಗಳ ಲೋಪವಾಗಿದೆ. ಭ್ರಷ್ಟಾಚಾರ ನಡೆದು ಕೋಟ್ಯಂತರ ರೂ. ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗಿದೆ ಎಂದು ವಿವರಿಸಿದರು. ಒಂದೊಂದು ಪ್ರಕರಣವೂ ಪ್ರತ್ಯೇಕವಾಗಿದೆ. ಕೆಲವು ಪ್ರಕರಣಗಳಲ್ಲಿ ನೇರವಾಗಿ ಭ್ರಷ್ಟಾಚಾರ ಕಂಡುಬರುತ್ತಿದೆ. ಅಂತಹವುಗಳಿಗೆ ಎಫ್‌ಐಆರ್ ದಾಖಲಿಸುತ್ತಿದ್ದೇವೆ. ಇನ್ನೂ ಕೆಲವು ಗಳಲ್ಲಿ ಮತ್ತಷ್ಟು ತನಿಖೆ ಅಗತ್ಯವಿದೆ ಎಂದು ಮನಗಂಡಿರುವುದರಿಂದ ವಿಚಾರಣೆ ಮುಂದು ವರೆಯುತ್ತಿದೆ ಎಂದರು. ಪಿಪಿಇ ಕಿಟ್, ಮಾಸ್ಕ್ ಖರೀದಿಯಲ್ಲಿ ತಪ್ಪುಗಳಾಗಿವೆ ಎಂಬುದು ಕಂಡುಬಂದ ಹಿನ್ನೆಲೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಹಲವಾರು ಎಫ್‌ಐಆರ್‌ಗಳು ದಾಖಲಿಸಲು ಈಗಾಗಲೇ ಆರಂಭವಾಗಿವೆ. ತನಿಖೆಗೆ ಎಸ್‌ಐಟಿ ರಚನೆಯಾಗಲಿದೆ ಎಂದು ಹೇಳಿದರು. ಆಹಾರ ಸುರಕ್ಷತೆ, ಔಷಧ ನಿಯಂತ್ರಣ ಇಲಾಖೆಗಳನ್ನು ವಿಲೀನಗೊಳಿಸಲಾಗಿದೆ.ಆಡಳಿತಾತಕ ಜವಾಬ್ದಾರಿಯನ್ನು ಈ ಮೊದಲೇ ಆಯುಕ್ತರಿಗೆ ನೀಡಲಾಗಿತ್ತು. ಈಗ ಈ ಎರಡೂ ಇಲಾಖೆಗಳನ್ನು ಅಧಿಕೃತವಾಗಿ ವಿಲೀನಗೊಳಿಸಲಾಗಿದೆ ಎಂದರು. ಔಷಧಿ ನಿಯಂತ್ರಣ ಇಲಾಖೆಯಲ್ಲಿ ಮತ್ತಷ್ಟು ಪಾರದರ್ಶಕತೆ ತಂದು ಉತ್ತಮ ದರ್ಜೆಗೇರಿಸಲು ಕ್ರಮ ಕೈ ಗೊಳ್ಳಲಾಗುವುದು ತಪಾಸಣೆ, ಪರಿ ವೀಕ್ಷಣೆಗಳನ್ನು ಪ್ರಯೋಜನವಾಗುವ ರೀತಿಯಲ್ಲಿ ಸುಧಾರಣೆ ಮಾಡಿ ಗುಣಮಟ್ಟ ಕಾಯ್ದುಕೊಳ್ಳಬೇಕು.ಕಳಪೆ ಗುಣಮಟ್ಟದ ಔಷಧಿಗಳನ್ನು ಪೂರೈಸಲಾಗುತ್ತಿದೆ ಎಂಬ ದೂರುಗಳು ಕೇಳಿಬಂದಿವೆ. ಹೀಗಾಗಿ ಔಷಧ ನಿಯಂತ್ರಣ ಇಲಾಖೆ ಮತ್ತು ಆರೋಗ್ಯ ಇಲಾಖೆ ಇವೆರಡನ್ನೂ ವಿಲೀನಗೊಳಿಸಿ ಪ್ರತ್ಯೇಕ ಆಯುಕ್ತರನ್ನು ನಿಯೋಜನೆಗೊಳಿಸಲಾಗುವುದು ಎಂದರು. ಹವಾಮಾನ ಬದಲಾವಣೆಯಿಂದ ಸಮಸ್ಯೆಗಳು ಹೆಚ್ಚಾಗುವ ಸಾಧ್ಯತೆಗಳಿವೆ. ಕುಡಿಯುವ ನೀರು ಮತ್ತು ಆಹಾರದ ಬಗ್ಗೆ ಕಾಳಜಿ ವಹಿಸಬೇಕು.

> ಕೋವಿಡ್ ಹಗರಣ ಕುರಿತಂತೆ ಪ್ರಕರಣಗಳು ಒಂದೊಂದಾಗಿ ದಾಖಲಾಗುತ್ತಿವೆ. ಎಲ್ಲವನ್ನೂ ಸೇರಿಸಿ ಎಸ್‌ಐಟಿ ರಚಿಸುವ ಅಗತ್ಯವಿದೆ ಎಂದು ಸರ್ಕಾರಕ್ಕೆ ಮನವರಿಕೆಯಾಗಿದೆ. ಸಂಪುಟದಲ್ಲಿ ತೀರ್ಮಾನವಾಗಿದ್ದರೂ ಇಲ್ಲಿ ಎಸ್ ಐಟಿ ರಚನೆಯಾಗಿಲ್ಲ. ಮುಂದಿನ ದಿನಗಳಲ್ಲಿ ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದರು.

> ತೆಲಂಗಾಣದಲ್ಲಿ ತೆಲುಗು ನಟ ಅಲ್ಲು ಅರ್ಜುನ್ ಬಂಧನದ ಹಿಂದೆ ರಾಜಕೀಯ ಉದ್ದೇಶಗಳಿಲ್ಲ. ಅನಗತ್ಯವಾಗಿ ಕಾಂಗ್ರೆಸ್ ಮೇಲೆ ಆರೋಪ ಮಾಡಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಅಲ್ಲಿನ ವಾತಾವರಣ ನಮಗೆ ಗೊತ್ತಿಲ್ಲ. ಆದರೆ ಕಾನೂನಿಗಿಂತ ಯಾರೂ ದೊಡ್ಡವರಲ್ಲ. ತಪ್ಪು ಮಾಡಿದಾಗ ಸರ್ಕಾರ ತನ್ನ ಕಾನೂನು ವ್ಯಾಪ್ತಿಯಲ್ಲಿ ಕ್ರಮ ಕೈಗೊಳ್ಳುತ್ತದೆ ಎಂದರು.

# ವೈದ್ಯರು- ಆಹಾರ ಸುರಕ್ಷತಾಧಿಕಾರಿಗಳ ನಡುವೆ ಸಂಘರ್ಷ

### ಔಷಧ ನಿಯಂತ್ರಣ ಇಲಾಖೆಯಲ್ಲಿ ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸಲು ಅವಕಾಶ

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

**ಹುದ್ದೆಯಲ್ಲಿ ಅಕ್ರಮವಾಗಿ ಕುಳಿತ ವೈದ್ಯರು**

ಔಷಧ ನಿಯಂತ್ರಣ ಇಲಾಖೆಯನ್ನು ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಇಲಾಖೆಗೆ ವಿಲೀನ ಗೊಳಿಸಿ ಸರ್ಕಾರ ಆದೇಶ ಹೊರಡಿಸಿದೆ. ಈ ಮಧ್ಯೆ ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಇಲಾಖೆಯಲ್ಲಿ ಆಹಾರ ಸುರಕ್ಷತಾಧಿಕಾರಿಗಳ ಹಾಗೂ ವೈದ್ಯರ ನಡುವೆ ಮುಸುಕಿನ ಗುದ್ದಾಟ ನಡೆಯುತ್ತಿದೆ.

ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಇಲಾಖೆಯಲ್ಲಿ ಈಗಾಗಲೇ ವೃಂದ ಮತ್ತು ನೇಮಕಾತಿ (ಸಿಆಯಂಡ್ ಆರ್) ವೈದ್ಯರಿಗೆ ಕಾರ್ಯನಿರ್ವಹಿಸಲು ಅವಕಾಶ ಇಲ್ಲ. ಔಷಧ ನಿಯಂತ್ರಣ ಇಲಾಖೆಯಲ್ಲಿ ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸಲು ಅವಕಾಶ ಇರುವುದಿಲ್ಲ. ಈವರೆಗೆ ಔಷಧ ನಿಯಂತ್ರಣ ಇಲಾಖೆಯಲ್ಲಿ ಯಾವ ಅಧಿಕಾರಿ ನಿಯೋಜನೆ ಮೇರೆಗೆ ಕೆಲಸ ಮಾಡುತ್ತಿಲ್ಲ. ಆದರೆ, ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಇಲಾಖೆಯಲ್ಲಿ ಅಂಕಿತಾಧಿಕಾರಿಗಳ ಹುದ್ದೆಗೆ 30 ವೈದ್ಯರು ನಿಯಮಬಾಹಿರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ವೈದ್ಯರು, ವೃತ್ತಿಗೆ ಅನುಸಾರವಾದ ಕರ್ತವ್ಯ, ಜವಾಬ್ದಾರಿ ನಿರ್ವಹಿಸುತ್ತಿಲ್ಲ. ಹೀಗಾಗಿ, ವಿದ್ಯಾರ್ಹತೆ, ತಜ್ಞತೆ ಮತ್ತು ಕಾರ್ಯ ಸ್ವರೂಪ ಆಧರಿಸಿ ಹಿಂದೆ ವೇತನದಲ್ಲಿ ವಿಶೇಷ ಭತ್ಯೆವನ್ನು ಹಿಂದಿರುಗಿಸಬೇಕು. ಇಲಾಖೆಯಲ್ಲಿ ನಿಯೋಜನೆ ಮೇರೆಗೆ ಇರುವವರಿಗೂ ವಿಶೇಷ ಭತ್ಯೆ ಡ್ರಾ ಮಾಡಬಾರದು. ಅಂಕಿತಾಧಿಕಾರಿಗಳು ಡ್ರಾಯಿಂಗ್ ಆಫೀಸರ್ ಗಳಾಗಿದ್ದು, ಈ ಬಗ್ಗೆ ನಿಯಮ ಉಲ್ಲಂಘನೆ ಮಾಡಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಇಲಾಖೆಯ ಆದೇಶ ಇದೆ. ಆದರೂ, ವೈದ್ಯರು ಅಕ್ರಮವಾಗಿ 3.50 ಕೋಟಿ ರೂ. ವಿಶೇಷ ಭತ್ಯೆ ವಿಥ್ ಡ್ರಾ ಮಾಡಿಕೊಂಡು ನುಂಗಿದ್ದಾರೆ. ಆದರೆ, ಈವರೆಗೆ ವೈದ್ಯರು ವಿರುದ್ಧ ಯಾವುದೇ ಕ್ರಮವಾಗಿಲ್ಲ. ರಾಜಕೀಯ ಪ್ರಭಾವ ಬಳಸಿ ಯಾವುದೇ ಕ್ರಮವಾಗದಂತೆ ಕೆಲ ವೈದ್ಯರ, ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೇಲೆ ಒತ್ತಡ ತಂದಿದ್ದಾರೆ. ಹಂತ ಹಂತವಾಗಿ ಅಧಿಸೂಚನೆ ಆಹಾರ ಕಲಬೆರಕೆ ತಡೆ ಕಾಯ್ದೆ ಅಡಿ ಆಹಾರ ಸುರಕ್ಷತಾಧಿಕಾರಿಗಳು ಆಹಾರ ನಿರೀಕ್ಷಕರಾಗಿ 2000 ರಿಂದ 2008ರವರೆಗೆ ಹಂತ ಹಂತವಾಗಿ ಸರ್ಕಾರದಿಂದ ಅಧಿಸೂಚನೆಗೊಂಡು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 2008ರಲ್ಲೇ ಹೊರ ರಾಜ್ಯದ ವಿಶ್ವವಿದ್ಯಾಲಯದ(ಜನಾರ್ದನ್ ರಾಯ್ ನಗರ್ ರಾಜಸ್ತಾನ್ ವಿದ್ಯಾಪೀಟ್ ಯೂನಿವರ್ಸಿಟಿ-ಜೆಎನ್ ಆರ್‌ವಿ) ಅಂಕಪಟ್ಟಿ, ವಿಜ್ಞಾನ ವಿಷಯವಲ್ಲದ ಸಂಬಂಧಪಟ್ಟಂತೆ ಆಹಾರ ನಿರೀಕ್ಷಕರ ವಿರುದ್ಧ ದೂರು ದಾಖಲಾಗಿತ್ತು. ಆದರೂ, ಆಹಾರ ಸುರಕ್ಷಾಧಿಕಾರಿಗಳಿಗೆ ಇದುವರೆಗೆ ಹುದ್ದೆ ಅನುಗುಣಕ್ಕೆ ತಕ್ಕಂತೆ ವೇತನ ಹೆಚ್ಚಳ, ಬಡ್ತಿ ಸೇರಿ ಇತರೆ ಆಡಳಿತಾತ್ಮಕ ಸೌಲಭ್ಯ ಸಿಗದಂತಾಗಿದೆ.ಇಲಾಖೆಗೆ ಮುಜುಗರ ತರುವ ವೈದ್ಯರು 2013ರಲ್ಲಿ ಕಾರ್ಯಕಾರಿ ಆದೇಶ ಅನ್ವಯ ಹಿರಿಯ/ಆಹಾರ ಸುರಕ್ಷತಾ ಅಧಿಕಾರಿಗಳಾಗಿ ನೇಮಕಾತಿ ಮಾಡಿದ್ದಾರೆ. ಇವರು ಹೊರತುಪಡಿಸಿ ಆರೋಗ್ಯ ಇಲಾಖೆಯಿಂದ ನಿಯೋಜನೆ ಮೇರೆಗೆ ಸುಮಾರು 80 ಕಿರಿಯ / ಹಿರಿಯ ಅರೋಗ್ಯ ಸಹಾಯಕರು ಕೂಡ ದೂರ ಶಿಕ್ಷಣದ ಮೇಲೆ ಪದವಿ ಪಡೆದಿದ್ದಾರೆ. ಇವರುಗಳು ಇಲ್ಲಿ ನಿಯೋಜನೆ ಮೇರೆಗೆ ಆರೋಗ್ಯ ಇಲಾಖೆಯಿಂದ ಬಂದಿರುತ್ತಾರೆ. ಆದ್ದರಿಂದ, ನಿಯೋಜನೆ ಬಂದ ವೈದ್ಯರು, ಕಾರ್ಯಕಾರಿ ಆದೇಶದಲ್ಲಿ ವೃಂದ ಮತ್ತು ನೇಮಕಾತಿ ನಿಯಮದಂತೆ ಕಾರ್ಯನಿರ್ವಹಿಸುತ್ತಿರುವವರಿಗೆ ಮಾತ್ರ ಅನಗತ್ಯವಾಗಿ ತೊಂದರೆ ಕೊಡುತ್ತಿದ್ದಾರೆ.

> ದೂರಿನ ಕುರಿತು ತನಿಖೆ ನಡೆಸಿದ್ದ ಇಲಾಖೆಯ ಜಾಗೃತಾ ಕೋಶ ಹಾಗೂ ಸರ್ಕಾರದ ಅಧೀನದ ಕಾರ್ಯದರ್ಶಿ ಇದು ಸುಳ್ಳು ದೂರು ಎಂದು ದೃಢಪಡಿಸಿದ್ದಾರೆ. ಅಲ್ಲದೆ, 2022ರ ಅ.29ರಂದು ಇಲಾಖೆ ನಡೆಸಿದ್ದ ತನಿಖೆಯಲ್ಲಿ ಆಹಾರ ನಿರೀಕ್ಷಕರು ಹೊಂದಿರುವ ಪ್ರಮಾಣ ಪತ್ರ ನೈಜತೆಯಿಂದ ಕೂಡಿದೆ ಎಂದು ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಇಲಾಖೆ, ಆರೋಗ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅವರಿಗೆ ವರದಿ ಕೊಟ್ಟಿದೆ.

> ವೃಂದ ಮತ್ತು ನೇಮಕಾತಿ ನಿಯಮದ ಅನ್ವಯ ಇಲಾಖೆಯ ಉಪ ಆಯುಕ್ತರ ಹುದ್ದೆಯು ಹಿರಿಯ ಕೆಎಎಸ್ ಶ್ರೇಣಿಯ ಹುದ್ದೆಗಳಾಗಿವೆ ಹಾಗೂ ಅಂಕಿತಾಧಿಕಾರಿಗಳ ಹುದ್ದೆಯೂ ಸಹ ಶೇ.50 ಪದೋನ್ನತಿ, ಉಳಿದ ಶೇ. 50ರಷ್ಟು ನೇರ ನೇಮಕಾತಿ ಹುದ್ದೆಗಳಾಗಿವೆ. ಹೀಗಿರುವಾಗ, ಇಲಾಖೆಗೆ ಹೊಸದಾಗಿ ಪ್ರಧಾನ ಕಾರ್ಯದರ್ಶಿ, ಆಯುಕ್ತರು ಬಂದಾಗ ವೈದ್ಯರು, ಆಹಾರ ಸುರಕ್ಷತಾಧಿಕಾರಿಗಳ ಅಂಕಪಟ್ಟಿ ಸೇರಿ ಇತರೆ ದೂರುಗಳಿವೆ ಎಂದು ಆಗಾಗ್ಗೆ ಸುಳ್ಳು ದೂರು ನೀಡುತ್ತಾ ಇಲಾಖೆಗೆ ಮುಜುಗರ ತರುವ ಕೆಲಸ ಮಾಡುತ್ತಿದ್ದಾರೆ.

# ಮಳಿಗೆಗಳ ಹರಾಜಿನಲ್ಲಿ ಅವ್ಯವಹಾರ: ಮರು ಹರಾಜಿಗೆ ಆಗ್ರಹ

## ● ಪಂಚಾಯಿತಿ ಕಚೇರಿಯಲ್ಲಿ ಗೋಪ್ಯವಾಗಿರಬೇಕಾದ ಮಾಹಿತಿಗಳು ಸೋರಿಕೆಯಾದ ಕಾರಣ ಮಧ್ಯವರ್ತಿಗಳ ಹಸ್ತಕ್ಷೇಪಕ್ಕೆ ಕಾರಣ

• **ಉದಯವಾಹಿನಿ, ಸೋಮವಾರಪೇಟೆ**

ಅಕ್ಟೋಬರ್‌ನಲ್ಲಿ ನಡೆದ ಪಟ್ಟಣ ಪಂಚಾಯಿತಿ ವಾಣಿಜ್ಯ ಮಳಿಗೆಗಳ ಹರಾಜಿನಲ್ಲಿ ಅವ್ಯಹಾರ ನಡೆದಿದ್ದು ಟೆಂಡರನ್ನು ರದ್ದುಗೊಳಿಸಿ, ಮರುಟೆಂಡರ್, ಹರಾಜು ನಡೆಸಬೇಕು ಎಂದು ನಾಮ ನಿರ್ದೇಶಿತ ಸದಸ್ಯ ಕಿರಣ್ ಉದಯಶಂಕರ್ ಆಗ್ರಹಿಸಿದರು.

ಪಂಚಾಯಿತಿ ಅಧ್ಯಕ್ಷೆ ಜಯಂತಿ ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ ಸಂದರ್ಭ ಎಲ್ಲಸದಸ್ಯರು ಧ್ವನಿಗೂಡಿಸಿದರು. ಮತ್ತೊಮ್ಮೆ ಇ-ಟೆಂಡರ್ ನಡೆಸುವಂತೆ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲು ಸಭೆ ನಿರ್ಣಯ ಕೈಗೊಂಡಿತು. ಟೆಂಡರ್‌ದಾರರ ಹೆಸರು, ಮಳಿಗೆ ಸಂಖ್ಯೆಗಳು ಮಧ್ಯವರ್ತಿಗಳ ಕೈಸೇರಿವೆ. ಪಂಚಾಯಿತಿ ಕಚೇರಿಯಲ್ಲಿ ಗೋಪ್ಯವಾಗಿರಬೇಕಾದ ಮಾಹಿತಿಗಳು ಸೋರಿಕೆಯಾದ ಕಾರಣ ಮಧ್ಯವರ್ತಿಗಳ ಹಸ್ತಕ್ಷೇಪಕ್ಕೆ ಕಾರಣವಾಗಿದೆ ಎಂದು ಸಾರ್ವಜನಿಕರು ದೂರುತ್ತಿದ್ದಾರೆ. ಒಂದಿಬ್ಬರು ಸದಸ್ಯರಿಂದ ಎಲ್ಲ ಸದಸ್ಯರಿಗೆ ಕೆಟ್ಟ ಹೆಸರು ಬಂದಿದೆ.

ಪಂಚಾಯಿತಿ ಅಧಿಕಾರಿಗಳು ಮತ್ತು ಸಿಬ್ಬಂದಿಯೇ ಮಾಹಿತಿ ಸೋರಿಕೆ ಮಾಡಿದ್ದಾರೆ, ಅಧ್ಯಕ್ಷರು ವಿವರಣೆ ನೀಡಬೇಕು. ಸೂಕ್ತ ಕ್ರಮಕೈಗೊಳ್ಳಬೇಕು ಎಂದು ಸರ್ಕಾರಿ ನಾಮನಿರ್ದೇಶಿತ ಸದಸ್ಯ ವಿನಯ್, ಸದಸ್ಯರಾದ ಶೀಲಾ ಡಿಸೋಜ, ಬಿ.ಸಿ.ವೆಂಕಟೇಶ್, ಬಿ.ಸಂಜೀವ, ಜೀವನ್ ಆಗ್ರಹಿಸಿದರು. ನಾಮನಿರ್ದೇಶಿತ ಸದಸ್ಯ ವಿನಯ್, ಸದಸ್ಯರಾದ ಶೀಲಾ ಡಿಸೋಜ, ಬಿ.ಸಿ.ವೆಂಕಟೇಶ್, ಬಿ.ಸಂಜೀವ, ಜೀವನ್ ಆಗ್ರಹಿಸಿದರು.

> ಹರಾಜಿನಲ್ಲಿ ಮಳಿಗೆ ಪಡೆದುಕೊಳ್ಳಲು ಜನರು ಹೊಟ್ಟೆಪಾಡಿಗಾಗಿ ಬಿಡ್‌ನಲ್ಲಿ ಭಾಗವಹಿಸಿದ್ದರೆ, ಮಧ್ಯವರ್ತಿಗಳು ಹಣ ಪೀಕಿರುವ ಘಟನೆಗಳು ನಡೆದಿವೆ. ಕೆಲ ಮಳಿಗೆಗಳು 30 ಸಾವಿರಕ್ಕೆ ಬಿಡ್ ಆಗಿದ್ದರೆ, ಅದರ ಪಕ್ಕದ ಮಳಿಗೆ 4,500 ಕ್ಕೆ ಬಿಡ್ ಆಗಿದ್ದು, ಅವ್ಯವಹಾರ ನಡೆದಿದೆ ಎಂದು ಬಹುತೇಕ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದರು.

**ಮಧ್ಯವರ್ತಿಗಳ ಹಸ್ತಕ್ಷೇಪಕ್ಕೆ ಕಾರಣ**


ಉದಯವಾಹಿನಿ ಚಿತ್ರ

'ನಿಯಮದಂತೆ ಟೆಂಡರ್ ನಡೆಸಲು ಅಧಿಕಾರಿಗಳಿಗೆ ಸೂಚಿಸಿದ್ದೆ, ಬಿಡ್ದಾರರ ಹೆಸರು ಸೋರಿಕೆಯಾಗಿರುವುದು ನನ್ನ ಗಮನಕ್ಕೆ ಬಂದಿದೆ. ಸದಸ್ಯರ ಆರೋಪವೂ ಸರಿಯಾಗಿದೆ. ಸದಸ್ಯರ ತೀರ್ಮಾನದಂತೆ ನಿರ್ಣಯ ಕೈಗೊಳ್ಳಲಾಗುವುದು' ಎಂದು ಅಧ್ಯಕ್ಷರು ಸಭೆಗೆ ತಿಳಿಸಿದರು.

ಟೆಂಡರ್ ಸಂದರ್ಭ ನಡೆದಿರುವ ಅಕ್ರಮಗಳ ಬಗ್ಗೆ, ವಿವರಣೆಯೊಂದಿಗೆ ಜಿಲ್ಲಾಧಿಕಾರಿಗೆ ಪತ್ರ ಬರೆದು, ಇ-ಟೆಂಡರ್ ಮಾಡುವಂತೆ ಮನವಿ ಸಲ್ಲಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಪಟ್ಟಣದಲ್ಲಿ ಸಂತೆ ದಿನ ವಾಹನ ಸಮಸ್ಯೆ ಹೆಚ್ಚಿದೆ. ಸಾರ್ವಜನಿಕರಿಗೆ ದೊಡ್ಡ ಕಿರಿಕಿರಿ ಆಗುತ್ತಿದೆ. ಟ್ರಾಫಿಕ್ ವಿಷಯದಲ್ಲಿ ಖಾಸಗಿ ಬಸ್ ನಿಲ್ದಾಣದಲ್ಲಿ ರಾಜಾರೋಷವಾಗಿ ಹೊಡೆದಾಡಿಕೊಂಡರೂ ಕೇಳುವವರು ಇಲ್ಲದಂತಾಗಿದೆ. ಪೊಲೀಸರು ಕ್ರಮಕೈಗೊಳ್ಳದಿದ್ದರೆ ದೂರು ನೀಡಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಖಾಸಗಿ ಬಸ್ ನಿಲ್ದಾಣದ ಶೌಚಾಲಯ ದುರಸ್ತಿ ಹೆಸರಿನಲ್ಲಿ ಲಕ್ಷಾಂತರ ಮೊತ್ತ ವೆಚ್ಚ ಮಾಡುತ್ತಿದ್ದಾರೆ ವರ್ಷಕ್ಕೆರಡು ಭಾರಿ 5 ಲಕ್ಷದಂತೆ ಖರ್ಚು ಮಾಡಿ, ಅದನ್ನನು ಪಂಚಾಯಿತಿ ಸದಸ್ಯರೇ ಗುತ್ತಿಗೆ ಪಡೆದು ಹಣ ಪೋಲು ಮಾಡಲಾಗುತ್ತಿದೆ. ನೂತನ ಶೌಚಾಲಯ ನಿರ್ಮಿಸಬೇಕು ಎಂದು ಜೀವನ್ ತಿಳಿಸಿದರು. ಜೇಸಿ ವೇದಿಕೆಯ ಮುಂಭಾಗ ಹೆಚ್ಚಿನ ಬಾಡಿಗೆ ಕೊಟ್ಟು ವಾಣಿಜ್ಯ ಮಳಿಗೆಗಳನ್ನು ಪಡೆದಿದ್ದಾರೆ ಮಳಿಗೆಗಳ ಮುಂದೆ ದಿನವಿಡಿ ಆಟೋಗಳನ್ನು ನಿಲ್ಲಿಸಿದರೆ ವ್ಯಾಪಾರ ಕುಸಿಯುತ್ತಿದೆ.

ರಿಕ್ಷಾಗಳಿಗೆ ಪಂಚಾಯಿತಿ ನಿಯಮದಂತೆ ನಿಗದಿತ ಸ್ಥಳವನ್ನು ಗುರುತಿಸಿಕೊಡಲು ಅಧಿಕಾರಿಗಳು ಕ್ರಮಕೈಗೊಳ್ಳಬೇಕೆಂದು ಸದಸ್ಯರು ಸೂಚಿಸಿದರು. ಪಂಚಾಯಿತಿ ಸ್ಥಾಯಿ ಸಮಿತಿ ಅಧ್ಯಕ್ಷರನ್ನಾಗಿ ಬಿ.ಆರ್.ಮಹೇಶ್ ಅವಿರೋಧ ಆಯ್ಕೆಯಾದರು. ಸಭೆಯಲ್ಲಿ ಉಪಾಧ್ಯಕ್ಷೆ ಮೋಹಿನಿ, ಸದಸ್ಯರಾದ ಪಿ.ಕೆ. ಚಂದ್ರ, ನಾಗರತ್ನ, ಶುಭಾಕರ್, ಎಚ್.ಎ.ನಾಗರಾಜ್ ಮುಖ್ಯಾಧಿಕಾರಿ ಸತೀಶ್ ಇದ್ದರು.

**ಸದಸ್ಯತ್ವಕ್ಕೆ ಅವಮಾನ**

ವರ್ಗಾವಣೆಗೆ ಕ್ರಮ' ವಾರ್ಡ್ ಸದಸ್ಯರು ಜನರ ಕೆಲಸ ಮಾಡಿಸಲೆಂದೇ ಅವರು ಆಯ್ಕೆ ಮಾಡಿದ್ದಾರೆ. ಆದರೆ ಪಂಚಾಯಿತಿ ಸಿಬ್ಬಂದಿ 'ಬೇರೆಯವರ ಕೆಲಸ ಮಾಡಿಸಿಕೊಡಲು ನೀವು ಯಾಕೆ ಬರುತ್ತೀರಾ' ಎಂದು ಸದಸ್ಯರನ್ನೇ ಪ್ರಶ್ನಿಸುವ ಮಟ್ಟಕ್ಕೆ ಬೆಳೆದಿದ್ದಾರೆ. ನಿವೃತ್ತ ಡಿವೈಎಸ್‌ಪಿ ಒಬ್ಬರಿಗೆ ಸಹಾಯ ಮಾಡಲು ನಮಗೆ ಸಾಧ್ಯವಾಗುತ್ತಿಲ್ಲ ಎಂದು ಸದಸ್ಯ ಮೃತ್ಯುಂಜಯ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. 'ನನಗೆ ಅವಮಾನ ಮಾಡಿದ ಮಹಿಳಾ ಸಿಬ್ಬಂದಿಯನ್ನು ವರ್ಗಾವಣೆ ಮಾಡಬೇಕು. 15 ವರ್ಷಗಳಿಂದ ಇಲ್ಲಿ ಕೆಲಸ ಮಾಡುತ್ತಿದ್ದಾರೆ' ಎಂದು ಹೇಳಿದರು. ವರ್ಗಾವಣೆಗೆ ಜಿಲ್ಲಾಧಿಕಾರಿಗೆ ಪತ್ರ ಬರೆಯಲು ಸಭೆಯಲ್ಲಿ ನಿರ್ಣಯಿಸಲಾಯಿತು.

# ಸಿಬ್ಬಂದಿ ಕೊರತೆ: ನಲುಗಿದ ಪಿಎಚ್‌ಸಿ

• **ಉದಯವಾಹಿನಿ, ತುಮಕೂರು**

ದೊಡ್ಡಾಸ್ಪತ್ರೆ ಮೇಲಿನ ಹೊರೆ ತಗ್ಗಿಸುವ ಗುರಿಯೊಂದಿಗೆ ನಗರದ ವಿವಿಧೆಡೆ ಪ್ರಾರಂಭಿಸಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು (ಪಿಎಚ್‌ಸಿ) ವೈದ್ಯರು, ಸಿಬ್ಬಂದಿ ಕೊರತೆಯಿಂದ ನಲುಗುತ್ತಿವೆ. ರಾಷ್ಟ್ರೀಯ ಆರೋಗ್ಯ ಮಿಷನ್ (ಎನ್‌ಎಚ್‌ಎಂ) ಯೋಜನೆಯಡಿ ಕೋತಿತೋಪು, ಅಗ್ರಹಾರ, ಶೆಟ್ಟಿಹಳ್ಳಿಯಲ್ಲಿ ಆರೋಗ್ಯ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ.

ಕ್ಯಾತ್ಸಂದ್ರ, ಶಿರಾ ಗೇಟ್, ಕುರಿಪಾಳ್ಯ, ಶಾಂತಿನಗರದ ಕೇಂದ್ರಗಳು ಆರೋಗ್ಯ ಇಲಾಖೆ ಉಸ್ತುವಾರಿಯಲ್ಲಿ ನಡೆಯುತ್ತಿವೆ. ಎಲ್ಲಾ ಕೇಂದ್ರಗಳು ಜಿಲ್ಲಾ ಆಸ್ಪತ್ರೆಯ ವ್ಯಾಪ್ತಿಗೆ ಬರುತ್ತವೆ. ಕೇಂದ್ರಗಳಲ್ಲಿ ಅಗತ್ಯ ಸಿಬ್ಬಂದಿ, ವೈದ್ಯರಿಲ್ಲದೆ ಜನರು ಜಿಲ್ಲಾ ಆಸ್ಪತ್ರೆ, ಖಾಸಗಿ ಆಸ್ಪತ್ರೆಗಳ ಕಡೆ ಹೆಜ್ಜೆ ಹಾಕುತ್ತಿದ್ದಾರೆ.

ಕೇಂದ್ರಗಳ ಆರಂಭದ ಉದ್ದೇಶವೇ ಈಡೇರುತ್ತಿಲ್ಲ ಹಲವು ಕೇಂದ್ರಗಳಲ್ಲಿ ಜನರಿಗೆ ಅಗತ್ಯವಾಗಿ ಬೇಕಾದ ಔಷಧಿಯೇ ಇಲ್ಲ. ಮಧುಮೇಹ, ರಕ್ತದೊತ್ತಡ ಪರೀಕ್ಷಿಸುವ ಉಪಕರಣಗಳಿಲ್ಲ ಕೇವಲ ನಾಮಕಾವಸ್ತೆ ಎಂಬಂತೆ ನಡೆಯುತ್ತಿವೆ.


ಉದಯವಾಹಿನಿ ಚಿತ್ರ

**6 ತಿಂಗಳಿನಿಂದ ವೈದ್ಯರೇ ಇಲ್ಲ**

ಶಾಂತಿನಗರದ ಪಿಎಚ್‌ಸಿಯಲ್ಲಿ ಕಳೆದ ಆರು ತಿಂಗಳಿನಿಂದ ವೈದ್ಯರೇ ಇಲ್ಲ. ಮೇ ತಿಂಗಳಲ್ಲಿ ಇಲ್ಲಿನ ವೈದ್ಯರು ನಿವೃತ್ತಿಯಾದರು. ಇದುವರೆಗೆ ಕಾಯಂ ವೈದ್ಯರನ್ನು ನೇಮಕ ಮಾಡಿಲ್ಲ.

ರೋಗಿಗಳು ಪ್ರತಿ ದಿನ ಆಸ್ಪತ್ರೆಗೆ ಬಂದು ವಾಪಸ್ ಹೋಗುತ್ತಿದ್ದಾರೆ. ಇಲ್ಲಿ ಔಷಧ ಉಗ್ರಾಣದ ಕೊರತೆ ಯೂ ಇನ್ನು, ಮಾತ್ರೆ, ಮುಲಾಮು ಇತರ ಔಷಧಿಯನ್ನು ಸಾರ್ವಜನಿಕರು ಕುಳಿತುಕೊಳ್ಳುವ ಜಾಗದಲ್ಲೇ ಸಂಗ್ರಹಿಸಲಾಗಿದೆ. ಮಳೆಬಂದರೆ ಶಾಂತಿನಗರದ ಕಟ್ಟಡ ಸೋರುತ್ತದೆ. ನಿತ್ಯ ನೂರಾರು ಜನ ಆಸ್ಪತ್ರೆಗೆ ಬಂದು ಹೋಗುತ್ತಾರೆ.

ಅವರಿಗೆ ಬೇಕಾದ ಅಗತ್ಯ ಸೌಲಭ್ಯ ಕಲ್ಪಿಸಲು ಸಾಧ್ಯವಾಗಿಲ್ಲ. ಆಸ್ಪತ್ರೆಯ ಹಿಂಭಾಗವೇ ಕಸ ಕಡ್ಡಿ ತುಂಬಿಕೊಂಡಿದ್ದು, ಸ್ವಚ್ಛತೆ ಮರೀಚಿಕೆಯಾಗಿದೆ.

ರೋಗ ವಾಸಿಗೆ ಬಂದವರಿಗೆ ಹೊಸ ಕಾಯಿಲೆ ಜತೆಯಾ ಗುತ್ತಿವೆ. 8 ವಿವಿಧ ಹುದ್ದೆಗಳು ಮಂಜೂರಾಗಿದ್ದು, 4 ಜನ ಮಾತ್ರ ಕೆಲಸ ಮಾಡುತ್ತಿದ್ದಾರೆ.

> ಅರ್ಧದಷ್ಟು ಸಿಬ್ಬಂದಿ ನೇಮಕವೇ ಆಗಿಲ್ಲ. 'ಹಾವು ಕಡಿತದ ಔಷಧಿ ಕೇಳಿದರೆ ಇಲ್ಲ ಎನ್ನುತ್ತಾರೆ. ನಾಯಿ, ಬೆಕ್ಕು ಕಡಿತದ ಔಷಧಿ ಮಾತ್ರ ಇದೆ ಎಂದು ಉತ್ತರಿಸುತ್ತಾರೆ. ಪ್ರತಿ ದಿನ ಕೇಂದ್ರಕ್ಕೆ ಬಂದು ಬರಿಗೈನಲ್ಲಿ ವಾಪಸ್ ಆಗುತ್ತಿದ್ದೇವೆ
>
> -ಅಫೀಜಾ ನುಸ್ರತ್, ಬನಶಂಕರಿಯ

# ಗಾಳಿಬೀಡು ಗ್ರಾಮ ಪಂಚಾಯಿತಿಗೆ ರಾಷ್ಟ್ರ ಪ್ರಶಸ್ತಿ

• **ಉದಯವಾಹಿನಿ, ಮಡಿಕೇರಿ**

ಮಡಿಕೇರಿ ತಾಲ್ಲೂಕಿನ ಗಾಳಿಬೀಡು ಪಂಚಾಯಿತಿಗೆ ಪ್ರತಿಷ್ಠಿತ ದೀನ್ ದಯಾಳ್ ಉಪಾಧ್ಯಾಯ ಪಂಚಾಯತ್ ಸ್ಟೇಟ್ ವಿಕಾಸ್ ಪುರಸ್ಕಾರ್ ಪ್ರಶಸ್ತಿ ಲಭಿಸಿದ್ದು, ಈ ಮೂಲಕ ದೇಶದ ಪ್ರಮುಖ ಮೂರು ಪಂಚಾಯಿತಿಗಳಲ್ಲಿ ಒಂದಾಗಿದೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ದೆಹಲಿಯಲ್ಲಿ ಗಾಳಿಬೀಡು ಪಂಚಾಯಿತಿ ಅಧ್ಯಕ್ಷೆ ಉಷಾ ಬಿಜಿ ಮತ್ತು ಪಿಡಿಒ ಕೆಎ ಶಶಿ ಕಿರಣ್ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಿದರು.

ದೆಹಲಿಯ ವಿಜ್ಞಾನ ಭವನದಲ್ಲಿ ನಡೆದ ರಾಷ್ಟ್ರೀಯ ಪಂಚಾಯತ್ ಪುರಸ್ಕಾರ 2024 ಕಾರ್ಯಕ್ರಮದಲ್ಲಿ ಈ ಪ್ರಶಸ್ತಿ ಪ್ರದಾನ ಮಾಡಲಾಯಿತು ಹಲವು ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದ ಹಿನ್ನೆಲೆಯಲ್ಲಿ ಗಾಳಿಬೀಡು ಪಂಚಾಯತ್‌ಗೆ ಈ ಪ್ರತಿಷ್ಠಿತ ಪ್ರಶಸ್ತಿ ಲಭಿಸಿದೆ. ಪಂಚಾಯಿತಿಯನ್ನು ಮತ್ತಷ್ಟು ಅಭಿವೃದ್ಧಿ ಪಡಿಸಲಾಗುವುದು ಎಂದು ಗಾಳಿಬೀಡು ಪಂಚಾಯಿತಿ ಪಿಡಿಒ ಶಶಿ ಕಿರಣ ಅವರು ಹೇಳಿದ್ದಾರೆ.

ತನ್ನ ವ್ಯಾಪ್ತಿಯಲ್ಲಿ ಒಟ್ಟು ಹತ್ತು ಗ್ರಾಮಗಳನ್ನು ಹೊಂದಿರುವ ಗಾಳಿಬೀಡು ಪಂಚಾಯತ್, ಸರ್ಕಾರದ ವಿವಿಧ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದೆ.

ಬಡತನ ನಿರ್ಮೂಲನೆ ಮತ್ತು ಸುಧಾರಿತ ಜೀವನೋಪಾಯ ಪಂಚಾಯಿತಿ ವಿಭಾಗದಲ್ಲಿ ಗಾಳಿಬೀಡು ಪಂಚಾಯಿತಿಗೆ ಈ ಪ್ರಶಸ್ತಿ ಬಂದಿದ್ದು, ಇದು 1 ಕೋಟಿ ರೂಪಾಯಿ ನಗದು ಬಹುಮಾನ ಒಳಗೊಂಡಿದೆ.

ಸರ್ಕಾರಿ ಶಾಲೆಗಳಲ್ಲಿ ಉದ್ಯಾನವನ ಸ್ಥಾಪನೆ, ಪಂಚಾಯಿತಿ ವ್ಯಾಪ್ತಿಯಲ್ಲಿ ಶೌಚಾಲಯ ವ್ಯವಸ್ಥೆ, ಬಡತನ ನಿರ್ಮೂಲನೆ, ನೀರಾವರಿ ಕೆರೆಗಳ ಸ್ಥಾಪನೆ, ಪೌಷ್ಠಿಕ ಆಹಾರ ಪೂರೈಕೆಯೊಂದಿಗೆ ಅಂಗನವಾಡಿ ಅಭಿವೃದ್ಧಿ, ಪಿಂಚಣಿ ಯೋಜನೆಗಳ ಅನುಷ್ಠಾನ ಸೇರಿದಂತೆ ಪಂಚಾಯಿತಿಯು ವಿವಿಧ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದೆ.

# 18ರಂದು ಮಳವಳ್ಳಿಯಲ್ಲಿ ಕನ್ನಡ ಹಬ್ಬ

• **ಉದಯವಾಹಿನಿ, ಮಳವಳ್ಳಿ**

ಡಿ.20ರಿಂದ ಮೂರು ದಿನಗಳ ಕಾಲ ಮಂಡ್ಯದಲ್ಲಿ ನಡೆ ಯುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೂ ಮುನ್ನಾ ಡಿ.18ರಂದು ಮಳವಳ್ಳಿ ಪಟ್ಟಣದಲ್ಲಿ ಕನ್ನಡ ಹಬ್ಬವನ್ನು ಸಂಭ್ರಮಾಚರಣೆಯ ರೀತಿ ಆಚರಿಸಲು ವಿವಿಧ ಕನ್ನಡಪರ ಸಂಘಟನೆಗಳು ನಿರ್ಧರಿಸಿದ್ದವು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಡಿ.18ರಂದು ಕನ್ನಡ ಹಬ್ಬ ಆಚರಿಸಬೇಕು.

ಸಮ್ಮೇಳನದ ಸಂದರ್ಭದ 3 ದಿನಗಳ ಕಾಲ ಪಟ್ಟಣ ಸೇರಿದಂತೆ ತಾಲ್ಲೂಕಿನ ಎಲ್ಲೆಡೆ ಪ್ರತಿ ಮನೆ, ಅಂಗಡಿ, ಮುಗಟ್ಟು ವಾಣಿಜ್ಯ ಮಳಿಗೆಗಳು ಹಾಗೂ ಸರ್ಕಾರಿ ಕಚೇರಿಗಳಿಗೆ ವಿದ್ಯುತ್ ದೀಪಾಲಂಕಾರ ಮಾಡುವುದರ ಜತೆಗೆ ಕನ್ನಡ ಬಾವುಟ ಹಾರಿಸಬೇಕು ಎಂದು ತೀರ್ಮಾನಿಸಲಾಯಿತು. ಪುರಸಭೆ ಅಧ್ಯಕ್ಷ ಪುಟ್ಟಸ್ವಾಮಿ ಮಾತನಾಡಿ, ಮೂರು ದಶಕಗಳ ನಂತರ ಮಂಡ್ಯದಲ್ಲಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯುತ್ತಿದ್ದು, ಹೀಗಾಗಿ ಡಿ.18ರಂದು ಬೃಹತ್ ಮೆರವಣಿಗೆ ಜಾಥಾ ನಡೆಸಲಾಗುವುದು. ಶಾಲಾ ಕಾಲೇಜು ವಿದ್ಯಾರ್ಥಿಗಳು, ಆಟೋ ಚಾಲಕರು,


ಉದಯವಾಹಿನಿ ಚಿತ್ರ

ಕನ್ನಡಾಭಿಮಾನಿಗಳು ಭಾಗಿಯಾಗಬೇಕು. ಪಟ್ಟಣದ ಮುಖ್ಯರಸ್ತೆ ಹಾಗೂ ಪ್ರಮುಖ ವೃತ್ತಗಳಿಗೆ ಪುರಸಭೆಯಿಂದ ತಳಿರು ತೋರಣ, ವಿದ್ಯುತ್ ಅಲಂಕಾರ, ಜಾನಪದ ಕಲಾತಂಡಗಳು ಹಾಗೂ ತಮಟೆ ನಗಾರಿ ಕಲಾವಿದರನ್ನು ಒದಗಿಸಿಕೊಡಲಾಗುವುದು ಎಂದು ಘೋಷಿಸಿದರು.

ಸೌಹಾರ್ದ ನಾಗರೀಕ ವೇದಿಕೆ ಅಧ್ಯಕ್ಷ ಎಂ.ಎನ್. ಮಹೇಶ್ ಕುಮಾರ್ ಮಾತನಾಡಿ, ಆಟೊ ಚಾಲಕರಿಗೆ ಹಾಗೂ ಅಲಂಕೃತ ಆಟೊ ನಿಲ್ದಾಣಗಳನ್ನು ನಾಗರಿಕ ವೇದಿಕೆಯಿಂದ ಅಭಿನಂದಿಸಲಾಗುವುದು ಎಂದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಲ್.ಚೇತನ್ ಕುಮಾರ್ ಮಾತನಾಡಿ, ಇಂತಹ ಸಂಭ್ರಮಾಚರಣೆಯಲ್ಲಿ ಎಲ್ಲರ ಕಡ್ಡಾಯವಾಗಿ ಭಾಗಿಯಾಗುವ ಮೂಲಕ ನಾಡಹಬ್ಬವನ್ನು ವಿಜೃಂಭಣೆ ಮಾಡಬೇಕು ಎಂದು ಮನವಿ ಮಾಡಿದರು.

# ಅಧಿವೇಶನದಲ್ಲಿ ರೈತರ ಸಮಸ್ಯೆ ಚರ್ಚಿಸಲು ಒತ್ತಾಯ

• **ಉದಯವಾಹಿನಿ, ಮೈಸೂರು**

ದೆಹಲಿಯಲ್ಲಿನ ರೈತ ಹೋರಾಟದ ಬಗ್ಗೆ ಸಂಸತ್ ಅಧಿವೇಶನದಲ್ಲಿ ಚರ್ಚಿಸುವಂತೆ ಒತ್ತಾಯಿಸಿ ಸಂಯುಕ್ತ ಕಿಸಾನ್ ಮೋರ್ಚ (ರಾಜಕೀಯೇತರ) ಸಂಘಟನೆ ವತಿಯಿಂದ ಪ್ರತಿಭಟನೆ ನಡೆಯಿತು. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರ ಕಚೇರಿ ಮುಂದೆ ಜಮಾವಣೆಗೊಂಡ ಪ್ರತಿಭಟನಾಕಾರರು, ನಾನಾ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ರೈತರ ಕಷ್ಟ ನೀಗಿಸಿ, ಅನ್ನದ ಋಣ ತೀರಿಸಿ, ರೈತರಿಗೆ ಭಿಕ್ಷೆ ಬೇಡ, ನ್ಯಾಯ ಬೇಕು ಎಂಬ ಘೋಷಣೆ ಕೂಗಿದರು.

ದೆಹಲಿ ರೈತ ಹೋರಾಟದ ರೂವಾರಿ ರಾಷ್ಟ್ರೀಯ ರೈತ ಮುಖಂಡ ಜಗಜೀತ್ ಸಿಂಗ್ ದಲ್ಲೆವಾಲ ಉಪವಾಸ 17ನೇ ದಿನಕ್ಕೆ ಮುಂದುವರಿದು ಆರೋಗ್ಯ ಸ್ಥಿತಿ ಹದಗೆಡುತ್ತಿದೆ. ಇಂತಹ ಗಂಭೀರ ಸ್ಥಿತಿಯಲ್ಲಿಯೂ ಸಂಸತ್ ಅಧಿವೇಶ ನಡೆಯುತ್ತಿದ್ದರು ಈ ಸಂಬಂಧ ಚರ್ಚಿಸದೆ ನಿದ್ರೆ ಮಾಡುವಂತೆ ಸಂಸದರು ನಾಟಕ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ನಾವು ಕೇಂದ್ರ ಸರ್ಕಾರವನ್ನು ಭಿಕ್ಷೆ ಕೇಳುತ್ತಿಲ್ಲ, ನಮ್ಮ ಕೃಷಿ


ಉದಯವಾಹಿನಿ ಚಿತ್ರ

**ಅನ್ನದ ಋಣ ತೀರಿಸಿ, ರೈತರಿಗೆ ಭಿಕ್ಷೆ ಬೇಡ**

ಉತ್ಪನ್ನಗಳಿಗೆ ನ್ಯಾಯಯುತ ಬೆಲೆ ಖಾತರಿಯಾದ ಕಾನೂನು ಕೇಳುತ್ತಿದ್ದೇವೆ. ಪ್ರಧಾನಿ ಮೋದಿಯವರು ಎರಡು ವರ್ಷಗಳ ಹಿಂದೆ ರೈತರಿಗೆ ಭರವಸೆ ನೀಡಿ ಚಳವಳಿ ಕೈಬಿಡುವಂತೆ ಮನವಿ ಮಾಡಿ ಹುಸಿಗೊಳಿಸಿದ್ದಾರೆ ಎಂದು ದೂರಿದರು. ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿ ಕಾನೂನು ಜಾರಿಯಾಗಬೇಕು. ಡಾ.ಸ್ವಾಮಿನಾಥನ್ ವರದಿಯಂತೆ ಬೆಂಬಲ ಬೆಲೆ ನಿಗದಿಯಾಗಬೇಕು. ದೇಶದ ರೈತರ ಸಂಪೂರ್ಣ ಸಾಲಮನ್ನಾ ಆಗಬೇಕು. 60 ವರ್ಷ ತುಂಬಿದ ರೈತರಿಗೆ ಪಿಂಚಣಿ ಯೋಜನೆ ಜಾರಿಗೆ ತರಬೇಕು. ಬೆಳೆ ವಿಮೆ ಪದ್ಧತಿ ಬದಲಾಗಬೇಕು ಪ್ರತಿ ರೈತನ ಹೊಲದ ಬೆಳೆ ವಿಮೆ ಪರಿಹಾರ ಪದ್ಧತಿ ಜಾರಿಗೆ ಬರಬೇಕು ಎಂದು ದೆಹಲಿಯಲ್ಲಿ ಹೋರಾಟ ನಡೆಸಲಾಗುತ್ತಿದೆ. ಇದನ್ನು ನಮ್ಮ ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ಈಗ ದೇಶದ ರೈತರಿಗಾಗಿ ತಮ್ಮ ಪ್ರಾಣ ಪಣಕ್ಕಿಟ್ಟು 17 ದಿನಗಳಿಂದ ಉಪವಾಸ ನಡೆಸುತ್ತಿರುವ ಜಗಜಿತ್ ಸಿಂಗ್ ದಲೆವಾಲ ಸಾವು ಬದುಕಿನ ನಡುವೆ ಹೋರಾಡುತ್ತಿದ್ದಾರೆ.

ಆದ್ದರಿಂದ ಕೂಡಲೇ ಕೇಂದ್ರ ಸರ್ಕಾರ ರೈತ ಮುಖಂಡರ ಜೊತೆ ಮಾತುಕತೆ ನಡೆಸಿ ರೈತರ ಬೇಡಿಕೆ ಈಡೇರಿಸಬೇಕು. ರೈತ ಮುಖಂಡರ ಪ್ರಾಣ ಉಳಿಸಬೇಕು ಎಂದು ಒತ್ತಾಯಿಸಿದರು.

> ಕೇಂದ್ರದಿಂದ ರಾಜ್ಯಕೆ ಸತತವಾಗಿ ಅನ್ಯಾಯವಾಗುತ್ತಿದ್ದರೂ ನಮ್ಮ ಸಂಸದರು ಸುಮ್ಮನಿದ್ದಾರೆ. ಯಾವುದೇ ವಿಚಾರ ಬಂದರೂ ರಾಜ್ಯದ ಸಂಸದರು ಧ್ವನಿಯೆತ್ತದೆ ಇರುವುದು ಮತ ನೀಡಿದ ಜನರಿಗೆ ಮಾಡುವ ಅಪಮಾನವಾಗಿದೆ
>
> -ಕುರುಬೂರು ಶಾಂತಕುಮಾರ್, ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ

# ಪುರಸಭೆ ವಾಣಿಜ್ಯ ಅಂಗಡಿ ತೆರವಿಗೆ ವಿರೋಧ

• **ಉದಯವಾಹಿನಿ, ಮಾಗಡಿ**

ಪಟ್ಟಣದ ಆರ್.ಆರ್.ರಸ್ತೆಯಲ್ಲಿ ಇರುವ ಪುರಸಭೆ ವಾಣಿಜ್ಯ ಅಂಗಡಿ ತೆರವುಗೊಳಿಸುವ ಕಾರ್ಯವನ್ನು ಏಕಾಏಕಿ ರಾತ್ರಿ ಕಾರ್ಯಾಚರಣೆ ನಡೆಸುತ್ತಿರುವುದನ್ನು ಜೆಡಿಎಸ್ ಸದಸ್ಯರು ವಿರೋಧ ವ್ಯಕ್ತಪಡಿಸಿದರು. ಪುರಸಭೆ ವತಿಯಿಂದ ಹಳ ವಾಣಿಜ್ಯ ಅಂಗಡಿ ತೆರವುಗೊಳಿಸಿ ಹೊಸದಾಗಿ ವಾಣಿಜ್ಯ ಅಂಗಡಿ ಕಟ್ಟಲು ಪುರಸಭೆ ಸಾಮಾನ್ಯ ಸಭೆಯಲ್ಲಿ ಅನುಮೋದನೆ ಪಡೆಯಲಾಗಿದೆ.

ಆದರೆ, ಏಕಾಏಕಿ ಅಂಗಡಿ ತೆರವುಗೊಳಿಸಲಾಗುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಪುರಸಭೆ ಮುಖ್ಯಾಧಿಕಾರಿ ಮತ್ತು ಅಧಿಕಾರಿಗಳು ಜೆಸಿಬಿ ತಂದು ಕೇವಲ ಮೂರು ಗಂಟೆ ಸಮಯ ನೀಡಿ ಅಂಗಡಿ ತೆರವು ಮಾಡುವಂತೆ ಹೇಳಿರುವುದು ಎಷ್ಟರಮಟ್ಟಿಗೆ ಸರಿ?. ಅಂಗಡಿ ತೆರವುಗೊಳಿಸುವುದಕ್ಕೆ ವಿರೋಧ ಇಲ್ಲ. ಆದರೆ, ಈಗ ಅಂಗಡಿಯಲ್ಲಿ ಲಕ್ಷಾಂತರ ಮೌಲ್ಯದ ವಸ್ತು ಇಟ್ಟುಕೊಂಡು



ಉದಯವಾಹಿನಿ ಚಿತ್ರ

ವ್ಯಾಪಾರ ಮಾಡುತ್ತಿರುವ ಮಾಲೀಕರಿಗೆ ಸಮಾಯವಕಾಶ ನೀಡದೆ ಏಕಾಏಕಿ ರಾತ್ರಿ ಸಮಯದಲ್ಲಿ ಕಾರ್ಯಾಚರಣೆ ನಡೆಸುವುದು ಸರಿಯಲ್ಲ ಎಂದು ಪುರಸಭೆ ಮುಖ್ಯಾಧಿಕಾರಿ ಶಿವರುದ್ರಯ್ಯ ಅವರನ್ನು ಜೆಡಿಎಸ್ ಪುರಸಭೆ ಸದಸ್ಯರು ಪ್ರಶ್ನಿಸಿದರು.

ಯಾವ ಅನುದಾನ ಯಾರು ಗುತ್ತಿಗೆದಾರರು ಮಾಹಿತಿ ನೀಡಿ ಪುರಸಭೆ ವತಿಯಿಂದ ವಾಣಿಜ್ಯ ಅಂಗಡಿ ತೆರವು ಕಾರ್ಯಾಚರಣೆ ಮಾಡಲಾಗುತ್ತಿದೆ.

ತೆರವು ಕಾರ್ಯಾಚರಣೆಗೆ ಜೆಡಿಎಸ್ ಸದಸ್ಯರು ತೀವ್ರ ವಿರೋಧ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಶನಿವಾರ ಬೆಳಗ್ಗೆ 10ಕ್ಕೆ ಪುರಸಭೆ ಸದಸ್ಯರು ಹಾಗೂ ಅಂಗಡಿ ಮಾಲೀಕರ ಸಭೆ ಕರೆದು ನಂತರ ತೀರ್ಮಾನಿಸಲಾಗುವುದು ಎಂದು ಮುಖ್ಯಾಧಿಕಾರಿ ಶಿವರುದ್ರಯ್ಯ ಹಾಗೂ ಪುರಸಭಾ ಉಪಾಧ್ಯಕ್ಷ ರಿಯಾಜ್ ತಿಳಿಸಿದ ನಂತರ ಅಧಿಕಾರಿಗಳು ಸ್ಥಳದಿಂದ ತೆರಳಿದರು. ಪುರಸಭೆ ಜೆಡಿಎಸ್ ಸದಸ್ಯರಾದ ಅಶ್ವಥ್, ಕೆ.ವಿ.ಬಾಲು, ಅನಿಲ್ ಕುಮಾರ್, ರೂಪೇಶ್ ನವೀನ್ ಹಾಗೂ ಪುರಸಭೆ ಅಧಿಕಾರಿಗಳು ಭಾಗವಹಿಸಿದ್ದರು.

**ಗುತ್ತಿಗೆದಾರರು ಯಾರು?**

ಯಾವ ಅನುದಾನದಲ್ಲಿ ಹೊಸದಾಗಿ ಅಂಗಡಿ ಮಳಿಗೆ ಕಟ್ಟಿಸಲಾಗುತ್ತಿದೆ. ಗುತ್ತಿಗೆದಾರರು ಯಾರು? ಜಿಲ್ಲಾಧಿಕಾರಿಗಳಿಂದ ತೆರವು ಕಾರ್ಯಾಚರಣೆ ಮಾಡಲು ಅನುಮತಿ ಪಡೆದಿದ್ದಾರಾ, ತೆರವು ಕಾರ್ಯಾಚರಣೆ ಮಾಡಲು ಟೆಂಡರ್ ಕರೆದಿದ್ದಾರಾ? ಎಂಬ ಪ್ರಶ್ನೆಗಳಿಗೆ ಅಧಿಕಾರಿಗಳಿಂದ ಯಾವುದೇ ಉತ್ತರವಿಲ್ಲ ಎಂದು ಪುರಸಭಾ ಸದಸ್ಯ ಎಂ.ಎನ್.ಮಂಜುನಾಥ್ ಅಸಮಾಧಾನ ವ್ಯಕ್ತಪಡಿಸಿದರು.

# ಬಯಲುಸೀಮೆ ಅಭಿವೃದ್ಧಿ ಮಂಡಳಿಗೆ ಗೌರಿಬಿದನೂರು: ಪುಟ್ಟಸ್ವಾಮಿಗೌಡ

## ● ಚಿಕ್ಕಬಳ್ಳಾಪುರ ಜಿಲ್ಲೆಯ ಆರು ತಾಲ್ಲೂಕುಗಳ ಪೈಕಿ ಐದು ತಾಲ್ಲೂಕುಗಳು ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಗೆ

• **ಉದಯವಾಹಿನಿ, ಗೌರಿಬಿದನೂರು**

ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಗೆ ಗೌರಿಬಿದನೂರನ್ನು ಸೇರಿಸಬೇಕು ಎನ್ನುವ ತಾಲ್ಲೂಕಿನ ಜನರ ಬಹು ವರ್ಷಗಳ ಆಗ್ರಹ ಸಾಕಾರಗೊಳ್ಳುವ ಸಾಧ್ಯತೆ ದಟ್ಟವಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯ ಆರು ತಾಲ್ಲೂಕುಗಳ ಪೈಕಿ ಐದು ತಾಲ್ಲೂಕುಗಳು ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಗೆ ಒಳಪಟ್ಟಿವೆ. ಆದರೆ ಬಯಲುಸೀಮೆ ಎನಿಸಿದರೂ ಗೌರಿಬಿದನೂರು ಮಾತ್ರ ಮಂಡಳಿ ವ್ಯಾಪ್ತಿಯಿಂದ ಹೊರಗೆ ಉಳಿದಿತ್ತು. ಮಂಡಳಿಗೆ ಸೇರಿಸಿದರೆ ಅಭಿವೃದ್ಧಿಗೆ ಮತ್ತಷ್ಟು ಅನುದಾನ ದೊರೆಯುತ್ತದೆ. ತಾಲ್ಲೂಕಿನ ಅಭಿವೃದ್ಧಿಗೆ ಅನುಕೂಲವಾಗುತ್ತದೆ ಎನ್ನುವ ಕೂಗು ಈ ಹಿಂದಿನಿಂದಲೂ ಇತ್ತು. ಈಗ ಇದು ಸಾಕಾರಗೊಳ್ಳುವ ಲಕ್ಷಣಗಳು ಕಾಣುತ್ತಿವೆ.

ಶಾಸಕ ಕೆ.ಎಚ್.ಪುಟ್ಟಸ್ವಾಮಿಗೌಡ ಅವರು ಬೆಳಗಾವಿ ಅಧಿವೇಶನದಲ್ಲಿ ಈ ಬಗ್ಗೆ ಸರ್ಕಾರದ ಗಮನ ಸೆಳೆದಿದ್ದಾರೆ ಆದಷ್ಟು ಬೇಗ ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಗೆ ಸೇರಿಸಬೇಕು ಎಂದು ಆಗ್ರಹಿಸಿದ್ದಾರೆ. ಸರ್ಕಾರದಿಂದಲೂ ಸ್ಪಂದನೆ ದೊರೆಯಿದೆ. ಜಿಲ್ಲೆಗಳ ಪುನರ್ ವಿಂಗಡಣೆ ತರುವಾಯ ಮತ್ತೆ 6 ಜಿಲ್ಲೆಗಳು ಸೇರ್ಪಡೆ ಆಯಿತು. ಬಾಗಲಕೋಟೆ, ಬೆಳಗಾವಿ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಹಾಸನ, ಹಾವೇರಿ, ಕೋಲಾರ, ರಾಮನಗರ, ತುಮಕೂರು, ವಿಜಯಪುರ ಜಿಲ್ಲೆಯ 57 ತಾಲ್ಲೂಕುಗಳ ವ್ಯಾಪ್ತಿಯ 70 ವಿಧಾನಸಭಾ ಕ್ಷೇತ್ರಗಳು ಮಂಡಳಿ ವ್ಯಾಪ್ತಿಗೆ ಒಳಪಟ್ಟಿವೆ.

ಮಳೆಯ ಪ್ರಮಾಣವೂ ಕಡಿಮೆ. ಬಯಲುಸೀಮೆ ಚಹರೆಯನ್ನೇ ಹೊದ್ದಿದೆ. ಆದರೆ ಮಂಡಳಿ ಸ್ಥಾಪನೆಯಾಗಿ ಮೂರು ದಶಕವಾದರೂ ಗೌರಿಬಿದನೂರು ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಯಿಂದ ಹೊರಗೆ ಉಳಿದಿದೆ. ಸಾಮಾನ್ಯವಾಗಿ ಪ್ರತಿ ವರ್ಷ ಪ್ರದೇಶಾವೃದ್ಧಿ ಮಂಡಳಿಯ ಮೂಲಕ ಸರ್ಕಾರವು ತಾಲ್ಲೂಕುಗಳಿಗೆ ಕನಿಷ್ಠ ಎರಡು ಮೂರು ಕೋಟಿಗಳನ್ನು ಅಭಿವೃದ್ಧಿಗಾಗಿ ನೀಡುತ್ತದೆ. ಆದರೆ ಇಲ್ಲಿಯವರೆಗೆ ಈ ಅನುದಾನದಿಂದ ಗೌರಿಬಿದನೂರು ವಂಚಿತವಾಗಿದೆ. ಜಲಸಂಪನ್ಮೂಲಗಳ ಅಭಿವೃದ್ಧಿ ಮತ್ತು ಸಂರಕ್ಷಣೆ, ಮಳೆ ಆಧಾರಿತ ಕೃಷಿ ಪದ್ಧತಿಗಳಲ್ಲಿ ಮತ್ತು ಅರಣ್ಯಾಭಿವೃದ್ಧಿಯಲ್ಲಿ ಭೂಸಾರ ಮತ್ತು ಜಲ ಸಂರಕ್ಷಣಾ ಕ್ರಮಗಳನ್ನು ಅಳವಡಿಸುವುದು, ತೋಟಗಾರಿಕಾ ಅಭಿವೃದ್ಧಿ ಪ್ರೋತ್ಸಾಹ, ಕೃಷಿ ಮತ್ತು ಅದಕ್ಕೆ ಸಂಬಂಧಿಸಿದ ವಲಯಗಳಲ್ಲಿನ ಕಾರ್ಯ ಚಟುವಟಿಕೆಗಳಿಗೆ ಪ್ರೋತ್ಸಾಹ, ಪಶು ಸಂಗೋಪನೆ ಉತ್ತೇಜನವು ಮಂಡಳಿಯ ಪ್ರಮುಖ ಉದ್ದೇಶಗಳಾಗಿವೆ. ಮಂಡಳಿಗೆ ಸರ್ಕಾರವು ಒದಗಿಸುವ ಒಟ್ಟು ಅನುದಾನದಲ್ಲಿ ಕನಿಷ್ಠ ಶೇ 60 ರಷ್ಟು ಅನುದಾನವನ್ನು ಮಣ್ಣು ಮತ್ತು ನೀರು ಸಂರಕ್ಷಣೆಗೆ ಮತ್ತು ಉಳಿದ ಅನುದಾನವನ್ನು ಇತರ ಅಭಿವೃದ್ಧಿ ಕಾಮಗಾರಿಗಳಿಗೆ ಬಳಸಿಕೊಳ್ಳಬೇಕಾಗಿದೆ. ಗೌರಿಬಿದನೂರು ತಾಲ್ಲೂಕು ಕೃಷಿ ಪ್ರಧಾನ ತಾಲ್ಲೂಕು. ಮಣ್ಣು ಮತ್ತು ನೀರಿನ ಸಂರಕ್ಷಣೆಯು ಪ್ರಮುಖವಾಗಿ ಆದರೆ ಹಳ್ಳಿಗಳು ಮತ್ತು ರೈತರ ಸಮೃದ್ಧವಾಗಲಿದ್ದಾರೆ. ಈ ಎಲ್ಲಾ ದೃಷ್ಟಿಯಿಂದ ಮಂಡಳಿ ವ್ಯಾಪ್ತಿಗೆ ಸೇರಿದರೆ ತಾಲ್ಲೂಕಿನ ಅಭಿವೃದ್ಧಿಗೆ ಅನುಕೂಲವಾಗಲಿದೆ.

ಕೆ.ಎಚ್.ಪುಟ್ಟಸ್ವಾಮಿ ಗೌಡ ಶಾಸಕಗೌರಿಬಿದನೂರು ತಾಲ್ಲೂಕು 250 ಹಳ್ಳಿ ಒಳಗೊಂಡ ಮಳೆ ಆಶ್ರಿತವಾದುದು. ಏಕೆ ಬಯಲುಸೀಮೆ ಅಭಿವೃದ್ಧಿ ಮಂಡಳಿಗೆ ಸೇರಿಸಿಲ್ಲ ಎನ್ನುವ ಕಾರಣ ಗೊತ್ತಿಲ್ಲ ಅಭಿವೃದ್ಧಿಗೆ ದೊರೆಯಲಿದೆ.

ಅನುದಾನ ಜಿಲ್ಲೆಯ ಎಲ್ಲಾ ತಾಲ್ಲೂಕುಗಳನ್ನು ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಗೆ ಸೇರಿವೆ. ಆದರೆ ಗೌರಿಬಿದನೂರು ತಾಲ್ಲೂಕು ಇದುವರೆಗೂ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಗೆ ಒಳಪಟ್ಟಿಲ್ಲ ಎಂದು ಶಾಸಕ ಕೆ. ಎಚ್.ಪುಟ್ಟಸ್ವಾಮಿಗೌಡ ತಿಳಿಸಿದ್ದಾರೆ.

**ಅಭಿವೃದ್ಧಿ ಕಾರ್ಯಗಳಿಗೆ ಸದ್ಬಳಕೆ**

ಈ ಹಿಂದೆ ತಾಲ್ಲೂಕಿಗೆ ಸೇರಿದ್ದ ಮಂಚೇನಹಳ್ಳಿಯು ಬೆಟ್ಟಗುಡ್ಡಗಳಿಂದ ಆವೃತವಾಗಿತ್ತು. ಆ ಕಾರಣದಿಂದ ಬಿಟ್ಟು ಹೋಗಿರಬಹುದು. ಆದರೆ ಈಗ ಮಂಚೇನಹಳ್ಳಿ ಪ್ರತ್ಯೇಕ ತಾಲ್ಲೂಕು ಆಗಿದೆ. ಮಂಡಳಿ ವ್ಯಾಪ್ತಿಗೆ ಗೌರಿಬಿದನೂರನ್ನು ಸೇರಿಸಿದರೆ ಪ್ರತಿ ವರ್ಷ ಇಂತಿಷ್ಟು ಎಂದು ಅನುದಾನವು ಸರ್ಕಾರದಿಂದ ದೊರೆಯುತ್ತದೆ. ಇದನ್ನು ಅಭಿವೃದ್ಧಿ ಕಾರ್ಯಗಳಿಗೆ ಸದ್ಬಳಕೆ ಮಾಡಿಕೊಳ್ಳಬಹುದು ಎಂದಿದ್ದಾರೆ.


ಉದಯವಾಹಿನಿ ಚಿತ್ರ

**ವರ್ಷ ಇಂತಿಷ್ಟು ಎಂದು ಅನುದಾನವು ಸರ್ಕಾರದಿಂದ ದೊರೆಯುತ್ತದೆ**

> ಶಾಸಕರಿಗೆ ಉತ್ತರಿಸಿರುವ ಯೋಜನಾ ಮತ್ತು ಸಾಂಖ್ಯಿಕ ಇಲಾಖೆ ಸಚಿವ ಡಿ.ಸುಧಾಕರ್, ಕೃಷಿ ಮತ್ತು ತೋಟಗಾರಿಕೆ ಇಲಾಖೆಯಿಂದ ವರದಿ ತರಿಸಿ ಮಂಡಳಿ ವ್ಯಾಪ್ತಿಗೆ ಸೇರಿಸುತ್ತೇವೆ' ಎಂದು ಭರವಸೆ ನೀಡಿದ್ದಾರೆ. ಶಾಸಕರು ಈ ಬಗ್ಗೆ ಸದನದಲ್ಲಿ ಗಮನ ಸೆಳೆದ ಮತ್ತು ಸಚಿವರ ಉತ್ತರದ ವಿಡಿಯೊಗಳು ಗೌರಿಬಿದನೂರು ವಿಧಾನಸಭಾ ಕ್ಷೇತ್ರದಲ್ಲಿ ವೈರಲ್ ಆಗಿವೆ. ಈ ಹಿಂದೆ ರಾಜ್ಯದ 8 ಜಿಲ್ಲೆಗಳು ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಗೆ ಒಳಪಟ್ಟಿದ್ದವು.

**ಅಭಿವೃದ್ಧಿಗೆ ಮತ್ತಷ್ಟು ಅನುದಾನ**

# ಮಿನಿ ನ್ಯೂಸ್

## ಜಮೀನಿನಲ್ಲಿ ಬೆಳೆದಿದ್ದ 12 ಲಕ್ಷ ಮೌಲ್ಯದ ಗಾಂಜಾ ವಶ: ಆರೋಪಿ ಬಂಧನ

• **ಉದಯವಾಹಿನಿ ಚಾಮರಾಜನಗರ**

ಗಾಂಜಾ ಬೆಳೆದಿದ್ದ ಜಮೀನಿನ ಮೇಲೆ ಪೊಲೀಸರು ದಾಳಿ ನಡೆಸಿ 12 ಲಕ್ಷ ರೂಪಾಯಿ ಮೌಲ್ಯದ ಗಾಂಜಾ ಗಿಡಗಳನ್ನು ವಶಪಡಿಸಿಕೊಂಡು ಆರೋಪಿಯನ್ನು ಬಂಧಿಸಿದ್ದಾರೆ. ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಕುರಟ್ಟಿಹೊಸೂರು ಗ್ರಾಮದ ಮಾರ ಎಂಬಾತ ತನ್ನ ಜಮೀನಿನಲ್ಲಿ ಗಾಂಜಾ ಬೆಳೆದಿದ್ದ. ಮಾಹಿತಿ ಮೇರೆಗೆ ರಾಮಾಪುರ ಠಾಣೆಯ ಪೊಲೀಸರು ದಾಳಿ ನಡೆಸಿದ್ದರು.211 ಕೆಜಿ ತೂಕದ ಗಾಂಜಾ ಗಿಡಗಳನ್ನು ವಶಪಡಿಸಿಕೊಂಡು ಆರೋಪಿ ಮಾರನನ್ನು ಬಂಧಿಸಿದ್ದಾರೆ. ರಾಮಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಮರ್ಪಕ ವಿದ್ಯುತ್ ಪೂರೈಸುವಂತೆ ಆಗ್ರಹ

• **ಉದಯವಾಹಿನಿ ಕೊಳ್ಳೇಗಾಲ**

ಬೆಳಕು ಜ್ಯೋತಿ, ಭಾಗ್ಯ ಜ್ಯೋತಿ ಯೋಜನೆಯಲ್ಲಿ ಉಚಿತ ವಿದ್ಯುತ್ ಕೊಡಬೇಕೆಂದು. ರೈತರಿಗೆ ಸಮರ್ಪಕವಾಗಿ ವಿದ್ಯುತ್ ಪೂರೈಸ ಬೇಕು ಎಂದು ಆಗ್ರಹಿಸಿ ಕೊಳ್ಳೇಗಾಲ ಪಟ್ಟಣದ ಚೆಸ್ಕಾಂ ಕಚೇರಿಯ ಮುಂದೆ ರೈತರು ಪ್ರತಿಭಟನೆ ನಡೆಸಿದರು. ಕೊಳ್ಳೇಗಾಲ ಪಟ್ಟಣದ ಚಾಮುಂಡೇಶ್ವರಿ ವಿದ್ಯುತ್ ನಿಗಮ ಕಚೇರಿ ಮುಂಭಾಗ ಜಮಾಯಿಸಿದ ರೈತ ಸಂಘಟನೆ ರೈತರಿಗೆ ಸರಿಯಾಗಿ ವಿದ್ಯುತ್ ನೀಡುತ್ತಿಲ್ಲ ಎಂದು ಅಧಿಕಾರಿಗಳ ವಿರುದ್ಧ ಧಿಕ್ಕಾರ ಕೂಗಿ ಪ್ರತಿಭಟನೆ ನಡೆಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಗೌಡಹಳ್ಳಿ ಸೋಮಣ್ಣ ಮಾತನಾಡಿ ಕೊಳ್ಳೇಗಾಲ ಹಾಗೂ ಹನೂರು ಭಾಗದಲ್ಲಿ ಸರಿಯಾಗಿ ವಿದ್ಯುತ್ ನೀಡುತ್ತಿಲ್ಲ ಇದರಿಂದ ರೈತರು ಜಮೀನುಗಳಲ್ಲಿ ಬೆಳೆದಿರುವ ಬೆಳೆಗಳಿಗೆ ನೀರು ಒದಗಿಸಲು ಸಾಧ್ಯವಾಗದೆ ಬೆಳೆ ಒಣಗಿ ರೈತನಿಗೆ ನಷ್ಟವಾಗುತ್ತಿದೆ. ಚೆಸ್ಕಾಂ ಇಲಾಖೆಯ ಅಧಿಕಾರಿ ಸಿಬ್ಬಂದಿಗಳ ನಿರ್ಲಕ್ಷ್ಯಕ್ಕೆ ರೈತರು ಬೆಳೆದಿರುವ ಬೆಳೆ ಹಾಳಾಗುತ್ತಿದೆ. ಇದಕ್ಕೆ ಅಧಿಕಾರಿಗಳೇ ಹೊಣೆ ಆಗಬೇಕಾಗುತ್ತದೆ ಆದ್ದರಿಂದ ಸರಿಯಾದ ಸಮಯದಲ್ಲಿ ನಮಗೆ ವಿದ್ಯುತ್ ಸಂಪರ್ಕವನ್ನು ಕೊಡಬೇಕು ಮತ್ತು ಟ್ರಾನ್ಸ್ ಫಾರ್ ಪೆಟ್ಟಿಯನ್ನು (ಟಿಸಿ) ಕೆಟ್ಟುಹೋದ ಕ್ಷಣಕ್ಕೆ ಬದಲು 24 ಗಂಟೆ ಒಳಗಡೆ ಸರಿ ಮಾಡಿ ಕೊಡುವಂತೆ ರೈತ ಸಂಘದ ಅಧ್ಯಕ್ಷ ಅಧಿಕಾರಿಗಳಿಗೆ ಒತ್ತಾಯಿಸಿದರು.

## ಸಾಲಗಾರರ ಕಾಟಕ್ಕೆ ಮನನೊಂದ ಮಹಿಳೆ : ಆತ್ಮಹತ್ಯೆಗೆ ಯತ್ನ

• **ಉದಯವಾಹಿನಿ, ಕೋಲಾರ**

ಸಾಲಗಾರರ ಕಾಟಕ್ಕೆ ಮನನೊಂದ ಮಹಿಳೆಯೊಬ್ಬರು ನಿದ್ದ ಮಾತ್ರೆಯನ್ನು ಸೇವಿಸಿ ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ರಾಯಲ್ಪಾಡು ಎಂಬಲ್ಲಿ ನಡೆದಿದೆ. ಸಾಲಗಾರರ ಕಾಟ ತಾಳಲಾಗದೆ ಕೋಮಲದೇವಿ ಎನ್ನುವ ಮಹಿಳೆ ನಿದ್ದೆ ಮಾತ್ರ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಪುತ್ರಿಯ ವಿದ್ಯಾಭ್ಯಾಸ ಕುಟುಂಬ ನಿರ್ವಹಣೆಗೆ ಸಾಲ ಮಾಡಿದ್ದರು. ಸಾಲ ಕೊಟ್ಟಿರುವವರು ಮನೆಯ ಬಳಿ ಗಲಾಟೆ ಮಾಡುತ್ತಿದ್ದ ಹಿನ್ನೆಲೆಯಲ್ಲಿ ನಿದ್ದೆ ಮಾತ್ರ ಸೇವಿಸಿ ಕೋಮಲದೇವಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಸದ್ಯ ಸ್ಥಳೀಯ ಆಸ್ಪತ್ರೆಯಲ್ಲಿ ಕೋಮಲ ದೇವಿಯವರು ಚಿಕಿತ್ಸೆ ಪಡೆಯುತ್ತಿದ್ದಾರೆ. ರಾಯಲ್ಪಾಡು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾಡಾನೆ ದಾಳಿ: ಮಹಿಳೆಗೆ ತೀವ್ರ ಗಾಯ

• **ಉದಯವಾಹಿನಿ ಗೋಣಿಕೊಪ್ಪಲು**

ಬಿರುನಾಣಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪರಕಟಗೇರಿಯಲ್ಲಿ ರಸ್ತೆ ಬದಿ ಬಸ್‌ಗಾಗಿ ಕಾಯುತ್ತಿದ್ದ ಕರ್ತಮಾಡ ಶಾರದಾ (75) ಎಂಬವರ ಮೇಲೆ ಕಾಡಾನೆ ದಾಳಿ ನಡೆಸಿ ಗಾಯಗೊಳಿಸಿದೆ. ಪರಕಟಗೇರಿ ರಸ್ತೆ ಬದಿ ಒಬ್ಬರೇ ನಿಂತಿದ್ದಾಗ ದಿಢೀರ್ ಬಂದ ಕಾಡಾನೆ ಅವರತ್ತ ನುಗ್ಗಿದೆ. ಕಾಡಾನೆ ಕಂಡು ತಪ್ಪಿಸಿಕೊಳ್ಳಲು 30 ಮೀಟರ್ ಓಡಿದ್ದರು; ಅಲ್ಲಿ ನೆಲಕ್ಕೆ ಬಿದ್ದಾಗ ಅವರನ್ನು ತುಳಿದು ಕಾಡಾನೆ ಮುಂದಕ್ಕೆ ತೆರಳಿದೆ.

ಶಾರದಾ ಅವರ ಎಡ ಕಾಲು ಹಾಗೂ ಪಕ್ಕೆಲುಬು ಭಾಗಕ್ಕೆ ತೀವ್ರ ಗಾಯವಾಗಿದೆ. ಗ್ರಾಮಸ್ಥರು ಅವರನ್ನು ಗೋಣಿಕೊಪ್ಪಲು ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪ್ರಥಮ ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗೆ ಮಡಿಕೇರಿ ಜಿಲ್ಲಾಸ್ಪತ್ರೆಗೆ ದಾಖಲಿಸಿದ್ದಾರೆ.

ಶ್ರೀಮಂಗಲ ವನ್ಯಜೀವಿ ವಿಭಾಗದ ವಲಯ ಅರಣ್ಯ ಅಧಿಕಾರಿ ಅರವಿಂದ್, ವನ್ಯಜೀವಿ ಸಂರಕ್ಷಣಾ ಮಂಡಳಿ ಸದಸ್ಯ ಸಂಕೇತ್ ಪೂವಯ್ಯ ಜಿಲ್ಲಾಸ್ಪತ್ರೆಗೆ ಭೇಟಿ ಗಾಯಾಳುವಿನ ಆರೋಗ್ಯ ವಿಚಾರಿಸಿದರು.

## ಮೇಳೈಸಿದ ಸುಗ್ಗಿ ಹಬ್ಬದ ಸಂಭ್ರಮ

• **ಉದಯವಾಹಿನಿ, ಮಡಿಕೇರಿ**

ಕೊಡಗು ಜಿಲ್ಲೆಯಲ್ಲಿ ಸುಗ್ಗಿ ಹಬ್ಬ 'ಪುತ್ತರಿ' (ಹುತ್ತರಿ) ಸಂಭ್ರಮ ಮನೆ ಮಾಡಿದೆ. ಸಮೃದ್ಧ ಮಳೆಯಾಗಿ, ಕೆರೆ-ಕಟ್ಟೆಗಳು, ಹೊಳೆಗಳೆಲ್ಲವೂ ತುಂಬಿ ಹರಿದು ಭತ್ತದ ಬೆಳೆ ಹುಲಸಾಗಿ ಬೆಳೆದಿದ್ದು, ಕೊಯ್ಲಿಗೆ ಕ್ಷಣಗಣನೆ ಆರಂಭವಾಗಿದೆ. ಶಾಸ್ತ್ರೋಕ್ತವಾಗಿ ಭತ್ತದ ತೆನೆಗಳನ್ನು ಕೊಯ್ದು, ಧಾನ್ಯಲಕ್ಷ್ಮಿಯನ್ನು ಮನೆ ತುಂಬಿಸಿಕೊಳ್ಳುವ ಹಬ್ಬಕ್ಕೆ ರೈತರು ಸಜ್ಜಾಗಿದ್ದಾರೆ. ಅಬ್ಬರದ ಪಟಾಕಿ, ಬಾನಬಿರುಸುಗಳ ಸಿಡಿತಗಳೊಂದಿಗೆ, ಕೋವಿಯಿಂದ ಹೊರಹೊಮ್ಮುವ ಕುಶಾಲತೋವುಗಳು ಸಂಭ್ರಮವನ್ನು ಇಮ್ಮಡಿಗೊಳಿಸಲಿವೆ. ಐನ್ಮ ಮನೆಗಳು, ದೇವಾಲಯಗಳು, ವಿವಿಧ ಸಮಾಜಗಳ ಸಭಾಂಗಣ ಗಳಲ್ಲಿ ಸಾಮೂಹಿಕ ಆಚರಣೆಗಳೂ ನಡೆಯಲಿವೆ.

ಡಿ. 14ರಂದು ರಾತ್ರಿ ಚುಮುಚುಮು ಚಳಿಯ ನಡುವೆ, ಪೊಲಿ ಪೊಲಿಯೇ ದೇವ' ಎಂಬ ಉದ್ಘೋಷಗಳು ಮುಗಿಲು ಮುಟ್ಟಲಿವೆ. ಹಬ್ಬದ ನಂತರ ಪುತ್ತರಿ ಕೋಲಾಟ್, ಬೊಳಕಾಟ್, ಕತ್ತಿಯಾಟ್, ಬಾಳೋಪಾಟ್, ಪರೆಯಕಳಿ, ವಾಲಗತಾಟ್, ಕೊಡವಪಾಟ್ ಮೊದಲಾದ ಸಾಂಪ್ರದಾಯಿಕ ಕಲೆಗಳ ಪ್ರದರ್ಶನವೂ ವಾರಗಟ್ಟಲೆ ನಡೆಯಲಿದ್ದು, ಮಂದ್ (ಬಯಲು)ಗಳು ಸಜ್ಜುಗೊಂಡಿವೆ. ಹಬ್ಬವು ಭಾವೈಕ್ಯತೆಯ ಪ್ರತೀಕವಾಗಿದ್ದು, ಮುಸ್ಲಿಮರೂ ಸೇರಿದಂತೆ ಸರ್ವಧರ್ಮಿಯರು, ಎಲ್ಲಾ ಜಾತಿಯವರೂ ಬೇಧಭಾವವಿಲ್ಲದೇ ಆಚರಿಸುತ್ತಾರೆ. ಮುಸ್ಲಿಂ ಅಸೋಸಿಯೇಷನ್‌ಗಳು ಸ್ಥಳೀಯರೊಂದಿಗೆ ಹಬ್ಬ ಆಚರಿಸಲಿವೆ. ಮೋಡ ಕವಿದ ವಾತಾವರಣ, ತುಂತುರು ಮಳೆ ಹನಿಗಳು ಹಬ್ಬದ ಸಂಭ್ರಮಕ್ಕೆ ಕೊಂಚ ಆತಂಕ ಮೂಡಿಸಿವೆ. ಸದ್ಯ, ಮಳೆ ಬಾರದಿರಲಿ ಎಂಬುದೇ ಎಲ್ಲರ ಪ್ರಾರ್ಥನೆಯಾಗಿದೆ.ನಾಪೋಕ್ಲು ಸಮೀಪದ ಪಾಡಿ ಇಗ್ಗುತ್ತಪ್ಪ ದೇವಾಲಯದಲ್ಲಿ ಡಿ. 14ರಂದು ಸಂಜೆ 7.30ಕ್ಕೆ ಹಬ್ಬದ ನೆರೆ ಕಟ್ಟುವುದು ರಾತ್ರಿ, 8.30ಕ್ಕೆ ಕದಿರು ಕುಯುವುದು ರಾತ್ರಿ 9.30ಕ್ಕೆ ಊಟೋಪಚಾರ ನಡೆಯಲಿದೆ. ಕೊಡವರ ಸಾಂಪ್ರದಾಯಿಕ ಉಡುಪು ಧರಿಸಿ ಕುಪ್ಪಸ ತೊಟ್ಟು ಸೊಂಟಕ್ಕೆ ನಡು ಪಟ್ಟಿ ಬಿಗಿದು ಅದರಲ್ಲಿ ಪೀಚೆ ಕತ್ತಿಯನ್ನು ಸಿಕ್ಕಿಸಿ ಮನೆಯೊಡೆಯ ಹಾಗೂ ಮನೆ ಮಂದಿಯೆಲ್ಲಾ ಒಟ್ಟುಗೂಡಿ ಭತ್ತದ ಗದ್ದೆಗೆ ತೆರಳುತ್ತಾರೆ.

ಅಂತರಾಳದಿಂದ..
EDITORIAL

# ನ್ಯಾಯ ವ್ಯವಸ್ಥೆಯೇ ಅತಿಕ್ರಮಿಸಿದರೆ?

ಮಸೀದಿಯೊಂದರ ಸಮೀಕ್ಷೆಗೆ ಸಂಬಂಧಿಸಿ ಸ್ಥಳೀಯ ನ್ಯಾಯಾಲಯವೊಂದರ ಅವಸರದ ತೀರ್ಪಿನ ಪರಿಣಾಮವಾಗಿ ಇತ್ತೀಚೆಗೆ ಉತ್ತರ ಪ್ರದೇಶದ ಸಂಭಲ್‌ನಲ್ಲಿ 7 ಮಂದಿ ನಾಗರಿಕರು ಹಿಂಸಾಚಾರಕ್ಕೆ ಬಲಿಯಾದರು. ಸಂಭಲ್‌ನಲ್ಲಿರುವ ಸುಮಾರು 500 ವರ್ಷಗಳ ಹಿಂದಿನ ಮಸೀದಿಯೊಂದನ್ನು, ದೇವಸ್ಥಾನ ಕೆಡವಿ ಕಟ್ಟಿರಬೇಕು ಎಂದು ಯಾರೋ ಒಬ್ಬನಿಗೆ ಅನುಮಾನ ಬಂದಿದ್ದೇ ತಡ ಆತ ಸ್ಥಳೀಯ ನ್ಯಾಯಾಲಯದ ಮೆಟ್ಟಿಲೇರಿದೆ ನ್ಯಾಯಾಲಯಕ್ಕೆ ಅಷ್ಟೇ ಸಾಕಿತ್ತು ಸರ್ವೇ ನಡೆಸಲು ಆದೇಶ ನೀಡಿಯೇ ಬಿಟ್ಟಿತ್ತು ಧಾರ್ಮಿಕ ಸ್ಥಳಗಳ ಕಾಯ್ದೆಯ ಬಗ್ಗೆ ಪ್ರಾಥಮಿಕ ಅರಿವಿರುವ ಯಾರೂ ತೀರ್ಪನ್ನು ಒಪ್ಪಿಕೊಳ್ಳಲಾರರು. 1991ರ ಧಾರ್ಮಿಕ ಆರಾಧನಾ ಸ್ಥಳಗಳ ಕಾಯ್ದೆಯನ್ನು ಉಲ್ಲಂಘಿಸಿ ಈ ತೀರ್ಪನ್ನು ಸ್ಥಳೀಯ ನ್ಯಾಯಾಲಯ ಅವಸರವಸರವಾಗಿ ನೀಡಿತ್ತು. ಮಸೀದಿಯ ಸಮೀಕ್ಷೆ ನಡೆಸಬೇಕು ಎಂದು ಅಪೇಕ್ಷಿಸುವವರ ಉದ್ದೇಶ ಏನು ಮತ್ತು ಅದಕ್ಕೆ ಅನುಮತಿ ನೀಡಿದರೆ ಪರಿಣಾಮ ಏನಾಗುತ್ತದೆ ಎನ್ನುವುದನ್ನು ತಿಳಿಯದಷ್ಟು ನ್ಯಾಯಾಧೀಶರು ಅಜ್ಞಾನಿಯೇನೂ ಆಗಿರಲಿಲ್ಲ. ಪರಿಣಾಮಗಳನ್ನು ಅರಿತು ಉದ್ದೇಶಪೂರ್ವಕವಾಗಿ ಅಂದರೆ ರಾಜಕೀಯ ಪ್ರೇರಿತವಾಗಿ ಈ ತೀರ್ಪನ್ನು ನ್ಯಾಯಾಧೀಶರು ನೀಡಿದ್ದಾರೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

**ಈ ದೇಶದ ಸಾವಿರಾರು ಕೆರೆಗಳನ್ನು ನಾಲೆಗಳನ್ನು ನದಿಗಳನ್ನು ಅತಿಕ್ರಮಿಸಿ ಅಲ್ಲಿ ಬೃಹತ್ ಕಟ್ಟಡಗಳು ತಲೆಯೆತ್ತಿ ನಿಂತಿವೆ. ಕೇವಲ ಬೆಂಗಳೂರಿನಲ್ಲೇ ಸುಮಾರು 40ರಷ್ಟು ಕೆರೆಗಳಲ್ಲಿ ಶೇ. 95ರಷ್ಟು ಕೆರೆಗಳು ಅತಿಕ್ರಮಣಗೊಂಡಿವೆ ಎಂದು ವರದಿಗಳು ಹೇಳುತ್ತಿವೆ. ಬೆಂಗಳೂರಿನ ನೀರಿನ ಕೊರತೆ ಮತ್ತು ಮಳೆಗಾಲದಲ್ಲಿ ನೆರೆ ಇವೆಲ್ಲಕ್ಕೂ ಈ ಅತಿಕ್ರಮಣವೇ ಕಾರಣ. ದೇವಸ್ಥಾನಗಳನ್ನು ಮಸೀದಿಗಳು ಆಕ್ರಮಿಸಿವೆಯೇ ಎಂದು ಹುಡುಕುವ ಬದಲು ಈ ಅತಿಕ್ರಣಗೊಂಡ ಕೆರೆಗಳ ಬಗ್ಗೆ ನ್ಯಾಯಾಲಯ ತಲೆಕೆಡಿಸಿಕೊಳ್ಳಬೇಕು. ಹಾಗೆಯೇ ಅತಿಕ್ರಮಣಗೊಂಡ ರಸ್ತೆಗಳು, ಅಕ್ರಮ ಕಟ್ಟಡಗಳು, ಅತಿಕ್ರಮಣಗೊಂಡ ಅರಣ್ಯ ಇವೆಲ್ಲದರ ಬಗ್ಗೆ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸುವವರ ಸಂಖ್ಯೆ ಹೆಚ್ಚಾದರೆ ಅದರಿಂದ ಸಮಾಜಕ್ಕೆ ಭವಿಷ್ಯಕ್ಕೆ ಬಹಳಷ್ಟು ಪ್ರಯೋಜನಗಳಿವೆ.**

ಸಮೀಕ್ಷೆಯ ದಿನ ಸಂಘಪರಿವಾರ ಕಾರ್ಯಕರ್ತರು ಜೈ ಶ್ರೀರಾಂ ಎನ್ನುತ್ತಾ ಮಸೀದಿಯ ಅವರಣಕ್ಕೆ ನುಗ್ಗಿದರು.

ಅಧಿಕಾರಿಗಳು ಇದನ್ನು ನೋಡಿಯೂ ನೋಡದಂತೆ ಸುಮ್ಮನಿದ್ದರು. ಸ್ಥಳೀಯರನ್ನು ಪ್ರಚೋಡಿಸುವುದು ಅವರ ಗುರಿಯಾಗಿತ್ತು ಮಾತ್ರವಲ್ಲ, ಅದರಲ್ಲಿ ಯಶಸ್ವಿಯೂ ಆದರು. ಸಮೀಕ್ಷೆಯನ್ನು ಕೆಲವರು ಪ್ರತಿಭಟಿಸುತ್ತಿದ್ದಂತೆಯೇ ಪೊಲೀಸರು ಲಾಠಿಯ ಮೂಲಕ ಅವರನ್ನು ದಮನಿಸಲು ಮುಂದಾದರು. ಕೊನೆಯಲ್ಲಿ 7 ಜನರ ಬರ್ಬರ ಹತ್ಯೆಯೊಂದಿಗೆ ನ್ಯಾಯಾಲಯದ ಸಮೀಕ್ಷೆ ಯಶಸ್ವಿಯಾಗಿ ಮುಗಿಯಿತು. ಬಳಿಕ ಸುಪ್ರೀಂಕೋರ್ಟ್ ಈ ಸಮೀಕ್ಷೆ ವಿಚಾರಣೆಗೆ ತಡೆಯನ್ನು ಒಡ್ಡಿತು. ಇದರ ಬೆನ್ನಿಗೇ ಅಜ್ಮೀರ್ ದರ್ಗಾದಲ್ಲೂ ದೇವಸ್ಥಾನವಿತ್ತು ಎನ್ನುವ ಅರ್ಜಿಯೊಂದು ರಾಜಸ್ಥಾನದ ನ್ಯಾಯಾಲಯವೊಂದರಲ್ಲಿ ಸಲ್ಲಿಕೆಯಾಗಿದ್ದು ನ್ಯಾಯಾಧೀಶರು ಅದನ್ನೂ ಗಂಭೀರವಾಗಿ ತೆಗೆದುಕೊಂಡಿದ್ದಾರೆ. ಇತ್ತೀಚೆಗೆ ವಾರಣಾಸಿಯ ಜ್ಞಾನವಾಪಿ ಮಸೀದಿಗೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ನೀಡಿದ ತೀರ್ಪಿನ ಬಳಿಕ ಇಂತಹ ಅರ್ಜಿಗಳು ಎರ್ರಾಬಿರ್ರಿಯಾಗಿ ನ್ಯಾಯಾಲಯದ ಮೆಟ್ಟಿಲೇರುತ್ತಿವೆ 10ಕ್ಕೂ ಅಧಿಕ ಮಸೀದಿಗಳ ಮೂಲ ಸ್ವರೂಪವನ್ನು ಅರಿಯಲು ಸಮೀಕ್ಷೆ ನಡೆಸಬೇಕು ಎಂದು ಈಗಾಗಲೇ ನ್ಯಾಯಾಲಯಕ್ಕೆ ಅರ್ಜಿಯನ್ನು ಸಲ್ಲಿಸಲಾಗಿದೆ. ಸಾಲು ಸಾಲಾಗಿ ನ್ಯಾಯಾಲಯದ ಮುಂದೆ ಬಂದು ಬೀಳುತ್ತಿರುವ ಅರ್ಜಿಗಳನ್ನು ನೋಡಿ ಸುಪ್ರೀಂಕೋರ್ಟಿಗೂ ಸಾಕಾಗಿರಬೇಕು. ಆರಾಧನಾ ಕಾಯ್ದೆಗಳಿಗೆ ಸಂಬಂಧಿಸಿದ ವಿಚಾರಣೆ ಇತ್ಯರ್ಥವಾಗುವವರೆಗೆ ಧಾರ್ಮಿಕ ಸ್ಥಳಗಳನ್ನು ಅದರಲ್ಲೂ ಮುಖ್ಯವಾಗಿ ಮಸೀದಿಗಳು ಹಾಗೂ ದರ್ಗಾಗಳನ್ನು ತಮ್ಮ ವಶಕ್ಕೆ ತೆಗೆದುಕೊಳ್ಳುವ ಕೋರಿಕೆ ಇರುವ ಹೊಸ ಅರ್ಜಿಗಳನ್ನು ದೇಶದ ನ್ಯಾಯಾಲಯಗಳು ಮುಂದಿನ ಸೂಚನೆಯವರೆಗೆ ವಿಚಾರಣೆಗೆ ಕೈಗೊಳ್ಳುವಂತೆ ಇಲ್ಲ ಎಂದು ಸುಪ್ರೀಂಕೋರ್ಟ್ ಗುರುವಾರ ನಿರ್ದೇಶನ ನೀಡಿದೆ. ಅಷ್ಟೇ ಅಲ್ಲ ಬಾಕಿ ಇರುವ ಅರ್ಜಿಗಳ ವಿಚಾರವಾಗಿ ಮಧ್ಯಂತರ ಅಥವಾ ಅಂತಿಮ ಆದೇಶವನ್ನು ನೀಡುವಂತೆ ಇಲ್ಲ ಎಂದು ಕೂಡ ಸುಪ್ರೀಂಕೋರ್ಟ್ ಸೂಚಿಸಿದೆ. ಪರಿಣಾಮವಾಗಿ ಸುಮಾರು 18 ಅರ್ಜಿಗಳ ವಿಚಾರಣೆಯನ್ನು ತಡೆಹಿಡಿಯಲಾಗಿದೆ. ಬಹುಶಃ ಈ ಹಿಂದೆ ಜ್ಞಾನವಾಪಿ ಮಸೀದಿಯ ಸಂದರ್ಭದಲ್ಲೇ ಇಂತಹದೊಂದು ವಿವೇಕಯುತವಾದ ಆದೇಶವನ್ನು ನ್ಯಾಯಾಲಯ ಹೊರಡಿಸಿದ್ದಿದ್ದರೆ, ಇಂದು ದೇಶಾದ್ಯಂತ ಇಂತಹ ಅರ್ಜಿಗಳನ್ನು ಪರಿಶೀಲಿಸುವ ಸ್ಥಿತಿ ನ್ಯಾಯಾಲಯಕ್ಕೆ ಬರುತ್ತಿರಲಿಲ್ಲ. ಸಂಭಲ್‌ನಲ್ಲಿ ಏಳು ಮಂದಿ ಅಮಾಯಕರು ಪೊಲೀಸರ ಗುಂಡಿನಿಂದ ಸಾಯುವ ಸ್ಥಿತಿಯೂ ನಿರ್ಮಾಣವಾಗುತ್ತಿರಲಿಲ್ಲ. ಯಾರು ಬೇಕಾದರೂ ಪುರಾತನ ಮಸೀದಿಯ ವಿರುದ್ಧ ಹಕ್ಕು ಸಾಧಿಸಬಹುದು ಎನ್ನುವ ವಾತಾವರಣ ನಿರ್ಮಿಸಿದ್ದು ಸ್ವತಃ ಸುಪ್ರೀಂಕೋರ್ಟ್ ಆಗಿದೆ. ಅಂದಿನ ನ್ಯಾಯಮೂರ್ತಿ ಚಂದ್ರಚೂಡ್ ಅವರು ನೀಡಿರುವ ಆದೇಶ ಮತ್ತು ಆ ಬಳಿಕ ನೀಡಿದ ಹೇಳಿಕೆಗಳು ನ್ಯಾಯಾಲಯವನ್ನು ಜನರು ಹಗುರವಾಗಿ ತೆಗೆದುಕೊಳ್ಳುವಂತೆ ಮಾಡಿತು. 1991ರ ಆರಾಧನಾ ಸ್ಥಳಗಳ ಕಾಯ್ದೆಯು 1947ರ ಮೊದಲು ಇದ್ದ ಧಾರ್ಮಿಕ ಸ್ಥಳಗಳ ಅಸ್ತಿತ್ವಕ್ಕೆ ರಕ್ಷಣೆಯನ್ನು ನೀಡುತ್ತದೆ ಬಾಬರಿ ಮಸೀದಿ ಪ್ರಕರಣ ಸೇರಿದಂತೆ, ಪ್ರಾಚೀನ ಸ್ಮಾರಕಗಳು, ಈ ಹಿಂದೆ ರಾಜಿಯಲ್ಲಿ ಇತ್ಯರ್ಥವಾದ ಪ್ರಕರಣಗಳು ಈ ಕಾಯ್ದೆಯಿಂದ ವಿನಾಯಿತಿ ಪಡೆಯುತ್ತವೆ. ಇದೀಗ ಈ ಕಾಯ್ದೆಯನ್ನೇ ಪ್ರಶ್ನಿಸಿ ಕೆಲವರು ಅರ್ಜಿಯನ್ನು ಸಲ್ಲಿಸಿದ್ದಾರೆ. ಇದಕ್ಕೆ ಸಂಬಂಧಿಸಿದ ಅರ್ಜಿ ಇತ್ಯರ್ಥವಾಗುವ ಮೊದಲೇ ಧಾರ್ಮಿಕ ಸ್ಥಳಗಳಿಗೆ ಸಂಬಂಧಿಸಿ ಸ್ಥಳೀಯ ನ್ಯಾಯಾಲಯಗಳು ಆದೇಶ ಹೊರಡಿಸುವುದೆಂದರೆ ನ್ಯಾಯಾಧೀಶರೇ ನ್ಯಾಯ ವ್ಯವಸ್ಥೆಯನ್ನು ಅತಿಕ್ರಮಿಸಿದಂತೆ ಇದೀಗ ಸುಪ್ರೀಂಕೋರ್ಟ್ ಈ ಅರ್ಜಿಗಳ ಸ್ವೀಕಾರದಿಂದಾಗುವ ಅನಾಹುತಗಳನ್ನು ಮನಗಂಡು ಅವುಗಳನ್ನು ಸ್ವೀಕರಿಸಬೇಡಿ ಎಂದು ಆದೇಶ ನೀಡಿದೆ. ಸುಪ್ರೀಂಕೋರ್ಟ್ ಈ ಮಹತ್ವದ ಆದೇಶದಿಂದಾಗಿ ಅನಗತ್ಯ, ಗೊಂದಲ, ಹಿಂಸಾಚಾರಗಳಿಗೆ ತಾತ್ಕಾಲಿಕವಾದ ತಡೆಯೊಂದು ಬಿದ್ದಂತಾಗಿದೆ. ಮುಖ್ಯವಾಗಿ ಅರ್ಜಿ ಸಲ್ಲಿಸುವವರು ನಿಜಕ್ಕೂ ದೇವರ ಮೇಲೋ, ದೇವಸ್ಥಾನಗಳ ಮೇಲೋ ಕಾಳಜಿಯನ್ನು ಹೊಂದಿರುವವರಲ್ಲ. ಇವೆಲ್ಲವೂ ರಾಜಕೀಯ ಪ್ರೇರಿತವಾದ ಅರ್ಜಿಗಳು ಮೂಲಕ ಸ್ಥಳೀಯ ಪ್ರದೇಶಗಳಲ್ಲಿ ಉದ್ವಿಗ್ನ ವಾತಾವರಣವನ್ನು ನಿರ್ಮಿಸುವುದು, ಹಿಂದೂ-ಮುಸ್ಲಿಮರ ನಡುವಿನ ಸೌಹಾರ್ದವನ್ನು ಕಡಿಸಿ ರಾಜಕೀಯ ಬೇಳೆ ಬೇಯಿಸುವುದು ಅವರ ಗುರಿಯಾಗಿದೆ.

# ರಾಮಾಯಣ



**ವಿಶ್ವಾಮಿತ್ರನು ವಸಿಷ್ಠನ ಆಶಮವನ್ನು ನಾಶ ಮಾಡಿದುದು**

• ಹಿಂದಿನ ಸಂಚಿಕೆಯಿಂದ 36 ನೆಯ ಅಧ್ಯಾಯ

ವಿಶ್ವಾಮಿತ್ರನು ಪರಮೇಶ್ವರನಿಗೆ ನಮಸ್ಕಾರವನ್ನು ಮಾಡಿ ಪರಮೇಶ್ವರನೆ, ನೀನು ಪ್ರಸನ್ನನಾಗಿ ವರವನ್ನು ಕೊಡುವ ಪಕ್ಷದಲ್ಲಿ ಸಾಂಗೋಪಾಂಗವಾಗಿ ಧನುರ್ವೇದದ ರಹಸ್ಯಗಳನು ಕೊಡು.

ಸಮಸ್ತ ದೇವದಾನವ ರಲ್ಲಿಯೂ ಸಮಸ್ತ ಋಷಿಗಳಲ್ಲಿಯೂ ಗಂಧರ್ವ ಯಕ್ಷರಾಕ್ಷಸರಲ್ಲಿಯೂ ಇರುವ ಮಂತ್ರಾಸ್ತ್ರಗಳೆಲ್ಲವೂ ನಿನ್ನ ಕೃಪೆಯಿಂದ ನನಗೆ ವಶವರ್ತಿಗಳಾಗಲಿ ಎಂದು ಬೇಡಿಕೊಂಡನು. ಪರಮೇಶ್ವರನು ಕೃಪೆಯಿಂದ ಹಾಗೆಯೇ ಆಗಲಿ ಎಂದು ವರವನ್ನು ಕೊಟ್ಟು ಮರೆಯಾದನು. ಆಮೇಲೆ ಮಹಾತಪಸ್ವಿಯಾಗಿ ರಾಜರ್ಷಿಯಾದ ವಿಶ್ವಾಮಿತ್ರನು ಪರಮೇಶ್ವರನಿಂದ ಸಮಸ್ತ ಮಂತ್ರಾಸ್ತ್ರಗಳನ್ನೂ ಪಡೆದು ಗರ್ವಿತನಾಗಿ ಪರ್ವಕಾಲದ ಸಮುದ್ರದಂತೆ ಪರಾಕ್ರಮದಿಂದ ಹೆಚ್ಚುತ್ತ ಇನ್ನು ತನ್ನಿಂದ ವಸಿಷ್ಠ ಮುನೀಶ್ವರನು ಹತನಾದನೆಂದು ಮನಸ್ಸಿನಲ್ಲಿ ನಿಶ್ಚಯಿಸಿದನು. ಅನಂತರ ವಸಿಷ್ಠಮುನೀಶ್ವರನ ಆಶ್ರಮಕ್ಕೆ ಹೋಗಿ ತನ್ನ ಮಂತ್ರಾಸ್ತ್ರಗಳನ್ನು ಪ್ರಯೋಗಿಸಲು ಆ ಮಂತ್ರಾಸ್ತ್ರಗಳ ತೇಜಸ್ಸಿನಿಂದ ವಸಿಷ್ಠ ಮುನಿಯ ಆಶ್ರಮವು ದಗ್ಧವಾಯಿತು. ಆತನ ಮಂತ್ರಾಸ್ತ್ರಗಳ ಬಲವನ್ನು ಕಂಡು ಅಲ್ಲಿದ್ದ ಮುನಿಗಳೂ ವಸಿಷ್ಠಮುನೀಶ್ವರನ ಶಿಷ್ಯರೂ ಮೃಗಪಕ್ಷಿಗಳೂ ಭಯಪಟ್ಟು ನಾನಾದಿಕ್ಕುಗಳಲ್ಲಿ ಪಲಾಯನವಾಗಿ ಹೋಗಲು ವಸಿಷ್ಠಮುನಿಯ ಆಶ್ರಮವು ಕ್ಷಣಮಾತ್ರದಲ್ಲಿ ಕಲ್ಲುಭೂಮಿಯಂತೆ ಸರ್ವಶೂನ್ಯವಾಯಿತು ! ಆಗ ಸಮಸ್ತ ತಪಸ್ವಿಗಳಿಗೂ ಉತ್ತಮನೂ ಸೂರ್ಯನಿಗೆ ಸಮಾನನೂ ಅತಿತೇಜಸ್ವಿಯೂ ಆದ ವಸಿಷ್ಠ ಮುನೀಶ್ವರನು ತನ್ನ ಆಶ್ರಮದಿಂದ ಓಡಿಹೋಗುತ್ತಿದ್ದ ಪ್ರಾಣಿಗಳನ್ನು ಕಂಡು 'ಹೋಹೋ ನಿಲ್ಲಿ ನಿಲ್ಲಿ ಅಂಜಬೇಡಿರಿ' ಎಂದು ಅವರಿಗೆ ಸಹಾಯವಾಗಿ ಬಂದು, ಅತಿಕೋಪದಿಂದ ವಿಶ್ವಾಮಿತ್ರನನ್ನು ನೋಡಿ 'ಎಲೈ ವಿಶ್ವಾಮಿತ್ರನೆ, ಬಹುಕಾಲದಿಂದಲೂ ಜನಸಮೃದ್ಧಿಯಿಂದ ಸೊಂಪಾಗಿ ಮನೋಹರವಾಗಿದ್ದ ಈ ಆಶ್ರಮವನ್ನು ಕೆಡಿಸಿದೆ; ಆದ್ದರಿಂದ ನೀನು ಕೊಲ್ಲಲು ಯೋಗ್ಯನು' ಎಂದು ನುಡಿದು ಹೊಗೆಯಿಲ್ಲದ ಪ್ರಳಯಕಾಲಾಗ್ನಿ ರೂಪವಾದ ಎರಡನೆಯ ಯಮದಂಡವೋ ಎಂಬ ಪ್ರಕಾರದಲ್ಲಿದ್ದ ತನ್ನ ಬ್ರಹ್ಮದಂಡವನ್ನು ನೆಗಹಿಕೊಂಡು ವಿಶ್ವಾಮಿತ್ರನ ಸಮೀಪಕ್ಕೆ ಬಂದನು.

## ವಿಶ್ವಾಮಿತ್ರನ ಪರಾಜಯ

ಆಗ ವಿಶ್ವಾಮಿತ್ರನು ಆಗ್ನೆಯಾಸ್ತ್ರವನ್ನು ಮೇಲಕ್ಕೆ ನೆಗಹಿ 'ಎಲೇ ವಸಿಷ್ಠ, ನಿಲ್ಲು ನಿಲ್ಲು ಎಂದು ನುಡಿದನು. ಆ ಮಾತನ್ನು ಕೇಳಿ ವಸಿಷ್ಠನು ಅತಿಕೋಪದಿಂದ ಕಾಲದಂಡದಂತಿರುವ ದಂಡ ಕಾಷ್ಠವನ್ನು ಮೇಲಕ್ಕೆ ನೆಗಹಿ ವಿಶ್ವಾಮಿತ್ರನನ್ನು ನೋಡಿ 'ಎಲೇ ಕ್ಷತ್ರಿಯಾಭಾಸನೆ, ನಾನು ಎದುರಾಗಿ ನಿಂತು ನಿನ್ನ ಬಲವನ್ನೂ ಗರ್ವವನ್ನೂ ಆಸ್ತ್ರಬಲವನ್ನೂ ಮುರಿಯುತೇನೆ

**ಮುಂದುವರಿಯುವುದು...**

# ಡೆಂಗೀ ಮತ್ತು ಚಿಕೂನ್‌ಗುನ್ಯ



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ



ಡೆಂಗೀ ಮತ್ತು ಚಿಕುಂಗುನ್ಯ ವೈರಾಣುಗಳಿಂದ ಉಂಟಾಗುವ ರೋಗಗಳು. ಇವು ಸೋಂಕಿತ ಈಡಿಸ್ ಜಾತಿಯ ಸೊಳ್ಳೆಗಳ ಕಚ್ಚುವಿಕೆಯಿಂದ ಒಬ್ಬರಿಂದ ಮತ್ತೊಬ್ಬರಿಗೆ ಹರಡುತ್ತವೆ. ಈ ಸೊಳ್ಳೆಗಳು ಸಾಮಾನ್ಯವಾಗಿ ಹಗಲುಹೊತ್ತಿನಲ್ಲಿ ಕಚ್ಚುತ್ತವೆ.

**ಡೆಂಗೀ ರೋಗ ಲಕ್ಷಣಗಳು :** ತೀವ್ರ ಜ್ವರ, ತಲೆನೋವು, ಕಣ್ಣುಗಳ ಹಿಂಭಾಗದಲ್ಲಿ ನೋವು ಮಾಂಸಖಂಡ ಮತ್ತು ಕೀಲುಗಳಲ್ಲಿ ನೋವು, ಮೂಗು ಮತ್ತು ವಸಡಿನಲ್ಲಿ ರಕ್ತಸ್ರಾವ, ಕಪ್ಪು ಮಲ ವಿಸರ್ಜನೆ, ಮತ್ತು ಚಡಪಡಿಸುವಿಕೆ ಅಥವಾ ಜ್ಞಾನ ತಪ್ಪುವುದು, ಸಾವು ಸಂಭವಿಸಬಹುದು

**ಚಿಕೂನ್‌ಗುನ್ಯ ರೋಗ ಲಕ್ಷಣಗಳು :** ಇದ್ದಕ್ಕಿದ್ದಂತೆ ಜ್ವರ, ಕೀಲುಗಳಲ್ಲಿ ತೀವ್ರವಾದ ನೋವು ಮತ್ತು ಊತ ಕಾಣಿಸಿಕೊಳ್ಳುವುದು ಸಮುದಾಯದೊಂದಿಗೆ ಸೇರಿ ಡೆಂಗೀ ಜ್ವರವನ್ನು ನಿಯಂತ್ರಿಸೋಣ. ಡೆಂಗೀ ಜ್ವರವು ಬಾಧಿಸದಂತೆ ತಡೆಗಟ್ಟಿ ಮತ್ತು ನಿಮ್ಮನ್ನು ರಕ್ಷಿಸಿಕೊಳ್ಳಿ

ಮಲೇರಿಯಾ

1.ಮಲೇರಿಯಾ ಜ್ವರ ಎಂದರೇನು?

ಮಲೇರಿಯಾ ಜ್ವರ ಪ್ಲಾಸ್ಮೋಡಿಯಂ ವೈವಾಕ್ಸ್ / ಫಾಲ್ಸಿಫಾರಂ ಪರಾವಲಂಬಿ ಜೀವಿಯಿಂದ ಉಂಟಾಗುವ ಖಾಯಿಲೆ, ಇವು ಸೋಂಕು ಹೊಂದಿದ ಹೆಣ್ಣು ಅನಾಫಿಲಿಸ್ ಸೊಳ್ಳೆಯ ಕಚ್ಚುವಿಕೆಯಿಂದ ಒಬ್ಬರಿಂದ ಮತ್ತೊಬ್ಬರಿಗೆ ಹರಡುತ್ತದೆ. ಈ ಸೊಳ್ಳೆಗಳು ಸಾಮಾನ್ಯವಾಗಿ ರಾತ್ರಿ ಸಮಯದಲ್ಲಿ ಕಚ್ಚುತ್ತದೆ.

2. ಈ ರೋಗದ ಮುಖ್ಯ ಲಕ್ಷಣಗಳು ಯಾವುದು?

ಚಳಿ/ ನಡುಕ-ಜ್ವರ-ಬೆವರುವುದು-ವಾಂತಿ-ತಲೆನೋವು ಸುಸ್ತಾಗುವುದು ಇತ್ಯಾದಿ ಮಲೇರಿಯಾದ ಮುಖ್ಯ ಲಕ್ಷಣಗಳು, ಪ್ಲಾಸ್ಮೋಡಿಯಂ ಫಾಲಿಪಾರಂನಿಂದ ತೀವ್ರ ತರವಾದ ಜ್ವರದ ಜೊತೆಗೆ ಮರಣ ಸಂಭವಿಸಬಹುದು

3. ಈ ರೋಗ ಪತ್ತೆ ಹೇಗೆ?

ರಕ್ತ ಪರೀಕ್ಷೆಯಿಂದ ರೋಗ ಪತ್ತೆ ಮಾಡಲಾಗುವುದು. ಯಾವುದೇ ಜ್ವರ ಇರುವವರು, ಹೊರ ಜಿಲ್ಲೆ/ರಾಜ್ಯದಿಂದ ಬಂದವರು, ಬೇರೆ ರಾಜ್ಯ/ಜಿಲ್ಲೆಗೆ ಪ್ರಯಾಣಿಸಿದವರು ತಪ್ಪದೆ ರಕ್ತ ಪರೀಕ್ಷೆ ಮಾಡಿಸಿಕೊಳ್ಳುವುದು. ಇದು ಅತ್ಯಂತ ಸುಲಭ ವಿಧಾನ. ಪ್ರತಿ ಸರ್ಕಾರಿ ಆಸ್ಪತ್ರೆಯಲ್ಲಿ ಉಚಿತವಾಗಿ ಪರೀಕ್ಷೆ ನಡೆಸಲಾಗುವುದು.

4. ಈ ಜ್ವರಕ್ಕೆ ಚಿಕಿತ್ಸೆ ಏನು?

ಮಲೇರಿಯಾ ಜ್ವರಕ್ಕೆ ಸರ್ಕಾರಿ ಆಸ್ಪತ್ರೆಗಳಲ್ಲಿ ಸಂಪೂರ್ಣ ಚಿಕಿತ್ಸೆ ಉಚಿತವಾಗಿ ಲಭ್ಯವಿದ್ದು ಸಂಪೂರ್ಣ ಚಿಕಿತ್ಸೆಯಿಂದ ಗುಣಮುಖವಾಗುತ್ತದೆ.

5. ಈ ರೋಗ ನಿಯಂತ್ರಣ ಹೇಗೆ?

1. ಶೀಘ್ರಪತ್ತೆ ಹಾಗೂ ಸಂಪೂರ್ಣ ಚಿಕಿತ್ಸೆಯಿಂದ
2. ಅನಾಫಿಲಿಸ್ ಸೊಳ್ಳೆಗಳ ನಿಯಂತ್ರಣ ಮಲೇರಿಯಾ **ರೋಗದ ಹತೋಟಿಗೆ ಮುಖ್ಯ ವಿಧಾನ:** ಈ ಸೊಳ್ಳೆಗಳು ನಂತ ನೀರು, ಕೆರೆ, ಬಾವಿ ಇತ್ಯಾದಿಗಳಲ್ಲಿ ಉತ್ಪತ್ತಿಯಾಗುವುದರಿಂದ ಲಾರ್ವಾಹಾರಿ ಮೀನುಗಳನ್ನು ಬಿಡುವುದರಿಂದ ತಡೆಗಟ್ಟಬಹುದು.
3. ಮನೆ ಕಿಟಕಿಗಳಿಗೆ ಜಾಲರಿ ಅಳವಡಿಸುವುದು, ಮಲಗುವಾಗ ಸೊಳ್ಳೆ ಪರದೆ ಬಳಸುವುದು, ಕ್ರಿಮಿನಾಶಕ ಲೇಪಿಸಿದ ಸೊಳ್ಳೆ ಪರದೆ, ಕ್ರಿಮಿನಾಶಕದಲ್ಲಿ ಅದ್ದಿದ ವಿಂಡೋ ಸ್ಕಿನ್ ಬಳಸುವುದು, ಸ್ವಯಂ ರಕ್ಷಣಾ ಯಂತ್ರದಿಂದ ನಿಯಂತ್ರಣ ಆರೋಗ್ಯ ಇಲಾಖೆ ಹಮ್ಮಿಕೊಂಡಿರುವ ಸೊಳ್ಳೆ ನಿಯಂತ್ರಣ ಕ್ರಮಗಳಿಗೆ ಸಹಕಾರ ನೀಡುವುದು

**ಸೊಳ್ಳೆ ನಿಯಂತ್ರಣ ಮುಂಜಾಗ್ರತಾ ಕ್ರಮಗಳು**

**ಸ್ವಯಂ ರಕ್ಷಣಾ ವಿಧಾನಗಳಾದ ಸೊಳ್ಳೆ ನಿರೋಧಕಗಳನ್ನು ಹಾಗೂ ಸೊಳ್ಳೆ ಪರದೆಯನ್ನು ಬಳಸುವುದು. ಮೈತುಂಬ ಬಟ್ಟೆ ಧರಿಸುವುದು. ಸೊಳ್ಳೆಗಳ ಕಚ್ಚುವಿಕೆಯಿಂದ ರಕ್ಷಣೆ ಪಡೆಯುವುದು ನಿಂತ ನೀರಿನ ತಾಣಗಳಾದ ಕೆರೆ ಕಟ್ಟೆ, ಬಾವಿಗಳಲ್ಲಿ ಲಾರ್ವಾಹಾರಿ ಮೀನುಗಳಾದ ಗ್ಯಾಂಬೂಸಿಯಾಮತ್ತು ಗಪ್ಪಿ ಮೀನುಗಳನ್ನು ಬೆಳೆಸಿರಿ. ಆರೋಗ್ಯ ಇಲಾಖೆಯಿಂದ ಹಮ್ಮಿಕೊಂಡ ಸೊಳ್ಳೆ ನಿಯಂತ್ರಣ ಕ್ರಮಗಳಿಗೆ ಸಹಕಾರ ನೀಡುವುದು**



**ಸಾಮಾಜಿಕ ಕಳಕಳಿ**

ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

# ದಿನಕ್ಕೊಂದು ಮುಕ್ತಕ -52

• ಉದಯವಾಹಿನಿ, ವಿಶೇಷ

ಎದೆಗುಂದಿ ನೀನೆಂದು ಬಾಳುವುದು ತರವಲ್ಲ
ಸದೆಬಡಿದು ಸಾಗೆ ಜೀವನವೆ ಚೆಂದ
ಹದಗೊಳಿಸಿ ಜೀವನದ ದಾರಿಯಲಿ ಸಾಗಿಸಲು
ಮುದವಹುದು ಬದುಕಿನಲಿ ಲಕ್ಷ್ಮಿದೇವಿ.....



**ಭಾವಾರ್ಥ :** ಒಂದು ಕಾರ್ಯವನ್ನು ಮಾಡಬೇಕೆಂದರೆ ಅದಕ್ಕೆ ದೇವರ ಅಪ್ಪಣೆಯಾಗಬೇಕು. ಯಾವುದೋ ಒಂದು ಕೆಲಸದಲ್ಲಿ ನಾವು ಯಶಸ್ವಿಯಾಗಲಿಲ್ಲವೆಂದ ಕೂಡಲೇ ಅಥವಾ ಸೋತೆವೆಂದರೆ ಅದರಲ್ಲಿ ತಪ್ಪೇನು ಇಲ್ಲ ಸೋಲು ಗೆಲುವು ಎಂಬುದು ಜೀವನದಲ್ಲಿ ಮುಖ್ಯವಾಗಿರುತ್ತದೆ. ಸೋಲು ಗೆಲುವಿನ ಮೆಟ್ಟಿಲು. ಈ ಮೆಟ್ಟಿಲನ್ನು ಏರಬೇಕಿದ್ದರೆ ಸೋಲನ್ನು ಸದೆಬಡಿದೆ ಸಾಗಬೇಕೆ ಹೊರತು ಅದನ್ನು ಹದಗೊಳಿಸಿ ಸರಿಸಮಾನದವಾದ ದಾರಿಯಲ್ಲಿ ಸಾಗಬೇಕೆ ಹೊರತು. ಸೋತೆ ಎಂದು ಕುಗ್ಗಬಾರದು. ಸೋಲೆ ಗೆಲುವಿನ ಸೋಪಾನ ವೆಂದು ಅರಿತು ಮುಂದೆ ಸಾಗಿದರೆ ಮಾತ್ರ ಜೀವನದಲ್ಲಿ ಎಲ್ಲವೂ ಸಂತಸದಲ್ಲಿ ನಡೆಯುತ್ತದೆ.

# ಎಂಇಐ ರಸ್ತೆ: ವೈಟ್ ಟಾಪಿಂಗ್ ಕಾಮಗಾರಿ ಪೂರ್ಣ

• ಉದಯವಾಹಿನಿ, ಬೆಂಗಳೂರು

ಎಂಇಐ ರಸ್ತೆ ವೈಟ್ ಟಾಪಿಂಗ್ ಕಾಮಗಾರಿ ಕಾರ್ಯ ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳ್ಳಲಿದೆ ಎಂದು ಬಿಬಿಎಂಪಿ ಆಯುಕ್ತ ತುಷಾರ್ ಗಿರಿನಾಥ್ ಅವರು ಹೇಳಿದರು. ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯಲ್ಲಿ 'ಮುಖ್ಯ ಆಯುಕ್ತರ ನಡೆ ವಲಯದ ಕಡೆ' ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ತುಷಾರ್ ಗಿರಿನಾಥ್ ಅವರು ಸ್ವೀಕರಿಸಿದರು.

ಬೆಂಗಳೂರಿನ ಪಶ್ಚಿಮ ಭಾಗದ ತುಮಕೂರು ರಸ್ತೆ, ಕಂಠೀರವ ಸ್ಟುಡಿಯೋ ಮುಖ್ಯರಸ್ತೆ ಮತ್ತು ನಂದಿನಿ ಲೇಔಟ್ ನಡುವೆ ಸಂಪರ್ಕ ಕಲ್ಪಿಸುವ ಎಂಇಐ ರಸ್ತೆ ರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ ನಡೆಯುತ್ತಿದ್ದುಸ, ಇದರಿಂದ ಸವಾರರಿಗೆ ಸಂಕಷ್ಟ ಎದುರಾಗಿದೆ, ಹೀಗಾಗಿ ಇಲ್ಲಿನ ನಿವಾಸಿಗಳು ಮತ್ತು ವಾಹನ ಸವಾರರು ಕಾಮಗಾರಿ ಕುರಿತು ದೂರು ನೀಡಿದ್ದು, ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸುವಂತೆ ಸೂಚನೆ ನೀಡಬೇಕೆಂದು ಮನವಿ ಮಾಡಿದರು.

**ಮುಖ್ಯ ಆಯುಕ್ತರು ಪರಿಶೀಲನೆ**

ಈ ವೇಳೆ ಆಯುಕ್ತರು ಕಾಮಗಾರಿಯನ್ನು 2025ರ ಮಾರ್ಚ್ ಅಂತ್ಯಕ್ಕೆ ಪೂರ್ಣಗೊಳಿಸಬೇಕು




ಎಂದು ಸೂಚನೆ ನೀಡಿದರು. ಬಳಿಕ ನಗರದ ಯಶವಂತಪುರ ರೈಲು ನಿಲ್ದಾಣದ ಬಳಿ ಇರುವ ತಣ್ಣೀರಹಳ್ಳ ಹಾಗೂ ರೈಲ್ವೆ ಕ್ವಾರ್ಟರ್ಸ್‌ರ ಬಳಿ 200 ಮೀಟರ್ ಉದ್ದದ ಪೈಪ್ ಲೈನ್ ಅಳವಡಿಕೆ ಕಾಮಗಾರಿಯನ್ನು ಮುಖ್ಯ ಆಯುಕ್ತರು ಪರಿಶೀಲನೆ ನಡೆಸಿದರು ಈ ವೇಳೆ ತಗ್ಗು ಪ್ರದೇಶದಲ್ಲಿ ನೀರು ನಿಲ್ಲದಂತೆ ರೂ. 1.5 ಕೋಟಿ ವೆಚ್ಚದಲ್ಲಿ 1.8 ಮೀಟರ್ ಸಿಮೆಂಟ್ ಪೈಪ್ ಅಳವಡಿಸಲಾಗುತ್ತಿದೆ, ಈ ಕಾಮಗಾರಿ ಪೂರ್ಣ ಗೊಂಡರೆ ಇಲ್ಲಿ ಜಲಾವೃತವಾಗುವುದಿಲ್ಲ ಎಂದು ಅಧಿಕಾರಿಯೊಬ್ಬರು

**ಸಭೆಯಲ್ಲಿ ಅಧಿಕಾರಿಗಳು ಯಶವಂತಪುರದಲ್ಲಿ 950 ಮೀಟರ್ ಉದ್ದದ ಎಂಇಐ ರಸ್ತೆಯಲ್ಲಿ ಸಂಚಾರ ಪೊಲೀಸ್ ಇಲಾಖೆಯಿಂದ ಅನುಮತಿ ಪಡೆದು ಎರಡು ತಿಂಗಳಿಂದ ವೈಟ್ ಟಾಪಿಂಗ್ ಕಾಮಗಾರಿ ನಡೆಸಲಾಗುತ್ತಿದೆ. ಎರಡೂ ಬದಿಯ ರಸ್ತೆಯನ್ನು ಸಂಪೂರ್ಣವಾಗಿ ಮುಚ್ಚಿ ಕಾಮಗಾರಿ ನಡೆಸಲಾಗುತ್ತಿದೆ. ಈ ರಸ್ತೆಯಲ್ಲಿ ನೀರುಗಾಲುವೆ, ಒಳಚರಂಡಿ ಮಾರ್ಗ, ಡಕ್ಟ್ ಅಳವಡಿಕೆ, ವಿದ್ಯುತ್ ಮಾರ್ಗದ ಕಾಮಗಾರಿ ಪ್ರಗತಿಯಲ್ಲಿದೆ ಎಂದು ಮಾಹಿತಿ ನೀಡಿದರು.**

ಮಾಹಿತಿ ನೀಡಿದರು. ಈ ವೇಳೆ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ವಲಯ ಆಯುಕ್ತ ಸತೀಶ್, ವಲಯ ಜಂಟಿ ಆಯುಕ್ತ ಡಾ. ಆರತಿ ಆನಂದ್, ವಲಯ ಮುಖ್ಯ ಎಂಜಿನಿಯರ್ ಸ್ವಯಪ್ರಭಾ, ಕಾರ್ಯನಿರ್ವಾಹಕ ಎಂಜಿನಿಯರ್, ಮತ್ತು ಇತರ ಅಧಿಕಾರಿಗಳು ಉಪಸ್ಥಿತರಿದ್ದರು.


# ಸುಲಭದ ವಿಧಾನದಲ್ಲಿ ಕರಿ ಕರಿಯಾದ ಕೋಡುಬಳೆ ಮಾಡಿ..!

• ಉದಯವಾಹಿನಿ, ಬೆಂಗಳೂರು

ಮನೆಯಲ್ಲಿ ಯಾವಾಗಲು ಅಂಗಡಿ ತಿಂಡಿ ಇಲ್ಲವೆ ಮನೆಯಲ್ಲಿ ಮಾಡಿದ ಯಾವುದಾದರು ತಿಂಡಿಯನ್ನು ಇಟ್ಟುಕೊಂಡಿರುತ್ತೇವೆ. ನಾವು ಸಂಜೆಯ ಸಮಯದಲ್ಲಿ ಇಲ್ಲವೆ ಯಾರಾದರು ಅತಿಥಿಗಳು ಬಂದಾಗ ಈ ತಿಂಡಿಗಳ ಬಳಸುತ್ತೇವೆ. ಅಂಗಡಿ, ಬೇಕರಿಯಿಂದ ತಂದಿರುವ ತಿಂಡಿಗಳನ್ನು ಬಹಳ ದಿನಗಳ ಕಾಲ ಇಡಬಹುದಾದರು ಬೇಗ ಹಾಳಾಗುವುದು ಸಹ ನಾವು ನೋಡಿದ್ದೇವೆ.

**ಇಲ್ಲಿದೆ ಸ್ಪೆಷಲ್ ರೆಸಿಪಿ**

ಇನ್ನು ಹಲವು ತಿಂಡಿಗಳನ್ನು ಮನೆಯಲ್ಲಿ ಅತ್ಯಂತ ಶುದ್ಧ ಎಣ್ಣೆ ಬಳಸಿ ನಾವೇ ಮಾಡಿ ಸವಿದರೆ ಅದರಲ್ಲೊಂದು ಸಮಾಧಾನ ಸಿಗುತ್ತೆ. ಹಾಗೆ ಮನೆಯಲ್ಲಿ ಮಾಡಿದ ತಿಂಡಿ ಎಂಬ ಒಂದು ನೆಮ್ಮದಿಯೂ ಇರುತ್ತೆ. ಇಂತಹ ತಿಂಡಿಗಳ ಪೈಕಿ ನಾವಿಂದು ಸುಲಭವಾಗಿ ಮಾಡುವಂತಹ ಹಾಗೆ ಎಲ್ಲರಿಗೂ ರುಚಿಸುವಂತಹ ಕೋಡುಬಳೆ ಮಾಡುವ ಕುರಿತಂತೆ ತಿಳಿಯೋಣ. ಕೋಡುಬಳೆ ಮಕ್ಕಳಿಂದ ಹಿಡಿದು ಹಿರಿಯರು ಸೇರಿ ಎಲ್ಲರಿಗೂ ಇಷ್ಟವಾಗುವಂತಹ ತಿಂಡಿಯಾಗಿದೆ. ಮನೆಯಲ್ಲಿ ಮಾಡುವುದು ಬಿಡಿ ಇದು ಅಂಗಡಿ ಬೇಕರಿಗಳಲ್ಲಿ ಹಲವು ಬಗೆಯಲ್ಲಿ ನೋಡಬಹುದು. ಒಂದೊಂದು ಒಂದೊಂದು ರೀತಿ ರುಚಿಯಲ್ಲಿ ಸಿಗುತ್ತವೆ. ಹೀಗಾಗಿ ಈಗಲೂ ಕೋಡುಬಳೆ ಎಲ್ಲರ ಫೇಮಸ್ ತಿಂಡಿಯಂತು ಹೌದು. ಹೀಗಾಗಿ ನಾವಿಂದು ಗರಿಗರಿಯಾದ ಸುಲಭದ ವಿಧಾನದಲ್ಲಿ ಈ ಕೋಡುಬಳೆ ಮಾಡುವ ಕುರಿತಂತೆ ತಿಳಿದುಕೊಳ್ಳೋಣ. ಗರಿ ಗರಿ ಕೋಡುಬಳೆ ಮಾಡಲು



ಯಾವೆಲ್ಲಾ ಪದಾರ್ಥಗಳು ಬೇಕು? ಮಾಡುವ ವಿಧಾನವೇನು? ಮಾಡಲು ಎಷ್ಟು ಸಮಯ ಹಿಡಿಯಲಿದೆ? ಎಂಬುದನ್ನು ನಾವಿಂದು ತಿಳಿದುಕೊಳ್ಳೋಣ.

ಮೊದಲು ಯಾವ ಕಪ್‌ನಲ್ಲಿ ಹಿಟ್ಟು ತೆಗೆದುಕೊಳ್ಳುತ್ತೀರೋ ಅದೇ ಕಪ್‌ನ ಅಳತೆಯಲ್ಲಿ ಒಂದೂವರೆ ಕಪ್ ನೀರು ತೆಗೆದುಕೊಂಡು ಒಂದು ಬಾಣಲೆಗೆ ಹಾಕಿ ಬಿಸಿ ಮಾಡಲು ಇಡಿ. ಈ ನೀರಿಗೆ ತುಪ್ಪ, ಜೀರಿಗೆ, ಓಂಕಾಳು, ಬಿಳಿ ಎಳ್ಳು, ಅರಶಿಣ, ಖಾರದ ಪುಡಿ, ಉಪ್ಪು ಹಾಕಿಕೊಂಡು ಮಿಕ್ಸ್ ಮಾಡಿಕೊಂಡು ಕುದಿಯಲು ಬಿಡಿ. 2 ನಿಮಿಷ ಚೆನ್ನಾಗಿ ಕುದಿಬಂದ ಬಳಿಕ ಇದಕ್ಕೆ ಮೈದಾ ಹಿಟ್ಟನ್ನು ಹಾಕಿಕೊಳ್ಳಬೇಕು. ಇದು ಗಟ್ಟಿಯಾಗಿ ಗಂಟು ಗಂಟಾಗಿ 1 ನಿಮಿಷ ಒಲೆ ಮೇಲೆ ಮಿಕ್ಸ್ ಮಾಡಿ. ನಂತರ ತಣ್ಣಗಾಗಲು ಬಿಡಿ. ಸ್ವಲ್ಪ ಉಗುರು ಬೆಚ್ಚಗೆ ಇದ್ದಾಗಲೇ ಕೈಯನ್ನು ನೆನೆಸಿಕೊಂಡು ಚಪಾತಿ ಹಿಟ್ಟು ನಾದಿಸುವಂತೆ ಹದ ಮಾಡಿಕೊಳ್ಳಬೇಕು. ಚಪಾತಿ ತಟ್ಟುವಂತೆ ಹದಕ್ಕೆ ಇದು ಬರಬೇಕು. ಈಗ ಸಣ್ಣ ಸಣ್ಣ ಉಂಡೆ ಮಾಡಿಕೊಂಡು ಒಂದು ಕಡೆ ಇಟ್ಟುಕೊಳ್ಳಿ. ಅನಂತರ ಈ ಉಂಡೆಯನ್ನು ತೆಗೆದುಕೊಂಡು ಕೈಗೆ ಎಣ್ಣೆ ಹಚ್ಚಿಕೊಂಡು ಉದ್ದ ಕಡ್ಡಿಯಂತೆ ಮಾಡಿಕೊಂಡು ಎರಡೂ ತುದಿಯನ್ನು ಅಂಟಿಸಿಕೊಂಡು ಇಟ್ಟುಕೊಳ್ಳಿ. ಹೀಗೆ ಎಲ್ಲಾ ಉಂಡೆಯನ್ನು ಮಾಡಿ ಒಂದು ಕಡೆ ಇಟ್ಟುಕೊಳ್ಳಬೇಕು. ಅನಂತರ ಈ ಕೋಡುಬಳೆಯನ್ನು ಬಾಣಲೆಯಲ್ಲಿ ಹಾಕಿರುವ ಎಣ್ಣೆ ಕಾದ ಬಳಿಕ ಹಾಕಿಕೊಳ್ಳಿ. ಒಂದು ಬಾರಿಗೆ 8ರಿಂದ 10 ಕೋಡುಬಳೆ ಹಾಕಿ ಕರಿದುಕೊಳ್ಳಿ. ಚೆನ್ನಾಗಿ ಕರಿಯುವವರೆಗೂ ಬಿಡಬೇಕು. 10 ನಿಮಿಷ ಒಂದು ಹಂತದಲ್ಲಿ ಕರಿದು ಅದನ್ನು ಎಣ್ಣೆಯಿಂದ ಎತ್ತಿ ಜರಡಿಯಲ್ಲಿ ಇಟ್ಟುಕೊಳ್ಳಿ. ಚೆನ್ನಾಗಿ ಎಣ್ಣೆ ಇಳಿದ ಬಳಿಕ ಒಂದು ಡಬ್ಬಿಗೆ ಹಾಕಬಹುದು, ಇಷ್ಟಾದರೆ ನಿಮ್ಮ ಮುಂದೆ ಕರಿಕರಿಯಾದ ಈ ಕೋಡುಬಳೆ ರೆಡಿಯಾಗುತ್ತದೆ, ನೀವು ಕೂಡ ಇದನ್ನು ಸುಲಭದ ವಿಧಾನದ ಮೂಲಕ ಮಾಡಿ ನೋಡಿ.

**ಕೋಡುಬಳೆ ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು?**

- ಮೈದಾ ಹಿಟ್ಟು - 1
- ಕಪ್ ಅಜ್ವೈನ- 1/2 ಟೀಸ್ಪೂನ್
- ಜೀರಿಗೆ - 1/2 ಟೀಸ್ಪೂನ್
- ಬಿಳಿ ಎಳ್ಳು - 1 ಟೀಸ್ಪೂನ್
- ಅರಿಶಿನ ಪುಡಿ - 1/4 ಟೀಸ್ಪೂನ್
- ಖಾರದ ಪುಡಿ - 1/2 ಟೀಸ್ಪೂನ್
- ಎಣ್ಣೆ
- ಉಪ್ಪು
- ತುಪ್ಪ - 2 tbs
- ಕೋಡುಬಳೆ ಮಾಡುವ ವಿಧಾನ

# ಹೆಂಡತಿ, ಮಾವನ ಕಾಟ ತಾಳಲಾರದೆ ರೈಲಿಗೆ ತಲೆಕೊಟ್ಟ ಹೆಡ್‌ಕಾನ್‌ಸ್ಟೇಬಲ್

• ಉದಯವಾಹಿನಿ, ಬೆಂಗಳೂರು

ಪತ್ನಿ ಹಾಗೂ ಮಾವನ ಕಿರುಕುಳದಿಂದ ಮನನೊಂದು ಹೆಡ್‌ಕಾನ್‌ಸ್ಟೇಬಲ್ ಒಬ್ಬರು ರೈಲಿಗೆ ತಲೆಕೊಟ್ಟು ಆತಹತ್ಯೆ ಮಾಡಿಕೊಂಡಿರುವ ಘಟನೆ ಬೈಯ್ಯಪ್ಪನಹಳ್ಳಿ ರೈಲ್ವೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ರಾತ್ರಿ ನಡೆದಿದೆ. ಹುಳಿಮಾವು ಪೊಲೀಸ್ ಠಾಣೆಯಲ್ಲಿ ಹೆಡ್‌ಕಾನ್‌ಸ್ಟೇಬಲ್ ಆಗಿ ಸೇವೆ ಸಲ್ಲಿಸುತ್ತಿದ್ದ ತಿಪ್ಪಣ್ಣ (33) ಆತ್ಮಹತ್ಯೆ ಮಾಡಿಕೊಂಡವರು. ಆತ್ಮಹತ್ಯೆಗೂ ಮುನ್ನ ನನ್ನ ಸಾವಿಗೆ ಪತ್ನಿ ಹಾಗೂ ಮಾವ ಕಾರಣ ಎಂದು ಡೆತ್ನೋಟ್ ಬರೆದಿದ್ದಾರೆ. ಬಿಜಾಪುರ ಮೂಲದ ತಿಪ್ಪಣ್ಣ ಅವರು ನಗರದ ಪರಪ್ಪನ ಅಗ್ರಹಾರ ಪೊಲೀಸ್ ಠಾಣಾ ವ್ಯಾಪ್ತಿಯ ನಾಗನಾಥ ಪುರದಲ್ಲಿ ವಾಸವಾಗಿದ್ದರು. ಮೂರು ವರ್ಷದ ಹಿಂದೆ ತಿಪ್ಪಣ್ಣ ಅವರು ಮದುವೆಯಾಗಿದ್ದರು, ಇತ್ತೀಚಿನ ದಿನಗಳಲ್ಲಿ ಪತ್ನಿ ಹಾಗೂ ಆಕೆಯ ತಂದೆಯ ಕಿರುಕುಳದಿಂದ ಮನನೊಂದಿದ್ದರು. ಇವರಿಬ್ಬರ ವರ್ತನೆಯಿಂದ ಮಾನಸಿಕವಾಗಿ ತಿಪ್ಪಣ್ಣ ಅವರು ಬೇಸತ್ತಿದ್ದರು.



ಮೊನ್ನೆ ಪತ್ನಿಯ ತಂದೆ ಯಮುನಪ್ಪ ಅವರು ದೂರವಾಣಿ ಕರೆ ಮಾಡಿ ಜೀವ ಬೆದರಿಕೆ ಹಾಕಿದ್ದಾರೆ. ತಿಪ್ಪಣ್ಣ ಅವರು ಮಾವನಿಗೆ ಕರೆ ಮಾಡಿದಾಗಲೂ ನೀನು ಸತ್ತು ಹೋಗು ಆಗ ನನ್ನ ಮಗಳು ಚೆನ್ನಾಗಿ ಇರುತ್ತಾಳೆ ಎಂದು ಬೈದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ ಎಂದು ಡೆತ್ನೊಟ್ನಲ್ಲಿ ಉಲ್ಲೇಖಿಸಿದ್ದಾರೆ.

ಇದರಿಂದ ನೊಂದು ತಿಪ್ಪಣ್ಣ ಅವರು ಡೆತ್ನೋಟ್ನಲ್ಲಿ ಈ ಎಲ್ಲಾ ವಿಚಾರಗಳನ್ನು ಬರೆದಿಟ್ಟು ತಡರಾತ್ರಿ 11.30ರ ಸುಮಾರಿಗೆ ಹುನ್ನೂರು ರೈಲ್ವೇ ಗೇಟ್ ಬಳಿ ಹೋಗಿ ರೈಲಿಗೆ ತಲೆ ಕೊಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸುದ್ದಿ ತಿಳಿದು ಬೈಯ್ಯಪ್ಪನಹಳ್ಳಿ ರೈಲ್ವೆ ಠಾಣೆ ಪೊಲೀಸರು ಸ್ಥಳಕ್ಕೆ ಹೋಗಿ ಪರಿಶೀಲಿಸಿ ಡೆತ್ನೋಟ್ ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡು ಮೃತದೇಹವನ್ನು ಆಸ್ಪತ್ರೆಗೆ ರವಾನಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಆನ್‌ಲೈನ್ ಗೇಮಿಂಗ್ ಚಟಕ್ಕೆ ಪ್ರಾಣ ಕಳೆದುಕೊಂಡ ವಿದ್ಯಾರ್ಥಿ

• ಉದಯವಾಹಿನಿ, ಬೆಂಗಳೂರು

ಸೋಮನಾಥ್ ಚಿದ್ರಿ ಎಂಬ 22 ವರ್ಷದ ನರ್ಸಿಂಗ್ ವಿದ್ಯಾರ್ಥಿ ಆತ್ಮಹತ್ಯೆ ಮಾಡಿಕೊಂಡ, ಅವನ ಸಾವಿಗೆ ಕಾರಣವಾಗಿದ್ದು ಆನ್‌ಲೈನ್ ಗೇಮಿಂಗ್, ಸುಲಭದಲ್ಲಿ ದುಡ್ಡು ಮಾಡಬಹುದು ಎಂದು ಆನ್‌ಲೈನ್ ಗೇಮಿಂಗ್ ಪ್ರಾರಂಭಿಸಿ ಕೊನೆಗೆ ಆತನ ಬದುಕೇ ಅಂತ್ಯವಾಯ್ತು. ಇದು ಬರಿ ಒಬ್ಬ ವಿದ್ಯಾರ್ಥಿಯ ಕತೆಯಲ್ಲ, ಎಷ್ಟೋ ಜನರು ಆನ್‌ಲೈನ್ ಗೇಮಿಂಗ್ ಸುಳಿಗೆ ಸಿಕ್ಕ ಬದುಕು ನಾಶ ಮಾಡಿಕೊಳ್ಳುತ್ತಿದ್ದಾರೆ, ಅದರಲ್ಲಿಯೂ ವಿದ್ಯಾರ್ಥಿಗಳು ಹಣದಾಸೆಗೆ ಆನ್‌ಲೈನ್ ಗೇಮಿಂಗ್ ಆಡಿ ಸಾಲದ ಸುಳಿಗೆ ಸಿಲುಕುತ್ತಿದ್ದಾರೆ.

ಇದು ನಿರ್ಲಕ್ಷ್ಯ ಮಾಡುವಂಥ ವಿಷಯ ಅಲ್ವೇ? ವಿದ್ಯಾರ್ಥಿಗಳಿಗೂ ಇದರ ಬಗ್ಗೆ ಜಾಗ್ರತೆ ಮೂಡಿಸಬೇಕು, ಪೋಷಕರೂ ತಮ್ಮ ಮಕ್ಕಳ ನಡವಳಿಕೆ ಬಗ್ಗೆ ಗಮನಹರಿಸುವುದು ಮುಖ್ಯವಾಗಿದೆ. ವಿಶ್ವದಲ್ಲಿಯೇ ಮೊದಲ ಬಾರಿಗೆ 16 ವರ್ಷ ಕೆಳಗಿನವರಿಗೆ ಸೋಷಿಯಲ್ ಮೀಡಿಯಾ ಮಾಡಿದೆ ಈ ರಾಷ್ಟ್ರ ಒಂದು ಅಧ್ಯಯನ ಹೇಳುತ್ತದೆ ಸುಮಾರು 2 ಬಿಲಿಯನ್ ಜನರು ಆನ್‌ಲೈನ್ ಗೇಮಿಂಗ್ ಚಟಕ್ಕೆ ಬಿದ್ದಿದ್ದಾರೆ, ಅದರಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿದೆ. ಆನ್‌ಲೈನ್ ಚಟಕ್ಕೆ ಬಿದ್ದರೆ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ತುಂಬಾನೇ ಕೆಟ್ಟ ಪರಿಣಾಮ ಬೀರು




**ಆನ್‌ಲೈನ್ ಗೇಮಿಂಗ್ ಪ್ರಾರಂಭ**

ವುದು. ಆನ್ಲೈನ್ ಗೇಮಿಂಗ್ ಚಟದಿಂದಾಗಿ ಆ ವಿದ್ಯಾರ್ಥಿಗಳಲ್ಲಿ ಈ ಬದಲಾವಣೆಯಾಗುವುದು ಅವರು ವಾಸ್ತವದಿಂದ ದೂರ ಉಳಿಯುತ್ತಾರೆ ಆನ್‌ಲೈನ್ ಗೇಮ್ ತುಂಬಾ ಸಮಯದಿಂದ ಆಡುತ್ತಿದ್ದರೆ ವಾಸ್ತವದಿಂದ ದೂರಾಗಿ ವರ್ಚ್ಯುಯಲ್ ಪ್ರಪಂಚದಲ್ಲಿ ಬಾಳಲಾರಂಭಿಸುತ್ತರೆ. ಅದೇ ನಿಜ ಎಂಬ ಭ್ರಮೆ ಆವರಿಸುತ್ತದೆ, ಅವರು ಜನರ ಜೊತೆಗೆ, ಸ್ನೇಹಿತರ ಜೊತೆಗೆ ಹೆಚ್ಚು ಕಳೆಯುವ ಬದಲಿಗೆ ಮೊಬೈಲ್‌ನಲ್ಲಿ ಹೆಚ್ಚು ಸಮಯ ಕಳೆಯಲು ಬಯಸುತ್ತಾರೆ. ಆನ್‌ಲೈನ್ ಗೇಮಿಂಗ್ ಚಟ ಮಾನಸಿಕ ಆರೋಗ್ಯದ ಮೇಲೂ ತುಂಬಾನೇ ಕೆಟ್ಟ ಪರಿಣಾಮ ಬೀರುವುದು, ಈ ಕಾರಣದಿಂದ ತುಂಬಾ ವಿದ್ಯಾರ್ಥಿಗಳು ಖಿನ್ನತೆಗೂ ಜಾರುತ್ತಿದ್ದಾರೆ.

ಮಕ್ಕಳ ವಿಷಯದಲ್ಲಿ ಪೋಷಕರು ಮಾಡಲೇಬಾರದ 6 ತಪ್ಪುಗಳಿವು ಒಂಟಿಯಾಗಿರುವುದು ಆನ್‌ಲೈನ್ ಗೇಮಿಂಗ್ ನಲ್ಲಿಯೇ ಮುಳುಗಿರುವುದರಿಂದ ಬೇರೆ ಪ್ರಪಂಚದ ಜೊತೆಗೆ ಸಂಬಂಧ ಇರಲ್ಲ, ಯಾರ ಜೊತೆ ಬೆರೆಯಲ್ಲ, ಮೊಬೈಲ್‌ನಲ್ಲಿಯೇ ಕಾಲ ಕಳೆಯಲಾರಂಭಿಸುತ್ತಾರೆ, ಜನರ ಜೊತೆ ಮಾತನಾಡುವುದು, ಬೆರೆಯುವುದು ಎಲ್ಲಾ ಕಡಿಮೆಯಾಗುವುದು. ಅವರ ವರ್ತನೆಯಲ್ಲಿಯೂ ಬದಲಾವಣೆ ಕಂಡು ಬರುವುದು ಅವರು ಬೇಗನೆ ಕೋಪಗೊಳ್ಳುವುದು ಕಂಡು ಬರುವುದು, ಅಲ್ಲದೆ ಆನ್‌ಲೈನ್ ಗೇಮಿಂಗ್‌ನಲ್ಲಿ ಹೊಡೆದು ಹಾಕು, ಬಡಿ, ಸೋಲಿಸು ಎಂಬ ನಕರಾತ್ಮಕ ವಿಷಯಗಳೇ ತುಂಬಿರುತ್ತದೆ, ಅವ ವರ್ತನೆಯೂ ಹಾಗೆಯೇ ಬದಲಾಗುವುದು. ಕಲಿಕೆಯಲ್ಲಿ ಹಿಂದುಳಿಯುತ್ತಾರೆ ಶಾಲೆ, ಕಾಲೇಜು ಮುಗಿಸಿ ಬಂದ ಮೇಲೆ ಗೇಮ್‌ನಲ್ಲಿಯೇ ಮುಳುಗಿದ್ದರೆ ಓದುವ ಕಡೆ ಗಮನ ಕಡಿಮೆಯಾಗುವುದು, ಇದರಿಂದ ಕಲಿಕೆಯಲ್ಲಿ ಚುರುಕು ಇರಲ್ಲ, ಅಂಕಗಳು ಕಡಿಮೆಯಾಗುವುದು, ಅವರಲ್ಲಿನ ಆತ್ಮವಿಶ್ವಾಸ ಕೂಡ ಕುಗ್ಗುವುದು. ಈ ಸ್ಪರ್ಧಾತ್ಮಕ ಸಮಾಜದಲ್ಲಿ ಅವರಿಗೆ ಪರಿಸ್ಥಿತಿಯನ್ನು ಎದುರಿಸುವುದು ಷ್ಟವಾಗುವುದು., ಒಳ್ಳೆಯ ಕೋರ್ಸ್, ಒಳ್ಳೆಯ ಕೆಲಸ ಪಡೆಯುವುದು ಕಷ್ಟವಾಗುವುದು. ನೀವು ನಿಮ್ಮ ಮಕ್ಕಳಿಗೆ ಈ ರೀತಿಯ ಆಹಾರ ನೀಡಿದರೆ ಮಕ್ಕಳು ಆಗಾಗ ಕಾಯಿಲೆ ಬೀಳುತ್ತಾರೆ

ಅಪರಾಧ ಕೃತ್ಯಗಳಲ್ಲಿ ತೊಡಗುತ್ತಾರೆ ಕೆಲ ಆನ್‌ಲೈನ್ ಗೇಮಿಂಗ್‌ನಲ್ಲಿ ಹಣ ಕಳೆದುಕೊಳ್ಳುತ್ತಾರೆ, ಇದರಿಂದ ಹಣ ಗಳಿಸಲು ಅಪರಾಧ ಕೃತ್ಯದಲ್ಲಿ ತೊಡಗುತ್ತಾರೆ.

ಮಕ್ಕಳನ್ನು ಆನ್‌ಲೈನ್ ಗೇಮ್ ಚಟದಿಂದ ಹೊರತರುವುದು ಹೇಗೆ? ಪೋಷಕರು ಮಕ್ಕಳನ್ನು ಗಮನಿಸಬೇಕಾಗುತ್ತದೆ, ಅವರ ವರ್ತನೆ, ಸ್ವಭಾವದಲ್ಲಿ ಬದಲಾವಣೆ ಕಂಡು ಬಂದರೆ ನಿರ್ಲಕ್ಷ್ಯ ಮಾಡಬಾರದು, ಮಕ್ಕಳಿಗೆ ಬೈಯ್ಯುವುದು, ಹೊಡೆಯುವುದು ಮಾಡುವುದಕ್ಕಿಂತ ಅವರ ಮನ ಮುಟ್ಟುವಂತೆ ಸಮಧಾನದಿಂದ ಬುದ್ಧಿ ಹೇಳಿ, ಅಗ್ಯತ ಬಿದ್ದರೆ ಕೌನ್ಸಿಲಿಂಗ್ ಕೊಡಿಸಿ.

ಅವರ ಜೀವನಶೈಲಿ ಹೇಗಿದೆ ಎಂದು ಗಮನಹರಿಸಬೇಕು.

**ಆರೋಗ್ಯ ಸಂಬಂಧಿತ ಸಮಸ್ಯೆ ಕಂಡು ಬರುವುದು**

**ಆನ್‌ಲೈನ್ ಗೇಮಿಂಗ್ ಚಟ ಆರೋಗ್ಯ ಸಂಬಂಧಿತ ಸಮಸ್ಯೆ ಹೆಚ್ಚಿಸುತ್ತದೆ, ಇದರಿಂದ ಸ್ಥೂಲಕಾಯ, ಖಿನ್ನತೆ, ಮಾನಸಿಕ ಒತ್ತಡ ಈ ಬಗೆಯ ಸಮಸ್ಯೆ ಕಂಡು ಬರುವುದು, ಆತ್ಮಹತ್ಯೆಯಂಥ ಆಲೋಚನೆಗಳು ಬರುವುದು.**

# ಗ್ಯಾರಂಟಿ ಅನುಷ್ಠಾನದ ಜೊತೆಗೆ ಅಭಿವೃದ್ಧಿ ಕಾರ್ಯಕ್ಕೂ ಹಣ ಮೀಸಲು

## ಕೊರಡಂಪಳ್ಳಿ-ಬುರುಗಪಳ್ಳಿ-ಇರಕಪಳ್ಳಿ ಡಾಂಬರೀಕರಣ ರಸ್ತೆ 10 ಕೋಟಿಯ ಕಾಮಗಾರಿಗೆ ಶಂಕುಸ್ಥಾಪನೆ: ಸಚಿವ

• ಉದಯವಾಹಿನಿಚಿಂಚೋಳಿ


ಉದಯವಾಹಿನಿ ಚಿತ್ರ

ರಾಜ್ಯದ ಜನರಿಗೆ ಚುನಾವಣಾ ಪೂರ್ವ ನೀಡಿದ ವಾಗ್ದಾನದಂತೆ ಪಂಚ ಗ್ಯಾರಂಟಿ ಯೋಜನೆಗಳು ಅನುಷ್ಠಾನದ ಜೊತೆಗೆ ಅಭಿವೃದ್ಧಿ ಕಾರ್ಯಕ್ಕೂ ಹಣ ಮೀಸಲಿಟ್ಟಿದ್ದೇವೆ ಎಂಬುದಕ್ಕೆ ನಮ್ಮ ಅಭಿವೃದ್ಧಿ ಕೆಲಸಗಳೇ ಸಾಕ್ಷಿಯಾಗಿವೆ ಎಂದು ವೈದ್ಯಕೀಯ ಶಿಕ್ಷಣ,ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಹೇಳಿದರು.

**ಗ್ಯಾರಂಟಿ ಜೊತೆಗೆ ಅಭಿವೃದ್ಧಿ ಕೆಲಸಗಳಿಗೂ ವೇಗ**

ತಾಲ್ಲೂಕಿನ ಇರಗಪಳ್ಳಿ ಗ್ರಾಮದಲ್ಲಿ ಲೋಕೋಪ ಯೋಗಿ ಇಲಾಖೆಯಿಂದ 2023-24ನೇ ಸಾಲಿನ ಕೆ.ಕೆ.ಆರ್.ಡಿ.ಬಿ ಮೆಗಾ-ಮ್ಯಾಕ್ರೋ ಕ್ರಿಯಾ ಯೋಜನೆಯಡಿಯಲ್ಲಿ 9.95 ಕೋಟಿ ರೂ. ವೆಚ್ಚದ ಕೊರಡಂಪಳ್ಳಿ ಗ್ರಾಮದಿಂದ ಬುರಗಪಳ್ಳಿ ಗ್ರಾಮದವರೆಗೆ ರಸ್ತೆ ನಿರ್ಮಾಣ ಕಾಮಗಾರಿಗೆ ಅಡಿಗಲ್ಲು ನೆರವೇರಿಸಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ ಅವರು, ಚಿಂಚೋಳಿ ತಾಲ್ಲೂಕಿನ 32 ಹಳ್ಳಿ ಸೇಡಂ ಮತಕ್ಷೇತ್ರದಲ್ಲಿ ಬರುತ್ತವೆ,ಈ ಹಳ್ಳಿಗಳಲ್ಲಿ ಕಳೆದ ಒಂದು ವರ್ಷದಲ್ಲಿ ಹಲವಾರು ಕೆಲಸ ಕಾಮ ಗಾರಿಗಳಿಗೆ ಚಾಲನೆ ನೀಡಲಾಗಿದೆ. ಈರಗಪಳ್ಳಿ ಗ್ರಾಮದಲ್ಲಿಯೇ ಕಳೆದ 1 ವರ್ಷದಲ್ಲಿ 55 ಲಕ್ಷ ರೂ. ಮೊತ್ತದ ಅಭಿವೃದ್ಧಿ ಕೆಲಸ ಗಳನ್ನು ನೀಡಲಾಗಿದೆ. ಇದುವೇ ಅಭಿವೃದ್ಧಿ ಕಾರ್ಯಗಳಿಗೆ ಕೈಗನ್ನಡಿಯಾಗಿದೆ,ವಿರೋಧ ಪಕ್ಷಗಳಂತೆ ನಾವು ಸುಖಾ ಸುಮ್ಮನೆ ಸುಳ್ಳು ಭರವಸೆ ನೀಡುವವರಲ್ಲ,ನಮ್ಮ ಮಾತು ಶಾಸನ ವಿದ್ದಂತೆ, ನುಡಿದಂತೆ ನಡೆಯುತ್ತೇವೆ ಎಂದರು.

17 ಕೋಟಿ ರೂ.ವೆಚ್ಚದಲ್ಲಿ ಕೊಂಡಂಪಳ್ಳಿ-ಗಡಿಕೇಶ್ವಾರ-ಹೊಡೆಬೀರನಳ್ಳಿ ರಸ್ತೆ ಅಭಿವೃದ್ಧಿಪಡಿಸಲಾಗುತ್ತಿದೆ. ಇತ್ತೀಚೆಗೆ 13 ಕೋಟಿ ರೂ.ವೆಚ್ಚದಲ್ಲಿ ನಿಡಗುಂದಾ- ಹಲ್ಕೋಡಾ-ಪೋತಂಗಲ್- ಜಟ್ಟೂರ ರಸ್ತೆಗೆ ಅಡಿಗಲ್ಲು ಹಾಕಿದ್ದೇವೆ. ಮುಂದಿನ ದಿನದಲ್ಲಿ ಛತ್ರಸಾಲ- ಭಕ್ತಂಪಳ್ಳಿ ರಸ್ತೆಯನ್ನು 15 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ಈಗಾಗಲೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಗ್ಯಾರಂಟಿ ಜೊತೆಗೆ ಅಭಿವೃದ್ಧಿ ಕೆಲಸಗಳಿಗೂ ವೇಗ ನೀಡಿದ್ದೇವೆ.

ಡಾ.ಮಲ್ಲಿಕಾರ್ಜುನ ಖರ್ಗೆ ಅವರ ಪರಿಶ್ರಮದಿಂದ ಈ ಭಾಗಕ್ಕೆ 371ಕಾಯ್ದೆ ವರದಾನವಾಗಿ ಬಂದಿದೆ. ಅದರಂತೆ ಕೆ.ಕೆ.ಆರ್.ಡಿ.ಬಿ. ಮಂಡಳಿ ಅನುದಾನದಿಂದ ಜಿಲ್ಲೆ ಸೇರಿ ಪ್ರದೇಶದಾದ್ಯಂತ ಅಭಿವೃದ್ಧಿ ಕೆಲಸಗಳು ಭರದಿಂದ ಸಾಗಿವೆ ಎಂದ ಅವರು, ನಮ್ಮದು ಬಡ ಜನರ ಕಲ್ಯಾಣಕ್ಕೆ ಯೋಜನೆ ರೂಪಿಸುವ ಬಡ ಜನರ ಸರ್ಕಾರವಾಗಿದೆ. ಅದರೆ ಕೇಂದ್ರದಲ್ಲಿ ಶ್ರೀಮಂತರ, ಉಳ್ಳವರ ಹಿತ ಕಾಯುವ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದರು.

ಪಂಚ ಗ್ಯಾರಂಟಿ ಘೋಷಿಸಿದಾಗ ವಿರೋಧ ಪಕ್ಷಗಳು ನಗೆಯಾಡಿದರು.ಸಿದ್ದರಾಮಯ್ಯ ನೇತೃತ್ವದ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೆ ಮೊದಲನೆ ಸಚಿವ ಸಂಪುಟ ಸಭೆಯಲ್ಲಿ ಅದರ ಅನುಷ್ಠಾನಕ್ಕೆ ತಂದಿದ್ದೇವೆ, ಪಂಚ ಗ್ಯಾರಂಟಿ ಯೋಜನೆ ಮೂಲಕ 56 ಸಾವಿರ ಕೋಟಿ ರೂ.ರಾಜ್ಯದ ಬೊಕ್ಕಸದ ಹಣ ನೇರವಾಗಿ ಬಡ ಜನರಿಗೆ ನೀಡುತ್ತಿದ್ದೇವೆ. ಇಷ್ಟೊಂದು ಮೊತ್ತ ದೇಶದಲ್ಲಿ ಯಾವುದೆ ಸರ್ಕಾರ ನೇರವಾಗಿ ಡಿ.ಬಿ.ಟಿ. ಮೂಲಕ ಜನರಿಗೆ ಹಣ ನೀಡಿಲ್ಲ,ಈ ಯೋಜನೆಗಳು ಬಡ ಜನರ ಸುಸ್ಥಿರ ಮತ್ತು ಆರ್ಥಿಕ ಅಭಿವೃದ್ಧಿಗೆ ನಾಂದಿ ಹಾಡಲಿವೆ ಎಂದರು.

**ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳಿ,ಗ್ರಾಮಸ್ಥರು ಸಹಕರಿಸಬೇಕು:** ಇರಕಪಳ್ಳಿಯಲ್ಲಿ 9.95 ಕೋಟಿ ರೂ. ವೆಚ್ಚದ ಕೊರಡಂಪಳ್ಳಿ ಗ್ರಾಮದಿಂದ ಬುರಗಪಳ್ಳಿ (ವಾಯಾ-ಈರಗಪಳ್ಳಿ) ಗ್ರಾಮದ ವರೆಗೆ 7.50 ಕಿ.ಮೀ ಉದ್ದದ ರಸ್ತೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದು, ಮುಂದಿನ 10 ವರ್ಷಗಳ ಕಾಲ ರಸ್ತೆ ದುರಸ್ತಿಗೆ ಬಾರದಂತೆ ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಸಚಿವ ಡಾ.ಶರಣಪ್ರಕಾಶ ಪಾಟೀಲ ಅವರು, ಕಾಮಗಾರಿ ಪೂರ್ಣಕ್ಕೆ ಗ್ರಾಮಸ್ಥರು,ರಸ್ತೆ ಬದಿಯಲ್ಲಿರುವ ಹೊಲದ ರೈತರು ಸಹಕರಿಸಬೇಕೆಂದು ಮನವಿ ಮಾಡಿದರು.

### ಹೊಲಿಗೆ ಯಂತ್ರ ವಿತರಣೆ

ಇರಕಪಳ್ಳಿ ಗ್ರಾಮದಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2022-23ನೇ ಸಾಲಿಗೆ ಆಯ್ಕೆಗೊಂಡ ನಾಲ್ಕು ಜನ ಫಲಾನುಭವಿಗಳಿಗೆ ಸಾಂಕೇತಿಕವಾಗಿ ವಿದ್ಯುತ್ ಚಾಲಿತ ಹೊಲಿಗೆ ಯಂತ್ರಗಳನ್ನು ಸಚಿವ ಡಾ.ಶರಣಪ್ರಕಾಶ ಪಾಟೀಲ್ ಅವರು ವಿತರಿಸಿದರು. ನಿಗಮದ ಜಿಲ್ಲಾ ವ್ಯವಸ್ಥಾಪಕ ಜಗದೇವಪ್ಪ ಇದ್ದರು.

### 5 ಲಕ್ಷ ರೂ. ಚೆಕ್ ವಿತರಣೆ

ಸಾಲದ ಭಾದೆಯಿಂದ ಆತ್ಮಹತ್ಯೆ ಮಾಡಿಕೊಂಡ ಈರಗಪಳ್ಳಿ ಗ್ರಾಮದ ರೈತ ಚಂದ್ರಪ್ಪ ಪೂಜಾರಿ ಅವರ ಪತ್ನಿ ಸಾಬಮ್ಮ ಅವರಿಗೆ ಸರ್ಕಾರದಿಂದ 5 ಲಕ್ಷ ರೂ. ಪರಿಹಾರದ ಚೆಕ್ ಸಚಿವರು ವಿತರಿಸಿದರು.ತಹಶೀಲ್ದಾರ ಸುಬ್ಬಣ್ಣ ಜಮಖಂಡಿ ಇದ್ದರು.

---

# ಬಾಣಂತಿಯರ ಸಾವಿನ ಕುರಿತು ಉನ್ನತ ತನಿಖೆ ಆಗಲಿ

• ಉದಯವಾಹಿನಿ, ಸಿಂಧನೂರು



**ನಿರುಪಾದಿ ಕೆ ಗೋಮರ್ಸಿ ಆಗ್ರಹ**

ಕೆಲವೆ ದಿನಗಳ ಅಂತರದಲ್ಲಿ ಸಿಂಧನೂರು ತಾಲ್ಲೂಕಿನ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ ನಾಲ್ಕು ಬಾ ಣಂತಿಯರ ಸಾವು ಸಂಭವಿಸಿದ್ದು ಇದಕ್ಕೆ ನೇರ ವಾಗಿ ಅಲ್ಲಿನ ವೈದ್ಯರು,ಅಧಿಕಾರಿಗಳು ಮತ್ತು ಆಡಳಿತ ಮಂಡಳಿಯ ಸಿಬ್ಬಂದಿಗಳೇ ನೇರ ಕಾರಣ. ಈ ವಿಷ ಯದ ಕುರಿತು ಆರೋಗ್ಯ ಇಲಾಖೆ ಮತ್ತು ರಾಜ್ಯ ಸರ್ಕಾರದ ಮಟ್ಟದಲ್ಲಿ ತನಿಖೆ ನಡೆಸಬೇಕು ಎಂದು ಪತ್ರಿಕಾ ಹೇಳಿಕೆ ಮುಖಾಂತರ ಕೆ ಆರ್ ಎಸ್ ಪಕ್ಷದ ಮುಖಂಡ ನಿರುಪಾದಿ ಕೆ ಗೋಮರ್ಸಿ ಆಗ್ರಹಿಸಿದರು.

ರಾಜ್ಯದಾದ್ಯಂತ ವಿಶೇಷವಾಗಿ ಕಲ್ಯಾಣ ಕರ್ನಾ ಟಕದಲ್ಲಿ ಸದ್ದು ಮಾಡುತ್ತಿರುವ ಬಾಣಂತಿಯರ ಸಾವಿನ ಬಗ್ಗೆ ವಿಶೇಷವಾಗಿ ಹೆಚ್ಚಿನ ತನಿಖೆಯಾಗಬೇಕು ಸರ್ಕಾರಿ ಆಸ್ಪತ್ರೆಯಲ್ಲಿ ಆಗುತ್ತಿರುವ ಬಾಣಂತಿಯರ ಸಾವಿಗೆ ಸರ್ಕಾರದ ವತಿಯಿಂದ ಅವರ ಕುಟುಂಬಕ್ಕೆ ಹೆಚ್ಚಿನ ಧನಸಹಾಯ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು. ಸಿಂಧನೂರು ತಾಲ್ಲೂಕಿನ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ ಬಾಣಂತಿಯರ ಸಾವುಗಳು ಸರ್ವೇಸಾಮಾನ್ಯ ಎಂಬಂತಾಗಿದ್ದು ಇಲ್ಲಿ ಎಷ್ಟೇ ಸುರಕ್ಷಿತವಾದ ನೀತಿ-ನಿಯಮಗಳಿದ್ದರೂ ವೈದ್ಯರ, ಅಧಿಕಾರಿಗಳ, ಆಡಳಿತ ಮಂಡಳಿ,ಸಿಬ್ಬಂದಿಗಳ ಕರ್ತ ವ್ಯ ಲೋಪದಿಂದ, ನಿಷ್ಕಾಳಜಿಯಿಂದಾಗಿ ಸಾವುಗಳು ಸಂಭವಿಸುತ್ತಿದ್ದು ಇದು ಖಂಡನೀಯ. ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ವತಿಯಿಂದ ಕೋಟ್ಯಾಂತರ ರೂಪಾಯಿ ಖರ್ಚು ವೆಚ್ಚಕ್ಕೆ, ಉತ್ತಮ, ಉನ್ನತಮಟ್ಟದ ಚಿಕಿತ್ಸೆಗೆ ಅನುದಾನ ಬಿಡುಗಡೆಯಾದರೂ ಸಹ ಸರ್ಕಾರಿ ಆಸ್ಪತ್ರೆಯಲ್ಲಿ ಈಗಲೂ ಸಹ ಸ್ವಚ್ಛತೆ ಇಲ್ಲದಿರುವುದು, ಸಿಬ್ಬಂದಿಗಳ ಕೊರತೆ, ಸಮಯದ ನಿರ್ವಹಣೆಯ ಲ್ಲಿ ವಿಫಲ, ಹೆಚ್ಚಿನ ಗುಣಮಟ್ಟದ ಚಿಕಿತ್ಸೆ ದೊರೆಯದೆ ಇರುವುದು ವಿಪರ್ಯಾಸದ ಸಂಗತಿ.ಸಿಂಧನೂರು ಸಾರ್ವಜನಿಕ ಆಸ್ಪತ್ರೆಗೆ ಬರುವ ರೋಗಿಗಳು ಕಡುಬಡವರು , ಆರ್ಥಿಕವಾಗಿ ಹಿಂದುಳಿದವರಾಗಿದ್ದು ಅವರಿಗೆ ಸುರಕ್ಷಿತವಾದಂತ ವಾತಾವರಣ ಮತ್ತು ಸರ್ಕಾರಿ ಸೇವೆ ಸೌಲಭ್ಯಗಳ ಪೂರೈಕೆ ಅಗತ್ಯ ಎಂದು ತಿಳಿಸಿದರು.

---

# ಸಿದ್ಧರಾಮಯ್ಯ ರಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ

• ಉದಯವಾಹಿನಿ, ಗದಗ


ಉದಯವಾಹಿನಿ ಚಿತ್ರ

**ವಿಶೇಷ ಆಸಕ್ತಿಯಿಂದ ಕೆಲಸ**

ರೋಣ ಪಟ್ಟಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಉದ್ಘಾಟನೆಗೊಳ್ಳುವ ವಿವಿಧ ಅಭಿವೃದ್ಧಿ ಶಿಲಾನ್ಯಾಸ ಕಾಮಗಾರಿಯ ಕಾರ್ಯಕ್ರಮವನ್ನು ಅ ಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ಅವರು ಸೂಚಿಸಿದರು.

ರೋಣ ತಾಲ್ಲೂಕಿನ ತಹಶೀಲ್ದಾರ ಕಚೇರಿಯ ಕೋರ್ಟ್ ಹಾಲ್‌ನಲ್ಲಿ ರೋಣ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ, ಶಂಕು ಸ್ಥಾಪನೆ ಕಾರ್ಯಕ್ರ ಮದ ಪೂರ್ವ ಸಿದ್ಧತಾ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವ್ಯವಸ್ಥಿತವಾಗಿ ಯಾವುದೇ ಲೋಪಗಳಿಲ್ಲದಂತೆ ಕಾರ್ಯಕ್ರಮವನ್ನು ಆಯೋಜಿಸಲು ವಿವಿಧ ಸಮಿತಿ ಗಳನ್ನು ರಚಿಸಲಾಗಿದ್ದು ಸಮಿತಿಯವರು ವಿಶೇಷ ಆಸಕ್ತಿಯಿಂದ ಕೆಲಸ ನಿರ್ವಹಿಸಬೇಕು ಈಗಾ ಗಲೇ ಜಿಲ್ಲಾ, ತಾಲ್ಲೂಕ ಮಟ್ಟದ ಅಧಿಕಾರಿಗಳಿಗೆ ಕಾರ್ಯವನ್ನು ಹಂಚಿಕೆ ಮಾಡಲಾಗಿದೆ ಅದರಲ್ಲಿ ಯಾವುದಾದರು ತೊಂದರೆ ಇದ್ದರೆ ಅದನ್ನು ಈಗಲೇ ತಿಳಿಸಿ ಪರಿಹಾರ ಕಂಡುಕೊಂಡು ಕಾರ್ಯಕ್ರಮವನ್ನು ಯಶಸ್ವಿಯಾಗಿ ನಿರ್ವಹಿಸಬೇಕು ಎಂದು ಹೇಳಿದರು.

ವಿವಿಧ ಇಲಾಖೆಗಳ ಯೋಜನೆಯ ಮಾಹಿತಿ ಒಳಗೊಂಡ ಸ್ಟಾಲ್ ಗಳನ್ನು ತೆರೆದು ಯೋಜನೆಗಳ ಜಾಗೃತಿ ಪ್ರದರ್ಶಿಸಿ ಸರ್ಕಾರದಿಂದ ನೀಡಿರುವ ಸವಲತ್ತುಗಳ ಮಾಹಿತಿಯನ್ನು ಸಾರ್ವಜನಿಕರಿಗೆ ಒದಗಿಸಬೇಕು ಎಂದು ಹೇಳಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ ಬಿ ಸಂಕದ ಮಾತನಾಡಿ ಕಾರ್ಯಕ್ರಮದಲ್ಲಿ ಬರುವ ಎಲ್ಲಾ ವಾಹನಗಳಿಗೆ ಪಾರ್ಕಿಂಗ್ ವ್ಯ ವಸ್ಥೆ ಮಾಡಲಾಗುವುದು, ಕಾರ್ಯಕ್ರಮದ ಬಂದೋಬಸ್ತ್ ವ್ಯವಸ್ಥೆಯನ್ನು ಕಲ್ಪಸಲಾಗುವುದು ಎಂದು ತಿಳಿಸಿದರು.

> ಕಾರ್ಯಕ್ರಮದ ವಿವಿಧ ಸಮಿತಿಯಲ್ಲಿರುವ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳ ಸಹಕಾರ ದೊಂದಿಗೆ ತಮ್ಮಗೆ ನೀಡಿದ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿಭಾಯಿಸಬೇಕು, ಹಾಗೂ ವಿವಿಧ ಇಲಾಖೆಯ ಯೋಜನೆಯ ಫಲಾನುಭವಿಗಳಿಗೆ ಪ್ರಮಾಣ ಪತ್ರ ನೀಡುವವರಿಗೆ ಮುಂಚಿತವಾಗಿ ತಿಳಿಸಬೇಕು
>
> -ಭರತ್ ಎಸ್., ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾ ಹಣಾಧಿಕಾರಿ

---

# ಸರಣಿ ಸಾವಿನಿಂದ ಜಿಲ್ಲಾಸ್ಪತ್ರೆಗೆ ಬಂದಿದೆ ಕಪ್ಪು ಚುಕ್ಕೆ

• ಉದಯವಾಹಿನಿ, ಬಳ್ಳಾರಿ


ಉದಯವಾಹಿನಿ ಚಿತ್ರ

**ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಹೆರಿಗೆಗೆ ಗರ್ಭಿಣಿಯರ ಹಿಂದೇಟು**

ಬಾಣಂತಿಯರ ಸರಣಿ ಸಾವಿನ ಪ್ರಕರಣ ಬೆಳಕಿಗೆ ಬಂದ ಬೆನ್ನಲ್ಲೇ ಜಿಲ್ಲಾಸ್ಪತ್ರೆಯಲ್ಲಿ ಹೆರಿಗೆ ಮಾಡಿಸಿಕೊಳ್ಳಲು ಗರ್ಭಿಣಿಯರು ಹಿಂದೇಟು ಹಾಕಿದ್ದು, ದಾಖಲಾಗುವ ಗರ್ಭಿಣಿಯರ ಪ್ರಮಾಣ ಅರ್ಧಕರ್ಧ ಇಳಿದಿದೆ. ನವೆಂಬರ್ 10 ರಂದು ಸಿಸೇರಿಯನ್ ಮೂಲಕ ಹೆರಿಗೆಯಾದ ಬಳಿಕ ಐವಿ ಫ್ಲೂಯಿಡ್ ಗ್ಲೂಕೋಸ್ ರಿಯಾಕ್ಷನ್‌ನಿಂದಾಗಿ ಐವರು ಬಾಣಂತಿಯರು ಮೃತಪಟ್ಟಿದ್ದರು.

ಹೆರಿಗೆ ಬಂದಾಗ ಆರೋಗ್ಯವಾಗಿಯೇ ಇದ್ದ ಲಲಿತಾ, ನಂದಿನಿ, ರೋಜಾ, ಮುಸ್ಕಾನ್, ಸುಮಯಾ ಏಕಾಏಕಿ ಅಸ್ವಸ್ಥರಾಗಿ ಚಿಕಿತ್ಸೆ ಫಲಿಸದೇ ಉಸಿರು ಚೆಲ್ಲಿದ್ದರು. ಈ ಪ್ರಕರಣ ದೇಶಾದ್ಯಂತ ವರದಿಯಾದ ನಂತರ ಈಗ ಹೆರಿಗೆಗೆ ಬರಲು ಗರ್ಭಿಣಿಯರು ಭಯ ಪಡುತ್ತಿದ್ದಾರೆ.

ಗರ್ಭಿಣಿ ಯರಲ್ಲದೇ ಕುಟುಂಬಸ್ಥರೂ ಸರ್ಕಾರಿ ಆಸ್ಪತ್ರೆ ಕಡೆ ಮುಖ ಮಾಡದೇ ಖಾಸಗಿ ಆಸ್ಪತ್ರೆಗಳ ಮೊರೆ ಹೋಗುತ್ತಿರುವುದರಿಂದ ಹೆರಿಗೆ ಮಾಡಿಸಿಕೊಳ್ಳಲು ದಾಖಲಾಗುವವರ ಸಂಖ್ಯೆಯಲ್ಲಿ ಅರ್ಧಕ್ಕರ್ಧ ಇಳಿಕೆಯಾಗಿದೆ.

ಕಳೆದ ಮೂರು ತಿಂಗಳ ಅಂಕಿ ಅಂಶ ನೋಡುವುದಾದರೆ ಸೆಪ್ಟೆಂಬರ್‌ನಲ್ಲಿ 585, ಅಕ್ಟೋಬರ್‌ನಲ್ಲಿ 577 ಗರ್ಭಿಣಿಯರು ಹೆರಿಗೆಗೆ ದಾಖಲಾಗಿದ್ದರು. ನವೆಂಬರ್ ತಿಂಗಳಲ್ಲಿ ಬಾಣಂತಿಯರ ಸರಣಿ ಸಾವಾಗಿದ್ದರಿಂದ ಹೆರಿಗೆಗೆ ದಾಖಲಾಗುವ ಗರ್ಭಿಣಿಯರ ಸಂಖ್ಯೆ 289ಕ್ಕೆ ಕುಸಿದಿದೆ.ಪ್ರತೀ ವರ್ಷ ಜಿಲ್ಲಾಸ್ಪತ್ರೆಯಲ್ಲಿ ಸರಿ ಸುಮಾರು ಆರು ಸಾವಿರ ಹೆರಿಗೆಗಳು ಆಗುತ್ತಿದ್ದು ಪ್ರತಿ ತಿಂಗಳು ಕನಿಷ್ಠ 500 ಮಂದಿಯಾದರೂ ದಾಖಲಾಗುತ್ತಿದ್ದರು. ಆದರೆ ಒಂದೇ ತಿಂಗಳಿನಲ್ಲಿ ಇಷ್ಟೊಂದು ಸಂಖ್ಯೆ ಇಳಿಕೆಯಾಗಿದ್ದು ಇದೇ ಮೊದಲು.ಬಾಣಂತಿಯರ ಸರಣಿ ಸಾವು, ಆಸುರಕ್ಷತೆ, ವೈದ್ಯರ ನಿರ್ಲಕ್ಷ್ಯ ಭಾವನೆ, ಕಳಪೆ ಔಷಧ, ಅವಧಿ ಮುಗಿದಿರುವ ಔಷಧಿಗಳ ಬಳಕೆ ಬಗ್ಗೆ ಅನುಮಾನ ಎದ್ದಿರುವ ಕಾರಣ ಬಾಣಂತಿಯರು ಇಲ್ಲಿ ಹೆರಿಗೆ ಮಾಡಿಸಲು ಹಿಂದೇಟು ಹಾಕುತ್ತಿದ್ದಾರೆ.ಈ ಹಿಂದೆ ಬಳ್ಳಾರಿ ಜಿಲ್ಲಾಸ್ಪತ್ರೆ ಸುರಕ್ಷಿತ ಹೆರಿಗೆ, ಸ್ವಚ್ಛತೆ, ಗುಣಮಟ್ಟದ ಚಿಕಿತ್ಸೆಗಾಗಿ ಪ್ರಶಸ್ತಿ ಪಡೆದಿತ್ತು. ಈಗ ಬಾಣಂತಿಯರ ಸರಣಿ ಸಾವಿನಿಂದ ಆಸ್ಪತ್ರೆಗೆ ಕಪ್ಪು ಚುಕ್ಕೆ ಬಂದಿದೆ. ಆರೋಗ್ಯ ಇಲಾಖೆ ಕೂಡಲೇ ಎಚ್ಚೆತ್ತುಕೊಂಡು, ಸರ್ಕಾರಿ ಆಸ್ಪತ್ರೆಗಳ ಮೇಲೆ ಜನರಿಗಿರುವ ಅಪನಂಬಿಕೆ ದೂರ ಮಾಡುವ ಕೆಲಸ ನಡೆಸಬೇಕಿದೆ.

---

# ಕೊಂಕಣ ರೈಲ್ವೆ ವಿಲೀನಕ್ಕೆ ರಾಜ್ಯ ಸರ್ಕಾರ ಉತ್ಸುಕ

• ಉದಯವಾಹಿನಿ, ಮಂಗಳೂರು


ಉದಯವಾಹಿನಿ ಚಿತ್ರ

ಮಂಗಳೂರು ಮತ್ತು ಮುಂಬೈ ನಡುವಿನ ಕೊಂಕಣ ರೈಲ್ವೆಯನ್ನು ಭಾರತೀಯ ರೈಲ್ವೆಯೊಂದಿಗೆ ವಿಲೀನಗೊಳಿಸಲು ರಾಜ್ಯ ಸರ್ಕಾರ ಉತ್ಸುಕವಾಗಿದೆ ಮತ್ತು ಈ ನಿಟ್ಟಿನಲ್ಲಿ ಸರ್ಕಾರ ಈಗಾಗಲೇ ಕೊಂಕಣ ರೈಲ್ವೆಯೊಂದಿಗೆ ಪತ್ರ ವ್ಯವಹಾರ ಆರಂಭಿಸಿದೆ ಎಂದು ಇಂಧನ ಸಚಿವ ಕೆ ಜೆ ಜಾರ್ಜ್ ಅವರು ಶುಕ್ರವಾರ ಹೇಳಿದ್ದಾರೆ. ವಿಧಾನಸಭೆಯಲ್ಲಿ ಶಾಸಕರಾದ ಕಿರಣಕುಮಾರ ಕೊಡ್ಗಿ, ವಿ. ಸುನೀಲ್ ಕುಮಾರ್ ಅವರು ಪ್ರಸ್ತಾಪಿಸಿದ ಪ್ರಶ್ನೆಗೆ ಕೆಜೆ ಜಾರ್ಜ್ ಅವರು ಬೃಹತ್, ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಸಚಿವರ ಪರವಾಗಿ ಉತ್ತರಿಸಿದರು.

ಕರ್ನಾಟಕದ ಪಾಲಿನ 270 ಕೋಟಿ ರೂ.ಹಣವನ್ನು ಹೇಗೆ ಹೊಂದಾಣಿಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಕೇಂದ್ರದೊಂದಿಗೆ ಮಾತುಕತೆ ನಡೆಸಲಾಗಿದೆ. ಕೊಂಕಣ ರೈಲ್ವೆಯನ್ನು ಭಾರತೀಯ ರೈಲ್ವೇಯೊಂದಿಗೆ ವಿಲೀನಗೊಳಿಸುವುದರಿಂದ ರೈಲು ನಿಲ್ದಾಣಗಳು ಮತ್ತು ಇತರ ಅಭಿವೃದ್ಧಿಗೆ ದಾರಿ ಮಾಡಿಕೊಡುತ್ತದೆ ಎಂದು ಜಾರ್ಜ್ ವಿಶ್ವಾಸ ವ್ಯಕ್ತಪಡಿಸಿದರು.

> ಈಗಾಗಲೇ ಕೊಂಕಣ ರೈಲ್ವೆಯನ್ನು ಭಾರತೀಯ ರೈಲ್ವೆಯೊಂದಿಗೆ ವಿಲೀನಗೊ ಳಿಸಬೇಕಾಗಿತ್ತು ಎಂದ ಜಾರ್ಜ್, ಕೊಂಕಣ ರೈಲ್ವೆಯು ಅನುಭವಿಸುತ್ತಿರುವ ನಷ್ಟದಿಂದಾಗಿ ಕೊಂಕಣ ಮಾರ್ಗದ ಯಾವುದೇ ರೈಲು ನಿಲ್ದಾಣಗಳು ಅಭಿವೃದ್ಧಿಗೊಂಡಿಲ್ಲ
>
> – ಕೆ.ಜೆ. ಜಾರ್ಜ್, ಇಂಧನ ಸಚಿವ

ಈ ಸಂದರ್ಭದಲ್ಲಿ ಮಾತನಾಡಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರು, ರಾಜ್ಯ ಸರ್ಕಾರವು ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದೆ ಮತ್ತು ಕೊಂಕಣ ರೈಲ್ವೆ ಅಧಿಕಾರಿಗಳಿಗೆ ವಿಲೀನಕ್ಕಾಗಿ ಪತ್ರ ಬರೆದಿದೆ ಎಂದು ಪುನರುಚ್ಚರಿಸಿದರು.

---

# ಕಾರಂಜಾ ಸಂತ್ರಸ್ತ ಹೋರಾಟಕ್ಕೆ ವ್ಯಾಪಕ ಬೆಂಬಲ

• ಉದಯವಾಹಿನಿ, ಬೀದರ್


ಉದಯವಾಹಿನಿ ಚಿತ್ರ

ಕಾರಂಜಾ ಯೋಜನೆಯಲ್ಲಿ ಜಮೀನು ಕಳೆದುಕೊಂಡ ರೈತರಿಗೆ ವೈಜ್ಞಾನಿಕ ಪರಿಹಾರ ನೀಡಬೇಕು ಎಂದು ಆಗ್ರ ಹಿಸಿ ಕಾರಂಜಾ ಮುಳುಗಡೆ ಸಂತ್ರಸ್ತರ ಹೋರಾಟ ಸಮಿತಿ ನಡೆಸುತ್ತಿರುವ ಹೋರಾಟಕ್ಕೆ ಜಿಲ್ಲೆಯಾದ್ಯಂತ ವ್ಯಾಪಕ ಬೆಂಬಲ ವ್ಯಕ್ತವಾಗಿದೆ. ನಗರದ ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿ ಎದುರು ಕಾರಂಜಾ ಸಂತ್ರಸ್ತರು ನಡೆಸುತ್ತಿರುವ ಧರಣಿ ಶುಕ್ರವಾರ 889ನೇ ದಿನಕ್ಕೆ ಕಾಲಿರಿಸಿದೆ. 'ಪರಿಹಾರ ಕೊಡಿ ಇಲ್ಲವೇ ಸಾಮೂಹಿಕ ಆತ್ಮಹತ್ಯೆಗೆ ಅವಕಾಶ ಕೊಡಿ' ಎಂಬ ಘೋಷವಾಕ್ಯದೊಂದಿಗೆ ನಗರದಲ್ಲಿ ರೈತರು ಪ್ರತಿಭಟನೆ ನಡೆಸಿದರು.

ಈ ವೇಳೆ ಬೀದರ್ ತಾಲ್ಲೂಕಿನ ರೇಕುಳಗಿ ಗ್ರಾಮದ ರೈತ ನಾಗಶೆಟ್ಟಿ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದರು. ಇಷ್ಟಾದರೂ ಸೂಕ್ತ ಸ್ಪಂದನೆ ಸಿಕ್ಕಿಲ್ಲ ಎಂದು ಆರೋಪಿಸಿ ಹೋರಾಟ ಸಮಿತಿ ಅಧ್ಯಕ್ಷ ಚಂದ್ರಶೇಖರ ಪಾಟೀಲ, ರೈತರಾದ ರಾಜಪ್ಪ ಕೋಸಂ, ರಾಜಶೇಖರ ಅಲಗೋಲ ಅವರು ವಿಷ ಸೇವಿಸಿ ತೀವ್ರ ಅಸ್ವಸ್ಥರಾಗಿದ್ದರು. ಅವರನ್ನು ನಗರದ ಬ್ರಿಮ್ಸ್‌ನಲ್ಲಿ ದಾಖಲಿಸಲಾಗಿದ್ದು, ಒಬ್ಬರಾದ ನಂತರ ಒಬ್ಬ ರೈತರು ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಘಟನೆ ನಡೆಯುತ್ತಿರುವ ಬೆನ್ನಲ್ಲೇ ವಿವಿಧ ಸಂಘಟನೆಗಳು ಅವರ ಬೆಂಬಲಕ್ಕೆ ಧಾವಿಸಿದ್ದಾರೆ. ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಜಿಲ್ಲಾ ಬಿಜೆಪಿ ಬೆಂಬಲ ಘೋ ಷಿಸಿದೆ. ಅಸ್ವಸ್ಥ ರೈತರು, ಧರಣಿ ನಿರತ ರೈತರನ್ನು ಭೇಟಿ ಮಾಡಿ ಬೆಂಬಲ ಸೂಚಿಸಿದ್ದಾರೆ. ರೈತ ಸಂಘದ ಜಿಲ್ಲಾಧ್ಯಕ್ಷ ಸಿದ್ರಾಮಪ್ಪ ಆಣದೂರೆ ಮಾತನಾಡಿ, ರೈತರಿಗೆ ವಿಷ ಸೇವಿಸುವ ಪರಿಸ್ಥಿತಿಗೆ ತರಬಾ ರದಿತ್ತು. ಈಗಲಾದರೂ ಪರಿಸ್ಥಿತಿಯ ಗಂಭೀರಿತೆ ಅರಿತು ಕೊಂಡು ರೈತರಿಗೆ ಪರಿಹಾರ ಒದಗಿಸಬೇಕು ಎಂದು ಆಗ್ರಹಿಸಿದರು.

---

# ಆಪತ್ಕಾಲದಲ್ಲಿ ನೆನಪಾಗುವವರೇ ಗೃಹರಕ್ಷಕರು: ಜಿಲ್ಲಾಧಿಕಾರಿ

• ಉದಯವಾಹಿನಿ, ಉಡುಪಿ


ಉದಯವಾಹಿನಿ ಚಿತ್ರ

ಕಾನೂನು ಮತ್ತು ಸುವ್ಯವಸ್ಥೆ, ಪ್ರವಾಹ ಪರಿಸ್ಥಿತಿ ಮೊದಲಾದ ತುರ್ತು ಸಂದರ್ಭಗಳಲ್ಲಿ ಮೊದಲು ನೆನಪಿಗೆ ಬರುವವರೇ ಗೃಹರಕ್ಷಕ ಸಿಬ್ಬಂದಿ ಎಂದು ಜಿಲ್ಲಾಧಿಕಾರಿ ಕೆ.ವಿದ್ಯಾಕುಮಾರಿ ಹೇಳಿದರು. ನಗರದ ಜಿಲ್ಲಾ ಗೃಹರಕ್ಷಕ ದಳದ ಕಚೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ ಅಖಿಲ ಭಾರತ ಗೃಹರಕ್ಷಕ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪೊಲೀಸ್ ಇಲಾಖೆಯ ಜೊತೆ ಜೊತೆಯಾಗಿ ಕೆಲಸ ಮಾಡುವ ಗೃಹರಕ್ಷಕ ಸಿಬ್ಬಂದಿ ಕೆಲವೊಂದು ಸಂದರ್ಭಗಳಲ್ಲಿ ತಮ್ಮ ಜೀವವನ್ನೇ ಪಣಕ್ಕಿಟ್ಟು ಕೆಲಸ ಮಾಡುತ್ತಾರೆ. ಅವರ ಕಾರ್ಯ ಶ್ಲಾಘನೀಯ ಎಂದರು. ಚುನಾವಣೆಗಳ ಸಂದರ್ಭಗಳಲ್ಲೂ ಪೊಲೀಸ್ ಇಲಾಖೆಯೊಂದಿಗೆ ಸೇರಿ ಕೆಲಸ ನಿರ್ವ ಹಿಸುವ ಮೂಲಕ ಗೃಹರಕ್ಷಕ ಸಿಬ್ಬಂದಿಯು ಜಿಲ್ಲಾಡಳಿತಕ್ಕೆ ಸಹಕಾರ ನೀಡುತ್ತಿದ್ದಾರೆ ಎಂದು ಹೇಳಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣ್ ಕೆ. ಮಾತನಾಡಿ, ಬಂದೋಬಸ್ತ್ ಸೇರಿ ದಂತೆ ವಿವಿಧ ಕೆಲಸಗಳಲ್ಲಿ ನಮಗೆ ಸಹಕಾರ ನೀಡುವವರೇ ಗೃಹರಕ್ಷಕರು. ಅವರಿಗೆ ಸದಾ ನಮ್ಮ ಬೆಂಬಲವಿದೆ ಎಂದರು. ಜಿಲ್ಲಾ ಗೃಹರಕ್ಷಕ ದಳದ ಕಮಾಂಡೆಂಟ್ ರೋಶನ್ ಕುಮಾರ್ ಶೆಟ್ಟಿ ಮಾತನಾಡಿ, ಉಡುಪಿ, ಕೊಡಗು, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಗೃಹರಕ್ಷಕರ ಕೊರತೆ ಇದೆ. ಜಿಲ್ಲೆಯಲ್ಲಿ ಗೃಹರಕ್ಷಕರ 500 ಹುದ್ದೆಗಳು ಭರ್ತಿಯಾಗದ ಕಾರಣ ಈಚೆಗೆ ಹುದ್ದೆಗಳ ಸಂಖ್ಯೆಯನ್ನು 400ಕ್ಕೆ ಇಳಿಸಲಾಗಿದೆ ಎಂದು ಹೇಳಿದರು. ಶೀಘ್ರ 40ರಿಂದ 45ರಷ್ಟು ಗೃಹರಕ್ಷಕ ಸಿಬ್ಬಂದಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದರು. ಗೃಹರಕ್ಷಕ ಸಿಬ್ಬಂದಿಗೆ ಮಣಿಪಾಲದ ಆರೋಗ್ಯ ಕಾರ್ಡ್ ನೀಡುವಂತೆ ಮನವಿ ಮಾಡಿದ್ದೇವೆ. ಅದಕ್ಕೆ ಮಣಿಪಾಲದ ಕೆಎಂಸಿಯವರು ಒಪ್ಪಿಗೆ ನೀಡಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಾಧಕ ಗೃಹರಕ್ಷಕರಾದ ಶಿವಪ್ರಸಾದ್, ವಿಜಯ ಕುಮಾರ್, ಪೂರ್ಣಿಮಾ, ವಿಲ್ಮಾ ಜ್ಯೋತಿ ರೋಡ್ರಿಗಸ್ ಅವರನ್ನು ಸನ್ಮಾನಿಸಲಾಯಿತು. ಸೆಕೆಂಡ್ ಇನ್ ಕಮಾಂಡ್ ಕೆ.ಸಿ. ರಾಜೇಶ್ ಸ್ವಾಗತಿಸಿದರು.

> ಮಲ್ಪೆ ಬೀಚ್‌ನಲ್ಲಿ ಕಾರ್ಯ ನಿರ್ವಹಿಸಲು ಗೃಹರಕ್ಷಕ ದಳದ ಸಿಬ್ಬಂದಿಗೆ ಜಿಲ್ಲಾಧಿಕಾರಿಯವರು ಅವಕಾಶ ಮಾಡಿ ಕೊಟ್ಟಿದ್ದಾರೆ. ಬೀಚ್‌ಗಳಲ್ಲಿ ಕಾರ್ಯ ನಿರ್ವಹಿಸುವ ನಮ್ಮ ಸಿಬ್ಬಂದಿಗೆ ಈಜು ತರಬೇತಿಯನ್ನೂ ನೀಡಲಾಗುತ್ತಿದೆ.

---

# ನಿಮ್ಮ ವಿ.ವಿ. ತಜ್ಞರಿಂದ 3 ಹಂತಗಳ ಸಂಶೋಧನೆ ಪೂರ್ಣ

## ವಿಶ್ವ ಆರೋಗ್ಯ ಸಂಸ್ಥೆ ಕೆಲವು ದಿನಗಳ ಹಿಂದೆ ಅಡಿಕೆಯನ್ನು ಕ್ಯಾನ್ಸರ್‌ಕಾರಕ ಎಂದು ವರ್ಗೀಕರಿಸಿದ್ದು ಅಡಿಕೆ ಬೆಳೆಗಾರರಲ್ಲಿ ಕಳವಳ

• ಉದಯವಾಹಿನಿ, ಮಂಗಳೂರು


ಉದಯವಾಹಿನಿ ಚಿತ್ರ

**ಅಡಿಕೆ ಕ್ಯಾನ್ಸರ್ ಕಣ ಪ್ರತಿಬಂಧಕ**

ಅಡಿಕೆ ಕ್ಯಾನ್ಸರ್‌ಕಾರಕ ಅಲ್ಲ, ಬದಲಾಗಿ ಅಡಿಕೆಯಿಂದ ಕ್ಯಾನ್ಸರ್ ಕಣಗಳು ತಟಸ್ಥಗೊಳ್ಳುತ್ತವೆ ಎನ್ನುವ ಮಹತ್ವದ ಅಂಶವನ್ನು ಈ ಕುರಿತು ಅಧ್ಯಯನ ನಡೆಸಿದ ನಿಮ್ಮ ವಿಶ್ವವಿದ್ಯಾನಿಲಯದ ತಜ್ಞರು ಕಂಡು ಕೊಂಡಿದ್ದಾರೆ. ವಿಶ್ವ ಆರೋಗ್ಯ ಸಂಸ್ಥೆ ಕೆಲವು ದಿನಗಳ ಹಿಂದೆ ಅಡಿಕೆಯನ್ನು ಕ್ಯಾನ್ಸರ್ ಕಾರಕ ಎಂದು ವರ್ಗೀಕರಿಸಿದ್ದು ಅಡಿಕೆ ಬೆಳೆಗಾರ ರಲ್ಲಿ ಕಳವಳ ಮೂಡಿಸಿತ್ತು.

ಸಂಪೂರ್ಣ ಅಧ್ಯಯನ ನಡೆ ಸದೆ, ಅಡಿಕೆ ಒಂದು ಭಾಗ ಮಾತ್ರವೇ ಆಗಿರುವ ತಂಬಾಕು ಸಹಿತ ಪಾನ್, ಪಾನ್ ಮಸಾಲಾ, ಗುಟ್ಕಾ ಇತ್ಯಾದಿ ಸೇವಿಸುವುದರಿಂದ ಕ್ಯಾನ್ಸರ್ ಉಂಟಾಗುವ ವಿಷಯವನ್ನಷ್ಟೇ ಎತ್ತಿಕೊಂಡು ಈ ರೀತಿಯ ವರ್ಗೀಕರಣ ಮಾಡಿದ್ದಕ್ಕೆ ಎಲ್ಲೆಡೆ ಟೀಕೆ ವ್ಯಕ್ತವಾಗಿತ್ತು. ಇದರ ನಡುವೆಯೇ ಈಗ ನಿಮ್ಮ ವಿ.ವಿ. ತಜ್ಞರ ಸಂಶೋಧನೆ ಈಗ ಮಹತ್ವ ಪಡೆದಿದೆ. ಮೂರು ವರ್ಷಗಳ ಹಿಂದೆ ಈ ಕುರಿತು ಅಧ್ಯಯನ, ಸಂಶೋಧನೆ ನಡೆಸುವು ದಕ್ಕೆ ಕ್ಯಾಂಪ್ಕೊ, ಅಡಿಕೆ ಸಂಶೋಧನೆ ಮತ್ತು ಅಭಿವೃದ್ಧಿ ಪ್ರತಿಷ್ಠಾನ ಹಾಗೂ ನಿಮ್ಮ ವಿಶ್ವವಿದ್ಯಾನಿಲಯಗಳು ತಿಳುವಳಿಕೆ ಒಪ್ಪಂದ ಮಾಡಿಕೊಂಡಿದ್ದವು. ಒಟ್ಟು ನಾಲ್ಕು ವಿಭಾಗಗಳಲ್ಲಿ ಸಂಶೋಧನೆ ಕೈಗೆತ್ತಿಕೊ ಳ್ಳಲು ನಿರ್ಧ ರಿಸಲಾಗಿತ್ತು. ಅಡಿಕೆಯ ಸಾರದಿಂದ ಝೀಬ್ರಾ ಮೀನ್' ಮೇಲೆ ಪರಿಣಾಮ, ಅಡಿಕೆಯಿಂದ ಹಣ್ಣಿನ ನೊಣದ ಮೇಲೆ ಪರಿಣಾಮ, ಅಡಿಕೆಯ ರಸದಿಂದ ಕ್ಯಾನ್ಸರ್ ಕಣಗಳ ಮೇಲೆ ಪರಿಣಾಮ ಹಾಗೂ ಅಡಿಕೆ ಜಗಿಯುವ ಮಂದಿಯ ವೈಜ್ಞಾನಿಕ ಸಮೀಕ್ಷೆ ಅಧ್ಯಯನ ನಡೆಸು ವುದು ಇದರ ಮುಖ್ಯ ಅಂಶವಾಗಿತ್ತು.

ಈ ಪೈಕಿ ಮೂರು ವಿಭಾಗಗಳ ಸಂಶೋಧನೆ ಪೂರ್ಣ ಗೊಂಡಿದ್ದು, ಅಂತಾರಾಷ್ಟ್ರೀಯ ನಿಯತಕಾಲಿಕದಲ್ಲಿ ಪ್ರಕಟಿಸಲು ತೀರ್ಮಾನಿಸಲಾಗಿದೆ. ಅಡಿಕೆ ಕ್ಯಾನ್ಸರ್‌ಕಾರಕವಲ್ಲ ನಿಮ್ಮ ವಿ.ವಿ.ಯ ವಿಜ್ಞಾನಿ ಪ್ರೊ. ಇಡ್ಯಾ ಕರುಣಾಸಾಗರ್ ಮತ್ತವರ ತಂಡವು ನಡೆಸಿದ ಮೂರೂ ವಿಭಾಗಗಳ ಸಂಶೋಧನೆಯಲ್ಲಿ ಅಡಿಕೆಯಿಂದ ಆರೋಗ್ಯದ ಮೇಲೆ ಯಾವ ದುಷ್ಪರಿಣಾಮ ಉಂಟಾಗುವುದಿಲ್ಲ ಎನ್ನುವುದು ಕಂಡುಬಂದಿದೆ.

ಅಧ್ಯಯನದಲ್ಲಿ ಅಡಿಕೆಯ ಜಲೀಯ ಸಾರವನ್ನು ಹಣ್ಣಿನ ನೊಣ, ಝೀಬ್ರಾ ಮೀನು ಗಳ ಬೆಳವಣಿಗೆಯ ವಿವಿಧ ಹಂತಗಳಲ್ಲಿ ನೀಡಲಾಗಿದೆ. ಅಡಿಕೆಯಿಂದ ಅವುಗಳ ಮೇಲೆ ಯಾವುದೇ ನೇರ ಪರಿಣಾಮ ಕಂಡುಬಂದಿಲ್ಲ. ಝೀಬ್ರಾ ಮೀನು, ಪ್ರೊಸೊಫಿಲಾಗಳ ಕ್ರೋಮೋಸೋಮ್‌ಗಳು ಮಾನವನ ಕ್ರೋಮೋಸೋಮ್‌ಗಳನ್ನು ಹೋಲುವುದರಿಂದ ಮಾನವನನ್ನು ಉದ್ದೇಶಿಸಿ ನಡೆಸುವ ಯಾವುದೇ ವೈಜ್ಞಾನಿಕ ಸಂಶೋಧನೆಗೆ ಆರಂಭಿಕ ಹಂತದಲ್ಲಿ ಇವುಗಳನ್ನು ಹೆಚ್ಚಾಗಿ ಬಳಸಲಾಗುತ್ತದೆ. ಇನ್ನು ಅಡಿಕೆಯ ಸಾರವು ಕ್ಯಾನ್ಸರ್ ಕಣಗಳ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಎನ್ನುವುದನ್ನು ಪ್ರತ್ಯೇಕ ಅಧ್ಯಯನ ಮಾಡಲಾಗಿದೆ. ಪ್ರಯೋಗಾಲಯದ ಪೆಟ್ರಿ ಪ್ಲೇಟ್‌ಗಳಲ್ಲಿ ಕ್ಯಾನ್ಸರ್ ಕಣಗಳನ್ನು ಬೆಳೆಸಿ, ಅವುಗಳ ಮೇಲೆ ಅಡಿಕೆಯ ಸಾರವನ್ನು ಪ್ರಯೋಗಿಸಿದಾಗ ಅದು ಕ್ಯಾನ್ಸರ್ ಕಣಗಳ ಬೆಳವಣಿಗೆಯನ್ನು ಪ್ರತಿಬಂಧಿಸುತ್ತದೆ ಎನ್ನುವುದನ್ನು ತಜ್ಞರು ಕಂಡುಕೊಂಡಿದ್ದಾರೆ. ಆದರೆ ಸಾಮಾನ್ಯ ಕಣಗಳ ಮೇಲೆ ಇದು ಯಾವುದೇ ಪರಿಣಾಮ ಬೀರುವುದಿಲ್ಲ. ಆದರೆ ಅದಿನ್ನೂ ಅಂತಿಮಗೊಂಡಿಲ್ಲ.

ಹೆಚ್ಚು ಮಂದಿ ಅಡಿಕೆ ಜಗಿಯುವವರನ್ನು ಈ ಅಧ್ಯಯನಕ್ಕೆ ಒಳಪಡಿಸಲಾಗು ತ್ತಿದೆ.ಇದುವರೆಗೆ ಅಡಿಕೆ ಜಗಿಯುವವರನ್ನು ಮಾತ್ರ ವೇ ದೊಡ್ಡ ಮಟ್ಟದಲ್ಲಿ ಅಧ್ಯಯನಕ್ಕೆ ಒಳಪಡಿಸದ ಕಾರಣ ತುಸು ದೀರ್ಘ ಸಮಯ ಬೇಕಾದರೂ ವಿಸ್ತ್ರತ ಅಧ್ಯಯನ ನಡೆಸಬೇಕಾಗಿದೆ ಎನ್ನುವುದು ತಜ್ಞರ ಅಭಿಮತ ಈಗಿನ ಫಲಿತಾಂಶದಿಂದ ಮತ್ತಷ್ಟು ಬಲ ಈ ಹಿಂದೆಯೇ ವೀಳ್ಯದೆಲೆ- ಅಡಿಕೆಯ ಜಗಿಯುವುದು, ಅಡಿಕೆಯ ಗುಣಗಳ ಬಗ್ಗೆ ಕೆಲವು ಸಂಶೋಧನೆಗಳು ನಡೆದಿದ್ದು, ಅವುಗಳಲ್ಲಿ ಅಡಿಕೆ ಕ್ಯಾನ್ಸರ್‌ಕಾರಕವಲ್ಲ ಎಂದೇ ಶ್ರುತಪಟ್ಟಿದೆ. ಈಗ ನಿಮ್ಮ ವಿ.ವಿ. ತಜ್ಞರ ವರದಿ ಅದಕ್ಕೆ ಮತ್ತಷ್ಟು ಬಲ ನೀಡಿದೆ ಎನ್ನುತ್ತಾರೆ.

> ಅಡಿಕೆ ಸಂಶೋಧನ ಮತ್ತು ಅಭಿವೃದ್ಧಿ ಪ್ರತಿಷ್ಠಾನದ ಕೇಶವ ಭಟ್. ಅಡಿಕೆಯ ಪರಿಣಾಮಗಳ ಬಗ್ಗೆ ನಿಟ್ಟೆ ವಿ.ವಿ. ತಜ್ಞರ ಅಧ್ಯಯನ ಬಹುತೇಕ ಪೂರ್ಣಗೊಂಡಿದ್ದು, ಅಡಿಕೆ ಬೆಳೆಗಾರರ ಪರವಾಗಿಯೇ ಬಂದಿದೆ. ಅಡಿಕೆ ಕ್ಯಾನ್ಸರ್‌ಕಾರಕವಲ್ಲ ಎನ್ನುವುದು ಈಗ ಮತ್ತೆ ಸಾಬೀತುಗೊಂಡಿದೆ. ಕೇಂದ್ರದ ನೇತೃತ್ವದಲ್ಲಿ ಇನ್ನು ಸಮಗ್ರ ಅಧ್ಯಯನದ ನಿರೀಕ್ಷೆಯಲ್ಲಿದ್ದೇವೆ.
>
> -ಕಿಶೋರ್ ಕುಮಾರ್ ಕೊಡ್ಗಿ, ಅಧ್ಯಕ್ಷರು

### ಆರೋಗ್ಯಕ್ಕೆ ಯಾವುದೇ ಹಾನಿಯಿಲ್ಲ

ಒಟ್ಟಾರೆಯಾಗಿ ಅಡಕೆಯ ಬಳಕೆಯಿಂದ ಆರೋಗ್ಯಕ್ಕೆ ಯಾವುದೇ ಹಾನಿಯಿಲ್ಲ ಎನ್ನುವ ಭಾರತದ ಸಂಪ್ರದಾಯಿಕ ಜ್ಞಾನಕ್ಕೆ ಈ ವರದಿ ಪೂರಕವಾಗಿ ಕಂಡುಬಂದಿದೆ ಎನ್ನುತ್ತಾರೆ ತಜ್ಞರು.ಅಡಿಕೆ ಜಗಿಯುವವರ ಅಧ್ಯಯನ ಇದೇ ಅಧ್ಯಯನ-ಸಂಶೋಧನೆಯ ಇನ್ನೊಂದು ಹಂತದಲ್ಲಿ ನಿಮ್ಮ ವಿಶ್ವವಿದ್ಯಾನಿಲಯದ ಸಮುದಾಯ ದಂತ ಆರೋಗ್ಯ ವಿಭಾಗದವರು ಅಡಿಕೆಯನ್ನು ಮಾತ್ರ ಜಗಿಯುವವರ ಮೇಲೆ ಸಂಶೋಧನೆ ನಡೆಸುತ್ತಿದ್ದಾರೆ.

---

## ಮಿನಿ ನ್ಯೂಸ್

### ಕೊಲ್ಲಾಪುರದ ಕಾಳಮ್ಮವಾಡಿ ಡ್ಯಾಂನಿಂದ ಭಾರೀ ಪ್ರಮಾಣದ ನೀರು ಸೋರಿಕೆ

• ಉದಯವಾಹಿನಿ, ಬೆಳಗಾವಿ

ಮಹಾರಾಷ್ಟ್ರದ ಕೊಲ್ಲಾಪುರ ಜಿಲ್ಲೆಯ ಕಾಳಮ್ಮವಾಡಿ ಜಲಾಶಯದಿಂದ ಭಾರೀ ಪ್ರಮಾಣದ ನೀರು ಸೋರಿಕೆಯಾಗುತ್ತಿದೆ. ಕಳೆದ ಒಂದು ವಾರದಿಂದ ಭಾರೀ ಪ್ರಮಾಣದ ನೀರು ಸೋರಿಕೆಯಾಗುತ್ತಿದೆ. ಜಲಾಶಯದಿಂದ ನೀರು ಸೋರಿಕೆಯಾಗುತ್ತಿರುವ ಹಿನ್ನೆಲೆ, ಜಲಾಶಯವನ್ನು ಅವಲಂಭಿಸಿರುವ ರೈತರು ಆತಂಕ್ಕೊಳಗಾಗಿದ್ದಾರೆ. ಇನ್ನೂ ಮಹಾರಾಷ್ಟ್ರ ಸರ್ಕಾರ ಖಾಸಗಿ ಕಂಪನಿಯ ಸಹಕಾರದೊಂದಿಗೆ ಡ್ಯಾಂ ದುರಸ್ಥಿಗೆ ಮುಂದಾಗಿದೆ. ಕರ್ನಾಟಕದ ಗಡಿಯಲ್ಲಿರುವ ಕಾಳಮ್ಮವಾಡಿ ಜಲಾಶಯವನ್ನು ದೂದ್‌ಗಂಗಾ ನದಿಗೆ ಅಡ್ಡಲಾಗಿ ನಿರ್ಮಿಸಲಾಗಿದೆ. ಈ ಜಲಾಶಯ 1.5 ಟಿಎಂಸಿ ಸಾಮರ್ಥ್ಯ ಹೊಂದಿದೆ.

### ಕಾರಂಜಾ ಸಂತ್ರಸ್ತ ಹೋರಾಟಕ್ಕೆ ವ್ಯಾಪಕ ಬೆಂಬಲ

• ಉದಯವಾಹಿನಿ, ಬೀದರ್

ಕಾರಂಜಾ ಯೋಜನೆಯಲ್ಲಿ ಜಮೀನು ಕಳೆದುಕೊಂಡ ರೈತರಿಗೆ ವೈಜ್ಞಾನಿಕ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ಕಾರಂಜಾ ಮುಳುಗಡೆ ಸಂತ್ರಸ್ತರ ಹೋರಾಟ ಸಮಿತಿ ನಡೆಸುತ್ತಿರುವ ಹೋರಾಟಕ್ಕೆ ಜಿಲ್ಲೆಯಾದ್ಯಂತ ವ್ಯಾಪಕ ಬೆಂಬಲ ವ್ಯಕ್ತವಾಗಿದೆ. ನಗರದ ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿ ಎದುರು ಕಾರಂಜಾ ಸಂತ್ರಸ್ತರು ನಡೆಸುತ್ತಿರುವ ಧರಣಿ 889ನೇ ದಿನಕ್ಕೆ ಕಾಲಿರಿಸಿದೆ. ಪರಿಹಾರ ಕೊಡಿ ಇಲ್ಲವೇ ಸಾಮೂಹಿಕ ಆತ್ಮಹತ್ಯೆಗೆ ಅವಕಾಶ ಕೊಡಿ ಎಂಬ ಘೋಷವಾಕ್ಯದೊಂದಿಗೆ ನಗರದಲ್ಲಿ ರೈತರು ಪ್ರತಿಭಟನೆ ನಡೆಸಿದರು. ಈ ವೇಳೆ ಬೀದರ್ ತಾಲ್ಲೂಕಿನ ರೇಕುಳಗಿ ಗ್ರಾಮದ ರೈತ ನಾಗಶೆಟ್ಟಿ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದರು. ಇಷ್ಟಾದರೂ ಸೂಕ್ತ ಸ್ಪಂದನೆ ಸಿಕ್ಕಿಲ್ಲ ಎಂದು ಆರೋಪಿಸಿ ಗುರುವಾರ ಹೋರಾಟ ಸಮಿತಿ ಅಧ್ಯಕ್ಷ ಚಂದ್ರಶೇಖರ ಪಾಟೀಲ, ರೈತರಾದ ರಾಜಪ್ಪ ಕೋಸಂ ಹಾಗೂ ರಾಜಶೇಖರ ಅಲಗೋಲ ಅವರು ವಿಷ ಸೇವಿಸಿ ತೀವ್ರ ಅಸ್ವಸ್ಥರಾಗಿದ್ದರು.

ಅವರನ್ನು ನಗರದ ಬ್ರಿಮ್ಸ್‌ನಲ್ಲಿ ದಾಖಲಿಸಲಾಗಿದ್ದು, ಒಬ್ಬರಾದ ನಂತರ ಒಬ್ಬ ರೈತರು ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಘಟನೆ ನಡೆಯುತ್ತಿರುವ ಬೆನ್ನಲ್ಲೇ ವಿವಿಧ ಸಂಘಟನೆಗಳು ಶುಕ್ರವಾರ ಅವರ ಬೆಂಬಲಕ್ಕೆ ಧಾವಿಸಿದ್ದಾರೆ. ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಜಿಲ್ಲಾ ಬಿಜೆಪಿ ಬೆಂಬಲ ಘೋಷಿಸಿದೆ. ಅಸ್ವಸ್ಥ ರೈತರು, ಧರಣಿ ನಿರತ ರೈತರನ್ನು ಭೇಟಿ ಮಾಡಿ ಬೆಂಬಲ ಸೂಚಿಸಿದ್ದಾರೆ. ರೈತ ಸಂಘದ ಜಿಲ್ಲಾಧ್ಯಕ್ಷ ಸಿದ್ರಾಮಪ್ಪ ಆಣದೂರೆ ಮಾತನಾಡಿ, ರೈತರಿಗೆ ವಿಷ ಸೇವಿಸುವ ಪರಿಸ್ಥಿತಿಗೆ ತರಬಾರದಿತ್ತು. ಈಗಲಾದರೂ ಪರಿಸ್ಥಿತಿಯ ಗಂಭೀರಿತೆ ಅರಿತುಕೊಂಡು ರೈತರಿಗೆ ಪರಿಹಾರ ಒದಗಿಸಬೇಕು ಎಂದು ಆಗ್ರಹಿಸಿದರು.

### ಕಳಪೆ ಬೀಜ ಪೂರೈಕೆ ಆರೋಪ

• ಉದಯವಾಹಿನಿ, ಹುಣಸಗಿ

ತಾಲ್ಲೂಕಿನ ಕೊಡೇಕಲ್ಲ ಗ್ರಾಮದ ಅಗ್ರೊ ಕೇಂದ್ರದಲ್ಲಿ ಖರೀದಿಸಿದ ತೊಗರಿ ಬಿತ್ತನೆ ಬೀಜ ಕಳಪೆ ಮಟ್ಟದ್ದಾಗಿದೆ' ಎಂದು ಕರವೇ(ಟಿ.ಎ.ನಾರಾಯಣಗೌಡ ಬಣ) ಪದಾಧಿಕಾರಿಗಳು ಆರೋಪಿಸಿದ್ದಾರೆ. 'ತಾಲ್ಲೂಕಿನ ಮದಲಿಂಗನಾಳ ಗ್ರಾಮದ ರೈತರಾದ ದ್ಯಾಮಣ್ಣ ಬಿಜೂರ, ಅಂಬ್ರಪ್ಪ ಬಿರಾದಾರ, ಮಾರುತಿ ಕಕ್ಕೇರಿ ಹಾಗೂ ಕೊಡೇಕಲ್ಲ ಗ್ರಾಮದ ಹುಲಗಪ್ಪ ಚವನಬಾವಿ ಅವರು ಕೊಡೇಕಲ್ಲ ಗ್ರಾಮದ ಅಗ್ರೊ ಕೇಂದ್ರವೊಂದರಲ್ಲಿ ಮುಂಗಾರು ಹಂಗಾಮಿನ ಬಿತ್ತನೆಗೆ ತೊಗರಿ ಬಿತ್ತನೆ ಬೀಜ ಖರೀದಿಸಿದ್ದರು. ದ್ಯಾಮಣ್ಣ ಬಿಜೂರ ಐದು ಎಕರೆಯಲ್ಲಿ ತೊಗರಿ ಬಿತ್ತಿದ್ದಾರೆ. ಈತನಕ ಬೆಳೆಯು ಸಂಪೂರ್ಣ ಕಾಯಿ ಹಿಡಿದಿಲ್ಲ. ಇದರಿಂದಾಗಿ ರೈತರು ತೊಂದರೆಗೆ ಸಿಲುಕಿದ್ದಾರೆ' ಎಂದು ದೂರಿದ್ದಾರೆ. 'ಕೃಷಿ ಇಲಾಖೆ ಅಧಿಕಾರಿಗಳು ರೈತರ ಹೊಲಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಬೇಕು. ಕಳಪೆ ಬಿತ್ತನೆ ಬೀಜ ಪೂರೈಕೆ ಮಾಡಿದ ಕಂಪನಿಯ ವಿರುದ್ಧ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದಲ್ಲಿ ಸಂಘಟನೆಯಿಂದ ಹೋರಾಟ ನಡೆಸಲಾಗುವುದು' ಎಂದು ಸಂಘಟನೆಯ ವಲಯ ಉಪಾಧ್ಯಕ್ಷ ಬಸವರಾಜ ಕೊಂಡಗೂಳಿ, ಪ್ರಕಟಣೆಯಲ್ಲಿ ವಲಯಾಧ್ಯಕ್ಷ ಹನುಮಗೌಡ ಮಾಲಿಪಾಟೀಲ, ಮೌಲಾಲಿ ಸೈಯದ್, ಅಂಬ್ರೇಷ ಗುಡಗುಂಟಿ, ರಮೇಶ ಜೀರಾಳ ಪ್ರಕಟಣೆ ಮೂಲಕ ಎಚ್ಚರಿಸಿದ್ದಾರೆ.

### ಮಾಲಾಧಾರಿಗಳಿಂದ ಹನುಮ ಜಪ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಅಂಜನಾದ್ರಿ

ಚಳಿಯ ನಡುವೆಯೂ ಬರಿ ಮೈಲಿ ಬೆಟ್ಟವೇರಿದ ಖುಷಿ, ಹನುಮನಾಮ ಜಪದ ಅನುರಣನ, ತಮ್ಮ ನೆಚ್ಚಿನ ನಟರ ಫೋಟೊ ಹಿಡಿದುಕೊಂಡು ಅಭಿಮಾನ ವ್ಯಕ್ತಪಡಿಸಿದ ಯುವಕರು. ಈ ಎಲ್ಲಾ ದೃಶ್ಯಗಳು ಶುಕ್ರವಾರ ಬೆಳಗಿನ ಜಾವ ಕಂಡು ಬಂದಿದ್ದು ಅಂಜನಾದ್ರಿ ಬೆಟ್ಟದಲ್ಲಿ ಹನುಮ ಮಾಲೆ ವಿಸರ್ಜನೆ ಅಂಗವಾಗಿ ರಾಜ್ಯದ ವಿವಿಧೆಡೆಯಿಂದ ಸಾಕಷ್ಟು ಸಂಖ್ಯೆಯ ಭಕ್ತರು ಅದರಲ್ಲಿಯೂ ಯುವಕರೇ ಹೆಚ್ಚಾಗಿ ಬೆಟ್ಟಕ್ಕೆ ಬಂದಿದ್ದರು. ಪ್ರತಿ ವರ್ಷ ನಿರ್ದಿಷ್ಟ ದಿನದಂದು ಮಾತ್ರ ಮಾಲಾಧಾರಿಗಳು ಮಾಲೆ ವಿಸರ್ಜನೆ ಮಾಡುತ್ತಿದ್ದರು.

ಈ ಬಾರಿ ಒಂದು ದಿನ ಮೊದಲೇ ಹನುಮ ವ್ರತದ ಸಮಯದಲ್ಲಿ ಗಂಧದ ಹಾರವನ್ನು ಅಂಜನಾದ್ರಿ ಬೆಟ್ಟದ ಮೇಲೆ ತೆಗೆಯುವ ಮೂಲಕ ವ್ರತ ಪೂರ್ಣಗೊಳಿಸಿದರು. ಕಾರ್ಯಕ್ರಮ ಕಲಬುರಗಿ, ಬೀದರ್, ಬೆಳಗಾವಿ, ಧಾರವಾಡ, ಹುಬ್ಬಳ್ಳಿ, ಗದಗ, ಬಳ್ಳಾರಿ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಭಕ್ತರು ಇಲ್ಲಿಗೆ ಬಂದಿದ್ದರು. ಹಲವರು ವಾಹನಗಳಲ್ಲಿ ಬಂದರೆ, ಇನ್ನು ಕೆಲವರು ಪಾದಯಾತ್ರೆಯ ಮೂಲಕ ಅಂಜನಾದ್ರಿಗೆ ಬಂದು ಪೂಜಾ ಕೈಂಕರ್ಯ ಪೂರ್ಣಗೊಳಿಸಿದರು. ಐದು ಹಾಗೂ ಒಂಬತ್ತು ದಿನ ಮೈಮೇಲೆ ಕೇಸರಿ ಬಟ್ಟೆ ಹಾಗೂ ಕೊರಳಲ್ಲಿ ಮಾಲೆ ಧರಿಸುವುದು ಹನುಮಮಾಲಾ ವ್ರತ ಪ್ರಮುಖ ಆಚರಣೆಯಾಗಿದೆ. ತುಂಗಭದ್ರಾ ನದಿಯ ಸಮೀಪದಲ್ಲಿಯೇ ಅಂಜನಾದ್ರಿ ಬೆಟ್ಟ ಇರುವುದರಿಂದ ಸಾವಿರಾರು ಭಕ್ತರು ರಾತ್ರಿಯೇ ಇಲ್ಲಿಗೆ ಬಂದು ನದಿಯಲ್ಲಿ ಸ್ನಾನ ಮಾಡಿ ಸೂರ್ಯೋದಯಕ್ಕೂ ಮೊದಲು ಆಂಜನೇಯನ ಮೂರ್ತಿಯ ದರ್ಶನ ಪಡೆದರು. ಬೆಲೆ ಹೆಚ್ಚಳಕ್ಕೆ ಭಕ್ತರ ಆಕ್ರೋಶ ಭಕ್ತರಿಗೆ ನೀಡಲು ಲಾಡು ಆಂಜನೇಯನ ಫೋಟೊ ಹಾಗೂ ತೀರ್ಥ ಸೇರಿ ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯ ದೇವಸ್ಥಾನದ ವತಿಯಿಂದ ಕಿಟ್ ತಯಾರಿಸಿ 100 ದರ ನಿಗದಿ ಮಾಡಲಾಗಿತ್ತು. ಕಳೆದ ವರ್ಷ ಈ ಕಿಟ್‌ಗೆ 50 ಇತ್ತು. ಇದಕ್ಕೆ ಭಕ್ತರ ಆಕ್ಷೇಪ ವ್ಯಕ್ತಪಡಿಸಿ ಆಕ್ರೋಶಗೊಂಡರು. ಅಧಿಕಾರಿಗಳು ಸಮಾಧಾನಪಡಿಸುವ ಪ್ರಯತ್ನ ಮಾಡಿದರು.

## ದಿನ ಭವಿಷ್ಯ

| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
|---|---|---|
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

**ವೃಷಭ** ಸಂಜೆಯಲ್ಲಿ ವಿಶ್ರಾಂತಿ ತೆಗೆದುಕೊಳ್ಳಿ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ.

**ಮಿಥುನ** ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ಹಣ ನಿಮಗೆ ಅಗತ್ಯವಾಗಿದೆ ಆದರೆ ನಿಮ್ಮ ಸಂಬಂಧ ಗಳನ್ನು ಹಾಳುಮಾಡುವಷ್ಟು ಹಣದ ಬಗ್ಗೆ ಗಂಭೀರವಾಗಬೇಡಿ.

**ಕರ್ಕಾಟಕ** ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ನೀವು ಜೀವನದಲ್ಲಿ ಹಣದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಳ್ಳುವುದಿಲ್ಲ.

**ಸಿಂಹ** ನಿಮ್ಮ ಸಕಾರಾತ್ಮಕ ದೃಷ್ಟಿಕೋನ ನಿಮ್ಮ ಸುತ್ತಲಿನವರನ್ನು ಆಕರ್ಷಿಸಬಹುದು. ನಿಮ್ಮ ಜೀವನದ ಕಳಪೆ ಆರೋಗ್ಯದಿಂದಾಗಿ, ನಿಮ್ಮ ಹಣವನ್ನು ಇಂದು ಖರ್ಚು ಮಾಡಬಹುದು, ಆದರೆ ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ.

**ಕನ್ಯಾ** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

**ತುಲಾ** ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಸ್ನೇಹಿತರೊಂದಿಗೆ ಎಲ್ಲಿಗಾದರೂ ಸುತ್ತಾಡಲು ಹೋಗುತ್ತಿದ್ದರೆ, ಹಣವನ್ನು ಯೋಚಿಸಿ ಖರ್ಚು ಮಾಡಿ.

**ವೃಶ್ಚಿಕ** ಸಂಘರ್ಷವು ನಿಮ್ಮ ಅನಾರೋಗ್ಯವನ್ನು ಇನ್ನಷ್ಟು ಹಾಳುಮಾಡಬಹುದಾದ್ದರಿಂದ ಅದನ್ನು ತಪ್ಪಿಸಿ. ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಇಂದು ಹಣದ ತುಂಬಾ ಅಗತ್ಯವಿರಬಹುದು.

**ಧನಸ್ಸು** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ನೀವು ಹಣಕಾಸಿನ ಲಾಭ ತರುವ ಅದ್ಭುತವಾದ ಹೊಸ ಕಲ್ಪನೆಗಳನ್ನು ಪ್ರಸ್ತುತಪಡಿಸುತ್ತೀರಿ.

**ಮಕರ** ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಜಂಟಿ ಯೋಜನೆಗಳು ಮತ್ತು ಸಂಶಯಾಸ್ಪದ ಹಣಕಾಸು ಯೋಜನೆಗಳಲ್ಲಿ ಹೂಡಿಕೆ ಮಾಡಬೇಡಿ.

**ಕುಂಭ** ನೀವು ಇಂದು ಮಾಡುವ ಕೆಲವು ದೈಹಿಕ ಬದಲಾವಣೆಗಳು ಖಂಡಿತವಾಗಿಯೂ ನಿಮ್ಮ ನೋಟವನ್ನು ವರ್ಧಿಸುತ್ತವೆ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ.

**ಮೀನ** ನಿಮ್ಮ ಸಂಬಂಧಗಳನ್ನು ಹಾಳುಮಾಡುವಷ್ಟು ಹಣದ ಬಗ್ಗೆ ಗಂಭೀರವಾಗಬೇಡಿ. ದಿನದ ಉತ್ತರಾರ್ಧದಲ್ಲಿ ವಿಶ್ರಾಂತಿ ತೆಗೆದುಕೊಳ್ಳಬಯಸುತ್ತೀರಿ. ನಿಮ್ಮ ಕುಟುಂಬದ ಸದಸ್ಯರೊಡನೆ ಸಮಯ ಕಳೆಯಬಯಸುತ್ತೀರಿ.

# ಒಳ ಮೀಸಲಾತಿ ಜಾರಿಗೆ ಕುರಿತು ಸದನದಲ್ಲಿ ಪಕ್ಷಾತೀತವಾಗಿ ಚರ್ಚೆ

## ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬಿಚ್ಚು ಮನಸ್ಸಿನಿಂದ ಚರ್ಚೆ ಮಾಡುತ್ತಾರೆ: ಸಿ.ಎಸ್ ನಾಡಗೌಡ ಅಪ್ಪಾಜಿ

• **ಉದಯವಾಹಿನಿ ಮುದ್ದೇಬಿಹಾಳ**

ರಾಜ್ಯ ಸರ್ಕಾರ ಒಳಮೀಸಲಾತಿ ಜಾರಿಗೆಗೊಳಿಸುವಂತೆ ಆಗ್ರಹಿಸಿ ಮಾದಿಗ ಒಳಮೀಸಲಾತಿ ಹೋರಾಟ ಸಮಿತಿ ಹಾಗೂ ವಿವಿಧ ದಲಿತಪರ ಸಂಘಗಳ ಒಕ್ಕೂಟದಿಂದ ಶನಿವಾರ ಶಾಸಕರ ಮನೆಯ ಮುಂದೆ ತಮಟೆ ಚಳುವಳಿ ಮೂಲಕ ಒಳಮೀಸಲಾತಿ ಹಕ್ಕೊತ್ತಾಯ ಹೋರಾಟಕ್ಕೆ ಪೂಲೀಸು ಅವಕಾಶ ನೀಡಲಿಲ್ಲ ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ತಮಟೆ ಚಳುವಳಿ ಮುಂದಾದ ಹೋರಾಟಗಾರರಿಗೆ ಪೂಲೀಸರು ಕೆಎಸ್ ಡಿ ನಿಗಮದ ಅಧ್ಯಕ್ಷರು ಶಾಸಕರಾದ ಸಿ.ಎಸ್ ನಾಡಗೌಡರು ನಿಮ್ಮ ಜೊತೆ ಮಾತುಕತೆಗೆ ಪ್ರವಾಸಿ ಮಂದಿರಕ್ಕೆ ಕರೆದಿದ್ದಾರೆ ಎಂದರು ಅಲ್ಲಿಗೆ ಹೋಗಲು ಒಪ್ಪದ ಹೋರಾಟಗಾರರು ಬಸವೇಶ್ವರ ವೃತ್ತಕ್ಕೆ ಶಾಸಕರನ್ನು ಬರುವಂತೆ ಹೇಳಿದರು.

ಬಸವೇಶ್ವರ ವೃತ್ತದಲ್ಲಿ ಒಳಮೀಸಲಾತಿ ಜಾರಿಗೆ ಹೋರಾಟ ಮಾಡುತ್ತಿದ್ದ ಸ್ಥಳಕ್ಕೆ ಆಗಮಿಸಿದ ಶಾಸಕ ಕೆಎಸ್ ಡಿ ನಿಗಮದ ಅಧ್ಯಕ್ಷ ಸಿ.ಎಸ್ ನಾಡಗೌಡ ಅಪ್ಪಾಜಿ ಒಳಮೀಸಲಾತಿ ಕುರಿತು ಸುಪ್ರೀಂಕೋರ್ಟ್ ಆದೇಶ ನೀಡಿದೆ ಅದರಂತೆ ಸಿಎಂ ಅವರು ಒಳಮೀಸಲಾತಿ ಜನಸಂಖ್ಯೆ ಆಧಾರಿತ ಇರುವುದರಿಂದ ಜನಸಂಖ್ಯೆ ಅಧ್ಯಯನಕ್ಕೆ ಆಯೋಗ ರಚಿಸಿ ಪೆಬ್ರವರಿ ಒಳಗೆ ನೀಡಲು ಡೈಡ್ಲೈನ್ ನೀಡಿದ್ದಾರೆ ಮಾರ್ಚ್‌ನಲ್ಲಿ ಬಜೆಟ್ ಮಂಡನೆ ಆಗುತ್ತದೆ ಎಂದರು.

**ಮಾರ್ಚ್‌ನಲ್ಲಿ ಬಜೆಟ್ ಮಂಡನೆ**

ಒಳಮೀಸಲಾತಿ ಬಗ್ಗೆ ಪಕ್ಷಾತೀತವಾಗಿ ಅಸೆಂಬ್ಲಿಯಲ್ಲಿ ಚರ್ಚೆಯಾಗುತ್ತದೆ ಮತ್ತು ಈ ಬಗ್ಗೆ ಮಲ್ಲಿಕಾರ್ಜುನ ಖರ್ಗೆಯವರ ಮನೆಗ ಹೋದಾಗ ಸಚಿವ ಮಹಾದೇವಪ್ಪನವರು ಇದ್ದರು ಅವರೊಂದಿಗೆ ಒಳಮೀಸಲಾತಿ ಜಾರಿಗೆ ವಿಷಯ ಇತ್ಯರ್ಥ ಮಾಡಿ ನನ್ನ ಹೆಸರಿಗೆ ಕಳಂಕ ಬರುತ್ತಿದೆ ಎಂದು ಹೇಳಿದ್ದೇನೆ ನಿಮ್ಮ ಜೊತೆ ನಿಮ್ಮ ವರ್ಗದ ಸಚಿವರು ಮಾತ್ರವಲ್ಲದೆ ಪಕ್ಷಾತೀತವಾಗಿ ಎಲ್ಲರೂ ಇದ್ದಾರೆ ಆತಂಕ ಪಡುವ ಅಗತ್ಯವಿಲ್ಲ ನಾನು ಸಹ ಒಳಮೀಸಲಾತಿ ಕುರಿತು ಪ್ರಶ್ನೆ ಕೇಳಿದ್ದೆ ನಮ್ಮ ಪ್ರಶ್ನೆಗಳನ್ನು ಲಾಟರಿ ಮೂಲಕ ಎತ್ತುತ್ತಾರೆ ಅದರಲ್ಲಿ ಬರಲಿಲ್ಲ ಶೂನ್ಯವೇಳೆ ಚರ್ಚೆಗೆ ಅವಕಾಶ ಕೊಡ್ತಾರ ನೋಡಬೇಕು ನಿನ್ನೆ ವಕ್ಪ್ ಬೆಳಗಾವಿ ಗಲಾಟೆ ಚರ್ಚೆಯಾಗಿದೆ ಈ ಬಗ್ಗೆ ಸಹ ಅವಕಾಶ ನೀಡ್ತಾರೆ ಒಳಮೀಸಲಾತಿ ಜಾರಿಗೆ ವಿಷಯ ಅಂತ್ಯಹಾಡಲೇಬೇಕಿದೆ.


ಉದಯವಾಹಿನಿ ಚಿತ್ರ

ಸದನದಲ್ಲಿ ನೀವು ಸಹ ಪ್ರಶ್ನೆ ಎತ್ತಿ ಅಂದಾಗ ಶಾಸಕರು ಪುರಸಭೆ ಅಲ್ಲ ಅದು ನಿಮಗೆಲ್ಲಾ ಕಾನೂನಿನ ಬಗ್ಗೆ ಹೆಚ್ಚಿನ ಜ್ಞಾನವಿದೆ ನಾನು ಕ್ಯಾಬಿನೆಟ್‌ನಲ್ಲಿ ಇಲ್ಲ ಮಂತ್ರಿಮಂಡಲವೆಂದರೆ ಸರಕಾರ ನಾನು ಮಂತ್ರಿಮಂಡಲದಲ್ಲಿ ಇಲ್ಲಾ ಆದರೆ ಅವರಿಗೆ ಸಲಹೆ ನೀಡಬಲ್ಲೆ, ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬಿಚ್ಚು ಮನಸ್ಸಿನಿಂದ ಚರ್ಚೆ ಮಾಡುತ್ತಾರೆ ಎಂದರು.

**ಹುಲಿ ಪಲಿ ಅನ್ನಬೇಡಿ**

ಒಳಮೀಸಲಾತಿ ಜಾರಿಗೆ ವಿಷಯ ಈ ಬಾರಿ ಅಧಿವೇಶನದಲ್ಲಿ ಚರ್ಚೆ ಆಗುತ್ತದೆ ಅಂದಾಗ ದಲಿತಪರ ಹೋರಾಟಗಾರ ಹೊಳೆದಂಡಿ ಹುಲಿಗೆ ಜಯವಾಗಲಿ ಅಂದಾಗ ಶಾಸಕರು ನಾನು ಹುಲಿ ಅಲ್ಲಪ್ಪಾ ಯಾರನ್ನು ನಾನು ತಿನ್ನಂವಲ್ಲಾ ಹುಲಿ ಪಲಿ ಅನ್ನಬೇಡಿ ಎಂದರು.

ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ, ಬಿಜೆಪಿ ಐಟಿ ಸೆಲ್ ನ ರಾಜ್ಯ ಸಂಚಾಲಕ ಮಂಜುನಾಥ ಚಲವಾದಿ, ಸುಭಾಷ್ ಕಟ್ಟಿಮನಿ (ಕಾಳಗಿ) ಶ್ರೀನಾಥ್ ಬೈರವಾಡಗಿ, ಮುದಕಪ್ಪ ಗರಸಂಗಿ ,ಆನಂದ ಮುದೂರ, ರಮೇಶ ಕಂದಗನೂರ, ಶಿವು ನಾಲತವಾಡ, ಲಕ್ಷ್ಮಣ ಕಾಳಗಿ, ರಾಮು ತಂಬೂರಿ, ಬಾಲಚಂದ್ರ ಹುಲ್ಲೂರ, ರಾವುತಪ್ಪ ಕಾಳಗಿ, ದೇವೇಂದ್ರ ಡೂಂಕಮಡು,ಮಹಾಂತೇಶ ಕಾಳಗಿ ಬೆಳೆಪ್ಪ ತಳವಾರ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಸಿಪಿಐ ಗುರುಶಾಂತ ದಾಶ್ಯಾಳ ಪಿಎಸೈ ಸಂಜಯ ತಿಪ್ಪರೆಡ್ಡಿ ಹಾಗೂ ಪೊಲೀಸ ಸಿಬ್ಬಂದಿ ಮುಂಜಾಗ್ರತವಾಗು ಭದ್ರತೆ ಒದಗಿಸಿದ್ದರು.

> ನಮ್ಮ ಹೋರಾಟ ಬಿಜೆಪಿ ಪರವೆಂಬ ಆರೋಪ ಕೆಲವರು ಮಾಡ್ತಾರೆ ನಾವು ಹಿಂದಿನ ಶಾಸಕರಾದ ನಡಹಳ್ಳಿ ಅವರ ಮನೆಗೆ ಸಹ ಮುತ್ತಿಗೆ ಹಾಕಿದ್ದೇವು ನಮ್ಮ ಹೋರಾಟ ಒಳಮೀಸಲಾತಿ ಜಾರಿಗೆಗಾಗಿ ಇದೆ ನಮ್ಮ ಹೋರಾಟಕ್ಕೆ ಶಾಸಕ ಸಿ.ಎಸ್ ನಾಡಗೌಡರು ಸ್ಪಂದಿಸಿ ನಮ್ಮ ಮನವಿಯನ್ನು ಸ್ವೀಕರಿಸಿದ್ದಾರೆ ಮತ್ತು ಸದನದಲ್ಲಿ ಈ ಬಗ್ಗೆ ಚರ್ಚಿಸುವುದಾಗಿ ಸಹ ತಹಶೀಲ್ದಾರ ಮೂಲಕ ಪತ್ರವನ್ನು ನೀಡಿದ್ದಾರೆ
> -ಬಸವರಾಜ ಪೂಜಾರಿ, ಜಿಲ್ಲಾ ದೌರ್ಜನ್ಯ ನಿವಾರಣಾ ಸಮಿತಿ ಮಾಜಿ ಸದಸ್ಯ

# ಬಾಲ ಆಧಾರ್ ಸಂಖ್ಯೆ ಜೋಡಣೆಯ ಕಾರ್ಯ ಆರಂಭ

• **ಉದಯವಾಹಿನಿ, ಕಾರಟಗಿ**

ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳಲ್ಲಿ 0.5 ವರ್ಷದೊಳಗಿನ ಮಕ್ಕಳಿಗೆ ಹೊಸ ಬಾಲ ಆಧಾರ್ ಸಂಖ್ಯೆ ನೋಂದಣಿ ಕಾರ್ಯವನ್ನು ಮಾಡಲು ಸರ್ಕಾರ ಆದೇಶಿಸಿದ ಹಿನ್ನೆಲೆ ಜಿಲ್ಲೆಯಾದ್ಯಂತ ಬಾಲ ಆಧಾರ್ ಸಂಖ್ಯೆ ಜೋಡಣೆಯ ಕಾರ್ಯ ಆರಂಭವಾಗಿದ್ದು ಈ ಹಿನ್ನೆಲೆಯಲ್ಲಿ ಕಾರಟಗಿ ಪಟ್ಟಣದ ಮೂರನೇ ವಾರ್ಡಿನ ಅಂಗನವಾಡಿ ಕೇಂದ್ರದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೆಂಗಳೂರು, ಹಾಗೂ ಇಂಡಿಯನ್ ಪೋಸ್ಟಲ್ ಪೇಮೆಂಟ್ ಬ್ಯಾಂಕ್, ಸಹಯೋಗದೊಂದಿಗೆ ಅಂಗನವಾಡಿ ಕೇಂದ್ರಗಳಲ್ಲಿ 0.5 ವರ್ಷದೊಳಗಿನ ಮಕ್ಕಳಿಗೆ ಹೊಸ ಬಾಲ ಆಧಾರ್ ಸಂಖ್ಯೆ ನೋಂದಣಿ ಕಾರ್ಯ ಶನಿವಾರ ಆರಂಭಗೊಂಡಿತು.

ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಈ ಬಾಲ ಆಧಾರ್ ಸಂಖ್ಯೆ ಜೋಡಣೆ ಕಾರ್ಯಕ್ರಮ ಆರಂಭಗೊಂಡಿದ್ದು ಕಾರಟಗಿ ತಾಲ್ಲೂಕಿನಲ್ಲಿ ಸದರಿ ಪೋಸ್ಟ್ ಆಫೀಸ್ ಸಿಬ್ಬಂದಿಗಳಾದ ಉಮೇಶ್ ಕಟ್ಟಿಮನಿ ಮತ್ತು ಶರಣ್ ಕುಮಾರ, ಈ ನೋಂದಣಿ ಕಾರ್ಯದಲ್ಲಿ ಪ್ರಮುಖ ಪಾತ್ರವಹಿಸಿದ್ದರು. ಪ್ರಮುಖವಾಗಿ ಮಕ್ಕಳಿಗೆ ಸರ್ಕಾರದ ವಿವಿಧ ಸೌಲಭ್ಯಗಳು ದೊರಕಲು ಯಾವುದೇ ಬಯೋಮೆಟ್ರಿಕ್ ಇಲ್ಲದೆ ಪೋಷಕರ ಆಧಾರ್ ಕಾರ್ಡ್ ಪಡೆದು ಮಕ್ಕಳ ಆಧಾರ್ ಸಂಖ್ಯೆ ನೋಂದಣಿ ಮಾಡಲಾಗುತ್ತದೆ.


ಉದಯವಾಹಿನಿ ಚಿತ್ರ

ತದನಂತರ 5 ವರ್ಷ ಮೇಲ್ಪಟ್ಟ ನಂತರ ಕಡ್ಡಾಯವಾಗಿ ಬಯೋಮೆಟ್ರಿಕ್ ಪಡೆಯಲಾಗುತ್ತದೆ. ಈ ಮಕ್ಕಳ ಆಧಾರ್ ಕಾರ್ಡ್ ನೀಲಿ ವರ್ಣದಾಗಿರುತ್ತದೆ. ಮತ್ತು ಈ ಕಾರ್ಯಕ್ರಮದಲ್ಲಿ ಒಟ್ಟು 39 ಮಕ್ಕಳ ಆಧಾರ್ ಸಂಖ್ಯೆ ನೋಂದಣಿ ಮಾಡಲಾಯಿತು. ಈ ವೇಳೆ ಹಿರಿಯ ಮೇಲ್ವಿಚಾರಕರಾದ ಶ್ರೀಮತಿ ನಾಗಮ್ಮ, ಹಾಗೂ ತಾಲ್ಲೂಕ ಹಿರಿಯ ಮೇಲ್ವಿಚಾರಕರಾದ ಶ್ರೀಮತಿ ಸುಕನ್ಯ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಸಿಬ್ಬಂದಿಗಳು. ಮಗುವಿನ ಪಾಲಕರು ಸೇರಿದಂತೆ ಮತ್ತಿತರರಿದ್ದರು.

# ಕಾನಿಕೇರಿ-ಬಿಜ್ಜೂರ ಸರ್ಕಾರಿ ಶಾಲೆಗೆ ಭೇಟಿ

• **ಉದಯವಾಹಿನಿ ಮುದ್ದೇಬಿಹಾಳ**

ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ನಿಂಗಪ್ಪ ಮಸಳಿ ಅವರು ಬಿಜೂ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಾನಿಕೇರಿ-ಬಿಜ್ಜೂ ರ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಗೆ ಶುಕ್ರವಾರ ದಿಢೀರ್ ಬೇಟಿ ನೀಡಿ ಶಾಲೆಯ ಸ್ಥಿತಿಗತಿಯ ಬಗ್ಗೆ ಪರಿಶೀಲಿಸಿದರು.

**ಶಾಲೆಯ ಸ್ಥಿತಿಗತಿ ಕುರಿತು ಪರಿಶೀಲನೆ**

ಶಾಲಾ ಸ್ವಚ್ಚತೆ, ಅಗತ್ಯ ಮೂಲ ಸೌಕರ್ಯ ಹಾಗೂ ಮಕ್ಕಳ ಹಾಜರಾತಿ ಬಗ್ಗೆ ಮುಖ್ಯ ಶಿಕ್ಷಕ ಅಶೋಕ ನರಸಲಗಿ ಜೊತೆ ಚರ್ಚಿಸಿದರು. ಹೆಣ್ಣು ಮಕ್ಕಳಿಗೆ ಶೌಚಾಲಯ ಹಾಗೂ ಬಿಸಿಯೂಟ ಅಡುಗೆಕೋಣೆ ಅಗತ್ಯವಿದೆ ಎಂದು ಮುಖ್ಯ ಶಿಕ್ಷಕರು ತಿಳಿಸಿದರು. ಈ ಬಗ್ಗೆ ಗ್ರಾ.ಪಂ.ಅಭಿವೃದ್ಧಿ ಅಧಿಕಾರಿ ಕೆ.ಹೆಚ್.ಕುಂಬಾರ ಜೊತೆ ಚರ್ಚಿಸಿ ನರೇಗಾ ಯೋಜನೆಯಡಿ ಬಿಸಿಯೂಟ ಅಡುಗೆಕೋಣೆ ಹಾಗೂ ಹೆಣ್ಣು ಮಕ್ಕಳಿಗೆ ಸುಸಜ್ಜಿತ ಶೌಚಾಲಯ ನಿರ್ಮಾಣ ಮಾಡುವಂತೆ ಸೂಚಿಸಿದರು.

ಗ್ರಾ.ಪಂ.15ನೇ ಹಣಕಾಸು ಯೋಜನೆಯಡಿ ವಿತರಿಸಲಾದ 4 ಕಂಪ್ಯೂಟರ್, 1 ಲ್ಯಾಪ್‌ಟಾಪ್, 1 ಪ್ರೋಜೆಕ್ಟರ್‌ಗಳನ್ನು ವೀಕ್ಷಿಸಿ ಗ್ರಾಮ ಪಂಚಾಯತಿ ಕಾರ್ಯ ಕುರಿತು ಪ್ರಸಂಶೆ ವ್ಯಕ್ತಪಡಿಸಿದರು. ನಂತರ ಬಿಸಿಯೂಟ ಅಡುಗೆ ಕೋಣೆ ವೀಕ್ಷಿಸಿ ಮಕ್ಕಳಿಗೆ ವಿತರಿಸುವ ಆಹಾರ ಹಾಗೂ ಕೇಂದ್ರದ ಸ್ವಚ್ಚತೆ ಬಗ್ಗೆ ಪರಿಶೀಲಿಸಿದರು. ವೇಳಾಪಟ್ಟಿ ಗನುಣವಾಗಿ ಸರಿಯಾದ ಸಮಯಕ್ಕೆ ಮಕ್ಕಳಿಗೆ ರುಚಿ-ಶುಚಿಯಾದ ಅಡುಗೆ ಮಾಡುವಂತೆ ಬಿಸಿಯೂಟ ಕಾರ್ಯಕರ್ತೆಯರಿಗೆ ಸೂಚಿಸಿದರು. ಎಸ್ ಡಿಎಂಸಿ ಸದಸ್ಯರ ಗುರು ಬಿರಾದಾರ, ಶಾಲಾ ಸಹ ಶಿಕ್ಷಕ ಮುನ್ನಾ ನದಾಫ್, ತಾ.ಪಂ.ವಿಷಯ ನಿರ್ವಾಹಕ ಶಾಂತಪ್ಪ ಬಂಗಾರಗುಂಡ, ಶಾಲಾ ಸಿಬ್ಬಂದಿ ಹಾಗೂ ಗ್ರಾ.ಪಂ.ಸಿಬ್ಬಂದಿ ಇದ್ದರು.


ಉದಯವಾಹಿನಿ ಚಿತ್ರ

**ಕಲಿಕೆ ಬಗ್ಗೆ ಪರಿಶೀಲನೆ**

ಕಾನಿಕೇರಿ-ಬಿಜ್ಜೂರ ಗ್ರಾಮದ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಗೆ ಬೇಟಿ ನೀಡಿದ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ನಿಂಗಪ್ಪ ಎಸ್. ಮಸಳಿ ಅವರು ಮಕ್ಕಳೊಂದಿಗೆ ಬಿಸಿಯೂಟ ಅಡುಗೆ ಸೇವನೆ ಮಾಡಿದರು. ಬಿಸಿಯೂಟ ಅಡುಗೆ ಶುಚಿತ್ವ ಬಗ್ಗೆ ಪರಿಶೀಲಿಸಿ ತಾವೇ ಸ್ವತಃ ಊಟ ಮಾಡಿದರು. ಶಾಲಾ ಮಕ್ಕಳ ಗುಣಮಟ್ಟ ಶಿಕ್ಷಣ ಮತ್ತು ಕಲಿಕೆ ಬಗ್ಗೆ ಪರಿಶೀಲಿಸಿ ತಾವೇ ಮಕ್ಕಳಿಗೆ ಪಠ್ಯ ಬೋಧಿಸಿದರು.

# ಸಂತ್ರಸ್ತರ ಭೇಟಿ ಮಾಡಿದ ಬಿಜೆಪಿ ನಿಯೋಗ

• **ಉದಯವಾಹಿನಿ, ಬೀದರ್**

ವಿಷ ಸೇವಿಸಿ ಅಸ್ವಸ್ಥರಾಗಿ ನಗರದ ಬ್ರಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕಾರಂಜಾ ಸಂತ್ರಸ್ತರನ್ನು ಜಿಲ್ಲಾ ಬಿಜೆಪಿ ನಿಯೋಗ ಭೇಟಿ ಮಾಡಿತು. ಕಾರಂಜಾ ನೀರಾವರಿ ಯೋಜನೆ ಮುಳುಗಡೆ ಸಂತ್ರಸ್ತರಿಗೆ ಸರ್ಕಾರದಿಂದ ವೈಜ್ಞಾನಿಕ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ಮೂವರು ರೈತರು ವಿಷ ಸೇವಿಸಿ ಅಸ್ವಸ್ಥರಾಗಿದ್ದರು. ಕಾರಂಜಾ ಸಂತ್ರಸ್ತರ ಹಿತರಕ್ಷಣ ಸಮಿತಿಯ ಅಧ್ಯಕ್ಷ ಚಂದ್ರಶೇಖರ ಪಾಟೀಲ, ರಾಜಪ್ಪ ಕಮಲಾಪುರ ಹಾಗೂ ರಾಜಶೇಖರ್ ಅವರನ್ನು ಬಿಜೆಪಿ ಮುಖಂಡರು ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು. ಅವರ ಸಂಬಂಧಿಕರಿಗೆ ಧೈರ್ಯ ತುಂಬಿದರು. ಜಿಲ್ಲಾ ಬಿಜೆಪಿ ಅಧ್ಯಕ್ಷ ಸೋಮನಾಥ ಪಾಟೀಲ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ಬೀದರ್ ನಗರ ಘಟಕದ ಅಧ್ಯಕ್ಷ ಶಶಿಧರ ಹೊಸಳ್ಳಿ, ಮತ್ತಿತರರು ಹಾಜರಿದ್ದರು.

# ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಆರೋಪಿಗೆ 10 ವರ್ಷ ಕಠಿಣ ಶಿಕ್ಷೆ

• **ಉದಯವಾಹಿನಿ, ರಾಯಚೂರು**

ಜಿಲ್ಲೆಯ ಲಿಂಗಸೂಗೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮೇ 2019ರಲ್ಲಿ ನಡೆದಿದ್ದ ಬಾಲಕಿ ಮೇಲಿನ ಲೈಂಗಿಕ ದೌರ್ಜನ್ಯದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಂಧನೂರಿನ 3ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ಪೋಕ್ಸ್ ನ್ಯಾಯಾಲಯವು ಆರೋಪಿಗೆ 10 ವರ್ಷಗಳ ಕಠಿಣ ಶಿಕ್ಷೆ ವಿಧಿಸಿದೆ. ಲಿಂಗಸೂಗೂರು ತಾಲ್ಲೂಕಿನ ಗೋನವಾಟ್ಲಾ ಗ್ರಾಮದ ನಿವಾಸಿ ಹುಲ್ಲೇಶ (25) ಶಿಕ್ಷೆಗೆ ಗುರಿಯಾದ ಆರೋಪಿ ಸಂತ್ರಸ್ತೆಯ ತಾಯಿ ನೀಡಿದ ದೂರಿನ ಮೇರೆಗೆ ಆರೋಪಿ ವಿರುದ್ಧ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ ಅಂದಿನ ಸಿಪಿಐ ಯಶವಂತ್ ಎಚ್.ಬಿಸ್ನಳ್ಳಿ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು. ನ್ಯಾಯಾಲಯವು ಸಾಕ್ಷಿ ಪುರಾವೆಗಳನ್ನು ಪರಿಶೀಲಿಸಿ ಆರೋಪಿಯ ಮೇಲಿನ ಅಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ 3ನೇ ಅಧಿಕ ಜಿಲ್ಲಾ ಮತ್ತು ಸತ್ರ ಪೋಕ್ಸ್ ವಿಶೇಷ ನ್ಯಾಯಾಲಯದ ನ್ಯಾಯಾಧೀಶರಾದ ಬಿ.ಬಿ.ಜಕಾತಿ ಅವರು ಶಿಕ್ಷೆ ವಿಧಿಸಿ ಆದೇಶ ನೀಡಿದ್ದಾರೆ.

# ನನೆಗುದಿಗೆ ಬಿದ್ದ ಇಂದಿರಾ ಕ್ಯಾಂಟೀನ್

• **ಉದಯವಾಹಿನಿ, ಮುದಗಲ್**

ಹಸಿವು ಮುಕ್ತ ಕರ್ನಾಟಕ' ಘೋಷವಾಕ್ಯದಡಿ ರಾಜ್ಯದಲ್ಲಿ ಪ್ರಾರಂಭವಾದ ಇಂದಿರಾ ಕ್ಯಾಂಟೀನ್ ಯೋಜನೆ ಮುದಗಲ್ ಪಟ್ಟಣದಲ್ಲಿ ನನೆಗುದಿಗೆ ಬಿದ್ದಿದೆ. ಮುದಗಲ್ ಪಟ್ಟಣ ಐತಿಹಾಸಿಕ ಮತ್ತು ಗ್ರಾನೈಟ್ ವ್ಯಾಪಾರ ಕೇಂದ್ರವಾಗಿದೆ. ನಿತ್ಯವೂ ಸಾವಿರಾರು ವ್ಯಾಪಾರಿಗಳು, ಗ್ರಾಹಕರು ಹಾಗೂ ಪ್ರವಾಸಿಗರು ಭೇಟಿ ನೀಡುತ್ತಾರೆ.

ಹಾಗೇ ಪಟ್ಟಣವು ಸುತ್ತಮುತ್ತಲ 58 ಹಳ್ಳಿ 8 ತಾಂಡಾಗಳಿಗೆ ಕೇಂದ್ರಸ್ಥಾನವಾಗಿದೆ. ಸಾರ್ವಜನಿಕರು, ರೈತರು, ಶಾಲಾ ಕಾಲೇಜು ವಿದ್ಯಾರ್ಥಿಗಳ ದಟ್ಟಣೆಯೂ ಹೆಚ್ಚಿರುತ್ತದೆ. ಎಪಿಎಂಸಿ, ಕೆಇಬಿ, ಸಮುದಾಯ ಆರೋಗ್ಯ ಕೇಂದ್ರ, ಪಶು ಚಿಕಿತ್ಸಾಲಯ ಮಾರ್ಗದಲ್ಲಿದ್ದ ಪಶು ಚಿಕಿತ್ಸಾಲಯ ಮುಂದೆ ಇದ್ದ ಸರ್ಕಾರಿ ಜಾಗದಲ್ಲಿ ಇಂದಿರಾ ಕ್ಯಾಂಟೀನ್ ನಿರ್ಮಿಸಲಾಗುತ್ತಿದೆ. ಒಳಾಂಗಣ ಮತ್ತು ಹೊರಾಂಗಣಕ್ಕೆ ಅಂತಿಮ ಸ್ಪರ್ಶ ನೀಡುವ ಕೆಲಸ ಬಾಕಿ ಇದೆ. ಅಡುಗೆ ತಯಾರಿಕೆಯ ಸಾಮಗ್ರಿ ಇನ್ನೂ ಬಂದಿಲ್ಲ.


ಉದಯವಾಹಿನಿ ಚಿತ್ರ

**ಸರ್ಕಾರಿ ಜಾಗದಲ್ಲಿ ಇಂದಿರಾ ಕ್ಯಾಂಟೀನ್**

ಈ ಮಧ್ಯೆ ಕಾಮಗಾರಿ ಸಂಪೂರ್ಣವಾಗಿ ಸ್ಥಗಿತವಾದ ಹಿನ್ನೆಲೆಯಲ್ಲಿ ಕಟ್ಟಡವು ಸಾರ್ವಜನಿಕ ಶೌಚಕ್ಕೆ ಬಳಕೆಯಾಗುತ್ತಿದೆ. ಸದ್ಯದ ಸ್ಥಿತಿ ಗಮನಿಸಿದರೆ ಕ್ಯಾಂಟೀನ್ ಕಾಮಗಾರಿ ಆರಂಭವಾಗುವ ಯಾವುದೇ ಲಕ್ಷಣಗಳು ಗೋಚರಿಸುತ್ತಿಲ್ಲ.

ಕ್ಯಾಂಟೀನ್‌ಗೆ ಅಳವಡಿಸಿದ ಗ್ಲಾಸ್ ಒಡೆದು ಹೋಗಿದೆ. ಕ್ಯಾಂಟೀನ್ ಮುಂದೆ ಮರಂ ಹಾಕಿರುವುದು ತೆರವುಗೊಳಿಸಿಲ್ಲ. ಕ್ಯಾಂಟೀನ್ ಪಕ್ಕದಲ್ಲಿ ಶೌಚ್ಯ ಮಾಡುತ್ತಿದ್ದಾರೆ.

> ಕ್ಯಾಂಟೀನ್ ಆರಂಭಗೊಳ್ಳದೇ ಇರು ವುದರಿಂದ ಸಾರ್ವಜನಿಕರಿಗೆ ಇನ್ನೂ ಕೆಲ ತಿಂಗಳವರೆಗೆ ಸೌಲಭ್ಯ ಮರೀಚಿಕೆಯಾಗಿದೆ. ಸರ್ಕಾರವು ಗ್ರಾಹಕರಿಗೆ ಬೆಳಗಿನ ತಿಂಡಿಗೆ 5, ಮಧ್ಯಾಹ್ನ ಹಾಗೂ ರಾತ್ರಿ ಊಟಕ್ಕೆ 10 ದರದಲ್ಲಿ ಸಿಗಲಿದೆ ಎಂಬ ನಿರೀಕ್ಷೆಯಲ್ಲಿದ್ದಾರೆ. ಕ್ಯಾಂಟೀನ್ ಏಜೆನ್ಸಿಗೆ ಗುತ್ತಿಗೆ ನೀಡಿ ಆಹಾರ ಪೂರೈಸಿದರೆ, ಆಟೊದವರು, ವ್ಯಾಪಾರಿಗಳು, ಕಾರ್ಮಿಕರು, ಕಾಲೇಜು ವಿದ್ಯಾರ್ಥಿಗಳು, ಪೌರಕಾರ್ಮಿಕರು, ಇಂದಿರಾ ಕ್ಯಾಂಟೀನ್ ಸೌಲಭ್ಯ ಪಡೆದುಕೊಳ್ಳುತ್ತಾರೆ.'ಕಾಮಗಾರಿ ಮುಗಿಸಿ, ಕಾರ್ಯ ಆರಂಭಿಸುವ ಬಗ್ಗೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಈ ಬಗ್ಗೆ ತಲೆಕೆಡಿಸಿಕೊಳ್ಳುತ್ತಿಲ್ಲ
> -ಮಂಜುನಾಥ, ಪಟ್ಟಣದ ನಿವಾಸಿ

# ಗ್ರಾಮೀಣ ಬ್ಯಾಂಕ್ ನೌಕರರ ಮುಷ್ಕರ

• **ಉದಯವಾಹಿನಿ, ಯಾದಗಿರಿ**

ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ನಗರದ ಹೊಸಳ್ಳಿ ಕ್ರಾಸ್ ಸಮೀಪದ ಕರ್ನಾಟಕ ಗ್ರಾಮೀಣ ಬ್ಯಾಂಕ್ನ ಪ್ರಾದೇಶಿಕ ಕಚೇರಿ ಮುಂಭಾಗ ಕರ್ನಾಟಕ ಗ್ರಾಮೀಣ ಬ್ಯಾಂಕ್ ನೌಕರರ ಸಂಘ ಮತ್ತು ಕರ್ನಾಟಕ ಗ್ರಾಮೀಣ ಬ್ಯಾಂಕ್ ಅಧಿಕಾರಿಗಳ ಸಂಘ ಜಂಟಿ ಕ್ರಿಯಾ ಸಮಿತಿಯಿಂದ ಶುಕ್ರವಾರ ಪ್ರತಿಭಟನೆ ನಡೆಸಲಾಯಿತು.

ಸಿಬಿಎಸ್‌ನಲ್ಲಿ ಎಒಡಿ ಪ್ರಮಾಣೀಕರಣಗಳನ್ನು ತಕ್ಷಣದಿಂದ ನಿಲ್ಲಿಸಬೇಕು. 12ನೇ ದ್ವಿಪಕ್ಷೀಯ ಒಪ್ಪಂದ ಮತ್ತು 9ನೇ ಜಂಟಿ ಮಸೂದೆಯ ಪ್ರಕಾರ 2024ರ ಜುಲೈ 8ರಂದು ಡಿಎಫ್‌ಎಸ್ ಹೊರಡಿಸಿದ ಆದೇಶನು ಸಂಪೂರ್ಣವಾಗಿ ಅನುಷ್ಠಾನಗೊಳಿಸಬೇಕು' ಎಂದು ಆಗ್ರಹಿಸಿದರು. '12ನೇ ದ್ವಿಪಕ್ಷೀಯ ಒಪ್ಪಂದಗಳ ಪ್ರಕಾರ ಎಲ್ಲಾ ಅರ್ಹ ನೌಕರರಿಗೆ ಹೆಚ್ಚುವರಿ ಸಮಯ ಭತ್ಯೆ ಪಾವತಿಸಬೇಕು. ಮಾನವ ಸಂಪನ್ಮೂಲದ ಸಮಗ್ರ ಮೌಲ್ಯಮಾಪನ ಮತ್ತು ಮಿತ್ರ ಸಮಿತಿಯ ಶಿಫಾರಸುಗಳಂತೆ ಸರಿಯಾದ ಹಾಗೂ ತ್ವರಿತ ನೇಮಕಾತಿ ಪ್ರಕ್ರಿಯೆ ನಡೆಸಬೇಕು.

2019ರ ಡಿಸೆಂಬರ್ 4ರಂದು ಹೊರಡಿಸಿದ ಸಿಜಿಐಟಿ ಆದೇಶ ಪ್ರಶ್ನಿಸಿ ನೀಡಿದ ಮೇಲ್ಮನವಿ ತಕ್ಷಣ ಹಿಂಪಡೆಯಬೇಕು. ಕ್ಯಾಶುಯಲ್ ನೌಕರರ ಕಾಯಂ ಮಾಡುವ ಪ್ರಕ್ರಿಯೆ ಪ್ರಾರಂಭಿಸಬೇಕು' ಎಂದು ಒತ್ತಾಯಿಸಿದರು. 'ಆರ್‌ಎಲ್‌ಸಿ ಎದುರು ಸಭೆಯಲ್ಲಿ ಪ್ರಗತಿಯಲ್ಲಿರುವ ಸಂದರ್ಭದಲ್ಲಿ, ಮಾರ್ಚ್ 2024ರಲ್ಲಿ ಕಡಿತ ಮಾಡಿದ ಸಂರಕ್ಷಿತ ನೌಕರರು ಮತ್ತು ಆಫೀಸ್ ಬೇಯರರ್ಸ್‌ಗಳ ವೇತನ ಮರುಪಾವತಿಸಬೇಕು. ಕ್ಯಾಶುಯಲ್/ ಹೊರಗುತ್ತಿಗೆ ನೌಕರರಿಗೆ ಆರೋಗ್ಯ ವಿಮಾ ಸೌಲಭ್ಯ ತಕ್ಷಣ ನೀಡಬೇಕು.


ಉದಯವಾಹಿನಿ ಚಿತ್ರ

ಸಂರಕ್ಷಿತ ನೌಕರರನ್ನು ಮುಖ್ಯ ಕಚೇರಿಗೆ ಅಥವಾ ಸಂಘದ ಆಯ್ಕೆಯ ಸ್ಥಳಕ್ಕೆ ನೇಮಿಸಬೇಕು' ಎಂದು ಆಗ್ರಹಿಸಲಾಯಿತು. ಪ್ರತಿಭಟನೆಯಲ್ಲಿ ಕರ್ನಾಟಕ ಗ್ರಾಮೀಣ ಬ್ಯಾಂಕ್ ನೌಕರರ ಸಂಘ ಮತ್ತು ಕರ್ನಾಟಕ ಗ್ರಾಮೀಣ ಬ್ಯಾಂಕ್ ಅಧಿಕಾರಿಗಳ ಸಂಘ ಜಂಟಿ ಕ್ರಿಯಾ ಜಿಲ್ಲೆಯ ಸಮಿತಿಯ ಪದಾಧಿಕಾರಿಗಳು ಭಾಗವಹಿಸಿದ್ದರು.

# ಕಾಡಾನೆ ಸಮಸ್ಯೆ : ಹೆಚ್ಚುವರಿ ಜಿಲ್ಲಾಧಿಕಾರಿ ಭೇಟಿ, ಮನವಿ ಸ್ವೀಕಾರ

• **ಉದಯವಾಹಿನಿ, ಹಾಸನ**

ಜಿಲ್ಲೆಯ ಮಲೆನಾಡು ಭಾಗದಲ್ಲಿ ಕಾಡಾನೆಗಳ ಹಾವಳಿಗೆ ಶಾಶ್ವತ ಪರಿಹಾರ ಒದಗಿಸುವಂತೆ ಆಗ್ರಹಿಸಿ ಜಯ ಕರ್ನಾಟಕ ಸಂಘಟನ ನಡೆಸುತ್ತಿರುವ ಧರಣಿ ನಾಲ್ಕನೇ ದಿನವೂ ಮುಂದುವರಿದಿದೆ.

ಈ ವೇಳೆ ಜಯ ಕರ್ನಾಟಕ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ್ ಮಾತನಾಡಿ, ನಮ್ಮ ಧರಣಿ ನಾಲ್ಕನೇ ದಿನಕ್ಕೆ ಕಾಲಿರಿಸಿದೆ. ಆದರೆ ಜಿಲ್ಲಾಡಳಿತ ಸ್ಪಂದಿಸಿಲ್ಲ. ಕಾಡಾನೆ ಹಾವಳಿ ಹೆಚ್ಚಿರುವ ಪ್ರದೇಶದಲ್ಲಿ ರೈತರು, ಕೂಲಿ ಕಾರ್ಮಿಕರು ನಿತ್ಯ ಸಂಕಷ್ಟದಲ್ಲಿ ಜೀವನ ದೂಡುವಂತಾಗಿದೆ.

ಜಿಲ್ಲೆಯಲ್ಲಿ ಹಲವಾರು ವರ್ಷಗಳಿಂದ ಆನೆ ಹಾವಳಿ ಹೆಚ್ಚಾಗಿದ್ದು ಬೆಳೆ ಹಾನಿ, ಪ್ರಾಣ ಹಾನಿಯಾದಾಗ ಇಂತಿಷ್ಟು ಪರಿಹಾರ ಕೊಟ್ಟು ಸರ್ಕಾರ ಕೈ ತೊಳೆದುಕೊಳ್ಳುತ್ತದೆ. 40 ರಿಂದ 50 ಆನೆಗಳು ಹಿಂಡು ಹಿಂಡಾಗಿ ಸಂಚರಿಸುತ್ತಿದ್ದು ಜೀವ ಭಯದಲ್ಲಿಯೇ ಇಲ್ಲಿನ ಗ್ರಾಮಸ್ಥರು ಕಾಲ ದೂಡುವಂತಾಗಿದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

**ಜಿಲ್ಲಾಧಿಕಾರಿ ಭೇಟಿ:** ಸ್ಥಳಕ್ಕೆ ಭೇಟಿ ನೀಡಿದ ಹೆಚ್ಚುವರಿ ಜಿಲ್ಲಾಧಿಕಾರಿ ಕೆ.ಟಿ. ಶಾಂತಲಾ, ಧರಣಿ ನಿರತರಿಂದ ಮನವಿ ಸ್ವೀಕರಿಸಿದರು. ಮನವಿಯ ಕುರಿತು ಸರ್ಕಾರಕ್ಕೆ ಕಳುಹಿಸಲಾಗುವುದು ಶನಿವಾರ ಅರಣ್ಯ ಇಲಾಖೆ ಅಧಿಕಾರಿಗಳ ಜೊತೆಗೆ ಚರ್ಚೆ ನಡೆಯಲಿದ್ದು, ಧರಣಿ ಹಿಂಪಡೆಯುವಂತೆ ಶಾಂತಲಾ ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಧರಣಿ ನಿರತರು, ಅರಣ್ಯ ಅಧಿಕಾರಿಗಳ ಜೊತೆಗಿನ ಚರ್ಚೆಯಲ್ಲಿ ಕೈಗೊಳ್ಳುವ ಪರಿಹಾರ ಕ್ರಮಗಳ ಬಗ್ಗೆ ಮಾಹಿತಿ ನೀಡಿದ ನಂತರ ಧರಣಿ ಹಿಂಪಡೆಯುವುದಾಗಿ ಸಮ್ಮತಿಸಿದರು.

ಬಜೆಟ್‌ನಲ್ಲಿ 50 ಕೋಟಿಗಳನ್ನು ಮೀಸಲಿರಿಸಲು ಮುಖ್ಯಮಂತ್ರಿಗೆ ಕೋರಿದ್ದು ಕಾಡಾನೆಗಳ ಸಮಸ್ಯೆಗೆ ಶಾಶ್ವತ ಪರಿಹಾರ ನೀಡುವ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿ ಪ್ರಸ್ತಾವ ಇದೆ. ಸಮಗ್ರ ಯೋಜನೆ ತಯಾರಿಸಿ ಶೀಘ್ರವೇ ಸೂಕ್ತಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

> ಕಾಡಾನೆಗಳು ಕಾಡಿನಿಂದ ನಾಡಿಗೆ ಬಂದಿರುವ ವಿಷಯ ಹಾಗೂ ಕಾಡಾನೆಗಳಿಂದ ಪ್ರಾಣ ಹಾನಿ ಮತ್ತು ಅಪಾರ ಬೆಳೆ ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು ಹಾಸನ ಮತ್ತು ಕೊಡಗು ಜಿಲ್ಲೆಯ 2ಸಾವಿರ ಎಕರೆ ಪ್ರದೇಶದಲ್ಲಿ ಆನೆ ಕಾರಿಡಾರ್ ನಿರ್ಮಿಸಲು ಈಗಾಗಲೇ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ
> -ಈಶ್ವರ್ ಖಂಡ್ರೆ, ಅರಣ್ಯ ಸಚಿವ

**ಕೂಲಿ ಕಾರ್ಮಿಕರು ನಿತ್ಯ ಸಂಕಷ್ಟದಲ್ಲಿ ಜೀವನ**

# ಪ್ರಕೃತಿ ಪರೀಕ್ಷಾ ಅಭಿಯಾನದ ಸೌಲಭ್ಯ ಪಡೆಯುವಂತೆ ಕರೆ

## ಪ್ರಕೃತಿ ಅನುಸಾರವಾಗಿ ನಾವು ಆಹಾರ, ಜೀವನಶೈಲಿ ರೂಢಿಸಿಕೊಂಡಲ್ಲಿ ನಾವು ಆರೋಗ್ಯಕರವಾಗಿ ಇರಬಹುದು

• **ಉದಯವಾಹಿನಿ ಚಿತ್ರದುರ್ಗ**

ಪ್ರಕೃತಿಯನ್ನು ತಿಳಿದು ಅದರ ಅನುಸಾರ ಆರೋಗ್ಯಕರವಾಗಿ ಎಲ್ಲಾ ಸಾರ್ವಜನಿಕರು ಇರಬೇಕು ಎಂಬ ಆಶಯದೊಂದಿಗೆ ಭಾರತ ಸರ್ಕಾರದ ಆಯುಷ್ ಮಂತ್ರಾಲಯ ''ದೇಶ್ ಕಿ ಪ್ರಕೃತಿ ಪರೀಕ್ಷೆ'' ಅಭಿಯಾನ ಹಮ್ಮಿಕೊಂಡಿದೆ.

ಈ ಅಭಿಯಾನವು ಈಗಾಗಲೇ ಕಳೆದ ನವೆಂಬರ್ 26 ರಿಂದ ಆರಂಭವಾಗಿದ್ದು, ಡಿಸೆಂಬರ್ 25ರವರೆಗೆ ದೇಶಾದ್ಯಂತ ನಡೆಯಲಿದೆ. ಇದು ಮೊಬೈಲ್ ಆ್ಯಪ್ ಆಧಾರಿತ ಕಾರ್ಯಕ್ರಮವಾಗಿದ್ದು, ಈ ಆ್ಯಪ್ ಅನ್ನು ಅಳವಡಿಸಿಕೊಂಡು ಕೆಲವು ಮೂಲಭೂತ ಪ್ರಶ್ನೆಗಳಿಗೆ ಉತ್ತರಿಸಿದಲ್ಲಿ ಕಾಲಕಾಲಕ್ಕೆ ನಿಮ್ಮ ಪ್ರಕೃತಿ ಅನುಸಾರವಾಗಿ ಆರೋಗ್ಯಕ್ಕೆ ಪೂರಕವಾದ ಸೂಚನೆ, ಸಲಹೆಗಳು ನಿಮ್ಮ ಮೊಬೈಲ್‌ಗೆ ಬರಲಿವೆ. ಈ ಅಭಿಯಾನವನ್ನು ಜಿಲ್ಲಾ ಆಯುಷ್ ಇಲಾಖೆಯೂ ಸಹ ಜಿಲ್ಲೆಯಾದ್ಯಂತ ಹಮ್ಮಿಕೊಂಡಿದೆ.



**ದೇಶ್ ಕಿ ಪ್ರಕೃತಿ ಪರೀಕ್ಷೆ**

ಆಸಕ್ತ ಸಾರ್ವಜನಿಕರು ಹತ್ತಿರದ ಆ್ಯಪ್ ಆಸ್ಪತ್ರೆಗಳು ಹಾಗೂ ಚಿಕಿತ್ಸಾಲಯಗಳನ್ನು ಸಂಪರ್ಕಿಸಿದಲ್ಲಿ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಯವರು ಮೊಬೈಲ್ ಆ್ಯಪ್ ಡೌನ್ಲೋಡ್ ಮಾಡಿಕೊಳ್ಳುವಲ್ಲಿ ಹಾಗೂ ನಿಮ್ಮ ಪ್ರಕೃತಿ ನಿರ್ಧರಿಸುವಲ್ಲಿ ಸಹಕರಿಸುತ್ತಾರೆ.

ಕಾಯಿಲೆ ಬಂದಾಗ ವೈದ್ಯರಲ್ಲಿಗೆ ಹೋಗಿ ಔಷಧಿ ತೆಗೆದುಕೊಳ್ಳುವುದು ಚಿಕಿತ್ಸೆಯಾದರೆ ಕಾಯಿಲೆ ಬರದಂತೆಯೇ ಸದೃಢವಾಗಿ ಬದುಕುವುದು ಆರೋಗ್ಯ. ನಾವು ಆರೋಗ್ಯವಾಗಿರಲು ಇರುವ ಏಕೈಕ ಮಾರ್ಗ ಎಂದರೆ ಉತ್ತಮ ಆಹಾರ ಹಾಗೂ ಉತ್ತಮ ಜೀವನ ಶೈಲಿ ರೂಡಿಸಿಕೊಳ್ಳುವುದು. ಮನುಷ್ಯರು ಪ್ರತಿಯೊಬ್ಬ ವ್ಯಕ್ತಿಯಿಂದ ವ್ಯಕ್ತಿಗೆ ಭಿನ್ನ ಭಿನ್ನ. ನಮ್ಮ ಎತ್ತರ, ನಿಲುವು, ಮೈ ಬಣ್ಣ, ಜೀರ್ಣಶಕ್ತಿ, ಮಾನಸಿಕ ಸ್ಥಿತಿ ಹೀಗೆ ಪ್ರತಿಯೊಬ್ಬರು ಶಾರೀರಿಕವಾಗಿ ಮಾನಸಿಕವಾಗಿ ಒಬ್ಬರಿಗಿಂತ ಇನ್ನೊಬ್ಬರಿಗೆ ಭಿನ್ನ ಇದನ್ನೇ ಆಯುರ್ವೇದದಲ್ಲಿ ಪ್ರಕೃತಿ ಎಂದು ಹೇಳಿದ್ದಾರೆ. ಪ್ರಕೃತಿ ಅನುಸಾರವಾಗಿ ನಾವು ಆಹಾರ, ಜೀವನಶೈಲಿ ರೂಢಿಸಿಕೊಂಡಲ್ಲಿ ನಾವು ಆರೋಗ್ಯಕರವಾಗಿ ಇರಬಹುದು.

ಉದಾರಣೆಗೆ ಒಂದು ಪ್ರಮಾಣದ ಆಹಾರ, ಜೀರ್ಣ ಶಕ್ತಿ, ಚೆನ್ನಾಗಿದ್ದವರಲ್ಲಿ ಆರೋಗ್ಯವನ್ನು ನೀಡಿದರೆ ಅದೇ ಪ್ರಮಾಣದ ಆಹಾರ, ಜೀರ್ಣ ಶಕ್ತಿ ದುರ್ಬಲವಾಗಿ ಇರುವವರಲ್ಲಿ ಖಾಯಿಲೆ ಉಂಟು ಮಾಡಬಹುದು. ಆದ ಕಾರಣ ನಮ್ಮ ಪ್ರಕೃತಿಗೆ ಅನುಸಾರವಾಗಿ ನಮ್ಮ ಆಹಾರವನ್ನು ನಾವು ರೂಢಿಸಿಕೊಳ್ಳಬೇಕು. ಆಯುರ್ವೇದದಲ್ಲಿ ಪ್ರಕೃತಿಯನ್ನು ಮೂರು ತರನಾಗಿ ವಿಂಗಡಿಸಿದ್ದಾರೆ.

ವಾತ ಪ್ರಕೃತಿ, ಪಿತ್ತ ಪ್ರಕೃತಿ ಹಾಗೂ ಕಫ ಪ್ರಕೃತಿ. ಈ ಪ್ರಕೃತಿಗಳಿಗನುಸಾರವಾಗಿ ಕೆಲವು ತರದ ಕಾಯಿಲೆಗಳು ಬರುವ ಸಾಧ್ಯತೆಗಳು ಇರುತ್ತವೆ.

ಉದಾಹರಣೆಗೆ ಕಫ ಪ್ರಕೃತಿ ಇರುವಂತ ವ್ಯಕ್ತಿಯಲ್ಲಿ ಮಧುಮೇಹ, ಬೊಜ್ಜು ಈ ತರದ ಕಾಯಿಲೆಗಳು, ವಾತ ಪ್ರಕೃತಿ ಇದ್ದವರಲ್ಲಿ ಕೀಲು ನೋವು ಈ ತರಹದ ಕಾಯಿಲೆಗಳು, ಪಿತ್ತ ಪ್ರಕೃತಿ ಇದ್ದವರಲ್ಲಿ ಗ್ಯಾಸ್ಟ್ರಿಕ್, ಲಿವರ್ಗೆ ಸಂಬಂಧಪಟ್ಟ ಕಾಯಿಲೆಗಳು ಬರುವ ಸಾಧ್ಯತೆ ಹೆಚ್ಚು ಇರುತ್ತವೆ. ನಮ್ಮ ಪ್ರಕೃತಿ ಯಾವುದು ಎಂದು ಮೊದಲೇ ತಿಳಿದು ನಮ್ಮ ಆಹಾರ ವಿಹಾರದಲ್ಲಿ ಬದಲಾವಣೆ ಮಾಡಿಕೊಂಡಲ್ಲಿ ಪ್ರಕೃತಿ ಅನುಸಾರವಾಗಿ ಬರುವ ಖಾಯಿಲೆಗಳಿಂದ ನಾವು ದೂರ ಇರಬಹುದು ಅಥವಾ ಈಗಾಗಲೇ ಕಾಯಿಲೆ ಇದ್ದರೆ ಪ್ರಕೃತಿಯ ಅನುಸಾರ ಆಹಾರ ವಿಹಾರ ರೂಡಿಸಿಕೊಂಡಲ್ಲಿ ಅದನ್ನು ನಿಯಂತ್ರಿಸಬಹುದು.

> ಎಲ್ಲಾ ಸಾರ್ವಜನಿಕರು ತಮ್ಮ ತಮ್ಮ ಪ್ರಕೃತಿಯನ್ನು ತಿಳಿದುಕೊಂಡು ಅದರ ಅನುಸಾರವಾಗಿ ನೀಡಲ್ಪಡುವ ಸಲಹೆ, ಸೂಚನೆಗಳನ್ನು ಕಾಲಕಾಲಕ್ಕೆ ಅನುಸರಿಸಿ ಆರೋಗ್ಯಕರವಾಗಿರಲು ಅನುವಾಗುವಂತೆ ಹೆಚ್ಚು ಹೆಚ್ಚು ಜನರು ಈ ಮೊಬೈಲ್ ಆ್ಯಪ್ ಬಳಸಬೇಕು
> -ಡಾ. ಚಂದ್ರಕಾಂತ್ ನಾಗಸಮುದ್ರ, ಜಿಲ್ಲಾ ಆಯುಷ್ ಅಧಿಕಾರಿ

# ದೇವರ ಕೋಣಕ್ಕಾಗಿ ಎರಡು ಗ್ರಾಮಸ್ಥರ ನಡುವೆ ಫೈಟ್


• **ಉದಯವಾಹಿನಿ, ದಾವಣಗೆರೆ**

ದೇವರಕೋಣ ತಮಗೆ ಸೇರಿದ್ದು ಎಂದು ಹೇಳಿಕೊಂಡು ಆರಂಭಗೊಂಡ ಎರಡು ಗ್ರಾಮಸ್ಥರ ನಡುವಿನ ಫೈಟ್ ಡಿಎನ್‌ಎ ಟೆಸ್ಟ್ ಹಂತಕ್ಕೆ ಬಂದು ತಲುಪಿದೆ. ದೇವರಕೋಣವನ್ನು ದಾವಣಗೆರೆ ಜಿಲ್ಲೆಯ ಕುಣಿಬೆಳಕೆರೆ ಹಾಗೂ ಕುಳಗಟ್ಟೆ ಗ್ರಾಮದ ಜನರು ತಮಗೆ ಸೇರಿದ್ದು ಎಂದು ಹೇಳಿಕೊಳ್ಳುತ್ತಿದ್ದಾರೆ. ಈ ಸಂಬಂಧ ದಾವಣಗೆರೆ ಎಸ್ಪಿ ನೇತೃತ್ವದಲ್ಲಿ ಶನಿವಾರ ಎರಡು ಗ್ರಾಮಸ್ಥರ ಪಂಚಾಯ್ತಿ ನಡೆದಿದೆ.

ಈ ವೇಳೆ ಕುಣಿಬೆಳಕೆರೆ ಗ್ರಾಮಸ್ಥರು, ದೇವರ ಬೆಳಕೆರೆಗೆ ಕೋಣ ಹೋಗಿದೆ ಅಲ್ಲಿಂದ ಅದನ್ನು ಕದ್ದುಕೊಂಡು ಹೋಗಿದ್ದಾರೆ ಎಂದು ವಾದಿಸಿದ್ದಾರೆ.

ಅಲ್ಲದೇ ಯಾವುದೇ ಕಾರಣಕ್ಕೂ ಕೋಣವನ್ನು ನಾವು ಬಿಟ್ಟುಕೊಡುವುದಿಲ್ಲವೆಂದು ಗ್ರಾಮಸ್ಥರು ಪಟ್ಟು ಹಿಡಿದಿದ್ದಾರೆ. ಕೋಣ ಯಾವ ಗ್ರಾಮಕ್ಕೆ ಸೇರಿದ್ದು ಎಂಬ ಬಗ್ಗೆ ಡಿಎನ್‌ಎ ಟೆಸ್ಟ್ ಆಗಲಿ ಎಂದು ಕುಳಗಟ್ಟೆ ಗ್ರಾಮಸ್ಥರು ಪಟ್ಟು ಹಿಡಿದಿದ್ದಾರೆ.

ಮುಂದಿನ ವರ್ಷ ಗ್ರಾಮದಲ್ಲಿ ಕರಿಯಮ್ಮನ ಜಾತ್ರೆ ನಡೆಯಲಿದ್ದು ಅದಕ್ಕಾಗಿ ದೇವರ ಕೋಣ ಬೇಕಾಗಿದೆ. ಈಗಾಗಲೇ ಎರಡೂ ಗ್ರಾಮಸ್ಥರನ್ನು ಸೇರಿಸಿ ನಡೆಸಿದ ಸಭೆಗಳು ವಿಫಲವಾಗಿವೆ. ಎರಡೂ ಹಳ್ಳಿಗಳ ಗ್ರಾಮಸ್ಥರು ನಮ್ಮದೇ ಕೋಣವೆಂದು ಪಟ್ಟು ಹಿಡಿದಿರುವ ಹಿನ್ನೆಲೆ ಪ್ರಕರಣ ಪೊಲೀಸರಿಗೆ ತಲೆನೋವಾಗಿ ಮಾರ್ಪಟ್ಟಿದೆ.


ಉದಯವಾಹಿನಿ ಚಿತ್ರ

**ಡಿಎನ್‌ಎ ಟೆಸ್ಟ್ ನಡೆಸುವಂತೆ ಆಗ್ರಹ**

**ಪೊಲೀಸ್ ಠಾಣೆಯಲ್ಲಿ ದೂರು**

ಕೋಣನ ಮರಿಗಳು ನಮ್ಮ ಬಳಿ ಇವೆ ಅವುಗಳ ಡಿಎನ್‌ಎ ಪರೀಕ್ಷಿಸಿದರೆ ಕೋಣ ಯಾರಿಗೆ ಸೇರಿದ್ದು ಎಂಬುದು ತಿಳಿಯಲಿದೆ ಎಂದು ಗ್ರಾಮಸ್ಥರು ಮಲೇಬೆನ್ನೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಇನ್ನೂ ಶಿವಮೊಗ್ಗ ಪಶು ವೈದ್ಯಾಧಿಕಾರಿಗಳು ಕೋಣವನ್ನು ಪರೀಕ್ಷಿಸಿ ಅದು ಆರು ವರ್ಷ ವಯಸ್ಸಿನ ಕೋಣ ಎಂದು ವರದಿ ನೀಡಿದ್ದಾರೆ. ವಿವಾದದ ಹಿನ್ನೆಲೆ ಕೋಣವನ್ನು ಶಿವಮೊಗ್ಗದ ಗೋಶಾಲೆಯಲ್ಲಿ ಇರಿಸಲಾಗಿದೆ.

# ಸಚಿವೆ ನಿರ್ಮಲಾ ಭಾರತದ ನಂ.1 ಪವರ್‌ಫುಲ್ ಮಹಿಳೆ

## ಫೋರ್ಬ್ಸ್‌ ಮೋಸ್ಟ್ ಪವರ್‌ಫುಲ್ ವುಮೆನ್-2024 ಪಟ್ಟಿ ಬಿಡುಗಡೆ, ವಿಶ್ವದ 100 ಮಂದಿ ಅತ್ಯಂತ ಪ್ರಭಾವಿ ಮಹಿಳೆಯರ ಗುರುತು



**2ನೇ, 3ನೇ ಸ್ಥಾನ ಯಾರಿಗೆ?**

**ಹೊಸದಿಲ್ಲಿ:** ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸತತ ಆರನೇ ಬಾರಿಗೆ ವಿಶ್ವದ ಅತ್ಯಂತ ಶಕ್ತಿಶಾಲಿ ಮಹಿಳೆಯರ ಪಟ್ಟಿಯಲ್ಲಿ ಕಾಣಿಸಿಕೊಂಡಿದ್ದಾರೆ. ಫೋರ್ಬ್ಸ್ ಟಾಪ್ 100 ಶಕ್ತಿಶಾಲಿ ಮಹಿಳೆಯರ ಪಟ್ಟಿಯಲ್ಲಿ ಕಳೆದ ವರ್ಷ ನಿರ್ಮಲಾ 32ನೇ ಸ್ಥಾನದಲ್ಲಿದ್ದರು. ಈ ವರ್ಷ 4 ಸ್ಥಾನ ಮೇಲೇರಿ 28ರಲ್ಲಿದ್ದಾರೆ. ಭಾರತದ ಮಟ್ಟಿಗೆ ಅವರ ನಂ.1 ಪವರ್‌ಫುಲ್ ಮಹಿಳೆಯಾಗಿದ್ದಾರೆ.

ಫೋರ್ಬ್ಸ್ ಮೋಸ್ಟ್ ಪವರ್‌ಫುಲ್ ವುಮೆನ್- 2024' ಪಟ್ಟಿ ಬಿಡುಗಡೆಯಾಗಿದ್ದು, ವಿಶ್ವದ 100 ಮಂದಿ ಮಹಿಳೆಯರನ್ನು ಅತ್ಯಂತ ಪ್ರಭಾವಿ ಮಹಿಳೆ ಯರನ್ನಾಗಿ ಗುರುತಿಸಲಾಗಿದೆ. ಈ ಪಟ್ಟಿಯಲ್ಲಿ ಮೂವರು ಭಾರತೀಯ ಮಹಿಳೆಯರು ಸ್ಥಾನ ಗಿಟ್ಟಿಸಿಕೊಂಡಿದ್ದಾರೆ.

ನಿರ್ಮಲಾ ಸೀತಾರಾಮನ್ ಅವರಲ್ಲದೆ ಎಚ್‌ಸಿಎಲ್ ಕಾರ್ಪೊರೇಷನ್‌ನ ಸಿಇಒ ರೋಷನಿ ನಾಡಾರ್ ಮಲ್ಹೋತ್ರಾ, ಮತ್ತು ಬಯೋಕಾನ್ ಸಂಸ್ಥಾಪಕಿ ಕಿರಣ್ ಮಜುಮ್ದಾರ್ ಷಾ ಪ್ರಭಾವಿ ಮಹಿಳೆಯರು ಎಂಬ ಹೆಗ್ಗಳಿಕೆಗೆ ಪಾತ್ರರಾಗಿರುವ ಭಾರತೀಯರಾಗಿದ್ದಾರೆ.

ನಿರ್ಮಲಾ ಸೀತಾರಾಮನ್ ಅವರು 2024ರ ಜೂನ್‌ನಲ್ಲಿ ನಡೆದ ಸಾರ್ವತ್ರಿಕ ಚುನಾವಣೆಯ ನಂತರ, ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರ ಗಳ ಸಚಿವೆಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಭಾರ ತದ ಸುಮಾರು 4 ಟ್ರಿಲಿಯನ್ ಡಾಲರ್ (4 ಲಕ್ಷ ಕೋಟಿ ರೂ.) ಆರ್ಥಿಕತೆಯನ್ನು ನಿರ್ವಹಿಸುವ ಜವಾಬ್ದಾರಿಯನ್ನು ಇವರಿಗೆ ವಹಿಸಲಾಗಿದೆ. ಅರ್ಹವಾಗಿಯೇ ಅವರು ಪ್ರಭಾವಿ ಮಹಿಳೆಯ ಪಟ್ಟ ಗಿಟ್ಟಿದ್ದಾರೆ.

**ರೋಷನಿ ನಾಡಾರ್ ಮಲ್ಹೋತ್ರಾ:** ಎಚ್‌ಸಿಎಲ್ ಕಾರ್ಪೊರೇಷನ್‌ನ ಸಿಇಒ ರೋಷನಿ ನಾಡಾರ್ ಮಲ್ಹೋತ್ರಾ ಪಟ್ಟಿಯಲ್ಲಿ 81ನೇ ಸ್ಥಾನದಲ್ಲಿದ್ದಾರೆ. ಕಳೆದ ವರ್ಷ ಅವರು 60ನೇ ಸ್ಥಾನದಲ್ಲಿದ್ದರು. ಮಲ್ಹೋತ್ರಾ, ಅವರು ಎಚ್‌ಸಿಎಲ್ ಸಂಸ್ಥಾಪಕ, ಕೈಗಾರಿಕೋದ್ಯಮಿ ಶಿವ ನಾಡಾರ್ ಅವರ ಪುತ್ರಿಯಾಗಿದ್ದು. ನಾಡಾರ್ ಸ್ಥಾಪಿಸಿದ ಸುಮಾರು 5.33 ಲಕ್ಷ ಕೋಟಿ ರೂ. ಉದ್ಯಮದ ವ್ಯವಹಾರಗಳನ್ನು ರೋಷನಿ ನೋಡಿಕೊಳ್ಳುತ್ತಿದ್ದಾರೆ.

**ಕಿರಣ್ ಮಜುಂದಾರ್-ಶಾ:** ಫೋರ್ಬ್ಸ್ ಮೋಸ್ಟ್ ಪವರ್‌ಫುಲ್ ವುಮೆನ್ ಪಟ್ಟಿಯಲ್ಲಿ ಬೆಂಗಳೂರಿನ ಬಯೋಕಾನ್ ಸಂಸ್ಥೆ ಮುಖ್ಯಸ್ಥೆ ಕಿರಣ್ ಮಜುಂದಾರ್ ಶಾ 82ನೇ ಸ್ಥಾನ ಪಡೆದಿದ್ದಾರೆ. 2024ರಲ್ಲಿ ಭಾರತದ ಶ್ರೀಮಂತ ವ್ಯಕ್ತಿಗಳಲ್ಲಿ 91ನೇ ಸ್ಥಾನವನ್ನು ಪಡೆದಿರುವ ಕಿರಣ್ ಮಜುಂದಾರ್-ಶಾ ಜೈವಿಕ ತಂತ್ರಜ್ಞಾನದಲ್ಲಿ ಟ್ರಯಲ್‌ಬ್ಲೇಜರ್ ಆಗಿ ಜನಪ್ರಿಯರಾಗಿದ್ದಾರೆ.

ಕಿರಣ್ ಮಜುಂದಾರ್ ಶಾ ಭಾರತದ ಸೆಲ್ಫ್ ಮೇಡ್ ಶ್ರೀಮಂತ ಮಹಿಳೆಯಾಗಿದ್ದಾರೆ ಎಂದು ಫೋರ್ಬ್ಸ್ ನಿಯತಕಾಲಿಕ ಬಣ್ಣಿಸಿದೆ. 1978ರಲ್ಲಿ ಬಯೋಫಾರ್ಮಾಸ್ಯುಟಿಕಲ್ ಸಂಸ್ಥೆಯ ಮೂಲಕ ಅವರು ಬಯೋಕಾನ್ ಅನ್ನು ಸ್ಥಾಪಿಸಿದ್ದಾರೆ.


ಯುರೋಪಿಯನ್ ಕಮಿಷನ್ ಮುಖ್ಯಸ್ಥೆ ಉರ್ಸುಲಾ ವ್ಯಾನ್ ಡೆರ್ ಲೇಯೆನ್ ಮತ್ತೊಮ್ಮೆ ವಿಶ್ವದ ಶಕ್ತಿಶಾಲಿ ಮಹಿಳೆಯರ ಪಟ್ಟಿಯಲ್ಲಿ ಅಗ್ರಸ್ಥಾನ ಪಡೆದಿದ್ದಾರೆ. ಯುರೋಪಿಯನ್ ಸೆಂಟ್ರಲ್ ಬ್ಯಾಂಕ್ ಮುಖ್ಯಸ್ಥೆ ಕ್ರಿಸ್ಟಿನಾ ಲಗಾರ್ಡೆ ಮತ್ತು ಇಟಲಿಯ ಪ್ರಧಾನಿ ಜಾರ್ಜಿಯಾ ಮೆಲೋನಿ ಕ್ರಮವಾಗಿ ಎರಡು ಮತ್ತು ಮೂರನೇ ಸ್ಥಾನದಲ್ಲಿದ್ದಾರೆ. ಬಿಲ್ ಗೇಟ್ಸ್ ಅವರ ಮಾಜಿ ಪತ್ನಿ ಮಿಲಿಂದಾ ಫ್ರೆಂಚ್ ಗೇಟ್ಸ್ 8ನೇ ಸ್ಥಾನದಲ್ಲಿದ್ದಾರೆ. ಅಮೆಜಾನ್ ಮುಖ್ಯಸ್ಥ ಜೆಫ್ ಬೆಜೋಸ್ ಅವರ ಮಾಜಿ ಪತ್ನಿ ಮೆಕೆಂಜಿ ಸ್ಕಾಟ್ 9 ನೇ ಸ್ಥಾನದಲ್ಲಿದ್ದಾರೆ. ಜನಪ್ರಿಯ ಪಾಪ್ ಗಾಯಕಿ ಟೇಲರ್ ಸ್ವಿಫ್ಟ್ 23ನೇ ಸ್ಥಾನ ಪಡೆದಿದ್ದಾರೆ.

### 32ನೇ ಸ್ಥಾನದಲ್ಲಿದ್ದ ನಿರ್ಮಲಾ

**ಫೋರ್ಬ್ಸ್ ಮೋಸ್ಟ್ ಪವರ್‌ಫುಲ್ ವುಮೆನ್-2024 ಪಟ್ಟಿ ಬಿಡುಗಡೆಯಾಗಿದ್ದು, ವಿಶ್ವದ 100 ಮಂದಿ ಅತ್ಯಂತ ಪ್ರಭಾವಿ ಮಹಿಳೆಯರನ್ನಾಗಿ ಗುರುತಿಸಲಾಗಿದೆ. ಈ ಪಟ್ಟಿಯಲ್ಲಿ ಮೂವರು ಭಾರತೀಯ ಮಹಿಳೆಯರು ಸ್ಥಾನ ಗಿಟ್ಟಿಸಿಕೊಂಡಿದ್ದು, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸತತ ಆರನೇ ಬಾರಿಗೆ ಪಟ್ಟಿಯಲ್ಲಿ ಕಾಣಿಸಿಕೊಂಡಿದ್ದಾರೆ. ಫೋರ್ಬ್ಸ್ ಟಾಪ್ 100 ಶಕ್ತಿಶಾಲಿ ಮಹಿಳೆಯರ ಪಟ್ಟಿಯಲ್ಲಿ ಕಳೆದ ವರ್ಷ 32ನೇ ಸ್ಥಾನದಲ್ಲಿದ್ದ ನಿರ್ಮಲಾ ಅವರು ಈ ವರ್ಷ 4 ಸ್ಥಾನ ಮೇಲೇರಿ 28ರಲ್ಲಿದ್ದಾರೆ.**

- **ಈ ಪಟ್ಟಿಯಲ್ಲಿ ಸ್ಥಾನ ಗಿಟ್ಟಿಸಿಕೊಂಡಿದ್ದಾರೆ ಮೂವರು ಭಾರತೀಯ ಮಹಿಳೆಯರು**
- **ಸತತ ಆರನೇ ಬಾರಿಗೆ ಪಟ್ಟಿಯಲ್ಲಿ ಕಾಣಿಸಿಕೊಂಡಿದ್ದಾರೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು**
- **ಫೋರ್ಬ್ಸ್ ಟಾಪ್ 100 ಶಕ್ತಿಶಾಲಿ ಮಹಿಳೆಯರ ಪಟ್ಟಿಯಲ್ಲಿ ಕಳೆದ ವರ್ಷ 32ನೇ ಸ್ಥಾನದಲ್ಲಿದ್ದ ನಿರ್ಮಲಾ ಸೀತಾರಾಮನ್**
- **ಈ ವರ್ಷ 4 ಸ್ಥಾನ ಮೇಲೇರಿ 28ರಲ್ಲಿದ್ದಾರೆ ನಿರ್ಮಲಾ, ಭಾರತದ ಮಟ್ಟಿಗೆ ಅವರ ನಂ.1 ಪವರ್‌ಫುಲ್ ಮಹಿಳೆ**

# ಓಪನ್ ಎಐ ಮಾಜಿ ಸಂಶೋಧಕ ಸುಚಿರ್ ಬಾಲಾ ಆತ್ಮಹತ್ಯೆ




**ವಾಷಿಂಗ್ಟನ್:** ಓಪನ್ ಎಐ ಮಾಜಿ ಸಂಶೋಧಕ ಸುಚಿರ್ ಬಾಲಾಜಿ ಅವರು ಆತಹತ್ಯೆ ಮಾಡಿಕೊಂಡಿರುವ ಪ್ರಕರಣ ತಡವಾಗಿ ವರದಿಯಾಗಿದೆ. ಕಳೆದ ನವೆಂಬರ್ 26 ರಂದು ಸ್ಯಾನ್ ಫ್ರಾನ್ಸಿಸ್ಕೊ ಅಪಾರ್ಟ್‌ಮೆಂಟ್‌ನಲ್ಲಿ ಥ್ಯಾಂಕ್ಸ್ ಗಿವಿಂಗ್ ದಿನದ ನಂತರ ಶವವಾಗಿ ಅವರು ಪತ್ತೆಯಾಗಿದ್ದಾರೆ. ಅಧಿಕಾರಿಗಳು ಸಾವನ್ನು ಸ್ಪಷ್ಟವಾಗಿ ಆತಹತ್ಯೆ ಎಂದು ತೀರ್ಪು ನೀಡಿದ್ದಾರೆ, ಆರಂಭಿಕ ತನಿಖೆಯು ಫೌಲ್ ಪ್ಲೇಯ ಯಾವುದೇ ಪುರಾವೆಗಳನ್ನು ತೋರಿಸುತ್ತಿಲ್ಲ ಎಂದು ತಿಳಿಸಿದ್ದಾರೆ.ಅಕ್ಟೋಬರ್‌ನಲ್ಲಿ 26 ವರ್ಷ ವಯಸ್ಸಿನ ಸಂಶೋಧಕರು ಓಪನ್ ಎಐ ಅನ್ನು ತೊರೆದಿದ್ದರು.

**ಸುಚಿರ್ ಬಾಲಾಜಿ ಯಾರು?:** ಸುಚಿರ್ ಬಾಲಾಜಿ ಅವರು ಬರ್ಕ್ಲಿಯ ಕ್ಯಾಲಿಫೋರ್ನಿಯಾ ವಿಶ್ವವಿದ್ಯಾಲಯದಿಂದ 2021 ರಲ್ಲಿ ಕಂಪ್ಯೂಟರ್ ಸೈನ್ಸ್ ನಲ್ಲಿ ಪದವಿ ಪಡೆದರು. ಬಾಲಾಜಿ ಪ್ರೋಗ್ರಾಮಿಂಗ್ ಸ್ಪರ್ಧೆಗಳಲ್ಲಿ ಉತ್ತಮ ಸಾಧನೆ ಮಾಡಿದರು, ಎಸಿಎಂ ಐಸಿಪಿಸಿ 2018 ವರ್ಲ್ಡ್ ಫೈನಲ್ಸ್ ನಲ್ಲಿ 31 ನೇ ಸ್ಥಾನವನ್ನು ಪಡೆದರು, 2017 ರ ಪೆಸಿಫಿಕ್ ವಾಯುವ್ಯ ಪ್ರಾದೇಶಿಕ ಮತ್ತು ಬರ್ಕ್ಲಿ ಪ್ರೋಗ್ರಾಮಿಂಗ್ ಸ್ಪರ್ಧೆಗಳಲ್ಲಿ ಮೊದಲ ಸ್ಥಾನವನ್ನು ಗೆದ್ದರು. ಅವರು ಕಾಗ್ಲೆ ಅವರ ಟಿಎಸ್‌ಎ ಪ್ರಾಯೋಜಿತ ಪ್ಯಾಸೆಂಜರ್ ಸ್ಕ್ರೀನಿಂಗ್ ಅಲ್ಗಾರಿದಮ್ ಚಾಲೆಂಜ್‌ನಲ್ಲಿ 7ನೇ ಸ್ಥಾನವನ್ನು ಗಳಿಸಿದರು, 100,000 ಬಹುಮಾನವನ್ನು ಗಳಿಸಿದರು. ಅವರ ಲಿಂಕ್.ಇನ್ ಪ್ರೊಫೈಲ್‌ನ ಪ್ರಕಾರ ಅವರು ಅಮೆರಿಕ ಓಪನ್ 2016 ರಾಷ್ಟ್ರೀಯ ಚಾಂಪಿಯನ್ ಮತ್ತು ಯುಸಾಕೋ ಫೈನಲಿಸ್ಟ್ ಆಗಿದ್ದರು.

26 ವರ್ಷ ವಯಸ್ಸಿನವರು ಕಂಪನಿಯ ಅಭ್ಯಾಸಗಳ ಬಹಿರಂಗ ವಿಮರ್ಶಕರಾಗುವ ಮೊದಲು ಚಾಟ್ ಜಿಪಿಟಿಯಲ್ಲಿ ಒಂದೂವರೆ ವರ್ಷ ಸೇರಿದಂತೆ ಓಪನ್ ಎಐನಲ್ಲಿ ನಾಲ್ಕು ವರ್ಷಗಳ ಕಾಲ ಕೆಲಸ ಮಾಡಿದರು. ನ್ಯೂಯಾರ್ಕ್ ಟೈಮ್ಸ್‌ನಲ್ಲಿ ಅಕ್ಟೋಬರ್ ಲೇಖನದಲ್ಲಿ, ಅವರು ಓಪನ್ ಎಐ ಹಕ್ಕುಸ್ವಾಮ್ಯ ಕಾನೂನುಗಳನ್ನು ಉಲ್ಲಂಘಿಸಿದೆ ಎಂದು ಆರೋಪಿಸಿದರು, ನಾನು ನಂಬಿದ್ದನ್ನು ನೀವು ನಂಬಿದರೆ, ನೀವು ಕಂಪನಿಯನ್ನು ತೊರೆಯಬೇಕಾಗುತ್ತದೆ ಎಂದು ಸಂಸ್ಥೆ ಎಚ್ಚರಿಕೆ ನೀಡಿದ ನಂತರ ಅವರು ಕೆಲಸ ಬಿಟ್ಟಿದ್ದರು.

# ಪವಾರ್ ಕುಟುಂಬ ಒಂದಾಗಬೇಕು: ಸುನಂದಾ



**ಭಾರತದ ಚುನಾವಣಾ ಆಯೋಗವು ನಂತರ ಅವರಿಗೆ ಪಕ್ಷದ ಹೆಸರು ಮತ್ತು ಗಡಿಯಾರ ಚಿಹ್ನೆಯನ್ನು ನೀಡಿತು, ಆದರೆ ಶರದ್ ಪವಾರ್ ಅವರ ಬಣವನ್ನು ಎಂದು ನಾಮಕರಣ ಮಾಡಲಾಯಿತು.**

**ಪುಣೆ:** ನ್ಯಾಶನಲಿಸ್ಟ್ ಕಾಂಗ್ರೆಸ್ ಪಕ್ಷದ (ಎಸ್‌ಪಿ) ಶಾಸಕ ರೋಹಿತ್ ಪವಾರ್ ಅವರ ತಾಯಿ ಸುನಂದಾ ಅವರು ಹಿರಿಯ ರಾಜಕಾರಣಿ ಶರದ್ ಪವಾರ್ ಮತ್ತು ಮಹಾರಾಷ್ಟ್ರ ಉಪ ಮುಖ್ಯಮಂತ್ರಿ ಅಜಿತ್ ಪವಾರ್ ನೇತತ್ವದ ಪಕ್ಷದ ಬಣಗಳು ಒಗ್ಗೂಡುವ ಅಗತ್ಯವಿದೆ ಎಂದಿದ್ದಾರೆ.

ವಿಧಾನಸಭಾ ಚುನಾವಣೆಯಲ್ಲಿ ಅಜಿತ್ ಪವಾರ್ ನೇತತ್ವದ ಆಡಳಿತಾರೂಢ ಎನ್‌ಸಿಪಿ ಮತ್ತು ಪ್ರತಿಪಕ್ಷ ಎನ್‌ಸಿಪಿ ಪರಸ್ಪರ ವಿರುದ್ಧ ದಿಕ್ಕಿನಲ್ಲಿ ಹೋರಾಡಿದ ನಂತ ಪ್ರತಿಸ್ಪರ್ಧಿ ಬಣಗಳು ಒಂದಾಗುವ ಅಗತ್ಯತೆಯ ಬಗ್ಗೆ ಮಾತನಾಡುವಾಗ ತಾನು ಮಹಾರಾಷ್ಟ್ರದ ಜನರು ಮತ್ತು ಪಕ್ಷದ ಕಾರ್ಯಕರ್ತರ ಭಾವನೆಗಳನ್ನು ಪ್ರತಿಧ್ವನಿಸುತ್ತಿದ್ದೇನೆ ಎಂದು ಸುನಂದಾ ಪವಾರ್ ಹೇಳಿದ್ದಾರೆ. ಒಗ್ಗಟ್ಟಿನ ಕುಟುಂಬವು ಒಂದು ಶಕ್ತಿ ಯಾಗಿದೆ ಎಂದು ಅವರು ಪ್ರತಿಪಾದಿಸಿದರು, ಪವಾರ್ ಮನೆಯ ತಲೆಮಾರುಗಳು ಈ ಎಲ್ಲಾ ವರ್ಷಗಳಲ್ಲಿ ದಪ್ಪ ಮತ್ತು ತೆಳ್ಳಗಿನ ಮೂಲಕ ಒಟ್ಟಿಗೆ ಇದ್ದವು.

ಅಜಿತ್ ಪವಾರ್, ಏಕನಾಥ್ ಶಿಂಧೆ ಸರ್ಕಾರಕ್ಕೆ ಸೇರ್ಪಡೆಗೊಂಡ ನಂತರ ಕಳೆದ ವರ್ಷ ಜುಲೈನಲ್ಲಿ ಎನ್‌ಸಿಪಿ ವಿಭಜನೆಯಾಯಿತು.

ಕುಟುಂಬದವರ ಈ ಒಗ್ಗಟ್ಟಿನ ಪ್ರದರ್ಶನದಲ್ಲಿ ತಾನು ರಾಜಕೀಯವಾಗಿ ಏನನ್ನೂ ನೋಡಿಲ್ಲ ಎಂದು ಪ್ರತಿಪಾದಿಸಿದ ಸುನಂದಾ ಪವಾರ್, ಪಕ್ಷದ ಕಾರ್ಯಕರ್ತರ ಭಾವನೆಗಳಿಗೆ ಸಂಬಂಧಿಸಿದಂತೆ, ಪಕ್ಷವು ಉಳಿಯುವ ಬದಲು ಒಗ್ಗಟ್ಟಾಗಿ ಇರಬೇಕು ಎಂದರು.

**ಅಂದಿನಿಂದ ಎರಡು ಬಣಗಳು ಕಟುವಾದ ಪ್ರತಿ ಸ್ಪರ್ಧಿಗಳಾಗಿವೆ, ಪರಸ್ಪರರ ವಿರುದ್ಧ ಕುಟುಕು ಹೇಳಿಕೆಗಳಿಂದ ಗುರುತಿಸಲ್ಪಟ್ಟಿವೆ ಮತ್ತು ಅರ್ಧ ಶತಮಾನಕ್ಕೂ ಹೆಚ್ಚು ಕಾಲ ಕುಟುಂಬದ ನೆಲವಾದ ಬಾರಾಮತಿಗೆ ಲೋಕಸಭೆ ಮತ್ತು ವಿಧಾನಸಭಾ ಚುನಾವಣೆಯಲ್ಲಿ ದ್ವಂದ್ವಗಳ ಉತ್ತುಂಗಕ್ಕೇರಿತು. ಸುದ್ದಿಗಾರರೊಂದಿಗೆ ಮಾತನಾಡಿದ ಸುನಂದಾ ಪವಾರ್, ಉಪ ಮುಖ್ಯಮಂತ್ರಿ ಅಜಿತ್, ಅವರ ಮಗ ಪಾರ್ಥ್ ಮತ್ತು ಅವರ ಮಗ ರೋಹಿತ್ ಅವರು 84 ನೇ ವರ್ಷಕ್ಕೆ ಕಾಲಿಟ್ಟಾಗ ಕೇಂದ್ರದ ಮಾಜಿ ಕಷಿ ಸಚಿವ ಶರದ್ ಪವಾರ್‌ಗೆ ಶುಭ ಹಾರೈಸಲು ಒಟ್ಟಿಗೆ ಬಂದಿದ್ದರು. ನವದೆಹಲಿಯ ಶರದ್ ಪವಾರ್ ಅವರ 6 ಜನಪಥ್ ನಿವಾಸದಲ್ಲಿ ಆಚರಣೆಗಳು ನಡೆದವು.**

# ದ.ಕೊರಿಯಾ ಅಧ್ಯಕ್ಷ ಯೋಲ್ ವಿರುದ್ಧ ವಾಗ್ದಂಡನೆ



**ಮಿಲಿಟರಿ ಆಡಳಿತ ಹೇರಿದ್ದಕ್ಕೆ ಕ್ರಮ**

**ಸೋಲ್:** ದಕ್ಷಿಣ ಕೊರಿಯಾ ಅಧ್ಯಕ್ಷ ಯೂನ್ ಸುಕ್ ಯೋಲ್ ಅವರು ದೇಶದ ಮೇಲೆ ಮಿಲಿಟರಿ ಆಡಳಿತವನ್ನು ಹೇರಿದ್ದಕ್ಕಾಗಿ, ಅವರ ವಾಗ್ದಂಡನೆ ಕೋರಿ ವಿರೋಧ ಪಕ್ಷಗಳು ರಾಷ್ಟ್ರೀಯ ಅಸೆಂಬ್ಲಿಯಲ್ಲಿ ಶನಿವಾರ ಮತ್ತೊಮ್ಮೆ ಗೊತ್ತುವಳಿ ಮಂಡಿಸಿವೆ. ಅಧ್ಯಕ್ಷರಿಗೆ ವಾಗ್ದಂಡನೆ ವಿಧಿಸಬೇಕೆಂಬ ಗೊತ್ತುವಳಿ ನಿರ್ಣಯವನ್ನು ವಿರೋಧ ಪಕ್ಷಗಳು ರಾಷ್ಟ್ರೀಯ ಅಸೆಂಬ್ಲಿಯಲ್ಲಿ ಮತಕ್ಕೆ ಹಾಕಿವೆ ಎಂದು ಮಾಧ್ಯಮಗಳು ವರದಿ ಮಾಡಿವೆ.

ಈಚೆಗೆ ಡೆಮಾಕ್ರಟಿಕ್ ಪಕ್ಷದ ನೇತೃತ್ವದಲ್ಲಿ 6 ವಿರೋಧ ಪಕ್ಷಗಳು ರಾಷ್ಟ್ರೀಯ ಅಸೆಂಬ್ಲಿಗೆ ಯೋಲ್ ವಿರುದ್ಧದ ಗೊತ್ತುವಳಿ ಕುರಿತು ನೋಟಿಸ್ ಸಲ್ಲಿಸಿದ್ದವು. ಇದಕ್ಕೂ ಮೊದಲು, ಯೋಲ್ ಅವರ ವಾಗ್ದಂಡನೆಗೆ ಆಗ್ರಹಿಸಿ ವಿರೋಧ ಪಕ್ಷಗಳು ಕಳೆದ ವಾರ ಮಂಡಿಸಿದ್ದ ಗೊತ್ತುವಳಿ ಮೂರನೇ ಎರಡರಷ್ಟು ಬಹುಮತ ಪಡೆಯಲು ವಿಫಲವಾಗಿತ್ತು. ದೇಶದ ವಿರೋಧ ಪಕ್ಷಗಳು ಸಂಸತ್ ಅನ್ನು ತನ್ನ ಹಿಡಿತಕ್ಕೆ ತೆಗೆದುಕೊಳ್ಳಲು ಯತ್ನಿಸುತ್ತಿವೆ ಎಂದು ಆರೋಪಿಸಿ, ದಕ್ಷಿಣ ಕೊರಿಯಾದ ಅಧ್ಯಕ್ಷ ಯೂನ್ ಸುಕ್ ಯೋಲ್ ಅವರು ಡಿ.3ರಂದು ತುರ್ತು ಸೇನಾ ಆಡಳಿತವನ್ನು ಜಾರಿಗೊಳಿಸಿ ದ್ದರು. ವಿರೋಧ ಪಕ್ಷಗಳು, ಸಾರ್ವಜನಿಕ ರಿಂದ ವ್ಯಾಪಕ ವಿರೋಧ ವ್ಯಕ್ತವಾಗಿದ್ದರಿಂದ, ಡಿ.4ರಂದು ತಮ್ಮ ನಿರ್ಧಾರವನ್ನು ವಾಪಸು ಪಡೆದಿದ್ದರು.

### ಅಧ್ಯಕ್ಷರ ಸಮರ್ಥನೆ

**ದೇಶದಲ್ಲಿ ತಾವು ಮಿಲಿಟರಿ ಆಡಳಿತ ಹೇರಿದ್ದ ಕ್ರಮವನ್ನು ದಕ್ಷಿಣ ಕೊರಿಯಾ ಅಧ್ಯಕ್ಷ ಯೂನ್ ಸುಕ್ ಯೋಲ್ ಗುರುವಾರ ಸಮರ್ಥಿಸಿಕೊಂಡಿದ್ದಾರೆ. ಮಿಲಿಟರಿ ಆಡಳಿತ ಜಾರಿ ಕ್ರಮವು, ಸರ್ಕಾರದ ಆಡಳಿತದ ಭಾಗವೇ ಆಗಿದೆ ಎಂದು ಹೇಳಿದ್ದಾರೆ. ತಮ್ಮ ವಾಗ್ದಂಡನೆಗೆ ಕೋರಿ ವಿಪಕ್ಷಗಳು ರಾಷ್ಟ್ರೀಯ ಅಸೆಂಬ್ಲಿಯಲ್ಲಿ ಮತ್ತೊಮ್ಮೆ ಗೊತ್ತುವಳಿ ಮಂಡಿಸಲು ಸಿದ್ಧತೆ ನಡೆಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಕೊನೆವರೆಗೂ ಹೋರಾಡುವುದಾಗಿ ಹೇಳಿದ್ದಾರೆ.**

# ಮಸೀದಿಯ ಇಮಾಮ್‌ಗೆ 2 ಲಕ್ಷ ರೂ.ದಂಡ



**ಸಂಭಾಲ:** ಧ್ವನಿವರ್ಧಕ ಮಿತಿ ಮೀರಿದ ಧ್ವನಿಯಲ್ಲಿ ಬಳಸಿದ್ದಕ್ಕೆ ಉತ್ತರ ಪ್ರದೇಶದ ಸಂಭಾಲ್ ಜಿಲ್ಲೆಯಲ್ಲಿ ಮಸೀದಿಯೊಂದರ ಇಮಾಮ್‌ಗೆ 2 ಲಕ್ಷ ರೂಪಾಯಿ ದಂಡ ವಿಧಿಸಲಾಗಿದೆ ಎಂದು ಅಧಿಕಾರಿ ಯೊಬ್ಬರು ಈ ಮಾಹಿತಿ ನೀಡಿದ್ದಾರೆ. ಉತ್ತರ ಪ್ರದೇಶದ ಸಂಭಾಲ್‌ನಲ್ಲಿ ನಡೆದ ಹಿಂಸಾಚಾರದ ನಂತರ ಹೆಚ್ಚಿನ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಲಾಗಿದೆ. ಯಾವುದೇ ಕಾರಣಕ್ಕೂ ವಾತಾವರಣ ಹದಗೆಡದಂತೆ ಪೊಲೀಸರು ನಿಗಾ ಇಟ್ಟಿದ್ದಾರೆ. ಈ ಸಂಬಂಧ ಶುಕ್ರವಾರ ಪೊಲೀಸರು ಕ್ರಮ ಕೈಗೊಂಡು ಮಸೀದಿಯೊಂದರ ಇಮಾಮ್‌ಗೆ 2 ಲಕ್ಷ ರೂ.ವಿಧಿಸಲಾಗಿದೆ.

ಸಂಭಾಲ್‌ನ ಬಂದೋಬಸ್ತ್ ಗೆ ನಿಯೋಜಿಸಲಾದ ಪೊಲೀಸರಿಗೆ ಶುಕ್ರವಾರ ಮಸೀದಿಯಿಂದ ಇದ್ದಕ್ಕಿದ್ದಂತೆ ಧ್ವನಿವರ್ಧಕದ ಕಿವಿ ಗಡಚಿಕ್ಕುವ ಶಬ್ದವನ್ನು ಕೇಳಿ ಬಂದಿದೆ. ಧ್ವನಿ ಕೇಳಿದ ತಕ್ಷಣ ಪೊಲೀಸ್ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ದೊಂದಿಗೆ ಮಸೀದಿಯತ್ತ ಧಾವಿಸಿದ್ದಾರೆ.

ಇಲ್ಲಿ ಜೋರಾಗಿ ಧ್ವನಿವರ್ಧಕ ಬಳಸಿದ್ದಕ್ಕೆ ಮಸೀದಿಯ ಇಮಾಮ್ ನನ್ನು ಪೊಲೀಸರು ಬಂಧಿಸಿದ್ದಾರೆ. ಶಾಂತಿ ಭಂಗದ ಆರೋಪದಡಿ ಇಮಾಮ್‌ಗೆ 2 ಲಕ್ಷ ರೂಪಾಯಿ ದಂಡ ವಿಧಿಸಲಾಗಿದೆ ಎಂದು ಸಂಭಾಲ್ ಸಬ್- ವಿಭಾಗೀಯ ಮ್ಯಾಜಿಸ್ಟ್ರೇಟ್ ವಂದನಾ ಮಿಶ್ರಾ ತಿಳಿಸಿದ್ದಾರೆ. ನಂತರ 2 ಲಕ್ಷ ರೂಪಾಯಿ ಬಾಂಡ್ ಮೇಲೆ ಇಮಾಮ್ ಅವರನ್ನು ಬಿಡುಗಡೆ ಮಾಡಲಾಗಿದೆ ಎನ್ನಲಾಗಿದೆ.ಜಾಮೀನು ಪಡೆದಿದ್ದರೂ ಸೆಕ್ಷನ್ 151 ರ ಅಡಿಯಲ್ಲಿ ಇಮಾಮ್ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ.

ಆದೇಶದ ಪ್ರಕಾರ, ಮುಂದಿನ ಆರು ತಿಂಗಳವರೆಗೆ ಇಂತಹ ನಡವಳಿಕೆಯಿಂದ ದೂರವಿರಲು ಇಮಾಮ್‌ಗೆ ಸೂಚಿಸಲಾಗಿದೆ.

# ಇಂದು ಫಡ್ನವಿಸ್ ಸಂಪುಟ ವಿಸ್ತರಣೆ

**ಮುಂಬೈ:** ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ನೇತೃತ್ವದ ಮಹಾಯುತಿ ಸರ್ಕಾರದ ಸಚಿವ ಸಂಪುಟ ವಿಸ್ತರಣೆ ಇಂದು ನಡೆಯಲಿದೆ. ನೂತನ ಸಚಿವರ ಪ್ರಮಾಣವಚನ ಸ್ವೀಕಾರ ಸಮಾರಂಭ ನಾಗ್ಪುರದಲ್ಲಿ ನಡೆಯಲಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

40 ಮಂದಿ ನೂತನ ಸಚಿವರು ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂದು ಬಿಜೆಪಿಯ ಹಿರಿಯ ಮುಖಂಡರೊಬ್ಬರು ತಿಳಿಸಿದ್ದಾರೆ.

ಮಂತ್ರಿ ಮಂಡಲದಲ್ಲಿ ಮುಖ್ಯಮಂತ್ರಿ ಒಳಗೊಂಡಂತೆ ಗರಿಷ್ಠ 43 ಸಚಿವ ಸಂಪುಟ ರಚಿಸಲು ಅವಕಾಶವಿದ್ದು, ಬಿಜೆಪಿಯಿಂದ 20 ರಿಂದ 21 ಶಿವಸೇನೆ (ಶಿಂಧೆ), 11 ರಿಂದ 12 ಎನ್‌ಸಿಪಿ (ಅಜಿತ್ ಪವಾರ್), 9 ರಿಂದ 10 ಸಚಿವ ಸ್ಥಾನಗಳು ದೊರೆಯುವ ನಿರೀಕ್ಷೆ ಇದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಡಿ. 5 ರಂದು ಸಾಕಷ್ಟು ಹಗ್ಗ ಜಗ್ಗಾಟದ ನಂತರ ಮುಂಬೈನಲ್ಲಿ ದೇವೇಂದ್ರ ಫಡ್ನವಿಸ್ ಮುಖ್ಯಮಂತ್ರಿಯಾಗಿ, ಶಿವಸೇನೆ ನಾಯಕ ಏಕ್‌ನಾಥ್‌ಶಿಂಧೆ ಮತ್ತು ಎನ್‌ಸಿಪಿ ಧುರೀಣ ಅಜಿತ್‌ಪವಾರ್ ಉಪಮುಖ್ಯಮಂತ್ರಿಗಳಾಗಿ ಪ್ರಮಾಣವಚನ ಸ್ವೀಕರಿಸಿದ್ದರು.288 ಸದಸ್ಯ ಬಲದ ಮಹಾರಾಷ್ಟ್ರ ವಿಧಾನಸಭೆಗೆ ನಡೆದ ಚುನಾವಣೆಯಲ್ಲಿ ಮಹಾಯುತಿ ಮೈತ್ರಿಕೂಟ 230 ಕ್ಷೇತ್ರಗಳಲ್ಲಿ ಜಯಭೇರಿ ಬಾರಿಸಿತ್ತು.

ಬಿಜೆಪಿ 132, ಶಿವಸೇನೆ 57 ಮತ್ತು ಎನ್‌ಸಿಪಿ 41 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿತ್ತು. ಸೋಮವಾರದಿಂದ ಮಹಾರಾಷ್ಟ್ರದ 2ನೇ ರಾಜಧಾನಿ ಚಳಿಗಾಲದ ಅಧಿವೇಶನ ಆರಂಭವಾಗಲಿದ್ದು, ನೂತನ ಶಾಸಕರು ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಒಂದು ವಾರಗಳ ಕಾಲ ಅಧಿವೇಶನ ನಡೆಯಲಿದೆ.

# ವಾಯುಪಡೆ ಗೌರವ ಕಾಪಾಡಲು ಏರ್ ಚೀಫ್ ಮಾರ್ಷಲ್ ಕರೆ



**ಹೈದರಾಬಾದ್:** ವಾಯುಪಡೆಯ ನೀತಿ, ಸಂಪ್ರದಾಯ ಮತ್ತು ಗೌರವವನ್ನು ಎತ್ತಿ ಹಿಡಿಯುವಂತೆ ಏರ್ ಚೀಫ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್ ಇಂದಿಲ್ಲಿ ಕರೆ ನೀಡಿದರು. ಇಲ್ಲಿಗೆ ಸಮೀಪದ ಏರ್ ಫೋರ್ಸ್ ಅಕಾಡೆಮಿಯಿಂದ ಪದವಿ ಪಡೆದ ಕೆಡೆಟ್‌ಗಳನ್ನು ಭಾರತೀಯ ವಾಯುಪಡೆಯ ಐಎಎಫ್‌ನ ಸಂಯೋಜಿತ ಪಾಸಿಂಗ್ ಔಟ್ ಪರೇಡ್‌ನಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಆಕಾಶದಲ್ಲಾಗಲಿ, ನೆಲದ ಮೇಲಾಗಲಿ, ಅಧಿಕಾರಿಗಳು ಕಾರ್ಯಾಚರಣೆಯಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತಾರೆ, ಅವರು ತಮ ಪಾತ್ರವನ್ನು ಅರ್ಥ ಮಾಡಿಕೊಳ್ಳುತ್ತಾರೆ ಎಂದು ಖಚಿತಪಡಿಸಿಕೊಳ್ಳಬೇಕು. ಹೊಸದಾಗಿ ನೇಮಕಗೊಂಡ ಅಧಿಕಾರಿಗಳನ್ನು ಭವಿಷ್ಯದ ನಾಯಕರು ಮತ್ತು ಕಮಾಂಡರ್ಗಳಾಗಿರಲು ಉತ್ತೇಜಿಸಿದ ಅವರು, ಜವಾಬ್ದಾರಿಯು ಅವರ ಜೀವನದಲ್ಲಿ ಪ್ರೇರಕ ಅಂಶವಾಗಿರಬೇಕು ಎಂದು ಕರೆ ನೀಡಿದರು. ನೀವು ಭವಿಷ್ಯದ ನಾಯಕರು, ಕಮಾಂಡ್‌ಗಳು, ವಾಯು ಯೋಧರು ಮಾತ್ರವಲ್ಲ, ನೀವು ಭಾರತೀಯ ವಾಯುಪಡೆಯ ಭವಿಷ್ಯವನ್ನು ಪಟ್ಟಿ ಮಾಡುತ್ತೀರಿ. ಈ ದೊಡ್ಡ ಜವಾಬ್ದಾರಿಯು ನಿಮನ್ನು ಸುಸ್ತಾಗದಂತೆ ನೋಡಿಕೊಳ್ಳಿ, ಆದೆ ನಿಮ ಜೀವನದಲ್ಲಿ ಪ್ರೇರಕ ಅಂಶವಾಗಿರಲಿ ಎಂದು ಅವರು ಹೇಳಿದರು. ಯುವ ಅಧಿಕಾರಿಗಳು ಭಾರತೀಯ ವಾಯುಪಡೆಯ ಮೂಲ ಮೌಲ್ಯಗಳು, ಧ್ಯೇಯ, ಸಮಗ್ರತೆ, ಉತ್ಕೃಷ್ಟತೆಯನ್ನು ತಮ ಮಾರ್ಗದರ್ಶಕ ದೀಪಗಳಾಗಿ ಬಿಟ್ಟರೆ, ಅವರು ತಮ ವತ್ತಿಜೀವನದ ಮೂಲಕ ನ್ಯಾವಿಗೇಟ್ ಮಾಡುವಾಗ, ಅವರು ಎಂದಿಗೂ ತಪ್ಪಾಗುವುದಿಲ್ಲ ಎಂದು ಅವರು ಹೇಳಿದರು.

ಅವರ ಸೇವಾ ಜೀವನದ ಪ್ರತಿಯೊಂದು ಅಂಶವು, ವತ್ತಿಪರ ಕಲಿಕೆಯಿಂದ ನಿಯೋಜಿತ ಕಾರ್ಯಗಳು ಮತ್ತು ಕಾರ್ಯಗಳನ್ನು ನಿರ್ವಹಿಸುವುದು, ನಾಯಕತ್ವವನ್ನು ಬೆಳೆಸುವುದು, ನಂತರ ತಮ ಕಿರಿಯರಿಗೆ ನಿಲುವಂಗಿಯನ್ನು ರವಾನಿಸುವುದು, ಭಾರತೀಯ ವಾಯುಪಡೆಯು ಮುಂದೆ ಪ್ರಯೋಗಗಳು, ಪ್ರಕ್ಷುಬ್ಧತೆಗಳನ್ನು ಹೇಗೆ ನ್ಯಾವಿಗೇಟ್ ಮಾಡುತ್ತದೆ ಎಂಬುದರ ಮೇಲೆ ಪರಿಣಾಮ ಬೀರುತ್ತದೆ ಎಂದು ಅವರು ಹೇಳಿದರು.

# ಭಾರತದ ಸಾಂಸ್ಕೃತಿಕ, ಆಧ್ಯಾತ್ಮಕ ಪ್ರಯಾಣ ಎಂದು ಬಣ್ಣಿಸಿದ ಮೋದಿ

## ಉತ್ತರ ಪ್ರದೇಶದ ಪ್ರಯಾಗರಾಜ್‌ನಲ್ಲಿ ನಡೆಯಲಿರುವ ಮಹಾಕುಂಭಕ್ಕೆ ಪೂರ್ವಭಾವಿಯಾಗಿ ಕಾಮಗಾರಿಗಳಿಗೆ ಚಾಲನೆ



**2,500 ಸಾವಿರ ಕೋಟಿ ರೂ. ಮೀಸಲು**

**ಲಖನೌ:** ಮುಂದಿನ ವರ್ಷದ ಜನವರಿ ಮಧ್ಯ ಭಾಗದಲ್ಲಿ ಉತ್ತರ ಪ್ರದೇಶದ ಗಂಗಾ ನದಿ ತಟದ ಪ್ರಯಾಗರಾಜ್ ನಲ್ಲಿ ಆರಂಭವಾಗಲಿರುವ ಮಹಾ ಕುಂಭಮೇಳಕ್ಕೆ ಪೂರ್ವಭಾವಿಯಾಗಿ, ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಪ್ರಧಾನಿ ಮೋದಿ ಚಾಲನೆ ನೀಡಿದರು.

ಹನ್ನೆರಡು ವರ್ಷಕ್ಕೊಮ್ಮೆ ನಡೆ ಯುವ ಮಹಾಕುಂಭ ಮೇಳ ಜನವರಿ 13ರಂದು ಆರಂಭವಾಗಿ, ಸತತ 45 ದಿನಗಳ ಕಾಲ ನಡೆಯಲಿದೆ. ಈ ಆಧ್ಯಾತ್ಮಿಕ ಕಾರ್ಯಕ್ರಮದಲ್ಲಿ ಸುಮಾರು 45 ಕೋಟಿ ಭಕ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ಉತ್ತರ ಪ್ರದೇಶ ಸರ್ಕಾರ ಹೇಳಿದೆ. ತ್ರಿವೇಣಿ ಸಂಗಮದಲ್ಲಿ (ಗಂಗಾ, ಯಮುನಾ, ಸರಸ್ವತಿ) ನಡೆಯಲಿರುವ ಈ ಕಾರ್ಯಕ್ರಮವು ದೇಶದ ಸಾಂಸ್ಕೃತಿಕ ಮತ್ತು ಆಧ್ಯಾತ್ಮಕದ ಸುಂದರ ಪಯಣ ಎಂದು ಮೋದಿ ಬಣ್ಣಿಸಿದ್ದಾರೆ. ಈ ಕಾರ್ಯಕ್ರಮದಲ್ಲಿ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡಾ ಭಾಗವಹಿಸಿದ್ದರು. ನಮ್ಮ ದೇಶದ ಸಂಸ್ಕೃತಿಯನ್ನು ಉತ್ತುಂಗಕ್ಕೇರಿಸುವ ಕಾರ್ಯಕ್ರಮ ಇದಾಗಿದ್ದು, ದೇಶದ ನಾಗರೀಕರು ಸಾಧ್ಯವಾದರೆ ಈ ಆಧ್ಯಾತ್ಮಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಿ. ಸಾವಿರಾರು ವರ್ಷಗಳ ಇತಿಹಾಸ ಇರುವ ಈ ಕುಂಭಮೇಳವು, ನಮ್ಮಲ್ಲಿನ ಏಕತೆಯನ್ನು ಸಾರುತ್ತದೆ ಎಂದು ಪ್ರಧಾನಿ ಮೋದಿ ಈ ಸಂದ ರ್ಭದಲ್ಲಿ ಹೇಳಿದರು.

ಧರ್ಮ, ಅನುಭವ ಮತ್ತು ಆಧ್ಯಾತ್ಮಕತೆಯನ್ನು ಒಂದೇ ವೇದಿಕೆಯಲ್ಲಿ ಬೆಸೆಯುವ ಕಾರ್ಯಕ್ರಮ ಇದಾಗಿದೆ. ಈ ಮಹಾಮೇಳವು, ಏಕ್ ಭಾರತ್ ಶ್ರೇಷ್ಠ ಭಾರತ್ ಎನ್ನುವುದನ್ನು ಸಾರುತ್ತದೆ. ಈ ಮೇಳದ ಇನ್ನೊಂದು ವಿಶೇಷತೆ ಏನಂದರೆ, ದೇಶದ ಮುಂದಿರುವ ಸವಾಲನ್ನು ಚರ್ಚಿಸಲಾಗುತ್ತದೆ. ಜೊತೆಗೆ, ನಮ್ಮ ಸಂತರು ನಮಗೆ ಇನ್ನಷ್ಟು ಶಕ್ತಿಯನ್ನು ತುಂಬಲಿದ್ದಾರೆ ಎಂದು ಮೋದಿ ಅಭಿಪ್ರಾಯಪಟ್ಟರು.

ಕುಂಭಮೇಳ ಹೊಸ ಚಾರಿತ್ರವನ್ನು ಬರೆಯಲಿದೆ, ಈ ಮಹಾಮೇಳಕ್ಕಾಗಿಯೇ ಹೊಸ ನಗರವನ್ನು ಸ್ಥಾಪಿಸಲಾಗಿದೆ. ಆ ವೇಳೆಯ 45 ದಿನಗಳಲ್ಲಿ ಕೋ ಟ್ಯಾಂತರ ಭಕ್ತರು ಇಲ್ಲಿ ನೆಲೆಸಲಿದ್ದಾರೆ. ಇದು ಪ್ರವಾ ಸೋದ್ಯಮವನ್ನು ಉತ್ತೇಜಿಸುವ ಮೂಲಕ, ಆರ್ಥಿಕ ಚಟುವಟಿಕೆಗಳೂ ಗರಿಗೆದರಲಿದೆ ಎಂದು ಮೋದಿ ಹೇಳಿದರು. ಈ ವೇಳೆ, ನೈರ್ಮಲ್ಯಕ್ಕೆ ಹೆಚ್ಚಿನ ಪ್ರಾಶಸ್ತ್ಯವನ್ನು ಕೊಡಲಾಗುವುದು. ಶುಚಿತ್ವ ಎಷ್ಟು ಮುಖ್ಯ ಎನ್ನುವುದನ್ನು ಜನರಿಗೆ ಮನವರಿಕೆ ಮಾಡಲು ಗಂಗಾದೂತ್, ಗಂಗಾ ಪ್ರಹಾರಿ, ಗಂಗಾ ಮಿತ್ರ ಎನ್ನುವ ತಂಡವನ್ನು ಆಯೋಜಕರು ನೇಮಿಸಲಿದ್ದಾರೆ ಎಂದು ಮೋದಿ ಹೇಳಿದರು. ಜನವರಿ 13ರಂದು, ಪುಶ್ ಪೂರ್ಣಿಮಾ ಸ್ನಾನದ ಮೂಲಕ ಈ ಐತಿಹಾಸಿಕ ಕಾರ್ಯಕ್ರಮ ಆರಂಭವಾಗಲಿದೆ. ಈ ಧಾರ್ಮಿಕ ಕಾರ್ಯಕ್ರಮಕ್ಕಾಗಿ, 2,500 ಸಾವಿರ ಕೋಟಿ ರೂಪಾಯಿಯನ್ನು ಮೀಸಲಿಡಲಾಗಿದೆ ಎಂದು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹೇಳಿದ್ದಾರೆ.

### ಪ್ರಮುಖ ದಿನಾಂಕಗಳು

- **ಜನವರಿ 13: ಪುಶ್ ಪೂರ್ಣಿಮಾ ಸ್ನಾನ, ಮಹಾಕುಂಭ ಮೇಳ ಆರಂಭ**
- **ಜನವರಿ 14: ಮಕರ ಸಂಕ್ರಾಂತಿ ಪುಣ್ಯಸ್ನಾನ**
- **ಜನವರಿ 29: ಮೌನಿ ಅಮಾವಾಸ್ಯ ಪುಣ್ಯಸ್ನಾನ, ಪಿಂಡ ಪ್ರಧಾನ**
- **ಫೆಬ್ರವರಿ 12: ಮಾಘ ಪೂರ್ಣಿಮಾ ಪುಣ್ಯಸ್ನಾನ**
- **ಫೆಬ್ರವರಿ 26: ಮಹಾ ಶಿವರಾತ್ರಿ ಪುಣ್ಯಸ್ನಾನ**

**ಹನ್ನೆರಡು ವರ್ಷಕ್ಕೊಮ್ಮೆ ನಡೆಯುವ ಮಹಾಕುಂಭ ಮೇಳ ಜನವರಿ 13ರಂದು ಆರಂಭವಾಗಿ, ಸತತ 45 ದಿನಗಳ ಕಾಲ ನಡೆಯಲಿದೆ. ದೇಶದ ಸಂಸ್ಕೃತಿಯನ್ನು ಉತ್ತುಂಗಕ್ಕೇರಿಸುವ ಕಾರ್ಯಕ್ರಮ ಇದಾಗಿದ್ದು, ದೇಶದ ನಾಗರೀಕರು ಸಾಧ್ಯವಾದರೆ ಈ ಆಧ್ಯಾತ್ಮಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಿ**
**-ನರೇಂದ್ರ ಮೋದಿ, ಪ್ರಧಾನಮಂತ್ರಿ**

- **45 ದಿನಗಳ ಕಾಲ ನಡೆಯಲಿರುವ ವಿಶ್ವದ ಅತಿದೊಡ್ಡ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಒಂದಾದ ಮಹಾ ಕುಂಭಮೇಳ**
- **ನಮ್ಮ ದೇಶದ ಸಂಸ್ಕೃತಿಯನ್ನು ಉತ್ತುಂಗಕ್ಕೆ ಏರಿಸುವ ಕಾರ್ಯಕ್ರಮ ಇದೆಂದು ಬಣ್ಣಿಸಿದ ಪ್ರಧಾನಿ ಮೋದಿ**

# ಮಿನಿ ನ್ಯೂಸ್

## ಫ್ರಾನ್ಸ್‌ ಪ್ರಧಾನಿಯಾಗಿ ಫ್ರಾಂಕೊಯಿಸ್ ಬೈರೂ ನೇಮಕ

**ಪ್ಯಾರಿಸ್:** ದೇಶದಲ್ಲಿನ ರಾಜಕೀಯ ಬಿಕ್ಕಟ್ಟನ್ನು ಪರಿಹರಿಸುವ ಪ್ರಯತ್ನವಾಗಿ ಫ್ರಾನ್ಸ್ ನ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರು ಫ್ರಾಂಕೊಯಿಸ್ ಬೈರೂ ಅವರನ್ನು ಪ್ರಧಾನಿಯನ್ನಾಗಿ ನೇಮಿಸಿದ್ದಾರೆ. ದಶಕದಿಂದಲೂ ಫ್ರೆಂಚ್ ರಾಜಕಾರಣದಲ್ಲಿ ಖ್ಯಾತರಾಗಿರುವ ಬೈರೂ (73), ಮ್ಯಾಕ್ರನ್ ಅವರ ಮೈತ್ರಿಕೂಟದಲ್ಲಿ ನಿರ್ಣಾಯಕ ಪಾತ್ರವಹಿಸಿದ್ದಾರೆ. ಬೈರೂ ನೂತನ ಸರ್ಕಾರ ರಚಿಸಲಿದ್ದಾರೆ ಎಂದು ಮ್ಯಾಕ್ರನ್ ಅವರ ಕಚೇರಿಯು ಪ್ರಕಟಣೆಯಲ್ಲಿ ತಿಳಿಸಿದೆ. ನೂತನ ಸಚಿವರ ಆಯ್ಕೆಗೂ ಮುನ್ನ, ಬೈರೂ ವಿವಿಧ ಪಕ್ಷಗಳ ಮುಖಂಡರೊಂದಿಗೆ ಮಾತುಕತೆ ನಡೆಸುವ ನಿರೀಕ್ಷೆಯಿದೆ. ರಾಷ್ಟ್ರೀಯ ಅಸೆಂಬ್ಲಿಯಲ್ಲಿ ಬಜೆಟ್ ವಿವಾದ ಉಲ್ಬಣಗೊಂಡಿದ್ದರಿಂದ, ಹಿಂದಿನ ಪ್ರಧಾನಿ ಮೈಕೆಲ್ ಬರ್ನಿಯರ್ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆಯಾಗಿತ್ತು. ಅವರು ಕಳೆದ ವಾರ ರಾಜೀನಾಮೆ ನೀಡಿದ್ದರು.

## ತನಿಖೆಗೆ ಅಡ್ಡಿ: ಕ್ಯಾಸಿನೊ ಸಿಬ್ಬಂದಿ ವಿರುದ್ಧ ಪ್ರಕರಣ ದಾಖಲು

**ಪಣಜಿ:** ಕಡಲಾಚೆಯ ಕ್ಯಾಸಿನೊ ನಡೆಸುತ್ತಿರುವ ಹಡಗಿನ ಮೇಲೆ ಶೋಧ ಕಾರ್ಯಾಚರಣೆ ನಡೆಸುತ್ತಿದ್ದ ಇಡಿ ಅಧಿಕಾರಿಗಳ ಮೇಲೆ ಹಲ್ಲೆ ನಡೆಸಲಾಗಿದೆ. ಈ ಸಂಬಂಧ ಕ್ಯಾಸಿನೊ ಸಿಬ್ಬಂದಿ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ.

ಕ್ಯಾಸಿನೊ ನಿರ್ದೇಶಕ, ಇಬ್ಬರು ಹಿರಿಯ ಸಿಬ್ಬಂದಿ ಮತ್ತು ಇತರರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಜಾರಿ ನಿರ್ದೇಶನಾಲಯದ ಅಧಿಕಾರಿಗಳು ತಮ್ಮ ಕರ್ತವ್ಯ ನಿರ್ವಹಿಸುವಾಗ ಹಲ್ಲೆ ನಡೆಸಿ ಅಡ್ಡಿಪಡಿಸಿದ್ದಾರೆ. ಅಕ್ರಮ ಬಂಧನದಲ್ಲಿಟ್ಟು ಬೆದರಿಕೆ ಹಾಕಿದ್ದಾರೆ. ಶೋಧದ ವೇಳೆ ಅಕ್ರಮ ಹಣ ವರ್ಗಾವಣೆಗೆ ಸಂಬಂಧಿಸಿದಂತೆ ಸಂಗ್ರಹಿಸಿದ್ದ ಕೆಲವು ಪ್ರಮುಖ ದಾಖಲೆಗಳನ್ನು ಆರೋಪಿಗಳು ನಾಶಪಡಿಸಿದ್ದಾರೆ ಎಂದು ಆರೋಪಿಸಲಾಗಿದೆ. ಕ್ಯಾಸಿನೊಗೆ ತೆರಳಿದ್ದ ಜಾರಿ ನಿರ್ದೇಶನಾಲಯದ ಸಹಾಯಕ ನಿರ್ದೇಶಕ ಪಾಲೂರಿ ಚನ್ನಕೇಶವ ರಾವ್ ಮತ್ತು ತಂಡ ಕೊಠಡಿಯೊಂದರಲ್ಲಿ ಕೂಡಿ ಹಾಕಿದ್ದರು. ಅಲ್ಲಿ ಅವರ ಮೇಲೆ ದಾಳಿ ಮಾಡಲಾಯಿತು. ದೂರಿನ ಪ್ರಕಾರ, ಕ್ಯಾಸಿನೊ ನಿರ್ದೇಶಕ ಅಶೋಕ್ ವಾಡಿಯಾ, ಸಿಬ್ಬಂದಿ ಗೋಪಾಲ್ ರಾಮನಾಥ್ ನಾಯಕ್, ಆರತಿ ರಾಜಾ ಮತ್ತು ಇತರರ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ಪಣಜಿ ಪೊಲೀಸರು ತಿಳಿಸಿದ್ದಾರೆ.

## ರಾಜ್‌ಕಪೂರ್ ಜನ್ಮ ಶತಮಾನೋತ್ಸವ ಪ್ರಧಾನಿ ಮೋದಿ ಶ್ರದ್ಧಾಂಜಲಿ



**ನವದೆಹಲಿ:** ಪ್ರಸಿದ್ಧ ನಟ, ನಿರ್ದೇಶಕ ರಾಜ್ ಕಪೂರ್ ಜನ್ಮ ಶತಮಾನೋತ್ಸವದ ಸಂದರ್ಭದಲ್ಲಿ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಶ್ರದ್ಧಾಂಜಲಿ ಸಲ್ಲಿಸಿದ್ದು, ಅವರನ್ನು ಶಾಶ್ವತ ಶೋಮ್ಯಾನ್ ಎಂದು ಶ್ಲಾಘಿಸಿದ್ದಾರೆ. ರಾಜ್ ಕಪೂರ್ ಅವರು ದೂರದೃಷ್ಟಿ ಉಳ್ಳ ಸಿನಿಮಾ ನಿರ್ಮಾಪಕ, ನಟ ಆಗಿದ್ದರು. ಅವರೊಬ್ಬ ಶಾಶ್ವತ ಶೋಮ್ಯಾನ್. ಅವರ ಪ್ರತಿಭೆಯು ತಲೆಮಾರುಗಳನ್ನು ಮೀರಿ, ಭಾರತೀಯ ಮತ್ತು ಜಾಗತಿಕ ಚಿತ್ರರಂಗದಲ್ಲಿ ಅಳಿಸಲಾಗದ ಛಾಪು ಮೂಡಿಸಿದೆ' ಎಂದು 'ಎಕ್ಸ್'ನಲ್ಲಿ ಸಂದೇಶ ಹಂಚಿಕೊಂಡಿದ್ದಾರೆ.

ಕಪೂರ್ ಕುಟುಂಬದ ಸದಸ್ಯರನ್ನು ಪ್ರಧಾನಿ ಇತ್ತೀಚೆಗೆ ಭೇಟಿಯಾಗಿ, ಅವರನ್ನು ಸ್ಮರಿಸಿದ್ದರು. ರಾಜ್ ಕಪೂರ್ 1924ರ ಡಿ.14 ರಂದು ಈಗಿನ ಪಾಕಿಸ್ತಾನದಲ್ಲಿರುವ ಪ್ರದೇಶದಲ್ಲಿ ಅಂದಿನ ಜನಪ್ರಿಯ ನಟ ಪೃಥ್ವಿರಾಜ್ ಕಪೂರ್ ಅವರ ಪುತ್ರನಾಗಿ ಜನಿಸಿದ್ದರು. ದುಡಿಯುವ ವರ್ಗ ಹಾಗೂ ಸಾಮಾನ್ಯ ವ್ಯಕ್ತಿಯ ಚಿತ್ರಣವನ್ನು ತೆರೆಮೇಲೆ ತಂದ ಅವರ ಕಲೆ ದೇಶ, ವಿದೇಶಗಳಲ್ಲಿ ಜನರ ಮನಗೆದ್ದಿದೆ

## ಪ್ರಯಾಣಿಕ ಅಸ್ವಸ್ಥ: ಇಂಡಿಗೋ ವಿಮಾನ ತುರ್ತು ಭೂಸ್ಪರ್ಶ

**ಕರಾಚಿ:** ದೆಹಲಿಯಿಂದ ಸೌದಿ ಅರೇಬಿಯಾದ ಜೆದ್ದಾಕ್ಕೆ ತೆರಳುತ್ತಿದ್ದ ಇಂಡಿಗೋ ವಿಮಾನವು (6ಇ 63), ಪ್ರಯಾಣಿಕರೊಬ್ಬರು ಅಸ್ವಸ್ಥಗೊಂಡ ಕಾರಣ ಕರಾಚಿಯ ಜಿನ್ನಾ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಶನಿವಾರ ತುರ್ತು ಭೂಸ್ಪರ್ಶ ಮಾಡಿದೆ. ದೆಹಲಿಯಿಂದ ಹೊರಟಿದ್ದ ವಿಮಾನವು ಪಾಕಿಸ್ತಾನದ ವಾಯುಪ್ರದೇಶದಲ್ಲಿ ಹಾರಾಟ ನಡೆಸುತ್ತಿದ್ದ ವೇಳೆ, ಭಾರತ ಮೂಲದ 55 ವರ್ಷದ ವ್ಯಕ್ತಿಯೊಬ್ಬರು ತೀವ್ರ ಅಸ್ವಸ್ಥಗೊಂಡರು. ಹೀಗಾಗಿ, ವಿಮಾನವು ತುರ್ತು ಭೂಸ್ಪರ್ಶ ಮಾಡಿದೆ ಎಂದು ಪಾಕಿಸ್ತಾನದ ನಾಗರಿಕ ವಿಮಾನಯಾನ ಪ್ರಾಧಿಕಾರದ (ಸಿಎಎ) ಮೂಲಗಳು ತಿಳಿಸಿವೆ. ಪ್ರಯಾಣಿಕನಿಗೆ ಪ್ರಾಥಮಿಕ ಚಿಕಿತ್ಸೆ ನೀಡಿ ದ ನಂತರ, ವಿಮಾನವು ದೆಹಲಿಗೆ ಮರಳಿತು. ಹೆಚ್ಚಿನ ಚಿಕಿತ್ಸೆಗೆ ವ್ಯವಸ್ಥೆಯಾದ ನಂತರ, ವಿಮಾನವು ಪುನಃ ದೆಹಲಿಯಿಂದ ಜೆದ್ದಾಕ್ಕೆ ಹೊರಟಿತು' ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ.

## ನಕಲಿ ಇ.ಡಿ ದಾಳಿ: ಮಾಸ್ಟರ್ ಮೈಂಡ್ ಎಎಪಿ ಕಾರ್ಯಕರ್ತ

**ಭುಜ್:** ಕಛ್ ಜಿಲ್ಲೆಯಲ್ಲಿ ಡಿಸೆಂಬರ್ ಆರಂಭದಲ್ಲಿ ಜಾರಿ ನಿರ್ದೇಶನಾಲಯದ (ಇ.ಡಿ) ಹೆಸರಿನಲ್ಲಿ ನಡೆದ ನಕಲಿ ದಾಳಿಯ ರೂವಾರಿ ಆಮ್ ಆದ್ಮ ಪಕ್ಷದ (ಎಎಪಿ) ಕಾರ್ಯಕರ್ತ ಎಂದು ಗುಜರಾತ್ ಪೊಲೀಸರು ಶನಿವಾರ ಆರೋಪಿಸಿದ್ದಾರೆ. ಅಲ್ಲದೇ, ಅಕ್ರಮವಾಗಿ ಗಳಿಸಿದ ಹಣವನ್ನು ಪಕ್ಷದ ಚಟುವಟಿಕೆಗಳಿಗೆ ನೀಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಡಿ. 2ರಂದು ರಾಧಿಕಾ ಜ್ಯುವೆಲರ್ಸ್ ಮೇಲೆ ನಕಲಿ ಇ.ಡಿ ದಾಳಿ ನಡೆಸಿ ಸುಮಾರು 22.25 ಲಕ್ಷ ಮೌಲ್ಯದ ಚಿನ್ನಾಭರಣಗಳನ್ನು ಕಳವು ಮಾಡಿದ ಆರೋಪದಡಿ ಅಬ್ದುಲ್ ಸತ್ತಾರ್ ಮಜೋತಿ ಸೇರಿದಂತೆ 12 ಜನರನ್ನು ಪೊಲೀಸರು ಡಿ. 4ರಂದು ಬಂಧಿಸಿದ್ದಾರೆ. ಮಜೋತಿ ಅವರ ಬ್ಯಾಂಕ್ ವಿವರಗಳನ್ನು ತನಿಖೆಗೆ ಒಳಪಡಿಸಲಾಗುತ್ತಿದ್ದು, ಅಗತ್ಯವಿದ್ದರೆ ತನಿಖಾಧಿಕಾರಿಗಳು ಪಕ್ಷದ ಇತರ ಕಾರ್ಯಕರ್ತರನ್ನೂ ವಿಚಾರಣೆಗೆ ಕರೆಯಲಿದ್ದಾರೆ ಎಂದು ಅವರು ಹೇಳಿದರು. ಪೊಲೀಸರ ಆರೋಪವನ್ನು ನಿರಾಕರಿಸಿರುವ ಗುಜರಾತ್ ಎಎಪಿ ಮುಖಂಡ ಗೋಪಾಲ್ ಇಟಾಲಿಯಾ, 'ಪೊಲೀಸರು ಆಡಳಿತಾರೂಢ ಬಿಜೆಪಿಯ ನಿಯಂತ್ರಣದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರು ಸುಳ್ಳು ಆರೋಪಗಳನ್ನು ಮಾಡುತ್ತಿದ್ದು, ಸರಿಯಾದ ವಿವರಗಳೊಂದಿಗೆ ಅವರ ಹೇಳಿಕೆ ಸಾಬೀತುಪಡಿಸಬೇಕು' ಎಂದು ಪ್ರತಿಕ್ರಿಯಿಸಿದ್ದಾರೆ.



# ವೆಂಕಟೇಶಾಯ ನಮಃ ಚಿತ್ರಕ್ಕೆ ಮುಹೂರ್ತ

ಭರ್ಜರಿ ಚೇತನ್ ಕಥೆ ಬರೆದಿದ್ದು, ಶಿವಶಂಕರ್ ಛಾಯಾಗ್ರಾಹಣ ಹಾಗೂ ಶ್ರೀನಿವಾಸ ಮೂರ್ತಿ ಸಂಗೀತ ಸಂಯೋಜಿಸುತ್ತಿದ್ದಾರೆ. 45 ದಿನಗಳ ಕಾಲ ಶೂಟಿಂಗ್ ನಡೆಯಲಿದ್ದು, ಹರೀಶ್ ರಾಜ್ ಅವರೊಂದಿಗೆ ಉಮಾಶ್ರೀ, ತಬಲಾ ನಾಣಿ ಮತ್ತಿತರ ಕಲಾವಿದರು ನಟಿಸಲಿದ್ದಾರೆ. ಹರೀಶ್ ರಾಜ್ ನಿರ್ದೇಶಿಸಿ, ನಟಿಸುತ್ತಿರುವ ಹೊಸ ಚಿತ್ರ ವೆಂಕಟೇಶಾಯ ನಮ:ದ ಮುಹೂರ್ತ ನೆರವೇರಿದೆ. ಇದು ರೋಮ್ಯಾಂಟಿಕ್, ಹಾಸ್ಯ ಪ್ರಧಾನವಾಗಿದ್ದು, ಪ್ರೀತಿ ಪ್ರೇಮದ ಜೊತೆಗೆ ಕೌಟುಂಬಿಕ ಅಂಶಗಳನ್ನು ಹೊಂದಿದೆ. ಜನಾರ್ಧನ್ ಚಿತ್ರಕ್ಕೆ ಬಂಡವಾಳ ಹೂಡಿದ್ದು, ಅವರು ಕೂಡಾ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ನಟನೆ ಜೊತೆಗೆ ಹರೀಶ್ ರಾಜ್ ಜೊತೆಗೆ ನಿರ್ದೇಶನದ ಜವಾಬ್ದಾರಿಯನ್ನು ಹಂಚಿಕೊಂಡಿದ್ದಾರೆ.

ಕಿರುತೆರೆ ಹಾಗೂ ಸಿನಿಮಾಗಳಿಂದ ಚಿರಪರಿಚಿತವಾಗಿರುವ ಹರೀಶ್ ರಾಜ್, ಹಲವು ವರ್ಷಗಳ ನಟನೆ ಬಳಿಕ ಇದೀಗ ನಿರ್ದೇಶಕ ಕ್ಯಾಪ್ ಧರಿಸಿದ್ದಾರೆ. ತಮ್ಮ ನಿರ್ದೇಶನದ ವೆಂಕಟೇಶಾಯ ನಮ: ಚಿತ್ರದಲ್ಲಿ ರೊಮ್ಯಾಂಟಿಕ್ ಜೊತೆಗೆ ಕೌಟುಂಬಿಕ ಭಾವಾನಾತ್ಮಕ ಅಂಶಗಳಿದ್ದು, ಪ್ರೇಕ್ಷಕರ ಹೃದಯ ಮಟ್ಟುತ್ತದೆ ಎಂದು ಹರೀಶ್ ರಾಜ್ ಹೇಳಿದ್ದಾರೆ. ಭರ್ಜರಿ ಚೇತನ್ ಕಥೆ ಬರೆದಿದ್ದು, ಶಿವಶಂಕರ್ ಛಾಯಾಗ್ರಾಹಣ ಹಾಗೂ ಶ್ರೀನಿವಾಸ ಮೂರ್ತಿ ಸಂಗೀತ ಸಂಯೋಜಿಸುತ್ತಿದ್ದಾರೆ. 45 ದಿನಗಳ ಕಾಲ ಶೂಟಿಂಗ್ ನಡೆಯಲಿದ್ದು, ಹರೀಶ್ ರಾಜ್ ಅವರೊಂದಿಗೆ ಉಮಾಶ್ರೀ, ತಬಲಾ ನಾಣಿ ಮತ್ತಿತರ ಕಲಾವಿದರು ನಟಿಸಲಿದ್ದಾರೆ.



# ಫಾದರ್ ಚಿತ್ರೀಕರಣ ಪೂರ್ಣ

ರಾಜ್ ಮೋಹನ್ ನಿರ್ದೇಶನದ ಡಾರ್ಲಿಂಗ್ ಕೃಷ್ಣ ಮತ್ತು ಪ್ರಕಾಶ್ ರಾಜ್ ಅಭಿನಯದ ಫಾದರ್ ಚಿತ್ರದ ಚಿತ್ರೀಕರಣ ಪೂರ್ಣಗೊಂಡಿದ್ದು, ಚಿತ್ರದ ಮೋಷನ್ ಪೋಸ್ಟರ್ ಅನ್ನು ನಟ ಕಿಚ್ಚ ಸುದೀಪ್ ಅವರು ಬಿಡುಗಡೆ ಮಾಡಿದರು.

ಕೆಲವು ದಿನಗಳ ಹಿಂದೂ ಆರ್ ಸಿ ಸ್ಟುಡಿಯೋಸ್ ಎಂಬ ಬೃಹತ್ ನಿರ್ಮಾಣ ಸಂಸ್ಥೆಯನ್ನು ಆರಂಭಿಸಿದ ಆರ್ ಚಂದ್ರು, ಮೊದಲ ಬಾರಿಗೆ ಐದು ಸಿನಿಮಾಗಳ ನಿರ್ಮಾಣಕ್ಕೆ ಚಾಲನೆ ನೀಡಿದ್ದರು. ಆ ಪೈಕಿ ಆರ್ ಸಿ ಸ್ಟುಡಿಯೋಸ್ ನ ಮೊದಲ ಚಿತ್ರವಾಗಿ ''ಫಾದರ್'' ನಿರ್ಮಾಣವಾಗುತ್ತಿದೆ. ಈ ಚಿತ್ರದ ಮೋಷನ್ ಪೋಸ್ಟರ್ ನ್ನು ಸುದೀಪ್ ಅವರು ಬಿಡುಗಡೆ ಮಾಡಿದ್ದಾರೆ.

ಈ ಸಂದರ್ಭದಲ್ಲಿ ರಾಜಕೀಯ ಮುಖಂಡರಾದ ಹೆಚ್ ಎಂ ರೇವಣ್ಣ, ನಟ ಅನೂಪ್ ರೇವಣ್ಣ, ಆನಂದ್ ಆಡಿಯೋ ಶ್ಯಾಮ್ ಸೇರಿದಂತೆ ಅನೇಕ ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು. ಅಪ್ಪಮಗನ ಕುರಿತಾದ ಈ ಚಿತ್ರದ ಪ್ರಮುಖಪಾತ್ರದಲ್ಲಿ ಪ್ರಕಾಶ್ ರೈ ಹಾಗೂ ಡಾರ್ಲಿಂಗ್ ಕೃಷ್ಣ ಅಭಿನಯಿಸಿದ್ದಾರೆ.

ಮೋಷನ್ ಪೋಸ್ಟರ್ ಬಿಡುಗಡೆ ಮಾಡಿದ ನಂತರ ಸುದೀಪ್ ಅವರು, ಚಿತ್ರತಂಡಕ್ಕೆ ಶುಭ ಕೋರಿದರು. ಫಾದರ್ ಚಿತ್ರದ ಮೋಷನ್ ಪೋಸ್ಟರ್ ಚೆನ್ನಾಗಿದೆ. ಆರ್ ಚಂದ್ರು ನನ್ನ ಸ್ನೇಹಿತ. ಅವರೊಟ್ಟಿಗೆ ಸದಾ ನಾನಿರುತ್ತೇನೆ. ಚಿತ್ರದಲ್ಲಿ ನಟಿಸಿರುವ ಕೃಷ್ಣ, ಅಮೃತ ಎಲ್ಲಾ ಕಲಾವಿದರಿಗೆ ಹಾಗೂ ತಂತ್ರಜ್ಞರಿಗೆ ಒಳ್ಳೆಯದಾಗಲಿ ಎಂದು ಹೇಳಿದರು.

ಬಳಿಕ ಮೋಷನ್ ಪೋಸ್ಟರ್ ಬಿಡುಗಡೆ ಮಾಡಿಕೊಟ್ಟ ಸುದೀಪ್ ಅವರಿಗೆ ಧನ್ಯವಾದ ತಿಳಿಸುತ್ತಾ ಮಾತು ಆರಂಭಿಸಿದ ನಿರ್ಮಾಪಕ ಆರ್ ಚಂದ್ರು ಅವರು, 22 ವರ್ಷಗಳ ಹಿಂದೆ 100 ರೂಪಾಯಿ ಇಟ್ಟುಕೊಂಡು ಬೆಂಗಳೂರಿಗೆ ಬಂದ ನಾನು, ಈಗ ಕಬ್ಜ ದಂತಹ 100 ಕೋಟಿ ಸಿನಿಮಾ ಮಾಡಿದ್ದೇನೆ. ಇದಕ್ಕೆ ಕಾರಣರಾದ ಪ್ರತಿಯೊಬ್ಬರಿಗೂ ನಾನು ಆಬಾರಿ. ಈ ಹಿಂದೆ ಸಿದ್ದೇಶ್ವರ ಎಂಟರ್ ಪ್ರೈಸಸ್ ಬ್ಯಾನರ್ ನಲ್ಲಿ 12 ಚಿತ್ರಗಳನ್ನು ನಿರ್ಮಿಸಿದ್ದ ನಾನು, ಈಗ ಆರ್ ಸಿ ಸ್ಟುಡಿಯೋಸ್ ಎಂಬ ಬೃಹತ್ ನಿರ್ಮಾಣ ಸಂಸ್ಥೆಯನ್ನು ಆರಂಭಿಸಿದ್ದೇನೆ. ಈ ಸಂಸ್ಥೆಯ ಮೊದಲ ಚಿತ್ರ ಫಾದರ್. ಅಪ್ಪ - ಮಗನ ಬಂಧವ್ಯದ ಕುರಿತಾದ ಸಿನಿಮಾವಿದು.

# ನಿರ್ದೇಶಕನಾಗಿ ಗೆಲ್ತಾರಾ ಸ್ಟಾರ್ ನಟ

ದಕ್ಷಿಣ ಭಾರತದ ಸ್ಟಾರ್ ನಟರಲ್ಲಿ ಒಬ್ಬರಾದ ಮೋಹನ್ ಲಾಲ್ ತಮ್ಮ 40 ವರ್ಷದ ವೃತ್ತಿ ಜೀವನದಲ್ಲಿ 360ಕ್ಕೂ ಹೆಚ್ಚು ಸಿನಿಮಾಗಳಲ್ಲಿ ನಟಿಸಿದ್ದಾರೆ. ನಿರ್ಮಾಪಕರಾಗಿಯೂ ಯಶಸ್ಸು ಗಳಿಸಿದ್ದಾರೆ.

ಆದರೆ ಇದೇ ಮೊದಲ ಬಾರಿಗೆ ನಿರ್ದೇಶನಕ್ಕೆ ಕೈ ಹಾಕಿದ್ದು, ಸಿನಿಮಾದ ಟ್ರೈಲರ್ ಸಖತ್ ಸದ್ದು ಮಾಡುತ್ತಿದೆ.

ದಕ್ಷಿಣ ಭಾರತದ ಸೂಪರ್ ಸ್ಟಾರ್‌ಗಳಲ್ಲಿ ಒಬ್ಬರು ಮೋಹನ್ ಲಾಲ್, ಅಭಿನಯದಲ್ಲಿ, ಕತೆಗಳನ್ನು ಆಯ್ದುಕೊಳ್ಳುವ ವಿಧಾನ ದಲ್ಲಿ ಮೋಹನ್ ಲಾಲ್ ಅವರನ್ನು ಮೀರಿಸುವ ಸೂಪರ್ ಸ್ಟಾರ್‌ಗಳು ಕಡಿಮೆ. ನಟನಾಗಿ, ನಿರ್ಮಾಪಕನಾಗಿ ದೊಡ್ಡ ಗೆಲುವು ಕಂಡಿರುವ ಮೋಹನ್ ಲಾಲ್ ಇದೇ ಮೊದಲ ಬಾರಿಗೆ ನಿರ್ದೇಶನಕ್ಕೆ ಇಳಿದಿದ್ದಾರೆ.

ಅದೂ 'ಬರೋಜ್' ಹೆಸರಿನ ಬಹಳ ಭಿನ್ನವಾದ ಸಿನಿಮಾದ ಮೂಲಕ. ಮಾಯಾ ಲೋಕ ಮತ್ತು ವಾಸ್ತವದ ಕತೆಯನ್ನು ಒಳಗೊಂಡ ಭಿನ್ನವಾದ ಕತೆಯುಳ್ಳ ಸಿನಿಮಾ ಇದು. 40 ವರ್ಷಗಳ ವೃತ್ತಿಜೀವನದಲ್ಲಿ 360ಕ್ಕೂ ಹೆಚ್ಚು ಸಿನಿಮಾಗಳಲ್ಲಿ ಮೋಹನ್ ಲಾಲ್ ನಟಿಸಿದ್ದಾರೆ. ಹಲವು ರಾಜ್ಯ ಪ್ರಶಸ್ತಿ, ರಾಷ್ಟ್ರಪ್ರಶಸ್ತಿಗಳನ್ನು ಗಳಿಸಿದ್ದಾರೆ. ನಟನೆ ಮೂಲಕ ದೇಶದ ಗಮನ ಸೆಳೆದಿರುವ ಮೋಹನ್ ಲಾಲ್ ಈಗ 'ಬರೋಜ್' ಸಿನಿಮಾ ಮೂಲಕ ನಿರ್ದೇಶಕನ ಕ್ಯಾಪ್ ಧರಿಸಿದ್ದಾರೆ. ಸಿನಿಮಾದ ಟ್ರೈಲರ್ ಕೆಲ ದಿನದ ಹಿಂದಷ್ಟೆ ಬಿಡುಗಡೆ ಆಗಿದ್ದು, ಅಮಿತಾಬ್ ಬಚ್ಚನ್ ಆದಿಯಾಗಿ ಹಲವು ಭಾಷೆಗಳ ತಾರೆಯರು ಟ್ರೇಲರ್ ಅನ್ನು ಮೆಚ್ಚಿಕೊಂಡಿದ್ದಾರೆ.

'ಬರೋಜ್' ನಿರ್ದೇಶಕರಾಗಿ ಮೋಹನ್ ಲಾಲ್‌ಗೆ ಮೊದಲ ಸಿನಿಮಾ. ನಿರ್ದೇಶನದ ಜೊತೆಗೆ ಸಿನಿಮಾದ ನಾಯಕನ ಪಾತ್ರದಲ್ಲಿಯೂ ಮೋಹನ್ ಲಾಲ್ ನಟಿಸಿದ್ದಾರೆ. 'ಬರೋಜ್' ಎಂಬುದು ನಿಧಿ ಕಾಯುವ ಭೂತದ ಹೆಸರು. ಶತಮಾನಗಳಿಂದಲೂ ವಾಸ್ಕೋಡಿಗಾಮನ ಅರಮನೆಯಲ್ಲಿ ನಿಧಿ ಕಾಯುವ ಭೂತಕ್ಕೂ ಒಂದು ಕತೆ ಇದೆ. ಈ ಭೂತದ ಕರ್ತವ್ಯ ನಿಷ್ಠೆಗೆ ಸವಾಲೊಂದು ಎದುರಾಗಿದೆ. ಸಿನಿಮಾದ ಟ್ರೈಲರ್ ನೋಡಿದರೆ ಇದೊಂದು ಬಹಳ ಥ್ರಿಲ್ಲರ್ ಅಂಶಗಳುಳ್ಳ ಜೊತೆಗೆ ಅದ್ಭುತ ವಿಎಫ್‌ಎಕ್ಸ್ ಸಹ ಇರುವ ಸಿನಿಮಾ ಎಂಬುದು ಖಾತ್ರಿ ಆಗುತ್ತಿದೆ. 'ಬರೋಜ್' ಸಿನಿಮಾ ಪ್ಯಾನ್ ಇಂಡಿಯಾ ಮಟ್ಟದಲ್ಲಿ ತೆರೆಗೆ ಬರಲಿದೆ. ಸಿನಿಮಾ 3ಡಿ ಅವತರಣಿಕೆಯೂ ಬಿಡುಗಡೆ ಆಗಲಿದೆ. ಸಿನಿಮಾದಲ್ಲಿನ ಭೂತಕಾಲ, ವರ್ತಮಾನದ ಕಾಲದ ಕತೆ ಪ್ರೇಕ್ಷಕನನ್ನು ಹಿಡಿದಿಡುತ್ತದೆ ಎಂಬ ನಂಬಿಕೆ ಮೋಹನ್ ಲಾಲ್ ಅವರದ್ದು.



# ಖ್ಯಾತ ಕಿರುತೆರೆ ನಟಿ ಅಮೃತಾ ಆಸ್ಪತ್ರೆಗೆ ದಾಖಲು



ಖ್ಯಾತ ಕಿರುತೆರೆ ನಟಿ ಅಮೃತಾ ರಾಮಮೂರ್ತಿ ಅವರು ಆಸ್ಪತ್ರೆಗೆ ದಾಖಲಾಗಿದ್ದಾರೆ. ಅವರು ಸ್ಪರ್ಶ್ ಹಾಸ್ಪಿಟಲ್‌ನಲ್ಲಿ ದಾಖಲಾಗಿದ್ದು ನಟಿ ತಮ್ಮ ಆರೋಗ್ಯದ ಬಗ್ಗೆ ಅಪ್ಡೇಟ್ ಕೊಟ್ಟಿದ್ದಾರೆ. ಕುಲವಧು, ಕೆಂಡಸಂಪಿಗೆ, ಕಸ್ತೂರಿ ನಿವಾಸ ಧಾರಾವಾಹಿಗಳಲ್ಲಿ ಕಾಣಿಸಿಕೊಂಡಿದ್ದ ಅಮೃತಾ ಅವರು ಸದ್ಯ ಆಸೆ ಧಾರವಾಹಿಯಲ್ಲಿ ನಟಿಸುತ್ತಿದ್ದಾರೆ.

ಅವರು ಆಸ್ಪತ್ರೆಗೆ ದಾಖಲಾಗಿದ್ದು ಸ್ಪರ್ಶ್ ಹಾಸ್ಪಿಟಲ್ ಟ್ಯಾಗ್ ಮಾಡಿದ್ದಾರೆ. ನಟಿ ತಮ್ಮ ಇನ್‌ಸ್ಟಾಗ್ರಾಮ್ ಸ್ಟೋರಿಯಲ್ಲಿ ಫೋಟೋ ಹಾಗೂ ವಿಡಿಯೋ ಶೇರ್ ಮಾಡಿ ಆರೋಗ್ಯದ ಕುರಿತು ಅಪ್ಡೇಟ್ ಕೊಟ್ಟಿದ್ದಾರೆ. ನಮಸ್ಕಾರ ಎಲ್ಲಾರಿಗೂ. ಸುಮಾರು ಜನ ಮೆಸೇಜ್ ಹಾಕುತ್ತಲೇ ಇದ್ದೀರಿ, ಏನಾಗಿದೆ ಏನಾಯ್ತು ಅಂತ. ನಂಗೆ ಸಿವಿಯರ್ ಯುಟಿಐ ಆಗಿದೆ. ಯುರಿನರಿ ಟ್ರ್ಯಾಕ್ ಇನ್‌ಫೆಕ್ಷನ್ ಆಗಿದೆ. ಎಕ್ಸ್‌ಟ್ರೀಮ್ ಲೆವೆಲ್‌ಗೆ ಹೋಗಿದೆ ಇನ್‌ಫೆಕ್ಷನ್. ನಾನು ನಿನ್ನೆ ಅಡ್ಮಿಟ್ ಆಗಿದ್ದೆ. ಹೆಣ್ಮಕ್ಳೇ ಹುಷಾರಾಗಿರಿ. ಪಬ್ಲಿಕ್ ಟಾಯ್ಲೆಟ್ ಯೂಸ್ ಮಾಡುವಾಗ ತುಂಬಾ ಹುಷಾರಾಗಿರಿ. ನಮ್ಗೆ ವಿಧಿಯಿಲ್ಲ. ಶೂಟಿಂಗ್ ಸೆಟ್‌ನಲ್ಲಿ ರೆಸ್ಟ್‌ರೂಮ್ ಯೂಸ್ ಮಾಡ್ಬೇಕಾಗುತ್ತದೆ. ನಮ್ಮ ಶೂಟಿಂಗ್‌ನವರು ಕ್ಯಾರವಾನ್ ತರಿಸಿದ್ರು. ಹೈಜೀನ್ ನೋಡಿಕೊಳ್ಳಬೇಕಾದ್ದು ತುಂಬಾ ಮುಖ್ಯ. ನಾನು ಈಗ ಹುಷಾರಾಗುತ್ತಿದ್ದೇನೆ ಎಂದಿದ ಸೆಡ ಧಾರಾವಾಹಿಯಲ್ಲಿ ಪ್ರಮುಖ ಪಾತ್ರದಲ್ಲಿ ನಟಿಸಿ ಪ್ರೇಕ್ಷಕರನ್ನು ರಂಜಿಸಿದವರು ಅಮೃತಾ. ಸದ್ಯ ಕೆಂಡ ಸಂಪಿಗೆ ಧಾರಾವಾಹಿಯ ಸಾಧನಾ ಮೂಲಕ ಮತ್ತಷ್ಟು ಫೇಮ್ ಪಡೆದುಕೊಂಡರು. ಈ ಧಾರಾವಾಹಿಯಲ್ಲಿ ಅಮೃತಾ ವಿಲನ್ ಪಾತ್ರದಲ್ಲಿ ಉತ್ತಮವಾಗಿ ಅಭಿನಯ ಮಾಡಿ ಸೈ ಎನಿಸಿಕೊಂಡಿದ್ದಾರೆ. ಅಮೃತಾ ಕೇವಲ ನಟನೆ ಮಾತ್ರವಲ್ಲ ಯುಟ್ಯೂಬ್ ಚಾನಲ್ ಕೂಡ ನಡೆಸುತ್ತಿದ್ದಾರೆ.

# ಈ ಸಲ ಕನ್ಫ್ಯೂಸ್ ಮಾಡಲ್ಲ




ರಿಯಲ್ ಸ್ಟಾರ್' ಉಪೇಂದ್ರ ನಿರ್ದೇಶಿಸಿ, ನಟಿಸಿರುವ 'ಯುಐ' ಸಿನಿಮಾ ಇದೇ ಡಿಸೆಂಬರ್ 20ರಂದು ಜಗತ್ತಿನಾದ್ಯಂತ ತೆರೆ ಕಾಣುತ್ತಿದೆ. ಈಗಾಗಲೇ 'ವಾರ್ನರ್' ಝಲಕ್ ಮೂಲಕ ಕುತೂಹಲ ಮೂಡಿಸಿರುವ ಈ ಚಿತ್ರಕ್ಕೆ ಸೆನ್ಸಾರ್ ಮಂಡಳಿ 'ಯುಎ' ಪ್ರಮಾಣಪತ್ರ ನೀಡಿದೆ. ಕನ್ನಡ, ತಮಿಳು, ತೆಲುಗು, ಹಿಂದಿ, ಮಲಯಾಳಂ ಭಾಷೆಗಳಲ್ಲಿ ಬಿಡುಗಡೆ ಆಗಲಿರುವ ಈ ಸಿನಿಮಾದಲ್ಲಿ ಉಪೇಂದ್ರ ಯೂನಿವರ್ಸಲ್ ವಿಷಯ ಹೇಳಲಿದ್ದಾರಂತೆ

ಚಿತ್ರೋದ್ಯಮದ ಇತ್ತೀಚಿನ ಟ್ರೆಂಡ್ ಆಗಿರುವ ಸೀಕ್ವೆಲ್ ಪರ್ವ 'ಯುಐ' ಚಿತ್ರಕ್ಕೂ ಅನ್ವಯಿಸುತ್ತದೆಯೇ ಎಂಬ ಪ್ರಶ್ನೆಗೆ ಚಿತ್ರತಂಡ, ಈ ಸಿನಿಮಾ ಕುತೂಹಲಕಾರಿ ಹಂತದಲ್ಲಿ ಮುಕ್ತಾಯವಾಗುತ್ತದೆ. ಆದರೆ ಪಾರ್ಟ್ 1 ಮತ್ತು 2 ಬರುತ್ತದೆಯೇ ಎನ್ನುವುದನ್ನು ಚಿತ್ರಮಂದಿರದಲ್ಲಿಯೇ ನೋಡಬೇಕು. ಪ್ರೇಕ್ಷಕರು ಬುದ್ಧಿವಂತರು ಎಂದು ಈಗಾಗಲೇ ಸಾಬೀತು ಮಾಡಿದ್ದಾರೆ. ಅವರೆಲ್ಲ ಚಿತ್ರಮಂದಿರದಲ್ಲಿ 'ಯುಐ' ನೋಡಿದ ಮೇಲೆ ಈ ಬಗ್ಗೆ ಅವರೇ ಮಾತನಾಡುತ್ತಾರೆ ಎಂದು ಉತ್ತರಿಸಿದೆ.

# ರೀಝು ಸಿಡಿಲಬ್ಬರ ಪಾಕ್ ಧೂಳೀಪಟ

ಸೆಂಚುರಿಯನ್‌ನ ಸೂಪರ್ ಸ್ಪೋರ್ಟ್ ಪಾರ್ಕ್ ಮೈದಾನದಲ್ಲಿ ನಡೆದ ಪಾಕಿಸ್ತಾನ್ ವಿರುದ್ಧದ 2ನೇ ಟಿ20 ಪಂದ್ಯದಲ್ಲಿ ಸೌತ್ ಆಫ್ರಿಕಾ ತಂಡ ಭರ್ಜರಿ ಜಯ ಸಾಧಿಸಿದೆ. ಈ ಗೆಲುವಿನ ರೂವಾರಿ ಆರಂಭಿಕ ಆಟಗಾರ ರೀಝು ಹೆಂಡ್ರಿಕ್ಸ್.

ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಪಾಕಿಸ್ತಾನ್ ತಂಡದ ಪರ ಓಪನರ್ ಸೈಮ್ ಅಯ್ಯೂಬ್ ಆಕರ್ಷಕ ಬ್ಯಾಟಿಂಗ್ ಪ್ರದರ್ಶಿಸಿದರು. ಮೊದಲ ಓವರ್‌ನಿಂದಲೇ ಬಿರುಸಿನ ಬ್ಯಾಟಿಂಗ್‌ಗೆ ಒತ್ತು ನೀಡಿದ ಸೈಮ್ 57 ಎಸೆತಗಳಲ್ಲಿ 5 ಸಿಕ್ಸ್ ಹಾಗೂ 11 ಫೋರ್‌ಗಳೊಂದಿಗೆ ಅಜೇಯ 98 ರನ್ ಬಾರಿಸಿದರು. ಈ ಅರ್ಧಶತಕದ ನೆರವಿನಿಂದ ಪಾಕಿಸ್ತಾನ್ ತಂಡವು 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 206 ರನ್ ಕಲೆಹಾಕಿತು. 207 ರನ್‌ಗಳ ಕಠಿಣ ಗುರಿ ಪಡೆದ ಸೌತ್ ಆಫ್ರಿಕಾ ತಂಡಕ್ಕೆ ರೀಝು ಹೆಂಡ್ರಿಕ್ಸ್ ಸ್ಫೋಟಕ ಆರಂಭ ಒದಗಿಸಿದ್ದರು. ಆರಂಭದಿಂದಲೇ ಹೊಡಿಬಡಿ ಆಟಕ್ಕೆ ಮುಂದಾದ ರೀಝು ಪಾಕ್ ಬೌಲರ್‌ಗಳ ಬೆಂಡೆತ್ತಿದರು. ಪರಿಣಾಮ 29 ಎಸೆತಗಳಲ್ಲಿ ಅರ್ಧಶತಕ ಮೂಡಿಬಂತು. ಹಾಫ್ ಸೆಂಚುರಿಯೊಂದಿಗೆ ಸಿಡಿಲಬ್ಬರ ಮುಂದುವರೆಸಿದ ರೀಝು ಹೆಂಡ್ರಿಕ್ಸ್ ಮೈದಾನದ ಮೂಲೆ ಮೂಲೆಗೂ ಸಿಕ್ಸ್-ಫೋರ್‌ಗಳ ಸುರಿಮಳೆಗೈದರು. ಈ ಮೂಲಕ ಕೇವಲ 54 ಎಸೆತಗಳಲ್ಲಿ ಸೆಂಚುರಿ ಪೂರೈಸಿದರು. ಸೆಂಚುರಿ ಬಳಿಕ ಕೂಡ ಬಿರುಸಿನ ಬ್ಯಾಟಿಂಗ್ ಪ್ರದರ್ಶಿಸಿದ ರೀಝು ಹೆಂಡ್ರಿಕ್ಸ್ 63 ಎಸೆತಗಳಲ್ಲಿ 7 ಫೋರ್ ಹಾಗೂ 10 ಸಿಕ್ಸ್‌ಗಳೊಂದಿಗೆ 117 ರನ್ ಚಚ್ಚಿದರು.



ಮತ್ತೊಂದೆಡೆ ರೀಝು ಹೆಂಡ್ರಿಕ್ಸ್‌ಗೆ ಉತ್ತಮ ಸಾಥ್ ನೀಡಿದ ರಾಸ್ಸೀ ವ್ಯಾನ್ ಡೆರ್ ಡಸ್ಸೆನ್ 38 ಎಸೆತಗಳಲ್ಲಿ 5 ಸಿಕ್ಸ್ ಹಾಗೂ 3 ಫೋರ್‌ಗಳೊಂದಿಗೆ ಅಜೇಯ 66 ರನ್ ಬಾರಿಸಿದರು. ಈ ಮೂಲಕ 19.3 ಓವರ್‌ಗಳಲ್ಲಿ ತಂಡವನ್ನು ಗೆಲುವಿನ ದಡ ಸೇರಿಸಿ ಸೌತ್ ಆಫ್ರಿಕಾ ತಂಡಕ್ಕೆ 7 ವಿಕೆಟ್‌ಗಳ ಜಯ ತಂದುಕೊಟ್ಟರು.

# ವಿಶ್ವಕಪ್ ಗೆಲ್ಲಿಸಿಕೊಟ್ಟವ ಈಗ ಮುಂಬೈ ತಂಡಕ್ಕೆ ಕೋಚ್

**ಲಯಕ್ಕೆ ಮರಳಲು ಅಂಬಾನಿ ಪಡೆ**

2025 ರ ಐಪಿಎಲ್ ಮಾರ್ಚ್ ತಿಂಗಳಿನಿಂದ ಪ್ರಾರಂಭವಾಗಲಿದೆ. ಇತ್ತೀಚೆಗಷ್ಟೇ ಈ ಸೀಸನ್‌ನ ಹರಾಜು ಪ್ರಕ್ರಿಯೆ ನಡೆದಿತ್ತು. ಇದರಲ್ಲಿ ಎಲ್ಲಾ ಫ್ರಾಂಚೈಸಿಗಳು ತಮಗೆ ಬೇಕಾದ ಆಟಗಾರರನ್ನು ಖರೀದಿಸಿದ್ದವು. ಇದೀಗ ಎಲ್ಲಾ ಫ್ರಾಂಚೈಸಿಗಳು ತಮ್ಮ ತಂಡಗಳ ಕೋಚಿಂಗ್ ಸಿಬ್ಬಂದಿಗಳಲ್ಲಿ ಬದಲಾವಣೆಗೆ ಮುಂದಾಗಿವೆ. ಅದರಂತೆ ಐಪಿಎಲ್ ಇತಿಹಾಸದಲ್ಲಿ ಅತ್ಯಂತ ಯಶಸ್ವಿ ತಂಡವಾದ ಮುಂಬೈ ಇಂಡಿಯನ್ಸ್ ಕೂಡ ತನ್ನ ತಂಡಕ್ಕೆ ಹೊಸ ಫೀಲ್ಡಿಂಗ್ ಕೋಚ್ ಅನ್ನು ನೇಮಿಸಿದೆ. ಮುಂಬೈ ಇಂಡಿಯನ್ಸ್ ತನ್ನ ಫೀಲ್ಡಿಂಗ್ ಕೋಚ್ ಆಗಿ ಇಂಗ್ಲೆಂಡ್‌ನ ಅನುಭವಿ ಆಟಗಾರ ಕಾರ್ಲ್ ಹಾಪ್ಕಿನ್ಸನ್ ಅವರನ್ನು ತಂಡಕ್ಕೆ ಆಯ್ಕೆ ಮಾಡಿದೆ. ಕಾರ್ಲ್ ಹಾಪ್ಕಿನ್ಸನ್ ಅವರ ಕೋಚಿಂಗ್ ಅಡಿಯಲ್ಲಿ ಇಂಗ್ಲೆಂಡ್ ತಂಡ ಏಕದಿನ ಮತ್ತು ಟಿ20 ವಿಶ್ವಕಪ್‌ನಲ್ಲಿ ಚಾಂಪಿಯನ್ ಆಗಿದೆ.

**ವಿಶ್ವಕಪ್ ಗೆಲ್ಲುವಲ್ಲಿ ಪ್ರಮುಖ ಪಾತ್ರ**

ಅಚ್ಚರಿಯ ಸಂಗತಿಯೆಂದರೆ ಮುಂಬೈ ಇಂಡಿಯನ್ಸ್ ತಂಡಕ್ಕೆ ಫೀಲ್ಡಿಂಗ್ ಕೋಚ್ ಆಗಿ ನೇಮಕಗೊಂಡಿರುವ 43 ವರ್ಷದ ಹಾಪ್ಕಿನ್ಸನ್ ಒಂದೇ ಒಂದು ಅಂತಾ ರಾಷ್ಟ್ರೀಯ ಪಂದ್ಯವನ್ನು ಆಡಿಲ್ಲ. ಆದರೆ 64 ಪ್ರಥಮ ದರ್ಜೆ ಪಂದ್ಯಗಳನ್ನಾಡಿರುವ ಅವರು 2705 ರನ್ ಗಳಿಸಿದ್ದಾರೆ. ಇದರ ಜೊತೆಗೆ 92 ಲಿಸ್ಟ್ ಎ ಪಂದ್ಯಗಳಲ್ಲಿ 1400 ರನ್ ಕಲೆಹಾಕಿದ್ದಾರೆ ಆದರೆ ಕೋಚ್ ಆಗಿ ಸಾಕಷ್ಟು ಯಶಸ್ಸು ಸಾಧಿಸಿರುವ ಕಾರ್ಲ್, ಫೀಲ್ಡಿಂಗ್ ಕೋಚ್ ಆಗಿ 2019ರ ಏಕದಿನ ವಿಶ್ವಕಪ್ ಮತ್ತು 2022ರ ಟಿ20 ವಿಶ್ವಕಪ್‌ನಲ್ಲಿ ಇಂಗ್ಲೆಂಡ್ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ.



**ಮುಂಬೈ ತಂಡಕ್ಕೆ ಹಾರ್ದಿಕ್ ನಾಯಕ**

ಮುಂಬರುವ ಐಪಿಎಲ್ ಮಾರ್ಚ್ 14 ರಿಂದ ಆರಂಭವಾಗಲಿದ್ದು, ಈ ಬಾರಿಯೂ ಮುಂಬೈ ಇಂಡಿಯನ್ಸ್ ತಂಡವನ್ನು ಹಾರ್ದಿಕ್ ಪಾಂಡ್ಯ ಮುನ್ನಡೆಸಲಿದ್ದಾರೆ. ಐಪಿಎಲ್ ಇತಿಹಾಸದಲ್ಲಿ ಅತ್ಯಂತ ಯಶಸ್ವಿ ತಂಡವಾಗಿರುವ ಮುಂಬೈ 2013, 2015, 2017, 2019 ಮತ್ತು 2022ರಲ್ಲಿ ರೋಹಿತ್ ಶರ್ಮಾ ನಾಯಕತ್ವದಲ್ಲಿ 5 ಬಾರಿ ಐಪಿಎಲ್ ಪ್ರಶಸ್ತಿ ಗೆದ್ದಿದೆ. ಆದರೆ ಕಳೆದ ಆವೃತ್ತಿಯಲ್ಲಿ ಮುಂಬೈ ಇಂಡಿಯನ್ಸ್ ತಂಡದ ಪ್ರದರ್ಶನ ತೀರಾ ಕಳಪೆಯಾಗಿತ್ತು. ಹೀಗಾಗಿ 2025 ರಲ್ಲಿ ತನ್ನ ಹಳೆಯ ಲಯಕ್ಕೆ ಮರಳಲು ಅಂಬಾನಿ ಪಡೆ ಯತ್ನಿಸಲಿದೆ.

**ಮುಂಬೈ ಇಂಡಿಯನ್ಸ್:** ರೋಹಿತ್ ಶರ್ಮಾ, ಜಸ್ಪ್ರೀತ್ ಬುಮ್ರಾ, ಹಾರ್ದಿಕ್ ಪಾಂಡ್ಯ, ತಿಲಕ್ ವರ್ಮಾ, ಸೂರ್ಯಕುಮಾರ್ ಯಾದವ್, ಜೋಫ್ರಾ ಆರ್ಚರ್, ನಮನ್ ಧೀರ್, ರಾಬಿನ್ ಮಿನ್ಸ್, ಕರ್ಣ್ ಶರ್ಮಾ, ರಯಾನ್ ರಿಕಲ್ಟನ್, ದೀಪಕ್ ಚಹರ್, ಅಲ್ಲಾ ಗಜನ್ಫರ್, ವಿಲ್ ಜಾಕ್ಸ್, ಕೆಎಲ್ ಶ್ರೀಜಿತ್, ರೀಸ್ ಟೋಪ್ಲಿ, ಮಿಚೆಲ್ ಸ್ಯಾಂಟ್ನರ್, ರಾಜ್ ಅಂಗದ್ ಬಾವಾ, ವಿ. ಸತ್ಯನಾರಾಯಣ್, ಬೆವನ್ ಜೇಕಬ್ಸ್, ವಿಘ್ನೇಶ್ ಪುತ್ತೂರು, ಅರ್ಜುನ್ ತೆಂಡೂಲ್ಕರ್, ಲಿಜ್ಹಾಡ್ ವಿಲಿಯಮ್ಸ್, ಅಶ್ವನಿ ಕುಮಾರ್.

# 11 ವರ್ಷಗಳ ಐಸಿಸಿ ಟ್ರೋಫಿ ಬರ ನೀಗಿಸಿದ ವರ್ಷವಿದು

ಭಾರತ ಕ್ರಿಕೆಟ್‌ಗೆ 2024 ಬಹಳ ವಿಶೇಷವಾಗಿತ್ತು. ಈ ವರ್ಷ ಟೀಂ ಇಂಡಿಯಾ ಹಲವು ಮೈಲಿಗಲ್ಲುಗಳನ್ನು ಸಾಧಿಸಿತು. ಅದರಲ್ಲಿ ಪ್ರಮುಖವಾಗಿ ಬರೋಬ್ಬರಿ 11 ವರ್ಷಗಳ ನಂತರ ಟೀಂ ಇಂಡಿಯಾ ತನ್ನ ಐಸಿಸಿ ಟ್ರೋಫಿಯ ಬರವನ್ನು ನೀಗಿಸಿಕೊಂಡಿತ್ತು. ಅಮೆರಿಕ ಹಾಗೂ ವೆಸ್ಟ್ ಇಂಡೀಸ್ ಆತಿಥ್ಯದಲ್ಲಿ ನಡೆದಿದ್ದ ಈ ಬಾರಿಯ ಟಿ20 ವಿಶ್ವಕಪ್ ಟೀಂ ಇಂಡಿಯಾದ ಕೈಸೇರಿತ್ತು. ವೆಸ್ಟ್ ಇಂಡೀಸ್‌ನ ಕೆನ್ನಿಂಗ್ಟನ್ ಓವಲ್ ಬಾರ್ಬಡೋಸ್ ಕ್ರಿಕೆಟ್ ಮೈದಾನದಲ್ಲಿ ನಡೆದಿದ್ದ ಟಿ20 ವಿಶ್ವಕಪ್ ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು ಎದುರಿಸಿದ್ದ ಟೀಂ ಇಂಡಿಯಾ 7 ರನ್‌ಗಳ ರೋಚಕ ಜಯ ಸಾಧಿಸುವ ಮೂಲಕ ವಿಶ್ವ ಚಾಂಪಿಯನ್ ಆಗಿ ಹೊರಹೊಮ್ಮಿತ್ತು. ಈ ವಿಶ್ವಕಪ್‌ನ ಇನ್ನೊಂದು ವಿಶೇಷವೆಂದರೆ ಇಡೀ ಟೂರ್ನಿಯಲ್ಲಿ ಟೀಂ ಇಂಡಿಯಾ ಒಂದೇ ಒಂದು ಪಂದ್ಯವನ್ನು ಸೋತಿರಲಿಲ್ಲ. ರೋಹಿತ್ ಶರ್ಮಾ ನಾಯಕತ್ವದಲ್ಲಿ ವಿಶ್ವಕಪ್ ಕಣಕ್ಕಿಳಿದಿದ್ದ ಭಾರತ ತಂಡ ಬಲಿಷ್ಠ ತಂಡಗಳನ್ನು ಮಣಿಸಿ ವಿಶ್ವ ಕಿರೀಟವನ್ನು ಮುಡಿಗೇರಿಸಿಕೊಂಡಿತ್ತು. ಈ ಮೂಲಕ 17 ವರ್ಷಗಳ ನಂತರ ಮತ್ತೊಮ್ಮೆ ಟಿ20 ಚಾಂಪಿಯನ್ ಆಗುವಲ್ಲಿ ಯಶಸ್ವಿಯಾಗಿತ್ತು.

ವಾಸ್ತವವಾಗಿ 2007 ರಲ್ಲಿ ನಡೆದಿದ್ದ ಟಿ20 ವಿಶ್ವಕಪ್‌ನ ಚೊಚ್ಚಲ ಆವೃತ್ತಿಯಲ್ಲಿ ಟೀಂ ಇಂಡಿಯಾ ಎಂಎಸ್ ಧೋನಿ ನಾಯಕಯತ್ವದಲ್ಲಿ ಟಿ20 ವಿಶ್ವಕಪ್ ಗೆದ್ದುಕೊಂಡಿತ್ತು. ಆ ಬಳಿಕ ತಂಡ 2016 ರಲ್ಲಿ ಮತ್ತೊಮ್ಮೆ ಫೈನಲ್‌ಗೇರಿತ್ತಾದರೂ, ಚಾಂಪಿಯನ್ ಆಗುವಲ್ಲಿ ಎಡವಿತ್ತು. ಆದರೆ ಈ ಬಾರಿಯ ಟಿ20 ವಿಶ್ವಕಪ್‌ನಲ್ಲಿ ಅಜೇಯ ತಂಡವಾಗಿ ಫೈನಲ್‌ಗೆ ಕಾಲಿಟ್ಟಿದ್ದ ಟೀಂ ಇಂಡಿಯಾ ಟಿ20 ವಿಶ್ವಕಪ್ ಚಾಂಪಿಯನ್ ಆಗಿ ಹೊರಹೊಮ್ಮಿತ್ತು. ಈ ಗೆಲುವಿನೊಂದಿಗೆ ತಂಡದ ಲೆಜೆಂಡರಿ ಆಟಗಾರರಾದ ವಿರಾಟ್ ಕೊಹ್ಲಿ, ರೋಹಿತ್ ಶರ್ಮಾ ಹಾಗೂ ರವೀಂದ್ರ ಜಡೇಜಾ



ಅಂತಾರಾಷ್ಟ್ರೀಯ ಟಿ20 ಮಾದರಿಗೆ ವಿದಾಯ ಹೇಳಿದ್ದರು. ಇವರ ಜೊತೆಗೆ ಅಂದು ತಂಡದ ಮುಖ್ಯ ಕೋಚ್ ಆಗಿದ್ದ ರಾಹುಲ್ ದ್ರಾವಿಡ್ ಕೂಡ ತಮ್ಮ ಹುದ್ದೆಯಿಂದ ಕೆಳಗಿಳಿದಿದ್ದರು.

ಬಾರ್ಬಡೋಸ್‌ನ ಬ್ರಿಡ್ಜ್‌ಟೌನ್‌ನಲ್ಲಿರುವ ಕೆನ್ನಿಂಗ್ಟನ್ ಓವಲ್ ಸ್ಟೇಡಿಯಂನಲ್ಲಿ ನಡೆದಿದ್ದ ಈ ಪಂದ್ಯದಲ್ಲಿ ಟಾಸ್ ಗೆದ್ದ ಭಾರತ ಮೊದಲು ಬ್ಯಾಟಿಂಗ್ ಮಾಡಿ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 176 ರನ್ ಗಳಿಸಿತು. ತಂಡದ ಪರ ವಿರಾಟ್ ಕೊಹ್ಲಿ ಗರಿಷ್ಠ 76, ಅಕ್ಷರ್ ಪಟೇಲ್ 47 ಮತ್ತು ಶಿವಂ ದುಬೆ 27 ರನ್‌ಗಳ ಕಾಣಿಕೆ ನೀಡಿದರು. ಇತ್ತ ದಕ್ಷಿಣ ಆಫ್ರಿಕಾ ಪರ ಕೇಶವ್ ಮಹಾರಾಜ್ ಮತ್ತು ಎನ್ರಿಕ್ ನೋಕಿಯಾ ತಲಾ 2 ವಿಕೆಟ್ ಪಡೆದರೆ, ಮಾರ್ಕೊ ಯಾನ್ಸೆನ್ ಮತ್ತು ಕಗಿಸೊ ರಬಾಡ ತಲಾ 1 ವಿಕೆಟ್ ಪಡೆದರು.

177 ರನ್‌ಗಳ ಗುರಿ ಬೆನ್ನಟ್ಟಿದ ದಕ್ಷಿಣ ಆಫ್ರಿಕಾ ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡು 169 ರನ್ ಕಲೆಹಾಕಲಷ್ಟೇ ಶಕತವಾಗಿ 7 ರನ್‌ಗಳಿಂದ ಚಾಂಪಿಯನ್ ಪಟ್ಟವನ್ನು ಕಳೆದುಕೊಂಡಿತು. ಆಫ್ರಿಕಾ ಪರ ಏಕಾಂಗಿ ಹೋರಾಟ ನಡೆಸಿದ್ದ ಹೆನ್ರಿಕ್ ಕ್ಲಾಸೆನ್ 52 ರನ್ ಗಳಿಸಿದರೆ, ಕ್ವಿಂಟನ್ ಡಿ ಕಾಕ್ 39 ರನ್, ಟ್ರಿಸ್ಟಾನ್ ಸ್ಟಬ್ಸ್ 31 ರನ್ ಡೇವಿಡ್ ಮಿಲ್ಲರ್ 21 ರನ್‌ಗಳ ಇನ್ನಿಂಗ್ಸ್ ಆಡಿದ್ದರು. ಟೀಂ ಇಂಡಿಯಾ ಪರ ಹಾರ್ದಿಕ್ ಪಾಂಡ್ಯ 3 ವಿಕೆಟ್ ಪಡೆದರೆ, ಅರ್ಷದೀಪ್ ಸಿಂಗ್ ಮತ್ತು ಜಸ್ಪ್ರೀತ್ ಬುಮ್ರಾ ತಲಾ 2 ವಿಕೆಟ್ ಪಡೆದರು. ಅಕ್ಷರ್ ಪಟೇಲ್ ಕೂಡ 1 ವಿಕೆಟ್ ಪಡೆದರು.

# ಗೇಲ್ ದಾಖಲೆ ಸರಿಗಟ್ಟಿದ ಟಿಮ್ ಸೌಥಿ



ಇಂಗ್ಲೆಂಡ್ ಮತ್ತು ನ್ಯೂಜಿಲೆಂಡ್ ನಡುವಿನ ಟೆಸ್ಟ್ ಸರಣಿಯ ಮೂರನೇ ಹಾಗೂ ಕೊನೆಯ ಪಂದ್ಯ ಹ್ಯಾಮಿಲ್ಟನ್‌ನಲ್ಲಿ ಇಂದಿನಿಂದ ಆರಂಭವಾಗಿದೆ. ಮೊದಲ ಎರಡು ಟೆಸ್ಟ್ ಪಂದ್ಯಗಳನ್ನು ಗೆದ್ದುಕೊಂಡಿರುವ ಇಂಗ್ಲೆಂಡ್ ಈಗಾಗಲೇ ಸರಣಿಯನ್ನು ಕೈವಶ ಮಾಡಿಕೊಂಡಿದೆ. ಇತ್ತ ಸರಣಿ ಸೋತಿರುವ ನ್ಯೂಜಿಲೆಂಡ್ ಕೊನೆಯ ಟೆಸ್ಟ್ ಗೆದ್ದು ತಂಡದ ಸ್ಟಾರ್ ವೇಗಿಗೆ ಗೆಲುವಿನ ವಿದಾಯ ಹೇಳಲು ಬಯಸಿದೆ.

ನ್ಯೂಜಿಲೆಂಡ್ ತಂಡದ ಸ್ಟಾರ್ ವೇಗದ ಬೌಲರ್ ಟಿಮ್ ಸೌಥಿ ಈ ಟೆಸ್ಟ್ ಸರಣಿ ಆರಂಭಕ್ಕೂ ಮುನ್ನವೇ ಇದು ನನ್ನ ಕೊನೆಯ ಟೆಸ್ಟ್ ಸರಣಿ ಎಂದಿದ್ದರು. ಅಂದರೆ ಆಂಗ್ಲರ ವಿರುದ್ಧದ ಕೊನೆಯ ಟೆಸ್ಟ್ ಟಿಮ್ ಸೌಥಿ ಅವರ ವೃತ್ತಿಜೀವನದ ಕೊನೆಯ ಅಂತರರಾಷ್ಟ್ರೀಯ ಪಂದ್ಯವಾಗಿದೆ. ಹೀಗಾಗಿ ಸೌಥಿಗೆ ಈ ಪಂದ್ಯದ ಬಹಳ ವಿಶೇಷವಾಗಿದೆ. ಈ ಪಂದ್ಯದಲ್ಲಿ ಬ್ಯಾಟಿಂಗ್ ಮಾಡುವ ಅವಕಾಶ ಪಡೆದ ಟಿಮ್ ಸೌಥಿ ತಮ್ಮ ಕೊನೆಯ ಪಂದ್ಯದಲ್ಲಿ ವಿಂಡೀಸ್‌ನ ಮಾಜಿ ಸ್ಫೋಟಕ ಬ್ಯಾಟ್ಸ್‌ಮನ್ ಕ್ರಿಸ್ ಗೇಲ್ ಅವರ ದೊಡ್ಡ ದಾಖಲೆಯನ್ನು ಸರಿಗಟ್ಟಿದ್ದಾರೆ. ಇದರ ಜೊತೆಗೆ ದಕ್ಷಿಣ ಆಫ್ರಿಕಾದ ಲೆಜೆಂಡರಿ ಆಲ್‌ರೌಂಡರ್ ಜಾಕ್ವೆಸ್ ಕಾಲಿಸ್ ಅವರ ದಾಖಲೆಯನ್ನು ಸಹ ಮುರಿದಿದ್ದಾರೆ. ಈ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ 10 ಎಸೆತಗಳನ್ನು ಎದುರಿಸಿದ ಸೌಥಿ 230 ಸ್ಟ್ರೈಕ್ ರೇಟ್‌ನಲ್ಲಿ 23 ರನ್ ಗಳಿಸಿದರು. ಅವರ ಈ ಇನ್ನಿಂಗ್ಸ್‌ನಲ್ಲಿ 1 ಬೌಂಡರಿ ಮತ್ತು 3 ಸಿಕ್ಸರ್‌ಗಳು ಸೇರಿದ್ದವು. ಇದರೊಂದಿಗೆ ಅವರು ಟೆಸ್ಟ್ ಕ್ರಿಕೆಟ್‌ನಲ್ಲಿ ಅತಿ ಹೆಚ್ಚು ಸಿಕ್ಸರ್‌ಗಳನ್ನು ಬಾರಿಸಿದ ಆಟಗಾರರ ಪಟ್ಟಿಯಲ್ಲಿ ದಕ್ಷಿಣ ಆಫ್ರಿಕಾದ ದಂತಕಥೆ ಜಾಕ್ವೆಸ್ ಕಾಲಿಸ್ ಅವರನ್ನು ಹಿಂದಿಕ್ಕಿದಲ್ಲದೆ, ಗೇಲ್ ಅವರನ್ನು ಸಹ ಸರಿಗಟ್ಟಿದರು.

ಟಿಮ್ ಸೌಥಿ ತಮ್ಮ ಟೆಸ್ಟ್ ವೃತ್ತಿ ಜೀವನದಲ್ಲಿ ಇದುವರೆಗೆ 98 ಸಿಕ್ಸರ್‌ಗಳನ್ನು ಬಾರಿಸಿದ್ದು, ಈ ಮೂಲಕ ಟೆಸ್ಟ್‌ನಲ್ಲಿ 97 ಸಿಕ್ಸರ್‌ಗಳನ್ನು ಸಿಡಿಸಿದ್ದ ಕಾಲಿಸ್ ಅವರನ್ನು ಹಿಂದಿಕ್ಕಿದ್ದಾರೆ. ಇದರ ಜೊತೆಗೆ 98 ಸಿಕ್ಸರ್‌ಗಳನ್ನು ಬಾರಿಸಿರುವ ಕ್ರಿಸ್ ಗೇಲ್ ಅವರನ್ನು ಸಹ ಸರಿಗಟ್ಟಿದ್ದಾರೆ.

ಟಿಮ್ ಸೌಥಿಗೆ ಇನ್ನೂ ಒಂದು ಇನ್ನಿಂಗ್ಸ್ ಆಡುವ ಅವಕಾಶವಿದ್ದು, ಅವರು ತಮ್ಮ ಕೊನೆಯ ಇನ್ನಿಂಗ್ಸ್‌ನಲ್ಲಿ ಬ್ಯಾಟಿಂಗ್ ಮಾಡಲು ಅವಕಾಶವನ್ನು ಪಡೆದರೆ, ಟೆಸ್ಟ್‌ನಲ್ಲಿ 100 ಸಿಕ್ಸರ್‌ಗಳನ್ನು ಪೂರ್ಣಗೊಳಿಸಬಹುದು. ಇದರೊಂದಿಗೆ ಅವರು ಟೆಸ್ಟ್‌ನಲ್ಲಿ ಸಿಕ್ಸರ್‌ಗಳ ಶತಕ ಸಿಡಿಸಿದ ನಾಲ್ಕನೇ ಬ್ಯಾಟ್ಸ್‌ಮನ್ ಎನಿಸಿಕೊಳ್ಳಲಿದ್ದಾರೆ.

ಇದುವರೆಗೆ ಕೇವಲ 3 ಬ್ಯಾಟ್ಸ್‌ಮನ್‌ಗಳು ಮಾತ್ರ ಟೆಸ್ಟ್‌ನಲ್ಲಿ 100 ಅಥವಾ ಅದಕ್ಕಿಂತ ಹೆಚ್ಚು ಸಿಕ್ಸರ್‌ಗಳನ್ನು ಬಾರಿಸಿದ್ದಾರೆ. ಇದರಲ್ಲಿ 133 ಸಿಕ್ಸರ್‌ಗಳನ್ನು ಬಾರಿಸಿರುವ ಆಂಗ್ಲ ನಾಯಕ ಬೆನ್ ಸ್ಟೋಕ್ಸ್ ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದಾರೆ. ಮತ್ತೊಂದೆಡೆ, ವೀರೇಂದ್ರ ಸೆಹ್ವಾಗ್ ಭಾರತದ ಪರ ಗರಿಷ್ಠ ಸಂಖ್ಯೆಯ ಸಿಕ್ಸರ್‌ಗಳನ್ನು ಹೊಡೆದಿದ್ದು, ಅವರ ಹೆಸರಿನಲ್ಲಿ 91 ಸಿಕ್ಸರ್‌ಗಳಿವೆ. ಈ ಪಂದ್ಯದ ಮೊದಲ ದಿನದಂತ್ಯಕ್ಕೆ ನ್ಯೂಜಿಲೆಂಡ್ ತಂಡ 9 ವಿಕೆಟ್ ನಷ್ಟಕ್ಕೆ 315 ರನ್ ಗಳಿಸಿದೆ. ನಾಯಕ ಟಾಮ್ ಲ್ಯಾಥಮ್ ಗರಿಷ್ಠ 63 ರನ್ ಗಳಿಸಿದರೆ, ಮಿಚೆಲ್ ಸ್ಯಾಂಟ್ನರ್ 50 ರನ್ ಗಳಿಸಿ ಅಜೇಯರಾಗಿ ಉಳಿದಿದ್ದಾರೆ. ಉಳಿದಂತೆ ತಂಡದ ಪರ ವಿಲ್ ಯಂಗ್ 42 ರನ್ ಮತ್ತು ಕೇನ್ ವಿಲಿಯಮ್ಸನ್ 44 ರನ್ ಗಳಿಸಿದರು. ಇತ್ತ ಇಂಗ್ಲೆಂಡ್ ಪರ ಮ್ಯಾಥ್ಯೂ ಪಾಟ್ಸ್ ಮತ್ತು ಗಸ್ ಅಟ್ಕಿನ್ಸನ್ ತಲಾ ಮೂರು ವಿಕೆಟ್ ಪಡೆದರೆ, ಬ್ರೇಡನ್ ಕಾರ್ಸೆ ಎರಡು ವಿಕೆಟ್ ಪಡೆದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966